# ಪ್ರವಾದಿ ಯೆಶಾಯನ ಗ್ರಂಥ

## ಮುನ್ನುಡಿ

ಪ್ರವಾದಿ ಯೆಶಾಯನ ಕಾಲ ಸುಮಾರು ಕ್ರಿ.ಪೂ. 800–750. ಈತನ ವಾಸಸ್ಥಳ ಜೆರುಸಲೇಮ್. ಹಿರಿಯ ಪ್ರವಾದಿಗಳಲ್ಲಿ ಅಗ್ರಗಣ್ಯನಾದ ಈತನ ಗ್ರಂಥದಲ್ಲಿ ಮೂರು ಭಾಗಗಳಿವೆ:

### (1) ಅಧ್ಯಾಯ 1ರಿಂದ 39

ಇಸ್ರಯೇಲಿನ ದಕ್ಷಿಣದಲ್ಲಿದ್ದ ಜುದೇಯ ನಾಡನ್ನು ನೆರೆಯ ಬಲಿಷ್ಠ ರಾಷ್ಟ್ರವಾದ ಅಸ್ಸೀರಿಯವು ಆಕ್ರಮಿಸಲಿದೆ. ಜುದೇಯ ನಾಡಿಗೆ ಬರಲಿರುವ ಈ ಗಂಡಾಂತರಕ್ಕೆ ಮೂಲಕಾರಣ ಅಸ್ಸೀರಿಯದ ಆಕ್ರಮಣ ಮಾತ್ರವಲ್ಲ, ಜುದೇಯ ಜನರ ಪಾಪ, ದೇವರನ್ನು ಕುರಿತ ಅವಿಶ್ವಾಸ, ಯೆಹೂದ್ಯರ ಅವಿಧೇಯತೆ ಎಂಬುದನ್ನು ಪ್ರವಾದಿ ಮನಗಾಣುತ್ತಾನೆ. ಎಂತಲೇ ಜುದೇಯ ನಾಡಿನ ಜನರು ಮತ್ತು ಅವರ ಮುಖಂಡರು ನ್ಯಾಯನೀತಿ, ದೇವರೊಂದಿಗೆ ಸತ್ಸಂಬಂಧವುಳ್ಳ ಜೀವನ ಇವುಗಳ ಕಡೆ ಗಮನ ಹರಿಸಬೇಕು; ಇಲ್ಲದೆ ಹೋದರೆ, ನ್ಯಾಯ ತೀರ್ಪು, ಸಂಪೂರ್ಣ ವಿನಾಶ, ಅವರಿಗೆ ಕಟ್ಟಿಟ್ಟ ಬುತ್ತಿ ಎಂದು ಪ್ರವಾದಿ ಮನಮುಟ್ಟುವಂತೆ ಹರಿತವಾದ ಮಾತುಗಳಿಂದಲೂ ಸೂಚಕಕಾರ್ಯಗಳಿಂದಲೂ ಎಚ್ಚರಿಸುತ್ತಾನೆ. ಕಾಲ ಬರಲಿದೆ, ವಿಶ್ವದಲ್ಲೆಲ್ಲ ಶಾಂತಿ ಸ್ಥಾಪನೆಯಾಗಲಿ, ದಾವೀದವಂಶಜನೊಬ್ಬನು ಆದರ್ಶಪ್ರಾಯ ಅರಸನಾಗಲಿದ್ದಾನೆ ಎಂದು ಪ್ರವಾದಿ ಮುಂತಿಳಿಸುತ್ತಾನೆ.

### (2) ಅಧ್ಯಾಯ 40–55

ಜುದೇಯ ನಾಡಿನ ಅನೇಕ ಜನರು ದೇಶಭ್ರಷ್ಟರಾಗಿದ್ದಾರೆ. ಅನ್ಯ ನಾಡಾದ ಬಾಬಿಲೋನಿಯಾದಲ್ಲಿ ಗುಲಾಮರಾಗಿದ್ದಾರೆ. ಶೋಷಣೆಗಳಿಗೆ ಗುರಿಯಾಗಿ ನಿರಾಶೆಗೊಂಡಿದ್ದಾರೆ. ಇಂಥ ಪರಿಸ್ಥಿತಿಯಲ್ಲಿರುವ ಜನರಿಗೆ ಪ್ರವಾದಿ ಅಭಯ ನೀಡುತ್ತಾನೆ. ದೇವರು ತಮ್ಮ ಜನರಿಗೆ ಸ್ವಾತಂತ್ರ್ಯ ನೀಡುವರು, ಸ್ವದೇಶಕ್ಕೆ ಹಿಂತಿರುಗುವಂತೆ ಮಾಡುವರು, ಹೊಸಜೀವನವನ್ನು ಪ್ರಾರಂಭಿಸಲು ಹುರಿದುಂಬಿಸುವರು ಎಂದು ಘೋಷಣೆ ಮಾಡುತ್ತಾನೆ. ದೇವರೇ ಇತಿಹಾಸದ ಪ್ರಭು. ತಮ್ಮ ಜನರ ಬಗ್ಗೆ ಅವರಿಗಿರುವ ಯೋಜನೆಯಲ್ಲಿ ಧರ್ಮಪ್ರಚಾರವು ಅಖಿಲ ರಾಷ್ಟ್ರಗಳಿಗೆ ಇಸ್ರಯೇಲರ ಮುಖಾಂತರವೇ ಆಗಬೇಕು; ಇದರ ಪರಿಣಾಮವಾಗಿ ದೈವದತ್ತ ಸೌಭಾಗ್ಯದಲ್ಲಿ ಸರ್ವರೂ ಪಾಲುಗಾರರಾಗುವರು – ಇವೇ ಮುಂತಾದ ಅಂಶಗಳನ್ನು ಈ ದ್ವಿತೀಯ ಭಾಗದಲ್ಲಿ ಕಾಣುತ್ತೇವೆ.

ಈ ಭಾಗದಲ್ಲಿ ಕಂಡುಬರುವ "ದೇವರ ದಾಸ"ನನ್ನು ಕುರಿತ ವಚನಗಳು ಹಳೆಯ ಒಡಂಬಡಿಕೆಯಲ್ಲೇ ಸುಪ್ರಸಿದ್ಧವಾದುವು.

### (3) ಅಧ್ಯಾಯ 56–66

ಸೆರೆಹೋಗಿದ್ದ ಇಸ್ರಯೇಲ್ ಜನತೆ ಮರಳಿ ಜೆರುಸಲೇಮಿಗೆ ಬಂದಿದೆ. ದೇವರು ರಾಷ್ಟ್ರಕ್ಕೆ ಕೊಟ್ಟ ವಾಗ್ದಾನ ನೆರವೇರುವುದನ್ನು ಅದು ಎದುರು ನೋಡುತ್ತಿದೆ. ಇಂಥ ಜನರನ್ನು ಸಂಬೋಧಿಸಿ ಪ್ರವಾದಿ ಉಪದೇಶ ನೀಡುತ್ತಾನೆ. ದೇವರೊಡನೆ ಸತ್ಸಂಬಂಧ, ನ್ಯಾಯ ನೀತಿಪಾಲನೆ, ಸಬ್ಬತ್‍ದಿನದ ಆಚರಣೆ, ಪ್ರಾರ್ಥನೆ, ಬಲಿಯರ್ಪಣೆ – ಇವುಗಳ ಅವಶ್ಯಕತೆಯನ್ನು ಪ್ರವಾದಿ ಒತ್ತಿ ಹೇಳುತ್ತಾನೆ. ಅಧ್ಯಾಯ 61:1–3ರ ವಚನಗಳು ಯೇಸುಸ್ವಾಮಿಗೆ ಅನ್ವಯಿಸುತ್ತವೆ. ಇದನ್ನು ಕುರಿತು, ಯೇಸುವೇ ತಮ್ಮ ಬಾಹ್ಯ ಜೀವನದ ಆದಿಯಲ್ಲೇ ಉದ್ಧರಿಸುತ್ತಾರೆ.

## ಪರಿವಿಡಿ


| | | | | |
|---|---|---|---|---|
| 1. ಎಚ್ಚರಿಕೆ ಮತ್ತು ವಾಗ್ದಾನ | – | 1.1 | – | 12.6 |
| 2. ರಾಷ್ಟ್ರಗಳಿಗೆ ಬರಲಿರುವ ದಂಡನೆ | – | 13.1 | – | 23.18 |
| 3. ಜಗತ್ತಿಗೆ ದೇವರು ನೀಡುವ ನ್ಯಾಯತೀರ್ಪು | – | 24.1 | – | 27.13 |
| 4. ಮುನ್ನೆಚ್ಚರಿಕೆ ಹಾಗೂ ಭರವಸೆ | – | 28.1 | – | 35.10 |
| 5. ಜುದೇಯ ನಾಡಿನ ಅರಸ ಹಿಜ್ಕೀಯ ಮತ್ತ ಅಸ್ಸೀರಿಯ ನಾಡು | – | 36.1 | – | 39.8 |
| 6. ವಾಗ್ದಾನ ಹಾಗೂ ಅಭಯದಾನ | – | 40.1 | – | 55.13 |
| 7. ಇತರ ವಾಗ್ದಂಡನೆಗಳು ಹಾಗೂ ಅಭಯ ವಚನಗಳು | – | 56.1 | – | 66.24 |


**1** ಜುದೇಯ ನಾಡಿನ ಅರಸರಾಗಿದ್ದ ಉಜ್ಜೀಯ, ಯೋತಾಮ, ಆಹಾಜ, ಹಿಜ್ಕೀಯ ಇವರ ಕಾಲದಲ್ಲಿ ಜುದೇಯ ಮತ್ತು ಜೆರುಸಲೇಮ್ ನಗರವನ್ನು ಕುರಿತು ಆಮೋಚನ ಮಗನಾದ ಯೆಶಾಯನಿಗೆ ಆದ ದೈವದರ್ಶನ ಇದು:

### ದೇವದ್ರೋಹಿಯಾದ ಇಸ್ರಯೇಲ್ ಜನಾಂಗ

2 ಆಕಾಶಮಂಡಲವೇ, ಕೇಳು; ಭೂಮಂಡಲವೇ, ಆಲಿಸು; ಸರ್ವೇಶ್ವರಸ್ವಾಮಿ ಆಡುತ್ತಿರುವ
ಮಾತುಗಳಿಗೆ ಕಿವಿಗೊಡು: “ನಾನು ಸಾಕಿ ಸಲಹಿದ ಮಕ್ಕಳೇ ನನಗೆ ದ್ರೋಹವೆಸಗಿದ್ದಾರೆ. 3ಎತ್ತು
ಯಜಮಾನನನ್ನು, ಕತ್ತೆ ಒಡೆಯನ ಕೊಟ್ಟಿಗೆಯನ್ನು ಬಲ್ಲವು. ಆದರೆ ನನ್ನ ಪ್ರಜೆಗಳಾದ ಇಸ್ರಯೇಲರಿಗೆ
ಅಷ್ಟೂ ತಿಳಿದಿಲ್ಲ. ಅವರಿಗೆ ಏನೂ ತಿಳಿಯುವುದಿಲ್ಲ.

4 ಎಲೈ ಪಾಪಿಷ್ಠ ಜನವೇ, ದೋಷಭರಿತ ಪ್ರಜೆಯೇ, ದುಷ್ಟಪೀಳಿಗೆಯೇ, ಭ್ರಷ್ಟಸಂತಾನವೇ, ನಿಮ್ಮ
ಗತಿಯನ್ನು ಏನೆಂದು ಹೇಳಲಿ. ನೀವು ಸರ್ವೇಶ್ವರನನ್ನು ತೊರೆದಿದ್ದೀರಿ. ಇಸ್ರಯೇಲರ ಪರಮಪಾವನ
ಸ್ವಾಮಿಯನ್ನು ಧಿಕ್ಕರಿಸಿದ್ದೀರಿ. ಅವರಿಗೆ ಬೆನ್ನುಮಾಡಿ ಬೇರೆಯಾಗಿದ್ದೀರಿ. 5ಏಕೆ ಹೆಚ್ಚು ಹೆಚ್ಚಾಗಿ ದ್ರೋಹಗೈದು
ದಂಡನೆಗೆ ಗುರಿ ಆಗುತ್ತೀರಿ? ನಿಮ್ಮ ತಲೆತುಂಬ ಗಾಯ, ನಿಮ್ಮ ಹೃದಯವೆಲ್ಲ ದುರ್ಬಲ. 6ಅಂಗಾಲಿನಿಂದ
ನಡು ನೆತ್ತಿಯವರೆಗೆ ಪೆಟ್ಟು ಬಾಸುಂಡೆ, ಮಾಗದ ಗಾಯಗಳೇ ಹೊರತು ಮತ್ತೇನೂ ಅಲ್ಲ. ಅವನ್ನು ತೊಳೆದು
ಕಟ್ಟಿಲ್ಲ. ಎಣ್ಣೆ ಸವರಿ ಮೃದುವಾಗಿಸಿಲ್ಲ.

7 ನಿಮ್ಮ ನಾಡು ಹಾಳುಬಿದ್ದಿದೆ: ನಿಮ್ಮ ಪಟ್ಟಣಗಳು ಸುಟ್ಟು ಭಸ್ಮವಾಗಿವೆ. ನಿಮ್ಮ ಕಣ್ಮುಂದೆಯೆ ನಿಮ್ಮ
ಭೂಮಿಯನ್ನು ಅನ್ಯಜನರು ಕಬಳಿಸುತ್ತಿದ್ದಾರೆ. ಅನ್ಯ ದೇಶಗಳು ನಾಶವಾದಂತೆಯೇ ನಿಮ್ಮ ನಾಡು
ಹಾಳಾಗಿದೆ. 8ಸಿಯೋನ್ ನಗರವೊಂದೇ ಮುತ್ತಿಗೆಗೆ ತುತ್ತಾದ ಪಟ್ಟಣದಂತೆ, ದ್ರಾಕ್ಷಾತೋಟದ ಅಟ್ಟಣಿಯಂತೆ,
ಸೌತೆಹೊಲದ ಗುಡಿಸಿಲಿನಂತೆ ಸುರಕ್ಷತೆಯ ಅವಕಾಶವಿಲ್ಲದೆ ಇದೆ. 9ಸೇನಾಧೀಶ್ವರ ಸರ್ವೇಶ್ವರ ಕೆಲವು
ಜನರನ್ನಾದರೂ ಉಳಿಸದೆ ಹೋಗಿದ್ದರೆ, ಸೊದೋಮಿನ ಗತಿಯೇ, ಗೊಮೋರದ ದುರ್ದೆಶೆಯೇ ನಮಗೆ
ಸಂಭವಿಸುತ್ತಿತ್ತು.

10 ಸೊದೋಮಿನ ಅಧಿಪತಿಗಳಂತಿರುವವರೇ, ಸರ್ವೇಶ್ವರಸ್ವಾಮಿಯ ಮಾತನ್ನು ಕೇಳಿರಿ.
ಗೊಮೋರದ ಪ್ರಜೆಗಳನ್ನು ಹೋಲುವವರೇ, ನಮ್ಮ ದೇವರ ಉಪದೇಶಕ್ಕೆ ಕಿವಿಗೊಡಿ. 11ಸ್ವಾಮಿ
ಇಂತೆನ್ನುತ್ತಾರೆ: “ನೀವು ಅರ್ಪಿಸುವ ಅಸಂಖ್ಯಾತ ಬಲಿದಾನಗಳಿಂದ ನನಗೇನು ಪ್ರಯೋಜನ? ಟಗರುಗಳು,
ಸರ್ವಾಂಗಹೋಮ, ಪುಷ್ಟಪಶುಗಳ ಕೊಬ್ಬು ಇವೆಲ್ಲ ನನಗೆ ಬೇಸರ. ಹೋತ ಹೋರಿಗಳ, ಕುರಿಮರಿಗಳ

ರಕ್ತ ನನಗೆ ತಾತ್ಸಾರ. 12ನನ್ನ ಸನ್ನಿಧಾನಕ್ಕೆ ಬರುವಾಗ ಇದನ್ನೆಲ್ಲ ತರಬೇಕೆಂದು ನಿಮಗೆ ಹೇಳಿದವರಾರು?
13ನಿಮ್ಮ ನೈವೇದ್ಯಗಳನ್ನು ಇನ್ನು ತರಬೇಡಿ, ಅವು ವ್ಯರ್ಥ. ನಿಮ್ಮ ಧೂಪಾರತಿ ನನಗೆ ಅಸಹ್ಯ. ನೀವು ಆಚರಿಸುವ ಹಬ್ಬ ಹುಣ್ಣಿಮೆ, ಸಬ್ಬತ್ ವಿಶ್ರಾಂತಿ, ನಿಮ್ಮ ಸಭೆಕೂಟಗಳು ನನಗೆ ಬೇಡ. ಅಧರ್ಮದಿಂದ ಕೂಡಿದ ಇಂಥ ಸಮಾರಂಭಗಳು ನನಗೆ ಇಷ್ಟವಿಲ್ಲ. 14ನಿಮ್ಮ ಹಬ್ಬ ಹುಣ್ಣಿಮೆಗಳು, ಉತ್ಸವ ದಿನಗಳು ನನ್ನ ಮನಕ್ಕೆ ವಿರುದ್ಧ, ಹೊರಲಾಗದ ಭಾರ, ಸಹಿಸಲಾಗದ ಬೇಸರ.

15 ನೀವು ಕೈಯೆತ್ತಿ ಬೇಡುವಾಗ ನಾನು ಕಣ್ಣು ಮುಚ್ಚಿಕೊಳ್ಳುವೆನು. ನೀವು ಎಷ್ಟೇ ಪ್ರಾರ್ಥನೆಗಳನ್ನು ಮಾಡಿದರೂ ನಾನು ಕಿವಿಗೊಡೆನು, ಏಕೆಂದರೆ ನಿಮ್ಮ ಕೈಗಳು ರಕ್ತಸಿಕ್ತವಾಗಿವೆ. 16ತೊಳೆದು ಕೊಳ್ಳಿರಿ, ನಿಮ್ಮನ್ನೆ ಶುದ್ಧಮಾಡಿಕೊಳ್ಳಿರಿ. ಕಣ್ಣಿಗೆ ಕಟ್ಟಿದಂತಿರುವ ನಿಮ್ಮ ದುಷ್ಕೃತ್ಯಗಳು ನೀಗಿ ಹೋಗಲಿ. 17ಕೇಡನ್ನು ಬಿಟ್ಟು ಒಳಿತನ್ನು ಕೈಗೊಳ್ಳಿರಿ. ನ್ಯಾಯನೀತಿಗಳಲ್ಲಿ ನಿರತರಾಗಿರಿ. ಹಿಂಸಾತ್ಮಕರನ್ನು ತಿದ್ದಿ ಸರಿಪಡಿಸಿರಿ. ಅನಾಥರಿಗೆ ನ್ಯಾಯದೊರಕಿಸಿರಿ. ವಿಧವೆಯರ ಪರವಾಗಿ ವಾದಿಸಿರಿ.

18 ಸರ್ವೇಶ್ವರಸ್ವಾಮಿ ಇಂತೆನ್ನುತ್ತಾರೆ: "ಬನ್ನಿರಿ, ಈಗ ವಾದಿಸೋಣ. ನಿಮ್ಮ ಪಾಪಗಳು ಕಡುಗೆಂಪಾಗಿದ್ದರೂ ಹಿಮದಂತೆ ಬಿಳುಪಾಗುವುವು. ರಕ್ತಗೆಂಪಾಗಿದ್ದರೂ ಉಣ್ಣೆಯಂತೆ ಬೆಳ್ಳಗಾಗುವುವು.
19ನೀವು ಮನಃಪೂರ್ವಕವಾಗಿ ನನಗೆ ವಿಧೇಯರಾದರೆ ಈ ನಾಡಿನ ಸತ್ಫಲವನ್ನು ಸವಿಯುವಿರಿ.
20ಇದಕ್ಕೊಪ್ಪದೆ ಪ್ರತಿಭಟಿಸಿದ್ದೇ ಆದರೆ, ಸಾವಿಗೆ ತುತ್ತಾಗುವಿರಿ. ಸ್ವಾಮಿಯಾದ ನಾನೇ ಇದನ್ನು ನುಡಿದಿದ್ದೇನೆ."

### ಪಾಪಭರಿತ ನಗರ

21 ಅಯ್ಯೋ, ಸುವ್ರತೆಯಂತಿದ್ದ ನಗರಿ ಈಗ ಸೂಳೆಯಂತಿದ್ದಾಳಲ್ಲ ! ನ್ಯಾಯನೀತಿವಂತರಿಗೆ ನೆಲೆಯಾಗಿದ್ದವಳು ಈಗ ಕೊಲೆಪಾತಕರಿಗೆ ಬೀಡಾಗಿದ್ದಾಳಲ್ಲಾ! 22ಎಲೌ ನಗರಿಯೇ, ನಿನ್ನ ಬೆಳ್ಳಿ ಕಪ್ಪಾಗಿದೆ. ನಿನ್ನ ದ್ರಾಕ್ಷಾರಸ ನೀರಾಗಿದೆ. 23ನಿನ್ನ ಅಧಿಪತಿಗಳೇ ದ್ರೋಹಿಗಳಾಗಿದ್ದಾರೆ, ಕಳ್ಳರ ಗೆಳೆಚುರಾಗಿದ್ದಾರೆ. ಎಲ್ಲರೂ ಲಂಚಕೋರರಾಗಿದ್ದಾರೆ. ಕಪ್ಪಕಾಣಿಕೆಗಳಿಗೆ ಕೈಯೊಡ್ಡುತ್ತಾರೆ. ಆದರೆ ಅನಾಥರ ಪರವಾಗಿ ವಾದಿಸುವುದಿಲ್ಲ. ವಿಧವೆಯರ ವ್ಯಾಜ್ಯವನ್ನು ತೀರಿಸುವುದಿಲ್ಲ.

24 ಇಂತಿರಲು ಒಡೆಯರು, ಸೇನಾಧೀಶ್ವರರು, ಇಸ್ರಯೇಲರ ಪರಾಕ್ರಮಿಯು ಆದ ಸರ್ವೇಶ್ವರ ಹೀಗೆನ್ನುತ್ತಾರೆ: "ಇಗೋ ನನ್ನ ಶತ್ರುಗಳಾದ ನಿಮ್ಮ ಮೇಲೆ ಸೇಡು ತೀರಿಸುವೆನು. ನನ್ನ ವಿರೋಧಿಗಳಾದ ನಿಮ್ಮನ್ನು ಸದೆಬಡಿದು ಶಾಂತನಾಗಿರುವೆನು. 25ನಿಮ್ಮ ಮೇಲೆ ಕೈ ಮಾಡುವೆನು. ನಿಮ್ಮ ಲೋಹವನ್ನು ಪುಟಹಾಕಿ ನಿಮ್ಮ ಕಲ್ಮಷವನ್ನು ಪೂರ್ತಿಯಾಗಿ ಕರಗಿಸಿಬಿಡುವೆನು. ಕಂದುಕೆಸರನ್ನೆಲ್ಲ ತೊಡೆದುಹಾಕುವೆನು.
26ಪೂರ್ವದಲ್ಲಿದ್ದಂತೆ ನಿಮಗೆ ನ್ಯಾಯಾಧಿಪತಿಗಳನ್ನೂ ಮಂತ್ರಿಗಳನ್ನೂ ಮತ್ತೆ ನೇಮಿಸುವೆನು. ಆಗ ಜೆರುಸಲೇಮ್ 'ಧರ್ಮಪುರಿ', 'ಸುವ್ರತ ನಗರಿ' ಎನಿಸಿಕೊಳ್ಳುವುದು.

27 ಸಿಯೋನಿನ ಉದ್ಧಾರ ನ್ಯಾಯನೀತಿಯಿಂದ; ಅದಕ್ಕೆ ಹಿಂದಿರುಗುವವರ ಉದ್ಧಾರ ಸತ್ಸಂಬಂಧದಿಂದ; 28ನಾಶವಾಗುವರು ದ್ರೋಹಿಗಳೂ ಪಾಪಿಗಳೂ ಒಟ್ಟಾಗಿ; ನಿರ್ಮೂಲವಾಗುವರು ಸ್ವಾಮಿಯನ್ನು ತೊರೆದವರು ನಿಶ್ಚಯವಾಗಿ.

29 ನೀವು ಬಯಸಿದ ಎಲ್ಲಾ ಮರಗಳನ್ನು ಪೂಜಿಸಿದ್ದಕ್ಕಾಗಿ ಹೇಸುವಿರಿ: ಪವಿತ್ರವನಗಳನ್ನು ನಿರ್ಮಿಸಿದ್ದಕ್ಕಾಗಿ ನಾಚಿಕೆ ಪಡುವಿರಿ. 30ಎಲೆ ಒಣಗಿದ ಮರಗಳಂತೆ ಆಗುವಿರಿ. ಜಲವಿಲ್ಲದ ವನದಂತಾಗುವಿರಿ. 31ಒಣಹುಲ್ಲಿನ ಮೆದೆಗೆ ಬೆಂಕಿಯ ಕಿಡಿಬಿದ್ದು ಸುಟ್ಟುಹೋಗುವಂತೆ ನಿಮ್ಮಲ್ಲಿನ ಬಲಿಷ್ಟರು ತಮ್ಮ ದುಷ್ಕೃತ್ಯಗಳಿಂದಲೇ ನಾಶವಾಗುವರು. ಈ ವಿನಾಶವನ್ನೂ ಯಾರಿಂದಲೂ ತಡೆಗಟ್ಟಲಾಗದು.

### ಶಾಶ್ವತ ಶಾಂತಿ

**2** ಜುದೇಯ ಮತ್ತು ಜೆರುಸಲೇಮಿನ ವಿಷಯವಾಗಿ ಆಮೋಚನ ಮಗನಾದ ಯೆಶಾಯನು ಕಂಡ ದರ್ಶನದಲ್ಲಿ ಕೇಳಿಬಂದ ದೈವೋಕ್ತಿ:

2ಸರ್ವೇಶ್ವರನ ಶ್ರೀ ನಿವಾಸದ ಪರ್ವತವು
ಅಂತಿಮ ಕಾಲದಂದು ಪ್ರತಿಷ್ಠೆಗೊಳ್ಳುವುದು,
ಗುಡ್ಡಬೆಟ್ಟಗಳಿಗಿಂತ ಎತ್ತರವಾಗಿ ಬೆಳೆದು
ಬರುವುವು ಅದರತ್ತ ಸಕಲ ರಾಷ್ಟ್ರಗಳು
ಜಲಧಾರೆಯಂತೆ ಹರಿದು ಬರುವುವು.
3 ದೇಶವಿದೇಶಗಳವರು ಬಂದು ಹೇಳುವರು ಹೀಗೆ:
"ಬನ್ನಿ, ಹೋಗೋಣ ಸರ್ವೇಶ್ವರಸ್ವಾಮಿಯ
ಪರ್ವತಕ್ಕೆ
ಇಸ್ರಯೇಲರ ದೇವರ ಮಂದಿರಕ್ಕೆ.
ಬೋಧಿಸುವನಾತ ನಮಗೆ ತನ್ನ
ಮಾರ್ಗಗಳನು
ನಾವು ಹಿಡಿದು ನಡೆವಂತೆ ಆತನ ಪಥವನು
ಹೊರಡುವುದು ಧರ್ಮಶಾಸ್ತ್ರ
ಸಿಯೋನಿನಿಂದ
ಸ್ವಾಮಿಯ ದಿವ್ಯವಾಣಿ ಜೆರುಸಲೇಮಿನಿಂದ.
4ಬಗೆಹರಿಸುವನು ದೇಶದೇಶಗಳ ವ್ಯಾಜ್ಯವನು
ತೀರಿಸುವನು ರಾಷ್ಟ್ರರಾಷ್ಟ್ರಗಳ ನ್ಯಾಯವನು
ಹಾಕುವರವರು ಕುಲುಮೆಗೆ
ತಮ್ಮಾಯುಧಗಳನು.
ಮಾರ್ಪಡಿಸುವರು ಕತ್ತಿಗಳನು ನೇಗಿಲ
ಗುಳಗಳನ್ನಾಗಿ
ಭರ್ಜಿಗಳನು ಕುಡುಗೋಲುಗಳನ್ನಾಗಿ.
ಕತ್ತಿಯನೆತ್ತರು ಜನಾಂಗ ಜನಾಂಗದೆದುರಿಗೆ
ಯುದ್ಧವಿದ್ಯೆಯ ಕಲಿಕೆ ಅಗತ್ಯವಿರದು
ಅವರಿಗೆ.
5 ಯಕೋಬ ಮನೆತನದವರೇ, ಬನ್ನಿ, ಸ್ವಾಮಿಯ ಬೆಳಕಿನಲ್ಲಿ ನಡೆಯೋಣ.

**ಅಹಂಕಾರಿಗಳ ಪತನ ನಿಶ್ಚಯ**

6 ಹೇ ಸರ್ವೇಶ್ವರಾ ಯಕೋಬ ಮನೆತನದವರನ್ನು ನೀವು ಕೈ ಬಿಟ್ಟಿದ್ದೀರಿ. ಏಕೆಂದರೆ ಅವರು ಪೌರಸ್ತ್ಯರಂತೆ ಮಾಟಮಂತ್ರ ಮಾಡುವವರು. ಫಿಲಿಷ್ಟಿಯರಂತೆ ಕಣಿಹೇಳುವವರು, ಅನ್ಯದೇಶಿಯರಂತೆ ಆಚಾರವಿಚಾರಗಳನ್ನು ಅನುಕರಿಸುವವರು ಆಗಿಬಿಟ್ಟಿದ್ದಾರೆ. 7ನಾಡು ಬೆಳ್ಳಿ ಬಂಗಾರದಿಂದ ತುಂಬಿಹೋಗಿದೆ. ಜನರ ನಿಧಿ ನಿಕ್ಷೇಪಗಳಿಗೆ ಮಿತಿಯಿಲ್ಲದಂತಿದೆ. ಎಲ್ಲಾಕಡೆ ಅಶ್ವಬಲ ಯಥೇಚ್ಛವಾಗಿದೆ. ರಥಗಳು ಅಪಾರವಾಗಿವೆ. 8ದೇಶದಲ್ಲಿ ವಿಗ್ರಹಗಳು ತುಂಬಿ ತುಳುಕುತ್ತಿವೆ. ಜನರು ತಮ್ಮ ಕೈಯಿಂದ ಮಾಡಿದ ವಿಗ್ರಹಗಳನ್ನೇ ಪೂಜಿಸುತ್ತಿದ್ದಾರೆ.

9 ಮಾನವನು ತಗ್ಗಿಹೋಗಿದ್ದಾನೆ. ಅಧೋಗತಿಗೆ ಇಳಿದಿದ್ದಾನೆ. ಸ್ವಾಮೀ, ಅವನಿಗೆ ಕ್ಷಮೆ ನೀಡಬೇಡಿ.

10 ಸ್ವಾಮಿಯ ಭಯಂಕರ ಕೋಪಕ್ಕೆ ಅಂಜಿ, ಆ ಮಹೋನ್ನತನ ವೈಭವಕ್ಕೆ ಹೆದರಿ ಬಂಡೆಯ ಗುಹೆಗಳೊಳಗೆ ನುಗ್ಗಿರಿ, ನೆಲದ ಬಿಲಗಳಲ್ಲಿ ಅವಿತುಕೊಳ್ಳಿರಿ. 11ಜನಸಾಮಾನ್ಯರ ಅಟ್ಟಹಾಸವನ್ನು ಅಡಗಿಸಲಾಗುವುದು, ಪ್ರಮುಖರ ಗರ್ವ ಕಮರಿ ಹೋಗುವುದು, ಸ್ವಾಮಿ ಮಾತ್ರ ಅಂದು ಉನ್ನತೋನ್ನತವಾಗಿರುವರು. 12ಸೇನಾಧೀಶ್ವರ ಸರ್ವೇಶ್ವರ ದಿನವೊಂದನ್ನು ಗೊತ್ತುಮಾಡಿದ್ದಾರೆ. ಅಹಂಕಾರದಿಂದ ಉಬ್ಬಿಹೋದವರಿಗೆ, ಉದ್ಧಟತನದಿಂದ ಕೊಬ್ಬಿಹೋದವರಿಗೆ, 13ಎತ್ತರವಾಗಿ ಬೆಳೆದಿರುವ

ಲೆಬನೋನಿನ ಎಲ್ಲ ದೇವದಾರು ವೃಕ್ಷಗಳಿಗೆ, ಬಾಷಾನಿನ ಎಲ್ಲಾ ಅಲ್ಲೋನ್ ಮರಗಳಿಗೆ, 14ಉನ್ನತವಾಗಿರುವ ಮೇರುಪರ್ವತಗಳಿಗೆ, ಎಲ್ಲಾ ಗುಡ್ಡಬೆಟ್ಟಗಳಿಗೆ, 15ಸಮಸ್ತ ಗುಮ್ಮಟ ಗೋಪುರಗಳಿಗೆ, ಸಮಸ್ತ ಕೋಟೆಕೊತ್ತಲಗಳಿಗೆ, 16ಎಲ್ಲಾ ದೊಡ್ಡ ದೊಡ್ಡ ಹಡಗುಗಳಿಗೆ, ಎಲ್ಲಾ ಸುಂದರವಾದ ನೌಕೆಗಳಿಗೆ, ಆ ದಿನವು ತಪ್ಪದೆ ಬರುವುದು. 17ಜನಸಾಮಾನ್ಯರ ಅಟ್ಟಹಾಸ ಕುಗ್ಗಿಹೋಗುವುದು, ಜನಪ್ರಮುಖರ ಅಹಂಕಾರ ತಗ್ಗಿಹೋಗುವುದು; ಸರ್ವೇಶ್ವರ ಮಾತ್ರ ಆ ದಿನದಂದು ಉನ್ನತೋನ್ನತವಾಗಿರುವರು. 18ವಿಗ್ರಹಗಳು ಸಂಪೂರ್ಣವಾಗಿ ಮಾಯವಾಗುವುವು.

19 ಭೂಮಂಡಲವನ್ನು ಕಂಪನಗೊಳಿಸಲು ಸ್ವಾಮಿ ಎದ್ದಾಗ ಅವರ ಭಯಂಕರ ಕೋಪಕ್ಕೆ ಅವಿತುಕೊಳ್ಳುವರು ಜನರು ಕಲ್ಲುಬಂಡೆಗಳ ಗುಹೆಗಳಲ್ಲಿ, ನೆಲದ ಹಳ್ಳಕೊಳ್ಳಗಳಲ್ಲಿ. 20ಆ ದಿನ ಬಂದಾಗ ಮಾನವರು ತಮ್ಮ ಪೂಜೆಗೋಸ್ಕರ ಮಾಡಿಸಿಕೊಂಡ ಬೆಳ್ಳಿಯ ಬೊಂಬೆಗಳನ್ನು ಬಂಗಾರದ ವಿಗ್ರಹಗಳನ್ನೂ ಇಲಿಹೆಗ್ಗಣಗಳ ಬಿಲಗಳಲ್ಲಿ ಬಿಸಾಡುವರು. 21ಭೂಮಂಡಲವನ್ನು ಕಂಪನಗೊಳಿಸಲು ಸ್ವಾಮಿ ಎದ್ದಾಗ ಅವರ ಭಯಂಕರ ಕೋಪಕ್ಕೆ ಅಂಜಿ, ಅವರ ಮಹೋನ್ನತ ಮಹಿಮೆ ಹೆದರಿ, ನುಗ್ಗುವರು ಜನರು ಕಲ್ಲು ಬಂಡೆಗಳ ಸಂದುಗೊಂದುಗಳಲ್ಲಿ, ಶಿಲೆಗಳ ಸೀಳು ಪಾಳುಗಳಲ್ಲಿ. 22ನರಮಾನವರಲ್ಲಿ ಇಡದಿರು ಭರವಸೆಯನ್ನು; ಯಾವ ಗಣನೆಗೆ ಬಂದಾನು ಅವನು? ಮೂಗಿನಲ್ಲಿ ಉಸಿರಾಡುವ ಅಲ್ಪ ಪ್ರಾಣಿ ಅವನು!

### ಜೆರುಸಲೇಮಿನ ಅಸ್ತವ್ಯಸ್ತತೆ

**3** ಇಗೋ, ಪ್ರಭುವೂ ಸೇನಾಧೀಶ್ವರ ಆದ ಸರ್ವೇಶ್ವರಸ್ವಾಮಿ ಜೆರುಸಲೇಮ್ ಮತ್ತು ಜುದೇಯದ ಜನರ ಜೀವನಕ್ಕೆ ಆಧಾರವಾದ ಅನ್ನಪಾನಗಳನ್ನೆಲ್ಲ ತೆಗೆದುಬಿಡುವರು. 2ಧೀರರು ಮತ್ತು ಯೋಧರು, ನ್ಯಾಯಾಧಿಪತಿಗಳು ಮತ್ತು ಪ್ರವಾದಿಗಳು, ಶಕುನದವರು ಮತ್ತು ಶಾಸಕರು, 3ದಳಪತಿಗಳು ಮತ್ತು ಗಣ್ಯವ್ಯಕ್ತಿಗಳು, ಮಂತ್ರಿಗಳು ಮತ್ತು ಮಂತ್ರತಂತ್ರದವರು – ಎಲ್ಲರನ್ನು ತೊಲಗಿಸಿ ಬಿಡುವರು. 4ಸರ್ವೇಶ್ವರ ಅವರಿಗೆ ಬಾಲಕರನ್ನು ಪಾಲಕರನ್ನಾಗಿಸಿ, ಹಸುಳೆಗಳು ಅವರನ್ನು ಆಳುವಂತೆ ಮಾಡುವರು. 5ಪ್ರಜೆಗಳೆಲ್ಲ ಪರಸ್ಪರ ವಿರೋಧಿಗಳಾಗಿ, ಒಬ್ಬರನ್ನೊಬ್ಬರು ಹಿಂಸಿಸುವರು. ನೆರೆಹೊರೆಯವರನ್ನು ನಿಂದಿಸುವರು. ಕಿರಿಯರು ಹಿರಿಯರನ್ನು, ದುಷ್ಟರು ಶಿಷ್ಟರನ್ನು ಹೀಯಾಳಿಸುವರು.

6 ಕಾಲ ಬರುವುದು. ಆಗ ಒಬ್ಬನು ತನ್ನ ಸಹೋದರರಲ್ಲೊಬ್ಬನಿಗೆ: “ನಿನಗೆ ನಿಲುವಂಗಿಯಾದರೂ ಇದೆ. ನೀನೇ ನಮಗೆ ಒಡೆಯನಾಗು. ಹಾಳುಬಿದ್ದ ಈ ಊರಿಗೆ ನೀನೇ ಗೌಡನಾಗು,” ಎಂದು ಹುಟ್ಟುಮನೆಯಲ್ಲೇ ಒತ್ತಾಯಿಸುತ್ತಾ ಹೇಳುವನು. 7ಆಗ ಆ ಸಹೋದರನು ಹೂಂಕರಿಸಿ, “ಈ ನಾಡಿಗೆ ವ್ರಣವೈದ್ಯನಾಗಿರಲು ನನಗಿಷ್ಟವಿಲ್ಲ. ಮನೆಯಲ್ಲಿ ತಿನ್ನಲು ಅನ್ನವಿಲ್ಲ, ಉಡಲು ಬಟ್ಟೆಯಿಲ್ಲ. ನನ್ನನ್ನು ಜನನಾಯಕನನ್ನಾಗಿ ಮಾಡುವುದು ಬೇಡ,” ಎಂದು ತಿರಸ್ಕಾರದಿಂದ ಉತ್ತರಿಸುವನು.

8 ಜೆರುಸಲೇಮ್ ನಗರ ಹಾಳಾಯಿತು. ಜುದೇಯನಾಡು ಬಿದ್ದುಹೋಯಿತು. ಜನರ ನಡೆನುಡಿಗಳೆಲ್ಲ ಸ್ವಾಮಿಗೆ ವಿರುದ್ಧವಾದವು. ಸ್ವಾಮಿಯ ಮಹಿಮಾ ಸಾನ್ನಿಧ್ಯಕ್ಕೆ ಪ್ರತೀಕೂಲವಾದವು. 9ಅವರ ಮುಖಲಕ್ಷಣವೇ ಅವರ ವಿರುದ್ಧ ಸಾಕ್ಷಿಯಾಗಿದೆ. ಅವರು ಸೊದೋಮಿನವರಂತೆ ತಮ್ಮ ಪಾಪಗಳನ್ನು ಮುಚ್ಚುಮರೆಯಿಲ್ಲದೆ ಮೆರೆಯಿಸುತ್ತಾರೆ. ಅಯ್ಯೋ, ಅವರಿಗೆ ಕೇಡು! ತಮಗೆ ತಾವೇ ಕೇಡನ್ನು ಬರಮಾಡಿ ಕೊಂಡಿದ್ದಾರೆ.

10 ಸಜ್ಜನರಿಗೆ ಶುಭವೆಂದು ಸಾರಿರಿ. ಅವರು ತಮ್ಮ ಕ್ರಿಯೆಗಳ ಸತ್ಫಲವನ್ನು ಸವಿಯುತ್ತಾರೆ. 11ದುರ್ಜನರಿಗೆ ಧಿಕ್ಕಾರ! ಅವರ ಕೃತ್ಯಗಳಿಗೆ ಕಹಿ ಫಲ ದೊರಕುತ್ತದೆ.

12 ನನ್ನ ಜನರನ್ನೋ ಬಾಧಿಸುತ್ತಿರುವವರು ಹುಡುಗರು; ಆಳುತ್ತಿರುವವರೋ ಹೆಂಗಳೆಯರು. ಎಲೈ ನನ್ನ ಜನರೇ, ನಿಮ್ಮ ನಾಯಕರು ನಿಮ್ಮನ್ನು ತಪ್ಪುದಾರಿಗೆ ಎಳೆಯುತ್ತಿದ್ದಾರೆ. ನಿಮ್ಮ ಮಾರ್ಗವನ್ನು ವಕ್ರಗೊಳಿಸುತ್ತಿದ್ದಾರೆ.

## ಪ್ರಜೆಗಳಿಗೆ ಸರ್ವೇಶ್ವರನ ತೀರ್ಪು

13 ಸ್ವಾಮಿ ವಾದಿಸುವುದಕ್ಕೆ ಸಿದ್ಧವಿದ್ದಾರೆ. ಅವರು ಜನರ ನ್ಯಾಯವನ್ನು ನಿರ್ಣಯಿಸುವುದಕ್ಕೆ ತಯಾರಾಗಿದ್ದಾರೆ. 14ಸ್ವಾಮಿ ತಮ್ಮ ಜನರ ನಾಯಕರನ್ನೂ ಅಧಿಪತಿಗಳನ್ನೂ ನ್ಯಾಯವಿಚಾರಣೆಗೆ ಗುರಿಪಡಿಸುವರು. "ನೀವು ದ್ರಾಕ್ಷಾತೋಟವನ್ನು ಕಬಳಿಸಿದ್ದೀರಿ. ಬಡವರಿಂದ ಕೊಳ್ಳೆ ಹೊಡೆದದ್ದನ್ನು ಮನೆಗಳಲ್ಲಿ ತುಂಬಿಸಿಕೊಂಡಿದ್ದೀರಿ. 15ನೀವು ನನ್ನ ಜನರನ್ನು ನಸುಕಿಬಿಟ್ಟಿದ್ದೀರಲ್ಲವೇ? ಬಡವರನ್ನು ಹಿಸುಕಿಬಿಟ್ಟಿದ್ದೀರಲ್ಲವೇ?" ಎಂದು ಸೇನಾಧೀಶ್ವರ ಸರ್ವೇಶ್ವರಸ್ವಾಮಿ ವಾದಿಸುತ್ತಾರೆ.

## ಮಹಿಳೆಯರಿಗಾಗುವ ವಂಚನೆ

16 ಸ್ವಾಮಿ ಇಂತೆನ್ನುತ್ತಾರೆ: ಸಿಯೋನಿನ ಮಹಿಳೆಯರ ಒನಪು ಒಯ್ಯಾರಗಳನ್ನು ನೋಡಿರಿ. ಅವರು ಕತ್ತುತೂಗುತ್ತಾ, ಕಡೆಗಣ್ಣು ಹಾಕುತ್ತಾ, ಕುಲುಕಿ ಹೆಜ್ಜೆಯಿಡುತ್ತಾ, ಕಾಲುಗೆಜ್ಜೆ ಜಣ ಜಣಿಸುತ್ತಾ ನಡೆಯುತ್ತಾರೆ. 17ಒಡೆಯರಾದ ಸ್ವಾಮಿ ಅವರ ನಡುನೆತ್ತಿಯನ್ನು ಹುಣ್ಣಾಗಿಸಿ ಬೋಳುಮಾಡುವರು. ಅವರ ಮಾನವನ್ನು ಬಯಲು ಮಾಡುವರು.

18 ದಿನ ಬರುವುದು, ಆಗ ಸ್ವಾಮಿ ಅವರ ಬೆಡಗಿನ ಆಭರಣಗಳೆಲ್ಲವನ್ನು ತೆಗೆದುಹಾಕುವರು. ಕಾಲಂದಿಗೆ, ತುರುಬು, ಬಲೆ, ಅರ್ಧಚಂದ್ರ, 19ಜುಮಕಿ, ಬಳೆ, ಕುಲಾವಿ, ಶಿರವಸ್ತ್ರ, 20ಕಂಠವಸ್ತ್ರ, ಕಾಲಸರಪಣಿ, ಡಾಬು, ಸುಗಂಧ ಭರಣಿ, ತಾಯಿತಿ, 21ಮುದ್ರೆ ಉಂಗುರ, ಮೂಗುತಿ, 22ಹಬ್ಬದ ಉಡಿಗೆ ತೊಡಿಗೆ, ಮೇಲಂಗಿ, ಶಾಲು, ಕೈಚೀಲ, 23ನವಿರು ಜಾಲರಿ, ನಾರುಮಡಿ, ಮುಡಿ ಮುಕುಟ, ಮೇಲ್ವಸ್ತ್ರ ಈ ಸೊಗಸು ಭೂಷಣಗಳನ್ನೆಲ್ಲಾ ತೆಗೆದುಹಾಕುವರು.

24 ಇದಲ್ಲದೆ ಸುಗಂಧಕ್ಕೆ ಬದಲಾಗಿ ದುರ್ಗಂಧ, ನಡುಪಟ್ಟಿಗೆ ಬದಲಾಗಿ ಹುರಿಹಗ್ಗ, ಜಡೆದಲೆಗೆ ಬದಲಾಗಿ ಬೋಳುದಲೆ, ರೇಷ್ಮೆ ಬಟ್ಟೆಗೆ ಬದಲಾಗಿ ಗೋಣಿತಟ್ಟು, ಬೆಡಗಿಗೆ ಬದಲಾಗಿ ಬೆತ್ತಲೆ, ಇಂಥ ಗತಿ ಅವರಿಗೆ ಬಂದೊದಗುವುದು. 25ಎಲೌ, ಸಿಯೋನ್ ನಗರಿಯೇ, ನಿನ್ನ ವೀರರು ಖಡ್ಗಕ್ಕೆ ತುತ್ತಾಗುವರು; ನಿನ್ನ ಯೋಧರು ಯುದ್ಧದಲ್ಲಿ ಮಡಿಯುವರು; ನಿನ್ನ ಯೋಧರು ಯುದ್ಧದಲ್ಲಿ ಮಡಿಯುವರು. 26ನಿನ್ನ ಪುರದ್ವಾರಗಳಲ್ಲಿ ದುಃಖ ಪ್ರಲಾಪ ತುಂಬಿರುವುದು. ನೀನು ನಗ್ನಳಂತೆ ನೆಲದ ಮೇಲೆ ಕುಳಿತುಬಿಡುವೆ.

**4** ಆ ಕಾಲ ಬಂದಾಗ ಏಳು ಮಂದಿ ಅವಿವಾಹಿತ ಮಹಿಳೆಯರು ಒಬ್ಬ ಪುರುಷನನ್ನು ಹಿಡಿದುಕೊಂಡು: "ನಾವು ಸ್ವಂತವಾಗಿ ದುಡಿದು ಊಟಮಾಡುತ್ತೇವೆ, ಸ್ವಂತವಾಗಿ ಸಂಪಾದನೆ ಮಾಡಿ ಬಟ್ಟೆ ಉಡುತ್ತೇವೆ. ನೀನು ನಮ್ಮ ಯಜಮಾನನೆನಿಸಿಕೊಂಡು ನಮ್ಮ ಮಾನವನ್ನು ಕಾಪಾಡಿದರೆ ಸಾಕು," ಎಂದು ಕೋರುವರು.

## ಜೆರುಸಲೇಮಿನ ಭವ್ಯಭವಿಷ್ಯ

2 ಆ ದಿನದಂದು ಸರ್ವೇಶ್ವರಸ್ವಾಮಿ ಅನುಗ್ರಹಿಸುವ ಗಿಡಮರಗಳು ಸುಂದರವಾಗಿರುವುವು, ಸಮೃದ್ಧಿಯಾಗಿ ಬೆಳೆದಿರುವುವು. ಭೂಮಿಯ ಸಿರಿಸುಗ್ಗಿ ಅಳಿದುಳಿದ ಇಸ್ರಯೇಲರಿಗೆ ಹಿಗ್ಗನ್ನೂ ಹೆಮ್ಮೆಯನ್ನೂ ತರುವುದು. 3ಸಿಯೋನಿನಲ್ಲಿ ಉಳಿದವರು, ಜೆರುಸಲೇಮಿನಲ್ಲಿ ಮಿಕ್ಕವರು – ಅಂದರೆ ಜೀವಬಾಧ್ಯರ ಪಟ್ಟಿಯಲ್ಲಿ ಲಿಖಿತವಾಗಿರುವ ಜೆರುಸಲೇಮಿನ ನಿವಾಸಿಗಳೆಲ್ಲರು – ಪವಿತ್ರರೆನಿಸಿ ಕೊಳ್ಳುವರು. 4ಆಗ ಒಡೆಯರಾದ ಸ್ವಾಮಿ ನ್ಯಾಯನಿರ್ಣಯ ಮಾಡುವ ತಮ್ಮ ಚೈತನ್ಯದಿಂದಲೂ ಸುಟ್ಟು ಶುಚಿಮಾಡುವ ಚೈತನ್ಯದಿಂದಲೂ ಸಿಯೋನಿನ ಮಹಿಳೆಯರ ಕಲ್ಮಶವನ್ನು ತೊಡೆದುಹಾಕುವರು. 5ಸಿಯೋನ್ ಪರ್ವತದ ಮೇಲೆಲ್ಲ, ಅಲ್ಲಿನ ಸಭಾಕೂಟಗಳ ಮೇಲೆಲ್ಲ ಹಗಲಲ್ಲಿ ಧೂಮಮೇಘವನ್ನು, ರಾತ್ರಿಯಲ್ಲಿ ಪ್ರಜ್ವಲಿಸುವ ಅಗ್ನಿಪ್ರಕಾಶವನ್ನು ಉಂಟುಮಾಡುವರು. ದೇವರ ಮಹಿಮೆ ಛತ್ರಿಯಂತೆಯೂ ಚಪ್ಪರದಂತೆಯೂ ಎಲ್ಲರನ್ನು ಆವರಿಸುವುದು. 6ಅದು ಹಗಲಿನ ಬಿಸಿಲಲ್ಲಿ ನೆರಳನ್ನೂ ಮಳೆಗಾಳಿ ಬಂದಾಗ ಆಶ್ರಯವನ್ನೂ ಕೊಡುವ ಮಂಟಪವಾಗಿರುವುದು.

## ದ್ರಾಕ್ಷಾವನದ ಗಾನ

**5** ಹಾಡುವೆ ನಾನೆನ್ನ
ಪ್ರಿಯನಿಗೆ ಗೀತೆಯೊಂದನು
ಅವನ ದ್ರಾಕ್ಷಾವನದ ಕುರಿತು
ಪ್ರೇಮಗೀತೆಯನು:
ಪ್ರಿಯತಮನಿಗೆ ಇತ್ತೊಂದು ದ್ರಾಕ್ಷಿಯ ತೋಟ
ಫಲವತ್ತಾಗಿಹ ಗುಡ್ಡದ ಮೇಲಿನ ತೋಟ.
ಆರಿಸಿ ಎಸೆದನು ಕಲ್ಲುಮುಳ್ಳುಗಳನು
ಅಗೆದು ಹದಮಾಡಿದನಾತ ಗುಡ್ಡವನು.
2ನೆಟ್ಟನು ಒಳ್ಳೊಳ್ಳೆ ದ್ರಾಕ್ಷಿಯ ಸಸಿಗಳನು
ಕಟ್ಟಿದನು ಕಾವಲಿಗಾಗಿ ಅಟ್ಟಣೆಯೊಂದನು
ಕಟ್ಟಿದನು ಅದರೊಳಗೆ ಆಲೆಯೊಂದನು.
ನಿರೀಕ್ಷಿಸುತ್ತಿರೆ ಆತ ಸಿಹಿದ್ರಾಕ್ಷಿ ಹಣ್ಣನು,
ಬಿಟ್ಟಿತದೋ ಅವನಿಗೆ ಹುಳಿ ಹಣ್ಣನು !

3 ಆದುದರಿಂದ ನನ್ನ ಪ್ರಿಯನು ಹೀಗೆಂದು ಕೇಳುತ್ತಾನೆ: “ಜೆರುಸಲೇಮಿನ ನಿವಾಸಿಗಳೇ,
ಜುದೇಯದ ಜನರೇ, ನನಗೂ ನನ್ನ ತೋಟಕ್ಕೂ ಮಧ್ಯೆ ಇರುವ ವ್ಯಾಜ್ಯವನ್ನು ತೀರಿಸಿರಿ. 4ನನ್ನ ತೋಟಕ್ಕಾಗಿ
ನಾನು ಮಾಡಿದ್ದಕ್ಕಿಂತಲೂ ಇನ್ನೇನು ಮಾಡಬೇಕಾಗಿತ್ತು? ಅದು ಸಿಹಿದ್ರಾಕ್ಷಿಯನ್ನು ಕೊಡುವುದೆಂದು ನಾನು
ನಿರೀಕ್ಷಿಸುತ್ತಿರಲು, ಅದು ಹುಳಿ ಹಣ್ಣನ್ನು ಕೊಟ್ಟಿತೇಕೆ? ನನ್ನ ಈ ತೋಟಕ್ಕೆ ಏನು ಮಾಡುವೆನೆಂದು
ಹೇಳುತ್ತೇನೆ, ಕೇಳಿ:

5 ಕಿತ್ತೆಸೆಯುವೆನು ಅದರ ಬೇಲಿಯನು; ತುತ್ತಾಗುವುದದು ದನಕರುಗಳಿಗೆ. ಕೆಡವಿ ಹಾಕುವೆನು
ಅದರ ಗೋಡೆಯನು; ಈಡಾಗುವುದದು ಪರರ ತುಳಿದಾಟಕ್ಕೆ. 6ಬಂಜರು ಭೂಮಿಯಾಗಿಸುವೆನು ಅದನ್ನು;
ಕುಡಿಕತ್ತರಿಸುವರಾರೂ ಇರರು ಅದಕ್ಕೆ. ಮುಳ್ಳುಕಳೆ ಬೆಳೆಯುವುದು ಅದರೊಳಗೆ. ನೀಡುವೆನು
ಆಣತಿಯೊಂದನು ಮೋಡಗಳಿಗೆ; ಸುರಿಸವು ತುಂತುರು ಮಳೆಯನ್ನೂ ಅದಕ್ಕೆ.

7ಇಸ್ರಯೇಲ್ ಮನೆತನವೇ ಸೇನಾಧೀಶ್ವರ
ಸರ್ವೇಶ್ವರ ನೆಟ್ಟ ಆ ದ್ರಾಕ್ಷಿಯ ತೋಟ.
ಜುದೇಯದ ಜನರೇ ಆತ ನಾಟಿಮಾಡಿದಾ
ಸುಂದರ ಸಸಿತೋಟ.
ನ್ಯಾಯನೀತಿಯನು ನಿರೀಕ್ಷಿಸಿದನಾತ
ಆದರೆ ಸಿಕ್ಕಿತವನಿಗೆ ರಕ್ತಪಾತ !
ಸತ್ಸಂಬಂಧವನು ಎದುರುನೋಡಿದನಾತ
ಇಗೋ, ದಕ್ಕಿತವನಿಗೆ ದುಃಖಿತರ ಆರ್ತನಾದ !

## ಧಿಕ್ಕಾರಗಳ ಸುರಿಮಳೆ

8 ಮನೆಯ ಮೇಲೆ ಮನೆಯನ್ನು, ಹೊಲದ ಮೇಲೆ ಹೊಲವನ್ನು ಕೂಡಿಹಾಕಿಸುತ್ತಾ ಇರುವವರಿಗೆ
ಧಿಕ್ಕಾರ! ಇತರರಿಗೆ ಕಿಂಚಿತ್ತನ್ನೂ ಬಿಡದೆ ನಾಡಿನ ನಡುವೆ ತಾವೇ ಗೌಡರಾಗಿ ವಾಸಿಸುವ ಇವರಿಗೆ ಧಿಕ್ಕಾರ!
9ಸೇನಾಧೀಶ್ವರ ಸ್ವಾಮಿಯಿಂದ ನಾನು ಕಿವಿಯಾರೆ ಕೇಳಿದಂತೆ ಹಲವಾರು ಮಂದಿರಗಳು ಬರಿದಾಗುವುವು.
ಸುಂದರ ಹಾಗೂ ಸವಿಸ್ತಾರವಾದ ಭವನಗಳು ನಿವಾಸಿಗಳಿಲ್ಲದೆ ಪಾಳು ಬೀಳುವುವು. 10ಹತ್ತು ಎಕರೆ
ದ್ರಾಕ್ಷಿತೋಟ ಕೇವಲ ಎಂಟು ಲೀಟರ್ ದ್ರಾಕ್ಷಾರಸವನ್ನು ಕೊಡುವುದು. ನೂರೆಂಬತ್ತು ಲೀಟರ್
ಬೀಜಬಿತ್ತಿದರೆ, ಕೇವಲ ಹದಿನೆಂಟು ಲೀಟರ್ ಧಾನ್ಯ ಮಾತ್ರ ಸಿಗುವುದು.

11 ಮದ್ಯದ ಗೀಳಿನಿಂದ ಮುಂಜಾನೆ ಏಳುವವರಿಗೆ ಧಿಕ್ಕಾರ! ಅಮಲೇರಿ ಉನ್ಮತ್ತರಾಗುವಂತೆ ರಾತ್ರಿಯಲ್ಲಿ ಹೊತ್ತುಮೀರಿ ಕುಡಿಯುತ್ತಾ ಕಾಲಹರಣ ಮಾಡುವವರಿಗೆ ಧಿಕ್ಕಾರ! 12ಕಿನ್ನರಿ, ವೀಣೆ, ತಬಲ, ಕೊಳಲು, ಮದ್ಯಪಾನ ಇವೇ ಅವರ ದುಂದೌತಣದ ಸೊಬಗು. ಸ್ವಾಮಿಯ ಕಾರ್ಯಗಳನ್ನು ಅವರು ಲಕ್ಷಿಸರು. ಸ್ವಾಮಿಯ ಕೃತಿಗಳನ್ನವರು ಧ್ಯಾನಿಸರು. 13ಈ ಕಾರಣ, ನನ್ನ ಜನರು ಬುದ್ಧಿಹೀನರಂತೆ ಸೆರೆಹೋಗುವುದು ನಿಶ್ಚಯ. ಅವರ ಮುಖಂಡರು ಹಸಿವಿನಿಂದ ಸಾಯುವರು. ಅವರಲ್ಲಿ ಜನಸಾಮಾನ್ಯರು ಬಾಯಾರಿ ಸೊರಗಿಹೋಗುವರು. 14ಪಾತಾಳವು ಹಸಿದು ಹಂಬಲಿಸುತ್ತಿದೆ. ಅಗಾಧವಾಗಿ, ಬಾಯಿ ತೆರೆದು ನಿಂತಿದೆ. ಜೆರುಸಲೇಮಿನ ಶ್ರೀಮಂತರು, ಸದ್ದುಗದ್ದಲ ಮಾಡುವ, ಹೆಮ್ಮೆಯಿಂದ ಹಿಗ್ಗುವ ಜನಸಾಮಾನ್ಯರು ಆ ಪಾತಾಳದೊಳಕ್ಕೆ ಬಿದ್ದು ಹೋಗುವರು.

15 ನರಮಾನವರು ತಗ್ಗಿಹೋಗುವರು. ಕುಲೀನರು ಕುಗ್ಗಿಹೋಗುವರು. ಗರ್ವಿಷ್ಠರ ಸೊಕ್ಕು ಅಡಗಿಹೋಗುವುದು. 16ಸೇನಾಧೀಶ್ವರ ಸ್ವಾಮಿಯಾದರೋ ನ್ಯಾಯತೀರಿಸುವುದರಲ್ಲಿ ಸರ್ವಶ್ರೇಷ್ಠರು. ಧರ್ಮಪಾಲನೆಯಲ್ಲಿ ಪರಮ ಪರಿಶುದ್ಧರು ಎಂದು ಕಾಣಿಸಿಕೊಳ್ಳುತ್ತಾರೆ. 17ಪಟ್ಟಣ ಪ್ರದೇಶಗಳು ಹಾಳಾಗಿ ಮೇಕೆಮರಿಗಳಿಗೆ ಹುಲ್ಲು ಗಾವಲುಗಳಾಗುವುವು. ಕುರಿಮರಿಗಳು ಅಲ್ಲಿ ಮೇಯುವುವು.

18 ಅಕ್ರಮವೆಂಬ ಹಗ್ಗಗಳಿಂದ ಅಪರಾಧ ಎಂಬ ತೇರನ್ನು ಎಳೆಯುವವರಿಗೆ ಧಿಕ್ಕಾರ! 19"ಸ್ವಾಮಿ ತ್ವರೆಮಾಡಲಿ, ತನ್ನ ಕಾರ್ಯವನ್ನು ತುರ್ತಾಗಿ ನಡೆಸಲಿ, ನೋಡೋಣ; ಇಸ್ರಯೇಲಿನ ಪರಮ ಪಾವನ ಸ್ವಾಮಿಯ ಯೋಜನೆ ಶೀಘ್ರವಾಗಿ ಕೈಗೂಡಲಿ, ಆಗ ಪರಿಗ್ರಹಿಸೋಣ" ಎಂದು ಹೇಳುವ ಜನರಿಗೆ ಧಿಕ್ಕಾರ!

20 ಕೆಟ್ಟದ್ದನ್ನು ಒಳ್ಳೆಯದೆಂದೂ ಒಳ್ಳೆಯದನ್ನು ಕೆಟ್ಟದ್ದೆಂದೂ ಬೋಧನೆ ಮಾಡುವವರಿಗೆ ಧಿಕ್ಕಾರ! ಕತ್ತಲನ್ನು ಬೆಳಕೆಂದೂ ಬೆಳಕನ್ನು ಕತ್ತಲೆಂದೂ ಸಾಧಿಸುವಂಥವರಿಗೆ ಧಿಕ್ಕಾರ! ಕಹಿಯನ್ನು ಸಿಹಿಯೆಂದೂ ಸಿಹಿಯನ್ನು ಕಹಿಯೆಂದೂ ವಾದಿಸುವಂಥವರಿಗೆ ಧಿಕ್ಕಾರ! 21ತಮ್ಮ ಗಣನೆಯಲ್ಲಿ ತಾವೇ ವಿವೇಕಿಗಳೆಂದು ಭಾವಿಸುವವರಿಗೆ ಧಿಕ್ಕಾರ!

22 ಸುರಾಪಾನದಲ್ಲಿ ಶೂರರಾಗಿ, ಮದ್ಯ ಮಿಶ್ರಣದಲ್ಲಿ ಸಾಹಸಿಗಳಾಗಿ ಇರುವವರಿಗೆ ಧಿಕ್ಕಾರ! 23ಲಂಚಕ್ಕೋಸ್ಕರ ನಿರ್ದೋಷಿಗಳನ್ನು ಅಪರಾಧಿಗಳೆಂದು ತೀರ್ಮಾನಿಸಿ ವಂಚಿಸುವವರಿಗೆ ಧಿಕ್ಕಾರ! 24ಹೀಗಿರಲು, ಒಣಗಿದ ಕಳೆಯನ್ನು ಅಗ್ನಿಜ್ವಾಲೆ ಕಬಳಿಸುವಂತೆ, ಒಣಹುಲ್ಲು ಬೆಂಕಿಯಲ್ಲಿ ಬೂದಿಯಾಗುವಂತೆ, ಅವರ ಬೇರು ಕೊಳೆತುಹೋಗುವುದು. ಅವರ ಹೂ ಧೂಳಿನಂತೆ ತೂರಿಹೋಗುವುದು. ಏಕೆಂದರೆ, ಅವರು ಸೇನಾಧೀಶ್ವರ ಸ್ವಾಮಿಯ ಉಪದೇಶವನ್ನು ನಿರಾಕರಿಸಿದ್ದಾರೆ. ಇಸ್ರಯೇಲಿನ ಪರಮಪಾವನ ಸ್ವಾಮಿಯ ವಾಕ್ಯವನ್ನು ಅಸಡ್ಡೆ ಮಾಡಿದ್ದಾರೆ. 25ಎಂದೇ ತಮ್ಮ ಜನರ ವಿರುದ್ಧ ಸ್ವಾಮಿಯ ಕೋಪ ಭುಗಿಲೆದ್ದಿದೆ. ಹೊಡೆಯುವುದಕ್ಕೆ ಅವರ ಕೈ ಮೇಲಕ್ಕೆತ್ತಿದೆ. ಬೆಟ್ಟಗುಡ್ಡಗಳು ನಡುಗುವುವು. ಸತ್ತ ಹೆಣಗಳು ಕಸದಂತೆ ಬೀದಿಯಲ್ಲಿ ಬಿದ್ದಿರುವುವು. ಇಷ್ಟೆಲ್ಲ ನಡೆದರೂ ಸ್ವಾಮಿಯ ಕೋಪ ತಣಿಯದು, ಎತ್ತಿದ ಕೈ ಇಳಿಯದು.

26 ದೂರದ ಜನಾಂಗಕ್ಕೆ ಸ್ವಾಮಿ
ಧ್ವಜಾರೋಹಣ ಮಾಡುವರು ಗುರುತಾಗಿ,
ಕರೆಯುವರವರನು ಜಗದ ಕಟ್ಟಕಡೆಯಿಂದ
ಸೀಟಿಹಾಕಿ; ಬರುವರಾಗ ಆ ಜನರು
ತ್ವರೆಮಾಡಿ, ವೇಗವಾಗಿ.

27 ಬಳಲಿ ಹೋಗರು ಅವರಲ್ಲಿ ಯಾರೂ
ಮುಗ್ಗರಿಸಿ
ನಿದ್ರಿಸರು ಯಾರೂ ತೂಕಡಿಸಿ,
ಸಡಿಲವಾಗದವರ ನಡುಕಟ್ಟು,
ಕಿತ್ತು ಹೋಗದವರ ಕೆರದ ಕಟ್ಟು.

28 ಚೂಪಾಗಿವೆ ಅವರ ಬಾಣಗಳು; ಬಿಗಿದಿವೆ
ಬಿಲ್ಲುಗಳು,

ಬೆಣಚುಕಲ್ಲಿನಂತಿವೆ ಕುದುರೆಗಳ
ಗೊರಸುಗಳು,
ಸುತ್ತುತ್ತಿವೆ ಸುಂಟರಗಾಳಿಯಂತವರ
ಚಕ್ರಗಳು.
29 ಗರ್ಜಿಸುತಿಹರು ಸೈನಿಕರು ಸಿಂಹದಂತೆ,
ಆರ್ಭಟಿಸುತಿಹರವರು ಪ್ರಾಯದ
ಸಿಂಹಗಳಂತೆ,
ಗುರುಗುಟ್ಟುತಿಹರು ಬೇಟೆ ಹಿಡಿದ
ಕೇಸರಿಯಂತೆ.
ಅದನ್ನೆತ್ತಿಕೊಂಡು ಓಡುತಿಹರು,
ಬಿಡಿಸುವರಾರೂ ಇಲ್ಲದಂತೆ.
30 ಗುರುಗುಟ್ಟುತಿಹರು ಯೆಹೂದ್ಯರ ಮೇಲೆ
ಭೋರ್ಗರೆಯುವ ಸಮುದ್ರದಂತೆ;
ನಾಡಿನೆಲ್ಲೆಡೆ ಕವಿದಿಹುದು ಗಾಢಾಂಧಕಾರ;
ತಾಂಡವವಾಡುತಿಹುದು ನೋಡಿದೆಡೆ
ದುಃಖದುಗುಡ;
ಮೋಡ ಕವಿದು ಇರುಳಾಗಿಹುದು
ಹಗಲೊಳು ಕೂಡ !

### ಯೆಶಾಯನಿಗೆ ದೇವಕರೆ

**6** ಅರಸ ಉಜ್ಜೀಯನು ಕಾಲವಾದ ವರ್ಷದಲ್ಲಿ ನನಗೆ ಸರ್ವೇಶ್ವರಸ್ವಾಮಿಯಿಂದ ದರ್ಶನವಾಯಿತು:
ಉನ್ನತೋನ್ನತ ಸಿಂಹಾಸನದಲ್ಲಿ ಅವರು ಆಸೀನರಾಗಿದ್ದರು. ಅವರ ಮೇಲು ವಸ್ತ್ರ ನೆರಿಗೆ ನೆರಿಗೆಯಾಗಿ
ದೇವಾಲಯವನ್ನೆಲ್ಲ ಆವರಿಸಿತ್ತು. 2ಅವರ ಸುತ್ತಲು ಸೆರಾಫಿಯರೆಂಬ ತೇಜಸ್ವಿಗಳು ಇದ್ದರು.
ಪ್ರತಿಯೊಬ್ಬರಿಗೂ ಆರಾರು ರೆಕ್ಕೆಗಳಿದ್ದವು. ಎರಡು ರೆಕ್ಕೆಗಳಿಂದ ಅವರ ಮುಖ ಮುಚ್ಚಿತ್ತು. ಇನ್ನೆರಡು
ರೆಕ್ಕೆಗಳಿಂದ ಅವರ ಪಾದಗಳು ಮುಚ್ಚಿದ್ದವು. ಮತ್ತೆರಡು ರೆಕ್ಕೆಗಳನ್ನು ಬಡಿಯುತ್ತಾ ನೆಲಸೋಕದೆ ನಿಂತಿದ್ದರು.
3ಅವರಲ್ಲಿ ಒಬ್ಬನು ಮತ್ತೊಬ್ಬನಿಗೆ:
"ಪವಿತ್ರ, ಪವಿತ್ರ, ಪವಿತ್ರ ಸೇನಾಧೀಶ್ವರ ಸರ್ವೇಶ್ವರ
ಜಗವೆಲ್ಲ ಆತನ ಪ್ರಭಾವಭರಿತ"
ಎಂದು ಕೂಗಿ ಹೇಳಿದನು.
4 ಆ ಶಬ್ದಕ್ಕೆ ದೇವಾಲಯದ ಅಸ್ತಿವಾರವೇ ಕಂಪಿಸಿತು. ಧೂಮವು ಆಲಯವನ್ನೆಲ್ಲ ತುಂಬಿತು.
5 ಆಗ ನಾನು "ಅಯ್ಯೋ, ನನ್ನ ಗತಿಯೇನು? ನನ್ನ ಕಥೆ ಮುಗಿಯಿತು. ಅಶುದ್ಧ ವದನದವನು
ನಾನು. ಅಶುದ್ಧ ವದನದವರ ಮಧ್ಯೆ ಬಾಳುವವನು. ನನ್ನ ಕಣ್ಣುಗಳು ರಾಜಾಧಿರಾಜನನ್ನು, ಸೇನಾಧೀಶ್ವರ
ಸರ್ವೇಶ್ವರನನ್ನು ಕಂಡೆವಲ್ಲಾ!" ಎಂದು ಕೂಗಿ ಕೊಂಡೆನು.
6 ಆಗ ಸೆರಾಫಿಯರಲ್ಲಿ – ತೇಜಸ್ವಿಯೊಬ್ಬನು ಬಲಿಪೀಠದಿಂದ, ಉರಿಯುವ ಕೆಂಡವೊಂದನ್ನು
ಇಕ್ಕಳದಿಂದ ಹಿಡಿದುಕೊಂಡು ನನ್ನತ್ತ ಹಾರಿ ಬಂದನು. 7ಆ ಉರಿಕೆಂಡವನ್ನು ನನ್ನ ಬಾಯಿಗೆ ಮುಟ್ಟಿಸಿ:
"ಇದು ನಿನ್ನ ತುಟಿಗಳನ್ನು ತಾಕಿದೆ. ಈಗ ದೋಷ ನೀಗಿತು. ನಿನ್ನ ಪಾಪ ಪರಿಹಾರ ಆಯಿತು", ಎಂದನು.
8 ಆಗ, "ಯಾರನ್ನು ಕಳುಹಿಸಲಿ? ನಮ್ಮ ಪರವಾಗಿ ಹೋಗುವವನು ಯಾರು?" ಎಂಬ ನುಡಿ
ಕೇಳಿಸಿತು. ಅದಕ್ಕೆ ನಾನು, "ಇಗೋ, ನಾನು ಸಿದ್ಧ, ನನ್ನನ್ನು ಕಳುಹಿಸಿ" ಎಂದೆನು.

9 ಅದಕ್ಕೆ, "ನೀನು ಜನರ ಬಳಿಗೆ ಹೋಗಿ ಹೀಗೆಂದು ಹೇಳು: 'ನೀವು ಕಿವಿಯಾರೆ ಕೇಳಿದರೂ ತಿಳಿಯಬಾರದು, ಕಣ್ಣಾರೆ ಕಂಡರೂ ಗ್ರಹಿಸಬಾರದು.' 10ಅದೂ ಅಲ್ಲದೆ, ಆ ಜನರು; "ಕಣ್ಣಿನಿಂದ ಕಂಡು, ಕಿವಿಯಿಂದ ಕೇಳಿ, ಹೃದಯದಿಂದ ಗ್ರಹಿಸಿ, ನನಗೆ ಅಭಿಮುಖರಾಗಿ ನನ್ನಿಂದ ಸ್ವಸ್ಥತೆಯನ್ನು ಹೊಂದದಂತೆ ಅವರ ಹೃದಯವನ್ನು ಕೊಬ್ಬಿಸು, ಕಿವಿಗಳನ್ನು ಮಂದವಾಗಿಸು, ಕಣ್ಣುಗಳನ್ನು ಮಬ್ಬಾಗಿಸು," ಎಂದು ನನಗೆ ಹೇಳಿದರು.

11 ಅದಕ್ಕೆ ನಾನು: "ಸ್ವಾಮಿ, ಈ ಪರಿಸ್ಥಿತಿ ಎಷ್ಟರ ತನಕ?" ಎಂದು ಕೇಳಿದೆನು.

ಅದಕ್ಕೆ ಪ್ರತ್ಯುತ್ತರವಾಗಿ: 12"ನಾನು ಜನರನ್ನು ದೂರ ತೊಲಗಿಸಿ, ನಾಡನ್ನು ನಾಶಗೊಳಿಸಿ, ನಗರಗಳನ್ನು ನಿರ್ಜನಗೊಳಿಸಿ, ಮನೆಗಳನ್ನು ಬರಿದಾಗಿಸಿ, ಧರೆಯನ್ನು ಪೂರ್ತಿಯಾಗಿ ನಾಶಗೊಳಿಸುವ ತನಕ ಪರಿಸ್ಥಿತಿ ಹೀಗಿರುವುದು.

13 "ನಾಡಿನ ಹತ್ತನೇ ಒಂದು ಭಾಗ ಉಳಿದಿದ್ದರೂ ಅದು ಕೂಡ ನಾಶವಾಗುವುದು. ಏಲಾ ಮರವನ್ನಾಗಲೀ ಅಲ್ಲೋನ್ ಮರವನ್ನಾಗಲೀ ಕಡಿದ ಮೇಲೆ ಉಳಿಯುವುದು ಬುಡ ಮಾತ್ರ" ಎಂದರು.

ಹೀಗೆ ಉಳಿದ ಬುಡವು ಮುಂದೆ ದೇವಜನರಾಗಿ ಚಿಗುರುವುದು.

## ಆಹಾಜನಿಗೆ ಯೆಶಾಯನ ಬೋಧನೆ

**7** ಅದು ಆಹಾಜನ ಕಾಲ.ಇವನು ಯೋತಾಮನ ಮಗ, ಉಜ್ಜೀಯನ ಮೊಮ್ಮಗ, ಜುದೇಯದ ಅರಸ. ಇವನ ಕಾಲದಲ್ಲಿ ಸಿರಿಯದ ಅರಸ ರೆಚೀನ ಮತ್ತು ರೆಮೆಲ್ಯನ ಮಗನೂ ಇಸ್ರಯೇಲಿನ ಅರಸನೂ ಆದ ಪೆಕಹ ಎಂಬವರು ಜೆರುಸಲೇಮಿನ ಮೇಲೆ ದಂಡೆತ್ತಿಬಂದರು. ಆದರೆ ಅದನ್ನು ಜಯಿಸಲು ಅವರಿಂದಾಗಲಿಲ್ಲ.

2 ಸಿರಿಯರ ಸೈನಿಕರು ಈಗಾಗಲೇ ಇಸ್ರಯೇಲಿನ ಗಡಿಯೊಳಗಿದ್ದಾರೆ ಎಂಬ ಸುದ್ದಿ ಜುದೇಯದ ಅರಸನಿಗೆ ಮುಟ್ಟಿದ್ದೇ ತಡ, ಅವನೂ ಅವನ ಪ್ರಜೆಗಳೆಲ್ಲರೂ ಹೆದರಿದರು. ಬಿರುಗಾಳಿಗೆ ಸಿಕ್ಕಿದ ಗಿಡಮರಗಳಂತೆ ನಡುಗಿದರು.

3 ಆಗ ಸರ್ವೇಶ್ವರಸ್ವಾಮಿ ಯೆಶಾಯನಿಗೆ ಹೀಗೆಂದರು: "ನಿನ್ನ ಮಗ ಶೆಯಾರ್ ಯಾಶೂಬನನ್ನು ಕರೆದುಕೊಂಡು ಆಹಾಜಾರಸನನ್ನು ಕಾಣಲು ಹೋಗು. ಅಗಸರ ಹೊಲದ ಮೇಲೆ ಹಾದು ಹೋಗುವ ರಾಜಮಾರ್ಗದಲ್ಲಿ ಕೆರೆಯ ಕಾಲುವೆಯ ತುದಿಯ ಬಳಿ ಆತ ನಿನಗೆ ಸಿಕ್ಕುವನು. ಅವನಿಗೆ ಈ ಪ್ರಕಾರ ತಿಳಿಸು: 4ಜೋಕೆ, ಸುಮ್ಮನಿರು, ಹೆದರಬೇಡ. ರೆಚೀನ, ಸಿರಿಯ ಮತ್ತು ಪೆಕಹ – ಇವರೆಲ್ಲರ ಕೋಪ ಎಷ್ಟು ಉಗ್ರವಾಗಿದ್ದರೂ ಅದು ಹೊಗೆಯಾಡುವ ಎರಡು ಮೋಟುಕೊಳ್ಳಿಗಳಿಗೆ ಸಮಾನ. ಆದ್ದರಿಂದ ಎದೆಗುಂದಬೇಡ. 5ಸಿರಿಯ, ಇಸ್ರಯೇಲ್, ಅರಸನಾದ ಪೆಕಹನೊಂದಿಗೆ ಸೇರಿ ಒಳಸಂಚು ಮಾಡಿದ್ದಾರೆ. 6'ಜುದೇಯನಾಡಿಗೆ ಮುತ್ತಿಗೆ ಹಾಕಿ, ಅದನ್ನು ಬೆದರಿಸಿ ಆಕ್ರಮಿಸಿ ಕೊಳ್ಳೋಣ; ತಬೇಲನ ಮಗನಿಗೆ ಅಲ್ಲಿಯೇ ಪಟ್ಟಕಟ್ಟೋಣ' ಎಂದು ದುರಾಲೋಚನೆ ಮಾಡಿಕೊಂಡಿದ್ದಾರೆ.

7 "ಆದರೆ ಸ್ವಾಮಿ ಸರ್ವೇಶ್ವರ ಆದ ನಾನು ನಿನಗೆ ಹೇಳುತ್ತೇನೆ: ಈ ಯೋಜನೆ ಕೈಗೂಡುವುದಿಲ್ಲ, ಈ ಒಳಸಂಚು ನೆರವೇರುವುದಿಲ್ಲ. 8ಕಾರಣ, ರಾಜಧಾನಿಯಾದ ದಮಸ್ಕಸ್ಸಿಗಿಂತ ಸಿರಿಯ ಹೆಚ್ಚಲ್ಲ, ರಾಜನಾದ ರೆಚೀನನಿಗಿಂತ ದಮಸ್ಕಸ್ ಹೆಚ್ಚಲ್ಲ. ಇಸ್ರಯೇಲಿನ ಬಗ್ಗೆ ಹೇಳುವುದಾದರೆ, ಅದು ಅರವತ್ತೈದು ವರ್ಷದೊಳಗೆ ನುಚ್ಚುನೂರಾಗುವುದು, ಅಖಂಡ ರಾಷ್ಟ್ರವಾಗಿ ಉಳಿಯದು. 9ಅಂತೆಯೇ, ರಾಜಧಾನಿಯಾದ ಸಮಾರ್ಯಕ್ಕಿಂತ ಇಸ್ರಯೇಲ್ ಹೆಚ್ಚಲ್ಲ. ರಾಜನಾದ ಪೆಕಹನಿಗಿಂತ ಸಮಾರ್ಯ ಹೆಚ್ಚಲ್ಲ. ನಿಮ್ಮ ವಿಶ್ವಾಸ ಸ್ಥಿರವಿಲ್ಲದಿದ್ದರೆ, ನಿಮಗೆ ಸ್ಥಿರತೆ ಇರುವುದಿಲ್ಲ."

## ವರಪುತ್ರ ಇಮ್ಮಾನುವೇಲನ ಮುನ್ಸೂಚನೆ

10 ಪುನಃ ಸರ್ವೇಶ್ವರಸ್ವಾಮಿ ಆಹಾಜನಿಗೆ ಹೇಳಿದ್ದೇನೆಂದರೆ: 11“ನಿನ್ನ ದೇವರಾದ ಸರ್ವೇಶ್ವರನಿಂದ ಒಂದು ಗುರುತನ್ನು ಕೇಳಿಕೊ. ಅದು ಪಾತಾಳದಷ್ಟು ಆಳದಲ್ಲೇ ಇರಲಿ, ಆಕಾಶದಷ್ಟು ಎತ್ತರದಲ್ಲೇ ಇರಲಿ, ಕೇಳು” ಎಂದರು.

12 ಅದಕ್ಕೆ ಆಹಾಜನು “ಇಲ್ಲ, ನಾನು ಗುರುತನ್ನು ಕೇಳುವುದಿಲ್ಲ, ಸರ್ವೇಶ್ವರನನ್ನು ಪರೀಕ್ಷಿಸುವುದಿಲ್ಲ” ಎಂದನು. 13ಆಗ ಯೆಶಾಯನು: “ದಾವೀದ ವಂಶಜರೇ, ಕೇಳಿರಿ, ಮಾನವರನ್ನು ಕೆಣಕಿದ್ದು ಸಾಲದೆಂದು ದೇವರನ್ನೇ ಕೆಣಕುತ್ತಿರುವಿರಾ? 14ಆಗಲಿ, ಸರ್ವೇಶ್ವರ ನಿಮಗೊಂದು ಗುರುತನ್ನು ಕೊಡುವರು. ಇಗೋ, ಕನ್ಯೆಯೊಬ್ಬಳು ಗರ್ಭತಳೆದು ಪುತ್ರನೊಬ್ಬನನ್ನು ಪ್ರಸವಿಸುವಳು. ಇಮ್ಮಾನುವೇಲ್ ಎಂದು ಆತನಿಗೆ ಹೆಸರಿಡುವಳು. 15ಆತನು ‘ಕೆಟ್ಟದ್ದು ಬೇಡ, ಒಳ್ಳೆಯದು ಬೇಕು’ ಎನ್ನುವಷ್ಟು ಬಲ್ಲವನಾಗುವಾಗ ಮೊಸರನ್ನೂ ಜೇನುತುಪ್ಪವನ್ನೂ ತಿನ್ನುವನು. 16ಆ ಮಗು ‘ಕೆಟ್ಟದ್ದು ಬೇಡ, ಒಳ್ಳೆಯದು ಬೇಕು’ ಎನ್ನುವಷ್ಟು ಬಲ್ಲವನಾಗುವುದರೊಳಗೆ, ನೀನು ಯಾವ ಇಬ್ಬರು ಅರಸರುಗಳಿಗೆ ಹೆದರಿ ನಡುಗುತ್ತಿರುವಿಯೋ ಆ ಅರಸರುಗಳ ದೇಶ ನಿರ್ಜನವಾಗುವುದು.

17 ಸರ್ವೇಶ್ವರ ನಿನ್ನ ಮೇಲೂ ನಿನ್ನ ಪ್ರಜೆಯ ಮೇಲೂ ನಿನ್ನ ತಂದೆಯ ಮನೆತನದ ಮೇಲೂ ಭೀಕರ ದಿನಗಳನ್ನು ಬರಮಾಡುವರು. ಇಸ್ರಯೇಲ್ ರಾಜ್ಯ ಜುದೇಯ ನಾಡಿನಿಂದ ಬೇರ್ಪಟ್ಟ ದಿನ ಮೊದಲುಗೊಂಡು ಇದುವರೆಗೂ ಅಂಥ ದಿನಗಳು ಬಂದಿರಲಿಲ್ಲ. ಅಸ್ಸೀರಿಯದ ಅರಸನೇ ಆ ದುರ್ದಿನಗಳ ಪ್ರತೀಕ.

18 ಆ ದಿನ ಬಂದಾಗ ಈಜಿಪ್ಟಿನಿಂದ ನೊಣಗಳನ್ನೋ ಎಂಬಂತೆ, ಅಸ್ಸೀರಿಯ ನಾಡಿನಿಂದ ದುಂಬಿಗಳನ್ನೋ ಎಂಬಂತೆ, ಸ್ವಾಮಿ ಸಿಳ್ಳು ಹಾಕಿ ಶತ್ರುಗಳನ್ನು ಬರಮಾಡುವರು. 19ಅವರೆಲ್ಲ ಬಂದು ಕಡಿದಾದ ಕಣಿವೆಗಳಲ್ಲಿಯೂ ಬಂಡೆಗಳ ಸಂದುಗೊಂದುಗಳಲ್ಲಿಯೂ ಮುಳ್ಳುಪೊದೆಗಳಲ್ಲಿಯೂ ಗೋಮಾಳಗಳಲ್ಲಿಯೂ ಹುಳುಹುಪ್ಪಟೆಗಳಂತೆ ಮುತ್ತಿಕೊಳ್ಳುವರು.

20 ಆ ದಿನದಂದು ಯೂಫ್ರೆಟಿಸ್ ನದಿಯಾಚೆ ಇರುವ ಅಸ್ಸೀರಿಯದ ರಾಜನೆಂಬ ಹಜಾಮನ ಕತ್ತಿಯಿಂದ ಸರ್ವೇಶ್ವರ ನಿನ್ನ ತಲೆಯನ್ನೂ ಗಡ್ಡವನ್ನೂ ಕಾಲುಗೂದಲನ್ನೂ ಬೋಳಿಸುವರು. 21ಅಂದು ಒಬ್ಬ ರೈತನು ಒಂದು ಕಡಸನ್ನು ಎರಡು ಮೇಕೆಗಳನ್ನು ಮಾತ್ರ ಉಳಿಸಿಕೊಳ್ಳಬಲ್ಲವನಾದರೂ ಬಾಯಿ ಮೊಸರಾಗುವಷ್ಟು ಅಧಿಕವಾದ ಹಾಲನ್ನು ಕರೆಯುವನು. 22ಹೌದು, ನಾಡಿನಲ್ಲಿ ಅಳಿದುಳಿದವರೆಲ್ಲರು ಹಾಲು ಜೇನನ್ನೇ ಉಣ್ಣುವರು.

23 ಆ ದಿನದಂದು ಸಾವಿರ ಬೆಳ್ಳಿನಾಣ್ಯಗಳಷ್ಟು ಬೆಲೆಬಾಳುವ ಸಹಸ್ರ ದ್ರಾಕ್ಷಿಬಳ್ಳಿಗಳು ಬೆಳೆಯುವಂಥ ಪ್ರತಿಯೊಂದು ಪ್ರದೇಶದಲ್ಲೂ ಮುಳ್ಳುಪೊದೆಗಳು ಬೆಳೆದುಕೊಳ್ಳುವುವು. 24ಅಲ್ಲಿ ಜನರು ಬಿಲ್ಲುಬಾಣಗಳನ್ನು ಹಿಡಿದು ಬೇಟೆಯಾಡುವರು. ನಾಡೆಲ್ಲ ಮುಳ್ಳುಪೊದೆಯಾಗಿ ಇರುವುದು. 25ಸಾಗುವಳಿಯಾಗುತ್ತಿದ್ದ ಗುಡ್ಡಗಳಲ್ಲಿ ಯಾರೂ ಬರಲು ಅಂಜುವಷ್ಟು ಮುಳ್ಳು ಕೊಂಪೆಗಳು ತುಂಬಿರುವುವು; ಅವು ದನಕರುಗಳು ಮೇದು ಕುರಿಮೇಕೆಗಳು ತುಳಿದಾಡುವ ಮಾಳಗಳಾಗುವುವು.”

## ಯೆಶಾಯನ ಪುತ್ರ – ಜನರಿಗೊಂದು ಸಂಕೇತ

**8** ಅನಂತರ ಸರ್ವೇಶ್ವರಸ್ವಾಮಿ ನನಗೆ ಹೀಗೆಂದರು: “ಬರೆಯುವ ದೊಡ್ಡ ಹಲಗೆ ಒಂದನ್ನು ತೆಗೆದುಕೊಂಡು ಸಾಧಾರಣ ಲಿಪಿಯಲ್ಲಿ, ಈ ಸೂಚ್ಯವಾದ ಪದಗಳನ್ನು ಬರೆ: ‘ಮಹೇರ್ ಶಾಲಾಲ್ ಹಾಷ್ ಬಜ್’ (ಅಂದರೆ ಸೂರೆಗೆ ಆತುರ: ಕೊಳ್ಳೆಗೆ ಅವಸರ). 2ನೀನು ಹೀಗೆ ಬರೆದುದಕ್ಕೆ ಯಾಜಕನಾದ ಊರೀಯ, ಯೆಬೆರೆಕ್ಕನ ಮಗನಾದ ಜೆಕರ್ಯ – ಈ ನಂಬಿಗಸ್ತರನ್ನು ಸಾಕ್ಷಿಗಳಾಗಿ ಕರೆದುಕೊ” ಎಂದು ಹೇಳಿದರು.

3 ಸ್ವಲ್ಪಕಾಲದ ನಂತರ ನಾನು ಪ್ರವಾದಿನಿಯನ್ನು ಕೂಡಲು ಆಕೆ ಗರ್ಭವತಿಯಾಗಿ ಗಂಡು ಮಗುವನ್ನು ಹೆತ್ತಳು. ಆಗ ನನಗೆ: “ಆ ಮಗುವಿಗೆ ‘ಮಹೇರ್ ಶಾಲಾಲ್ ಹಾಷ್ ಬಜ್’ ಎಂದು ಹೆಸರಿಡು.

4ಅವನು ‘ಅಪ್ಪಾ, ಅಮ್ಮಾ, ಎಂದು ಕೂಗಬಲ್ಲವನಾಗುವುದರೊಳಗೆ ಅಸ್ಸೀರಿಯದ ಅರಸನು ದಮಸ್ಕಸ್ಸಿನ ಆಸ್ತಿಪಾಸ್ತಿಯನ್ನೂ ಸಮಾರ್ಯದ ಸ್ರರೆಯನ್ನೂ ಹೊರಿಸಿಕೊಂಡು ಹೋಗುವನು,” ಎಂದು ಸರ್ವೇಶ್ವರಸ್ವಾಮಿ ಹೇಳಿದರು.

## ಅಸ್ಸೀರಿಯದ ಅರಸನು ಮಾಡಿದ ಆಕ್ರಮಣ

5 ಸರ್ವೇಶ್ವರ ಮತ್ತೊಮ್ಮೆ ನನಗೆ ಹೀಗೆಂದರು: 6“ಈ ಜನರು ಸುಲಲಿತವಾಗಿ ಹರಿಯುವ
ಸಿಲೋವದ ನೀರನ್ನು ಅಲ್ಲಗಳೆದು, ಅರಸನಾದ ರೆಚೀನ ಹಾಗೂ ಪೆಕಹ ಇವರುಗಳನ್ನು ನೆಚ್ಚಿಕೊಂಡು
ನಲಿಯುತ್ತಿದ್ದಾರೆ. 7ಆದುದರಿಂದ ಸ್ವಾಮಿಯಾದ ನಾನು ಅಸ್ಸೀರಿಯದ ಅರಸನನ್ನೂ ಅವನ ಚದುರಂಗ
ಬಲವನ್ನೂ ಬರಮಾಡುವೆನು: ಅದು ಯೂಫ್ರಟಿಸ್ ಮಹಾ ನದಿಯ ಪ್ರವಾಹದಂತೆ ರಭಸವಾಗಿ ಹರಿದು
ಬರುವುದು. 8ಹದ್ದುಮೀರಿ ಜುದೇಯದೆಲ್ಲೆಡೆ ನುಗ್ಗಿ ಹಳ್ಳಕೊಳ್ಳಗಳನ್ನು ತುಂಬುವುದು. ಕುತ್ತಿಗೆಯ ತನಕ
ಉಕ್ಕಿಬಂದು ದಿಣ್ಣೆದಿಬ್ಬಗಳನ್ನು ಮುಳುಗಿಸುವುದು.

ದೇವರು ನಮ್ಮೊಡನೆ (ಇಮ್ಮಾನುವೇಲ್) ಇರುವರು. ಅವರ ಬಿಚ್ಚುರೆಕ್ಕೆಗಳು ನಾಡಿನ ಉದ್ದಗಲವನ್ನೂ ಆವರಿಸುವುವು, ಇಡೀ ನಾಡಿಗೆ ಆಶ್ರಯ ನೀಡುವುವು.

9 ಕೂಡಿಬನ್ನಿ ರಾಷ್ಟ್ರಗಳೇ,
ತುಂಡುತುಂಡಾಗುವಿರಿ ನೀವು;
ಕಿವಿಗೊಡಿ, ದೂರ ದೇಶಗಳೇ,
ನಡುಕಟ್ಟಿ ನಿಂತರೂ ತುಂಡು
ತುಂಡಾಗುವಿರಿ ನೀವು;
ಹೌದು, ನಡುಕಟ್ಟಿ ನಿಂತರೂ ತುಂಡು
ತುಂಡಾಗುವಿರಿ ನೀವು;
10 ವ್ಯರ್ಥವಾಗುವುದು ನೀವು ಮಾಡಿದ
ಸಮಾಲೋಚನೆ;
ಕೈಗೂಡದು ನೀವು ಮಾಡಿದ ಪ್ರತಿಜ್ಞೆ;
ಕಾರಣ, ದೇವನಿರುವನು ನಮ್ಮೊಡನೆ.”

## ದೇವರಿಗೆ ಭಯಪಡಬೇಕು

11 ಜನರು ಅನುಸರಿಸುವ ಮಾರ್ಗದಲ್ಲಿ ನಾನು ನಡೆಯಬಾರದೆಂದು ಸರ್ವೇಶ್ವರ ನನ್ನ ಮೇಲೆ
ಬಲವಾಗಿ ಕೈಯನ್ನಿಟ್ಟು ಎಚ್ಚರಿಕೆ ಇತ್ತರು: 12“ಈ ಜನರು ಮಾಡುವ ಕುತಂತ್ರಕ್ಕೆ ಒಳಗಾಗಬೇಡ. ಅವರು
ಯಾವುದಕ್ಕೆ ಭಯಪಡುತ್ತಾರೋ ಅದಕ್ಕೆ ನೀನು ಭಯಪಡಬೇಡ, ನಡುಗಲೂ ಬೇಡ. 13ಸೇನಾಧೀಶ್ವರ
ಸ್ವಾಮಿಯಾದ ನಾನು ಪವಿತ್ರನೆಂದು ಎಣಿಸಿ ನನಗೆ ಭಯಭಕ್ತಿಯಿಂದ ಸನ್ಮಾನ ಮಾಡು, ನನಗೆ ಹೆದರು.
14ನಾನು ನಿನಗೆ ಪವಿತ್ರಾಲಯ ಆಗಿರುವೆನು. ಆದರೆ ಇಸ್ರಯೇಲಿನ ಎರಡು ಕುಲಗಳಿಗೆ ಎಡವುವ
ಕಲ್ಲಾಗುವೆನು, ಮುಗ್ಗರಿಸುವ ಬಂಡೆಯಾಗುವೆನು. ಜೆರುಸಲೇಮಿನ ನಿವಾಸಿಗಳನ್ನು ಹಿಡಿಯುವ ಬಲೆಯೂ
ಬೋನೂ ಆಗುವೆನು. 15ಅನೇಕರು ಎಡವಿ ಬೀಳುವರು, ಮುಗ್ಗರಿಸಿ ಮೂಳೆ ಮುರಿದುಕೊಳ್ಳುವರು,
ಬೋನಿಗೆ ಸಿಕ್ಕಿಕೊಳ್ಳುವರು, ಬಲೆಗೆ ಬೀಳುವರು.”

## ಪೇತ್ರವಿಚಾರಕರ ಬಗ್ಗೆ ಎಚ್ಚರಿಕೆ

16 ದಿವ್ಯ ಬೋಧನೆಯನ್ನು ಸುಭದ್ರವಾಗಿ ಇರಿಸು. ಅದನ್ನು ನನ್ನ ಶಿಷ್ಯರಿಗೆ ಉಪದೇಶಮಾಡಿ
ಸುರಕ್ಷಿತವಾಗಿರಿಸು. 17ಯಕೋಬನ ಮನೆತನದವರಿಗೆ ತನ್ನ ಮುಖವನ್ನು ಮರೆಯಿಸಿಕೊಂಡು ಇರುವ
ಸ್ವಾಮಿಗಾಗಿ ಕಾದಿರುವೆನು. ಸ್ವಾಮಿಯನ್ನೇ ಎದುರು ನೋಡುತ್ತಿರುವೆನು. 18ಇಗೋ, ನನ್ನನ್ನೂ ನನಗೆ ಸ್ವಾಮಿ

ದಯಪಾಲಿಸಿರುವ ಮಕ್ಕಳನ್ನೂ ನೋಡು. ಸಿಯೋನ್ ಶಿಖರದಲ್ಲಿ ವಾಸವಾಗಿರುವ ಸೇನಾಧೀಶ್ವರ ಸ್ವಾಮಿಯೇ ಇಸ್ರಯೇಲರಿಗೆ ನೀಡುವ ಸೂಚನೆಗಳು ಹಾಗೂ ಜೀವಂತ ಸಂಕೇತಗಳು ನಾವೇ ಆಗಿದ್ದೇವೆ.

19 'ಲೊಚಗುಟ್ಟುವ, ಪಿಟಿಪಿಟಿಗುಟ್ಟುವ, ಕಣಿ ಹೇಳುವವರ ಮತ್ತು ಪ್ರೇತವಿಚಾರಕರ ಸಲಹೆ ಕೇಳಿ'
ಎಂದು ಜನರು ನಿಮಗೆ ಹೇಳಿಯಾರು. ಆಗ, 'ದೇವರನ್ನೇ ಏಕೆ ವಿಚಾರಿಸಬಾರದು? ಜೀವಿತರಿಗಾಗಿ ಸತ್ತವರನ್ನು ವಿಚಾರಿಸುವುದು ಸರಿಯಲ್ಲ' ಎಂದು ಅಂಥವರಿಗೆ ನೀವು ಹೇಳಬೇಕು. 20'ದೇವರ
ಉಪದೇಶವನ್ನೂ ದೇವರ ಬೋಧನೆಯನ್ನೂ ವಿಚಾರಿಸೋಣ' ಎಂದು ಅವರು ಹೇಳುವತನಕ ಅವರಿಗೆ ಜ್ಞಾನೋದಯವಾಗುವುದಿಲ್ಲ.

### ಕಷ್ಟದ ಕಾಲ

21 ಜನರು ಘೋರ ಕಷ್ಟಗಳಿಗೆ ಒಳಗಾಗುವರು. ಹಸಿದು ದೇಶದಲ್ಲೆಲ್ಲ ಅಲೆದಾಡುವರು. ಹಸಿವಿನಿಂದ ರೋಷಗೊಂಡು ಅರಸನನ್ನೂ ದೇವರನ್ನೂ ಹಳಿಯುವರು. 22ಆಕಾಶವನ್ನು ದಿಟ್ಟಿಸಿ ನೋಡಿದರೂ
ಭೂಮಿಯನ್ನು ದುರುಗುಟ್ಟಿ ನೋಡಿದರೂ ಅವರಿಗೆ ಕಾಣುವುದು ಕಷ್ಟ ಸಂಕಟಗಳ ಕತ್ತಲೆ, ಭಯಂಕರವಾದ ಕಾಳಗತ್ತಲೆಯಲ್ಲದೆ ಮತ್ತೇನೂ ಅಲ್ಲ. ಅಂಥ ಕರಾಳ ಕತ್ತಲೆಯೊಳಗೆ ಅವರನ್ನು ದೂಡಲಾಗುವುದು.

### ಬರಲಿರುವ ರಾಜಾಧಿರಾಜ

**9** ಆದರೂ ಕಷ್ಟ ಸಂಕಷ್ಟಗಳನ್ನು ಅನುಭವಿಸಿದ ಆ ನಾಡಿಗೆ ಇನ್ನು ಮುಂದೆ ಕತ್ತಲಿರುವುದಿಲ್ಲ. ಒಮ್ಮೆ ಜೆಬುಲೋನ್ ಮತ್ತು ನಫ್ತಾಲಿಯ ಗೋತ್ರಗಳಿಗೆ ಬೀಡಾಗಿದ್ದ ಆ ಪ್ರಾಂತ್ಯವು ಅವಮಾನಕ್ಕೆ ಗುರಿಯಾಗಿತ್ತು. ಆದರೆ ಇನ್ನು ಮುಂದೆ ಅದಕ್ಕೆ ಘನತೆಗೌರವ ಬರುವುದು: ಸಮುದ್ರದ ಹಾದಿಯಿಂದ ಹಿಡಿದು ಜೋರ್ಡನಿನ ಆಚೆಯಲ್ಲಿ ಇರುವ ಪ್ರಾಂತ್ಯದವರೆಗೆ ಮಾತ್ರವಲ್ಲ, ಅನ್ಯಜನರು ಇರುವ ಗಲಿಲೇಯ ಪ್ರಾಂತ್ಯದವರೆಗೂ ಘನತೆಗೌರವ ಬಂದೊದಗುವುದು.

2ಕಾಣಿಸಿತೊಂದು ಮಹಾಜ್ಯೋತಿ ಕತ್ತಲಲಿ
    ಸಂಚರಿಸುತ್ತಿದ್ದ ಜನರಿಗೆ
ಪ್ರಜ್ವಲಿಸಿತಾ ಜ್ಯೋತಿ ಕಗ್ಗತ್ತಲಲಿ
    ಬಾಳುತ್ತಿದ್ದಾ ನಡಿಗರಿಗೆ.
3ವೃದ್ಧಿಗೊಳಿಸಿರುವೆ ನೀನು ಆ ದೇಶವನು
ಅಧಿಕರಿಸಿರುವೆ ಅದರ ತೋಷವನು
ಸುಗ್ಗಿಕಾಲದಲಿ ಹಿಗ್ಗುವವರಂತೆ
ಕೊಳ್ಳೆ ಹಂಚಿಕೊಳ್ಳುವವರಂತೆ
ಹರ್ಷಿಸುವರವರು ನಿನ್ನ ಮುಂದೆ.
4ಮುರಿದುಹಾಕಿದೆ ಭಾರವಾದ ಅವರ
    ನೊಗವನು
ಅವರ ಬೆನ್ನನ್ನು ಬಡಿದ ಬೆತ್ತವನು
ದಬ್ಬಾಳಿಕೆ ನಡೆಸಿದವರ ದೊಣ್ಣೆಯನು;
ಮಿದ್ಯಾನನ್ನು ಗೆದ್ದ ದಿನದಂದು
    ಹಾಗೆಯೆ ಮಾಡಿದೆಯಲ್ಲವೆ ನೀನು?
5ಅಗ್ನಿಕುಂಡಕ್ಕೆ ಆಹುತಿಯಾಗುವುವು
ಯುದ್ಧಕ್ಕೆ ಬಂದ ಯೋಧರ ಪಾದರಕ್ಷೆಗಳು
ರಕ್ತಸಿಕ್ತವಾದವರ ದೇಹದ ಕವಚಗಳು.
6ಮಗುವೊಂದು ಹುಟ್ಟಿತೆಮಗೆ

ವರಪುತ್ರನನು ಕೊಟ್ಟರೆಮಗೆ.
ಆತನ ಕೈಯಲ್ಲಿಹುದು ರಾಜ್ಯಾಡಳಿತ
'ಅದ್ಭುತಶಾಲಿ', 'ಮಂತ್ರಿಶ್ರೇಷ್ಠ'
'ಪರಾಕ್ರಮದೇವ', 'ಮಂತ್ರಿಶ್ರೇಷ್ಠ'
'ಶಾಂತಿ ನೃಪ' – ಇವು ಆತನ ನಾಮಾಂಕಿತ.
7ಅಂತ್ಯವಿರದಾತನ ರಾಜ್ಯಾಭಿವೃದ್ಧಿಗೆ
ಕೊನೆಯಿರದಾ ರಾಜ್ಯದ ಶಾಂತಿಗೆ.
ಆಸೀನನಾಗುವನಾತ ದಾವೀದನ
ಸಿಂಹಾಸನದ ಮೇಲೆ
ಅಧಿಕಾರ ನಡೆಸುವನು ಆ ಸಾಮ್ರಾಜ್ಯದ
ಮೇಲೆ.
ಬಲಪಡಿಸುವನು ನ್ಯಾಯ ನೀತಿಯಿಂದದನು
ಇಂದಿಗೂ ಎಂದೆಂದಿಗೂ
ಸ್ಥಿರಪಡಿಸುವನದನು.
ಸರ್ವಶಕ್ತಸ್ವಾಮಿಯ ಆಗ್ರಹವೆ
ಸಾಧಿಸುವುದದನು.

### ಇಸ್ರಯೇಲಿಗೆ ಶಾಪದ ಸಂದೇಶ

8 ಯಕೋಬ ಕುಲದವರಿಗೆ ಶಾಪದ ಸಂದೇಶ ಒಂದನ್ನು ಸರ್ವೇಶ್ವರ ಕಳುಹಿಸಿರುವರು. ಅದು
ಇಸ್ರಯೇಲರ ಮೇಲೆ ಎರಗುವುದು. 9"ಇಟ್ಟಿಗೆಗಳು ಬಿದ್ದುಹೋಗಿವೆ. ಕೆತ್ತನೆ ಕಲ್ಲುಗಳಿಂದ ಮರಳಿ ಕಟ್ಟುವೆವು.
ಕಡಿದಿರುವರು ಅತ್ತಿಮರಗಳನ್ನು, ಅಲ್ಲೇ ನೆಡುವೆವು ದೇವದಾರು ವೃಕ್ಷಗಳನ್ನು," ಎಂದು ಗರ್ವದಿಂದ
ಕೊಚ್ಚಿಕೊಳ್ಳುವ 10ಎಫ್ರಯಿಮ್ ಜನರಿಗೂ ಸಮಾರ್ಯದ ನಿವಾಸಿಗಳಿಗೂ ಅದು ಗೊತ್ತಾಗುವುದು.

11 ಸ್ವಾಮಿಯು ರೆಚೀನನ ಶತ್ರುಗಳನ್ನು ಅವರ ವಿರುದ್ಧವಾಗಿ ಎತ್ತಿಕಟ್ಟಿರುವರು. ಅವರ ಮುಂದೆ
ಸೀರಿಯರನ್ನು, ಅವರ ಹಿಂದೆ ಫಿಲಿಷ್ಟಿಯರನ್ನು –ಹೀಗೆ ಎಲ್ಲಾ ಶತ್ರುಗಳನ್ನು ಎಬ್ಬಿಸಿರುವರು. 12ಇವರು
ಇಸ್ರಯೇಲರನ್ನು ನುಂಗಿಬಿಡಲು ಬಾಯಿ ತೆರೆದಿದ್ದಾರೆ. ಇಷ್ಟಾದರೂ ಸ್ವಾಮಿಯ ಕೋಪ ತಣಿಯದು;
ಹೊಡೆಯಲು ಎತ್ತಿದ ಕೈ ಇಳಿಯದು.

13 ಆದರೂ ತಮ್ಮನ್ನು ಶಿಕ್ಷಿಸಿದ ದೇವರಿಗೆ ಇಸ್ರಯೇಲರು ಅಭಿಮುಖರಾಗಲಿಲ್ಲ.
ಸೇನಾಧೀಶ್ವರಸ್ವಾಮಿಯನ್ನು ಅರಸಲಿಲ್ಲ. 14–15ಆದಕಾರಣ, ಇಸ್ರಯೇಲಿನ ತಲೆಬಾಲಗಳನ್ನೂ
ತುದಿಬುಡವನ್ನೂ ಹುಲ್ಲಿನಂತೆ ಸ್ವಾಮಿ ಒಂದೇ ದಿನದಲ್ಲಿ ಕಡಿದು ಬಿಡುವರು; ಅಂದರೆ ಸನ್ಮಾನ್ಯ ಹಿರಿಯರನ್ನು,
ಸುಳ್ಳುಬೋಧನೆ ಮಾಡುವ ಪ್ರವಾದಿಗಳನ್ನು ಸಂಹರಿಸಿಬಿಡುವರು. 16ಈ ಜನರನ್ನು ನಡೆಸುವವರು
ತಪ್ಪುದಾರಿಗೆ ಎಳೆಯುವಂಥವರು. ಅವರನ್ನು ಹಿಂಬಾಲಿಸುವವರೆಲ್ಲ ನಾಶವಾಗುವರು.

17 ಎಂದೇ ಅವರ ಯುವಕ ಯುವತಿಯರ ಬಗ್ಗೆ ಸ್ವಾಮಿಗೆ ಸಂತೋಷವಿಲ್ಲ; ಅವರ ಅನಾಥರ
ಮತ್ತು ವಿಧವೆಯರ ಬಗ್ಗೆ ಸಹಾನುಭೂತಿಯಿಲ್ಲ. ಪ್ರತಿಯೊಬ್ಬನೂ ಧರ್ಮಭ್ರಷ್ಟನೂ ಅತಿ ದುಷ್ಟನೂ ಆಗಿದ್ದಾನೆ.
ಪ್ರತಿಯೊಬ್ಬನ ಬಾಯಿ ನುಡಿಯುವುದು ಕೆಡುಕನ್ನೇ. ಇಷ್ಟಾದರೂ ಸರ್ವೇಶ್ವರನ ಕೋಪ ತಣಿಯದು;
ಹೊಡೆಯಲು ಎತ್ತಿದ ಕೈ ಇಳಿಯದು.

18 ದುಷ್ಟತನ ಬೆಂಕಿಗೆ ಸಮಾನ. ಅದು ಮುಳ್ಳು ಗಿಳ್ಳುಗಳನ್ನು ಸುಟ್ಟುಹಾಕುತ್ತದೆ. ಕಾಡುಪೊದೆ ಗಳನ್ನು
ಭಸ್ಮಮಾಡುತ್ತದೆ. ಹೊಗೆಯಾಡುತ್ತಾ ಮುಗಿಲಂತೆ ಮೇಲೆ ಬೀಳುತ್ತದೆ. 19ಸೇನಾಧೀಶ್ವರ ಸ್ವಾಮಿಯ
ಕೋಪಾಗ್ನಿಯಿಂದ ನಾಡು ಸುಟ್ಟುಹೋಗಿದೆ. ಪ್ರಜೆಗಳು ಅಗ್ನಿಗೆ ಆಹುತಿಯಾಗಿದ್ದಾರೆ. ಅಣ್ಣನಿಗೆ ತಮ್ಮನ
ಮೇಲೆ ದಯೆ ಇಲ್ಲದಾಗಿದೆ. 20ಅತ್ತ ಕಿತ್ತು ತಿಂದರೂ ಅವರಿಗೆ ತೃಪ್ತಿಯಿಲ್ಲ. ಇತ್ತ ಕುಡಿದು ಕಬಳಿಸಿದರೂ
ಅವರ ಹಸಿವು ನೀಗುವುದಿಲ್ಲ. ಒಬ್ಬೊಬ್ಬನೂ ತನ್ನ ಕಂದನನ್ನೇ ಕೊಂದು ತಿನ್ನುತ್ತಾನೆ. 21ಮನಸ್ಸೆ

ಎಫ್ರಯಿಮನ್ನು ಎಫ್ರಯಿಮ್ ಮನಸ್ಸೆಯನ್ನು ಕಬಳಿಸುತ್ತದೆ. ಇವೆರಡೂ ಸೇರಿ ಜುದೇಯಕ್ಕೆ ವಿರುದ್ಧವಾಗಿ ಎದ್ದು ನಿಂತಿವೆ. ಇಷ್ಟಾದರೂ ಸಹ ಸ್ವಾಮಿಯ ಕೋಪ ತಣಿಯದು; ಹೊಡೆಯಲು ಎತ್ತಿದ ಕೈ ಇಳಿಯದು.

**10** ಅನ್ಯಾಯವಾದ ನಿಬಂಧನೆಗಳನ್ನು, ಕ್ರೂರವಾದ ಕಾನೂನುಗಳನ್ನು ರಚಿಸುವ ನಿಮಗೆ ಧಿಕ್ಕಾರ! 2ನೀವು
ದಲಿತರಿಗೆ ನ್ಯಾಯ ದೊರಕದಂತೆ ಮಾಡುತ್ತೀರಿ. ಬಡಬಗ್ಗರಿಂದ ಹಕ್ಕುಬಾಧ್ಯತೆಗಳನ್ನು ಕಸಿದುಕೊಳ್ಳುತ್ತೀರಿ.
ವಿಧವೆಯರನ್ನು ಸೂರೆಮಾಡುತ್ತೀರಿ. ಅನಾಥರನ್ನು ಕೊಳ್ಳೆಹೊಡೆಯುತ್ತೀರಿ. 3ದಂಡನೆಯ ದಿನದಂದು ಏನು
ಮಾಡುವಿರಿ? ದೂರದಿಂದ ಬರುವ ವಿನಾಶದಿಂದ ಹೇಗೆ ಪಾರಾಗುವಿರಿ? ಸಹಾಯಕ್ಕಾಗಿ ಯಾರ ಬಳಿಗೆ
ಓಡುವಿರಿ? ನಿಮ್ಮ ಆಸ್ತಿಪಾಸ್ತಿಯನ್ನು ಎಲ್ಲಿ ಅವಿತಿಡುವಿರಿ? 4ಖೈದಿಗಳೊಂದಿಗೆ ಕಾರಾಗೃಹವನ್ನು ಸೇರುವಿರಿ;
ಇಲ್ಲವೆ, ಇತರರ ಸಮೇತ ಹತರಾಗುವಿರಿ. ಇದೇ ನಿಮ್ಮ ಗತಿ. ಇಷ್ಟಾದರೂ ಸರ್ವೇಶ್ವರನ ಕೋಪ ತಣಿಯದು;
ಹೊಡೆಯಲು ಎತ್ತಿದ ಕೈ ಇಳಿಯದು.

### ಅಸ್ಸೀರಿಯಾದ ಅರಸ – ದೇವರ ಅಸ್ತ್ರ

5 ಆಹಾ, ಅಸ್ಸೀರಿಯ ನಾಡೇ, ನೀನು ನನ್ನ ಕೋಪದ ದಂಡಾಯುಧ, ರೋಷದ ದೊಣ್ಣೆ. 6ಆ
ಧರ್ಮಭ್ರಷ್ಟ ಪ್ರಜೆಗೆ ಇದಿರಾಗಿ ಅಸ್ಸೀರಿಯವನ್ನು ಕಳುಹಿಸುತ್ತೇನೆ. ನನ್ನ ಕೋಪಕ್ಕೆ ಗುರಿಯಾದ ಜನರಿಗೆ
ವಿರುದ್ಧ ಕಾರ್ಯವನ್ನು ಕೈಗೊಳ್ಳಲು ಆಜ್ಞೆ ಮಾಡುತ್ತೇನೆ. ನನ್ನ ಪ್ರಜೆಯನ್ನು ಸೂರೆಮಾಡಲು,
ಕೊಳ್ಳೆಹೊಡೆಯಲು, ಬೀದಿಯ ಕಸದಂತೆ ತುಳಿದು ಬಿಡಲು ಅದಕ್ಕೆ ಆಜ್ಞೆ ಮಾಡುತ್ತೇನೆ.

7 ಆದರೆ ಅಸ್ಸೀರಿಯದ ಆಲೋಚನೆಯೇ ಬೇರೆ. ಅನೇಕಾನೇಕ ಜನಾಂಗಗಳನ್ನು ತಾನೇ ಸಂಹರಿಸಿ
ನಿರ್ಮೂಲಮಾಡಬೇಕೆಂಬ ಯೋಜನೆ ಅದರದು. 8“ನನ್ನ ದಂಡನಾಯಕರೆಲ್ಲ ಅರಸರಲ್ಲವೇ?
9ಕರ್ಕೆಮೀಷಿನ ಗತಿ ಕಲ್ನೋವಿಗೂ ಬಂತಲ್ಲವೇ? ಅರ್ಪದಿಗೆ ಬಂದ ಪಾಡು ಹಮಾತಿಗೂ ಬಂದಿತಷ್ಟೆ.
ದಮಸ್ಕಸ್ಸಿನ ಅವಸ್ಥೆಯು ಸಮಾರ್ಯಕ್ಕೂ ಸಂಭವಿಸಿತು. 10ಜೆರುಸಲೇಮ್ ಮತ್ತು ಸಮಾರ್ಯದ
ವಿಗ್ರಹಗಳಿಗಿಂತ ಹೆಚ್ಚಿನ ಮೌಲ್ಯದ ಕೆತ್ತನೆಯ ಮೂರ್ತಿಗಳನ್ನು ಆರಾಧಿಸುವ ರಾಜ್ಯಗಳನ್ನು ನಾನು ಗೆದ್ದಿದ್ದೇನೆ.
11ಸಮಾರ್ಯವನ್ನೂ ಅದರ ವಿಗ್ರಹಗಳನ್ನೂ ನಾಶಮಾಡಿದ ಪ್ರಕಾರ ಜೆರುಸಲೇಮನ್ನೂ ಅದರ
ಮೂರ್ತಿಗಳನ್ನೂ ನಾಶಮಾಡುತ್ತೇನೆ” ಎಂದು ಅಸ್ಸೀರಿಯ ಕೊಚ್ಚಿಕೊಳ್ಳುತ್ತಿದೆ.

12 ಆದರೆ ಸರ್ವೇಶ್ವರನಾದ ನಾನು ಸಿಯೋನ್ ಪರ್ವತದಲ್ಲೂ ಜೆರುಸಲೇಮಿನಲ್ಲೂ ನನ್ನ
ಗುರಿಯನ್ನು ಸಾಧಿಸಿದ ಮೇಲೆ ಆ ಅಸ್ಸೀರಿಯದ ಅರಸನನ್ನು ಅವನ ದುರಹಂಕಾರಕ್ಕಾಗಿ ಗರ್ವದ
ಭಾವನೆಗಳಿಗಾಗಿ ಸರಿಯಾಗಿ ದಂಡಿಸುವೆನು. 13ಅಸ್ಸೀರಿಯದ ಅನಿಸಿಕೆಯಿದು: “ನಾನು ವಿವೇಕಿ, ನನ್ನ
ಭುಜಬಲದಿಂದಲೇ ಇದನ್ನು ಮಾಡಿದ್ದೇನೆ. ನನ್ನ ಜ್ಞಾನಶಕ್ತಿಯಿಂದಲೇ ಇದನ್ನು ಸಾಧಿಸಿದ್ದೇನೆ. ನಾಡುಗಳ
ಮಧ್ಯೆಯಿರುವ ಎಲ್ಲೆಗಳನ್ನು ಕಿತ್ತು ಹಾಕಿದ್ದೇನೆ. ಅವು ಕೂಡಿಸಿಟ್ಟುಕೊಂಡಿದ್ದ ನಿಧಿನಿಕ್ಷೇಪಗಳನ್ನು ಸೂರೆ
ಮಾಡಿದ್ದೇನೆ. ಗದ್ದುಗೆಯ ಮೇಲೆ ಕುಳಿತಿರುವವರನ್ನು ಮಹಾ ವೀರನಂತೆ ಕೆಡವಿ ಬಿಟ್ಟಿದ್ದೇನೆ. 14(ಬೇಡನು)
ಹಕ್ಕಿಯ ಗೂಡನ್ನು ಕಂಡುಹಿಡಿಯುವಂತೆ ಜನಾಂಗಗಳ ಆಸ್ತಿಪಾಸ್ತಿಯನ್ನು ಹಿಡಿದುಕೊಂಡಿದ್ದೇನೆ. ಹಕ್ಕಿ ಬಿಟ್ಟು
ಹೋದ ಮೊಟ್ಟೆಗಳನ್ನು ಒಟ್ಟುಗೂಡಿಸಿಟ್ಟು ಕೊಳ್ಳುವಂತೆ ಸಮಸ್ತ ರಾಷ್ಟ್ರಗಳನ್ನು ಒಟ್ಟುಗೂಡಿಸಿದ್ದೇನೆ.
ರೆಕ್ಕೆಯಾಡಿಸಿ ಬೆದರಿಸಲು ಯಾರೂ ಇರಲಿಲ್ಲ. ಕೊಕ್ಕುತೆರೆದು ಕೀಚುಗುಟ್ಟಲು ಯಾರೂ ಕಾಣಲಿಲ್ಲ.”

15 ಕೊಡಲಿ, ಕಡಿಯುವವನನ್ನೇ ಕಡಿಯಲು ನಿಂತೀತೆ? ಗರಗಸ, ಆಡಿಸುವವನನ್ನೇ ಕತ್ತರಿಸಲು
ಎದೆಗೊಂಡೀತೆ? ಕೋಲು, ಹಿಡಿದವನನ್ನೇ ಹೊಡೆದಂತಾಯಿತು! ನಿರ್ಜೀವ ದೊಣ್ಣೆ ಸಜೀವ ಮನುಷ್ಯನನ್ನೇ
ಬಡಿದಂತಾಯಿತು!

16 ಆದಕಾರಣ, ಒಡೆಯರಾದ ಸೇನಾಧೀಶ್ವರ ಸರ್ವೇಶ್ವರ ಅಸ್ಸೀರಿಯಾದ ಕೊಬ್ಬಿದ ಯೋಧರಿಗೆ
ಕ್ಷಯರೋಗವನ್ನು ಬರಮಾಡುವರು. ಅವರ ದೇಹಕ್ಕೆ ಬೆಂಕಿಯಂತೆ ಉರಿಯುವ ಜ್ವರವನ್ನು
ಉಂಟುಮಾಡುವರು. 17ಇಸ್ರಯೇಲಿನ ಪರಂಜ್ಯೋತಿಯಾದ ದೇವರು ಅಗ್ನಿಯಂತಾಗುವರು: ಇಸ್ರಯೇಲಿನ
ಪರಮಪಾವನ ಸ್ವಾಮಿ ಜ್ವಾಲೆಯಂತಾಗುವರು; ಅದು ಒಂದೇ ಒಂದು ದಿನದಲ್ಲಿ ಅಸ್ಸೀರಿಯರ

ಮುಳ್ಳುಪೊದರುಗಳನ್ನೂ ಬಿಡದೆ ಎಲ್ಲವನ್ನೂ ದಹಿಸಿಬಿಡುವುದು. 18ದೇಹಾತ್ಮದಂಥ ಅದರ ಉದ್ಯಾನವನವನ್ನೂ ಫಲಭರಿತ ತೋಟವನ್ನೂ ನಿರ್ಮೂಲ ಮಾಡುವುದು. ಮಾರಕರೋಗ ತಗಲಿದ ರೋಗಿಯಂತೆ ದೇಶವೆಲ್ಲವೂ ಕರಗಿ ಹೋಗುವುದು. 19ಅದರ ಅಳಿದುಳಿದ ಮರಗಳು ಒಂದು ಕೂಸು ಕೂಡ ಎಣಿಸಿ ಬರೆಯುವಷ್ಟು ಕಡಿಮೆಯಾಗುವುವು.

### ಅಳಿದುಳಿದ ಇಸ್ರಯೇಲರು

20 ಆ ದಿನದಂದು ಅಳಿದುಳಿದ ಇಸ್ರಯೇಲರು, ತಪ್ಪಿಸಿಕೊಂಡ ಯಕೋಬ ಮನೆತನದವರು ತಮ್ಮನ್ನು ಬಾಧಿಸಿದವರನ್ನು ನೆಮ್ಮುವುದಿಲ್ಲ. ಬದಲಿಗೆ ಇಸ್ರಯೇಲರ ಪರಮಪಾವನ ಸ್ವಾಮಿಯಾದ ಸರ್ವೇಶ್ವರನನ್ನೇ ನಿಶ್ಚಯವಾಗಿ ಆಶ್ರಯಿಸುವರು. 21ಯಕೋಬ ಮನೆತನದವರಲ್ಲಿ ಅಳಿದುಳಿದ ಕೆಲವರು ಪರಾಕ್ರಮಿಯಾದ ದೇವರ ಕಡೆಗೆ ತಿರುಗಿಕೊಳ್ಳುವರು. 22ಇಸ್ರಯೇಲೇ, ನಿನ್ನ ಜನರು ಸಮುದ್ರದ ಮರಳಿನಂತೆ ಅಸಂಖ್ಯಾತರಾಗಿ ಇದ್ದರೂ ಅವರಲ್ಲಿ ಕೆಲವರು ಮಾತ್ರ ಉಳಿದು ಹಿಂದಿರುಗುವರು. ಅವರ ಅಳಿವು ಶಾಸನಬದ್ಧವಾದುದು ಹಾಗೂ ಸಂಪೂರ್ಣವಾಗಿ ನ್ಯಾಯ ಸಮ್ಮತವಾದುದು. 23ಹೌದು, ಪ್ರಭುವಾದ ಸೇನಾಧೀಶ್ವರ ಸರ್ವೇಶ್ವರಸ್ವಾಮಿ, ತಮ್ಮ ಆಜ್ಞೆಯ ಪ್ರಕಾರ ನಾಡಿನಲ್ಲೆಲ್ಲ ಪೂರ್ಣ ವಿನಾಶವನ್ನು ಬರಮಾಡುವರು.

### ಅಸ್ಸೀರಿಯಾಗೆ ದಂಡನೆ ಖಚಿತ

24 ಹೀಗಿರಲು ಪ್ರಭುವಾದ ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಹೇಳುವುದೇನೆಂದರೆ: "ಸಿಯೋನಿನಲ್ಲಿ ವಾಸಿಸುವ ನನ್ನ ಜನರೇ, ಈಜಿಪ್ಟಿನವರು ನಿಮಗೆ ಮಾಡಿದಂತೆ ಅಸ್ಸೀರಿಯದವರು ನಿಮ್ಮನ್ನು ಬಡಿಗೆಯಿಂದ ಹೊಡೆದು, ನಿಮಗೆ ವಿರುದ್ಧ ದೊಣ್ಣೆಯನ್ನು ಎತ್ತುವಾಗ ಅವರಿಗೆ ಹೆದರಬೇಡಿ; 25ನಿಮ್ಮ ಮೇಲಿರುವ ನನ್ನ ಕೋಪ ಬಹುಬೇಗನೆ ಇಳಿದು, ಅವರ ಮೇಲೆ ತಿರುಗಿಕೊಳ್ಳುವುದು. 26ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯಾದ ನಾನು, ಒಮ್ಮೆ ಓರೇಬನ ಬಂಡೆಯ ಬಳಿ ಮಿದ್ಯಾನರಿಗೆ ಮಾಡಿದಂತೆ, ಅಸ್ಸೀರಿಯದವರನ್ನು ಚಾಟಿಯಿಂದ ಥಳಿಸುವೆನು. ಕೆಂಪು ಸಮುದ್ರದಲ್ಲಿ ಈಜಿಪ್ಟರನ್ನು ದಂಡಿಸಿದಂತೆ ಅಸ್ಸೀರಿಯದವರನ್ನು ದಂಡಿಸಲು ದೊಣ್ಣೆಯನ್ನೆತ್ತುವೆನು. 27ಆ ದಿನ ಬಂದಾಗ ಅವರು ನಿಮ್ಮ ಮೇಲೆ ಹೊರಿಸಿರುವ ಗುಲಾಮಗಿರಿಯನ್ನು ಕಳಚಿ ಹಾಕಲಾಗುವುದು. ನಿಮ್ಮ ಕೊರಳಿಗೆ ಕಟ್ಟಿದ ದಾಸ್ಯದ ನೊಗವನ್ನು ಮುರಿದು ಹಾಕಲಾಗುವುದು."

### ಶತ್ರುವಿನ ಮುತ್ತಿಗೆ

28 ಶತ್ರುಸೇನೆ ಅಯ್ಯಾಥಿನ ಮೇಲೆ ಬಂದು ಇಳಿದಿದೆ. ಮಿಗ್ರೋನನ್ನು ಹಾದು ಹೋಗಿದೆ; ಮಿಕ್ಮಾಷಿನಲ್ಲಿ ತನ್ನ ಸಾಮಗ್ರಿಗಳನ್ನು ಬಿಟ್ಟಿದೆ. 29ಕಣಿವೆಯನ್ನು ದಾಟಿದೆ; 'ಗೆಬಾದಲ್ಲಿ ದಂಡಿಳಿಸೋಣ' ಎಂದು ಹೇಳುತ್ತಿದೆ. ರಾಮಾ ಜನತೆ ನಡುಗುತ್ತಿದೆ, ಸೌಲನ ಗಿಬೆಯದ ಜನ ಪಲಾಯನ ಗೈದಿದೆ. 30ಗಲ್ಲೀಮ್ ಗ್ರಾಮಸ್ಥರೇ, ಕೂಗಿ ಕಿರಿಚಿಕೊಳ್ಳಿ, ಲಯೇಷದ ಜನರೇ, ಕಿವಿಗೊಡಿರಿ. ಅನಾತೋತಿನ ಜನರೇ, ಪ್ರತ್ಯುತ್ತರ ಕೊಡಿ. 31ದಿಕ್ಕು ಪಾಲಾಗಿಹರು ಮದ್ಮೇನಿನ ಜನರು; ವಲಸೆ ಹೋಗಿಹರು ಗೇಬೆಮಿನ ನಿವಾಸಿಗಳು. 32ಅದೇ ದಿನ ಬೀಡುಬಿಡುವರು ಶತ್ರುಗಳು ನೋಬಿನಲ್ಲಿ; ಸಿಯೋನ್ ಬೆಟ್ಟದ ಕಡೆಗೆ, ಜೆರುಸಲೇಮಿನ ಗುಡ್ಡದ ಕಡೆಗೆ ಮುಷ್ಟಿ ತೋರಿಸುತ್ತಿಹರಿದೊ ಆ ದಿಕ್ಕಿಗೆ.

33 ಇಗೋ, ಪ್ರಭುವಾದ ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಮರದ ಕೊಂಬೆಗಳನ್ನು ದುಡುಮ್ಮನೆ ಬೀಳುಸುವರು. ಉನ್ನತವಾದ ವೃಕ್ಷಗಳನ್ನು ಕಡಿದು ಹಾಕುವರು. ಎತ್ತರದ ಮರಗಳನ್ನು ನೆಲಕ್ಕೆ ಉರುಳಿಸುವರು. 34ಕಾಡಿನ ಪೊದೆಗಳನ್ನು ಕೊಡಲಿಯಿಂದ ಕಡಿದುಬಿಡುವರು. ಲೆಬನೋನಿನ ಭವ್ಯ ಮರಗಳು ಬಿದ್ದುಹೋಗುವುವು.

## ಶಾಂತಿಯುತ ಸಾಮ್ರಾಜ್ಯ

**11** ಜೆಸ್ಸೆಯನ ಬುಡದಿಂದ ಒಡೆಯುವು
ದೊಂದು ಚಿಗುರು;
ಅದರ ಬೇರಿನಿಂದ ಫಲಿಸುವುದೊಂದು ತಳಿರು.
2ನೆಲಸುವುದಾತನ ಮೇಲೆ
ಜ್ಞಾನವಿವೇಕ ದಾಯಕ ಆತ್ಮ;
ಶಕ್ತಿ ಸಮಾಲೋಚನೆಯನ್ನೀಯುವ ಆತ್ಮ;
ಸರ್ವೇಶ್ವರನ ಅರಿವನು, ಭಯವನು
ಹುಟ್ಟಿಸುವ ಆತ್ಮ
ಅಹುದು, ನೆಲಸುವುದಾತನ ಮೇಲೆ
ಸರ್ವೇಶ್ವರನ ಆತ್ಮ
3ಸರ್ವೇಶ್ವರನ ಭಯಭಕ್ತಿ ಅವಗೆ
ಪರಿಮಳದಂತೆ.
ತೀರ್ಪಿಡನಾತ ಕಣ್ಣಿಗೆ ತೋಚಿದಂತೆ
ನಿರ್ಣಯಿಸನಾತ ಕಿವಿಗೆ ಬಿದ್ದಂತೆ.
4ಆದರೆ ಬಡಬಗ್ಗರಿಗೆ ತೀರ್ಪಿಡುವನು
ನ್ಯಾಯನೀತಿಯಿಂದ
ನಾಡ ದಲಿತರಿಗೆ ನಿರ್ಣಯಿಸುವನು
ಯಥಾರ್ಥತೆಯಿಂದ
ದಂಡಿಸುವನು ಲೋಕವನು ನುಡಿಯೆಂಬ
ದಂಡದಿಂದ
ಕೊಲ್ಲುವನು ಕೆಡುಕರನು ಉಸಿರೆಂಬ
ಕತ್ತಿಯಿಂದ.
5ಸದ್ಧರ್ಮವೇ ಆತನಿಗೆ ನಡುಕಟ್ಟು
ಪ್ರಾಮಾಣಿಕತೆಯೇ ಸೊಂಟಪಟ್ಟಿ.
6ಬಾಳುವುವು ತೋಳಕುರಿಮರಿಗಳು ಒಂದಿಗೆ
ಮಲಗುವುವು ಮೇಕೆಚಿರತೆಗಳು ಜೊತೆಗೆ
ಮೊಲೆಯುಣ್ಣುವುವು ಕರುಕೇಸರಿಗಳು ಒಟ್ಟಿಗೆ
ನಡೆಸುವುದವುಗಳನು ಚಿಕ್ಕಮಗು
ಮೇಯಿಸುವುದಕೆ.
7ಮೇಯುವುವು ಕರಡಿ, ಆಕಳುಗಳು ಒಟ್ಟಿಗೆ
ಮಲಗುವುವು ಅವುಗಳ ಮರಿಗಳು ಜೊತೆಗೆ
ಎತ್ತಿನ ಹುಲ್ಲು ಮೇವಾಗುವುದು ಸಿಂಹಕೆ.
8ಆಡುವುದು ಮೊಲೆಗೂಸು ನಾಗರ ಹುತ್ತದ
ಮೇಲೆ
ಕೈ ಹಾಕುವುದು ಮೊಲೆಬಿಟ್ಟ ಮಗು
ಹಾವಿನಬಿಲದ ಒಳಗೆ.
9ಹಾನಿಯನು, ಕೇಡನು ಮಾಡರಾರೂ
ನನ್ನ ಪರ್ವತದ ಮೇಲೆ.

ಸಮುದ್ರದಂತೆ ತುಂಬಿರುವುದು
ಸರ್ವೇಶ್ವರನ ಜ್ಞಾನ, ಧರೆಯ ಮೇಲೆ.

**ಸೆರೆಹೋದವರು ಮರಳಿ ಬರುವರು**

10 ಆ ದಿನದಂದು ಜೆಸ್ಸೆಯನ ಸಂತಾನದ ಕುಡಿ ಸರ್ವಜನಾಂಗಗಳಿಗೆ ಧ್ವಜಪ್ರಾಯವಾಗಿ ನಿಲ್ಲುವುದು.
ಆತನನ್ನು ರಾಷ್ಟ್ರಗಳು ಆಶ್ರಯಿಸುವುವು; ವೈಭವದಿಂದಿರುವುದಾತನ ವಿಶ್ರಾಂತಿ ನಿಲಯವು. 11ಆ ದಿನದಂದು
ಅಸ್ಸೀರಿಯ, ಈಜಿಪ್ಟ್, ಪತ್ರೋಸ್, ಸುಡಾನ್, ಏಲಾಮ್, ಬಾಬಿಲೋನಿಯ, ಹಮಾಥ್ ಹಾಗೂ ಸಮುದ್ರದ
ಕರಾವಳಿ – ಈ ಸ್ಥಳಗಳಿಂದ ಸರ್ವೇಶ್ವರ ತಮ್ಮ ಅಳಿದುಳಿದ ಜನರನ್ನು ಬಿಡಿಸಿ ಬರಮಾಡಿಕೊಳ್ಳಲು ಮತ್ತೆ
ಕೈನೀಡುವರು. 12ಇಸ್ರಯೇಲರಲ್ಲಿ ಸೆರೆಹೋದವರನ್ನು, ಜುದೇಯದಿಂದ ಚದರಿಹೋದವರನ್ನು ಕರೆತರಲು,
ಧರೆಯ ಚತುರ್ದಿಕ್ಕುಗಳಿಂದವರನ್ನು ಬರಮಾಡಲು, ರಾಷ್ಟ್ರಗಳಿಗೆ ಗುರುತಾಗಿ ಧ್ವಜವನ್ನು ಆತ ಏರಿಸುವನು.
13ತೊಲಗುವುದು ಎಫ್ರಯಿಮಿನ ಹೊಟ್ಟೆಕಿಚ್ಚು, ನಿರ್ಮೂಲವಾಗುವುದು ಜುದೇಯದ ವೈರಿಗಳ ಒಳಸಂಚು.
ಎಫ್ರಯಿಮ್, ಜುದೇಯವನ್ನು ಮತ್ಸರಿಸದು; ಜುದೇಯ, ಎಫ್ರಯಿಮನ್ನು ವಿರೋಧಿಸದು. 14ಒಟ್ಟಿಗೆ
ಎರಗುವರು ಫಿಲಿಷ್ಠಿಯರ ಮೇಲೆ ಪಶ್ಚಿಮದಲ್ಲಿ; ಜೊತೆಯಾಗಿ ಸೂರೆ ಮಾಡುವರು ಜನರನ್ನು ಪೂರ್ವದಲ್ಲಿ;
ಗೆಲ್ಲುವರು ಎದೋಮ್ ಮೊವಾಬ್ ನಾಡುಗಳನ್ನು; ಅಧೀನವಾಗಿಸುವರು ಅಮ್ಮೋನ್ಯ ಜನರನ್ನು. 15ಆತ
ಬತ್ತಿಸುವನು ಈಜಿಪ್ಟಿನ ಕೊಲ್ಲಿಯನ್ನು, ಒಣಗಿಸುವನು ಬಿಸಿಗಾಳಿಯಿಂದ ಯೂಫ್ರೆಟಿಸ್ ನದಿಯನ್ನು,
ಸೀಳುವನದನ್ನು ಏಳು ತೊರೆಗಳನ್ನಾಗಿ. ಈ ಪರಿ ದಾಟುವರು ಜನರು ಕೆರ ಮೆಟ್ಟಿದವರಾಗಿ. 16ಈಜಿಪ್ಟನ್ನು
ಬಿಟ್ಟು ಬಂದ ಇಸ್ರಯೇಲರಿಗೆ ಮಾರ್ಗವೊಂದು. ಸಿದ್ಧವಾಯಿತು ಅಂತೆಯೆ ಸಿದ್ಧವಾಗುವುದು
ರಾಜಮಾರ್ಗವೊಂದು ಅಸ್ಸೀರಿಯದಲ್ಲಿ ಅಳಿದುಳಿದ ಜನರಿಗೆ.

**ಕೃತಜ್ಞತಾ ಸ್ತುತಿಗೀತೆ**

ಆ ದಿನದಂದು ಹಾಡುವುದು ಜನತೆ ಹೀಗೆಂದು:

**12** "ಹೇ ಸರ್ವೇಶ್ವರಾ, ನಿನಗೆನ್ನ
ವಂದನ;
ನಿನಗಿತ್ತು ಎನ್ನ ಮೇಲೆ ಕೋಪ ಮನ.
ಆದರೆ ಅದೀಗ ಆಗಿದೆ ಶಮನ,
ಬಂದಿತೆನ್ನ ಮನಕೆ ಸಾಂತ್ವನ.
2 ದೇವರೇ ಉದ್ಧಾರಕನೆನಗೆ
ಆತನಲ್ಲಿದೆ ನನಗೆ ನಿರ್ಭೀತ ನಂಬಿಕೆ.
ದೇವಾದಿದೇವನೇ ಎನಗೆ ಶಕ್ತಿ
ಆತನೆನ್ನ ಕೀರ್ತನೆಯ ವ್ಯಕ್ತಿ
ತಂದಿಹನಾತ ಎನಗೆ ಮುಕ್ತಿ."
3 ಉದ್ಧರಿಸುವಾ ಒರತೆಗಳಿಂದ
ಸೇದುವಿರಿ ನೀರನು ಹರುಷದಿಂದ.
4 ಹೇಳುವಿರಿ ನೀವು ಆ ದಿನದಂದು ಈ ಪರಿ–
"ಸಲ್ಲಿಸಿರಿ ಸರ್ವೇಶ್ವರನಿಗೆ ಕೃತಜ್ಞತೆಯನು
ಸ್ಮರಿಸಿರಿ ಆತನ ಶ್ರೀನಾಮವನು
ಸಾರಿರಿ ಜನತೆಗೆ ಆತನ ಕಾರ್ಯಗಳನು
ಘೋಷಿಸಿರಿ ಆತನ ನಾಮ ಘನತೆಯನು.
5 ಹಾಡಿರಿ ಸರ್ವೇಶ್ವರನಿಗೆ ಸ್ತುತಿಯನು

ಎಸಗಿಹನಾತ ಮಹಿಮಾ ಕಾರ್ಯಗಳನು
ತಿಳಿಸಿರಿ ಜಗದಾದ್ಯಂತಕೆ ಈ ವಿಷಯವನು.
6 ಸಿಯೋನಿನ ನಿವಾಸಿಗಳೇ, ಹಾಡಿರಿ, ಮಾಡಿರಿ
ಭಜನ
ನಿಮ್ಮ ಮಧ್ಯೆಯಿರುವ ಆ ಘನವಂತನ
ಇಸ್ರಯೇಲಿನಾ ಸ್ವಾಮಿ ಪರಮಪಾವನ."

## ಬಾಬಿಲೋನಿನ ವಿನಾಶ

**13** ಬಾಬಿಲೋನಿನ ವಿಷಯವಾಗಿ ಆಮೋಚನ ಮಗ ಯೆಶಾಯನಿಗೆ ಕೇಳಿ ಬಂದ ದೇವವಾಣಿ:

2 ಬೋಳುಬೆಟ್ಟದ ಮೇಲೆ ಧ್ವಜವನ್ನು ಏರಿಸಿರಿ. ಪ್ರಭುಗಳ ನಗರದ್ವಾರಗಳನ್ನು ಮುತ್ತುವಂತೆ ಸೈನಿಕರಿಗೆ ಸನ್ನೆಮಾಡಿ ಕೂಗಿ ಹೇಳಿರಿ.

3 ಆಯ್ಕೆಯಾದವರಿಗೆ ಅಪ್ಪಣೆ ಮಾಡಿದ್ದೇನೆ: ಹೌದು, ಹೆಮ್ಮೆಯಿಂದ ಮೆರೆಯುವ ಶೂರರು ನನ್ನ ಕೋಪವನ್ನು ತೀರಿಸಲಿ ಎಂದು ಅವರಿಗೆ ಕರೆ ನೀಡಿದ್ದೇನೆ.

4 ಇಗೋ, ಬೆಟ್ಟಗುಡ್ಡಗಳಿಂದ ಕೇಳಿಬರುತ್ತಿದೆ ಜನಜಂಗುಳಿಯಂಥ ಗದ್ದಲ; ಒಟ್ಟಿಗೆ ಕೂಡಿಕೊಂಡ
ದೇಶವಿದೇಶಗಳ ಆರ್ಭಟ; ಸಜ್ಜಾಗಿ ನಿಂತಿದೆ ಸೇನಾಧೀಶ್ವರ ಸರ್ವೇಶ್ವರನ ಸೈನ್ಯ. 5ಅವರು ಬಂದಿರುವುದು
ಭೂಮಿಯ ಕಟ್ಟಕಡೆಯ ನಾಡುಗಳಿಂದ; ಇಡೀ ರಾಷ್ಟ್ರವನ್ನು ಹಾಳು ಮಾಡಲಿರುವರು ಸರ್ವೇಶ್ವರ ಕೋಪೋದ್ರೇಕದಿಂದ.

6 ಪ್ರಲಾಪಿಸಿರಿ, ಸಮೀಪಿಸಿದೆ ಸರ್ವೇಶ್ವರನ ದಿನ; ಸನ್ನಿಹಿತವಾಗಿದೆ, ಸರ್ವನಾಶ ಮಾಡುವ
ಸೇನಾಧೀಶ್ವರನ ದಿನ! 7ಈ ಕಾರಣ ಜೋಲುಬೀಳುವುವು ಎಲ್ಲರ ಕೈಗಳು; ಕರಗಿ ನೀರಾಗುವುವು ಎಲ್ಲರ
ಹೃದಯಗಳು. 8ಭಯಭ್ರಾಂತರಾಗುವರು ಅವರೆಲ್ಲರು; ಆಕ್ರಮಿಸುವುವು ಅವರನ್ನು ಯಾತನೆ ವೇದನೆಗಳು.
ಸಂಕಟಪಡುವರವರು ಹೆರುವ ಹೆಂಗಸಿನಂತೆ; ಒಬ್ಬರನ್ನೊಬ್ಬರು ನೋಡುವರು ದಿಗ್ಭ್ರಾಂತರಾದವರಂತೆ;
ಅವರ ಮುಖಗಳು ಕೆಂಪೇರುವುವು ಬೆಂಕಿಯಂತೆ. 9ಇಗೋ, ಸರ್ವೇಶ್ವರನ ದಿನ ಬರುತ್ತಿದೆ! ಭೂಮಿಯನ್ನು
ಹಾಳುಮಾಡಲು, ಪಾಪಿಗಳನ್ನು ನಿರ್ಮೂಲ ಮಾಡಲು; ಕೋಪೋದ್ರೇಕದಿಂದ, ರೋಷಾವೇಶದಿಂದ,
ಕ್ರೂರವಾಗಿ ಬರುತ್ತಿದೆ! 10ಆಕಾಶದ ತಾರೆಗಳು, ನಕ್ಷತ್ರಗಳು ಬೆಳಗವು, ಸೂರ್ಯನು
ಅಂಧಕಾರಮಯನಾಗುವನು, ಚಂದ್ರನು ಕಾಂತಿಹೀನನಾಗುವನು.

11 ಸರ್ವೇಶ್ವರ ಇಂತೆನ್ನುತ್ತಾರೆ: "ನಾನು ಲೋಕದವರಿಗೆ ಪಾಪದ ಫಲವನ್ನೂ ದುರುಳರಿಗೆ
ದುಷ್ಕೃತ್ಯಗಳ ಫಸಲನ್ನೂ ತಿನ್ನಿಸುವೆನು. ಸೊಕ್ಕಿದವನ ಕೊಬ್ಬನ್ನು ಕರಗಿಸುವೆನು. ಬಲಾತ್ಕಾರ ಮಾಡುವವರ
ಹೆಮ್ಮೆಯನ್ನು ಅಡಗಿಸುವೆನು. 12ಅಳಿದುಳಿದ ಜನರು ಅಪರಂಜಿಗಿಂತಲೂ ಓಫೀರಿನ ಬಂಗಾರಕ್ಕಿಂತಲೂ
ವಿರಳವಾಗಿರುವಂತೆ ಮಾಡುವೆನು. 13ಸೇನಾಧೀಶ್ವರ ಸರ್ವೇಶ್ವರನು ಕೋಪೋದ್ರೇಕದಿಂದ
ರೋಷಾವೇಶದಿಂದ ಕೆರಳುವ ದಿನದಂದು ಆಕಾಶಮಂಡಲ ನಡುಗುವುದು, ಭೂಮಂಡಲ
ಸ್ಥಳಪಲ್ಲಟಗೊಳ್ಳುವುದು.

14 "ಬೇಟೆಗಾರನಿಂದ ತಪ್ಪಿಸಿಕೊಂಡು ಓಡುತ್ತಿರುವ ಜಿಂಕೆಯಂತೆಯೂ ಒಟ್ಟುಗೂಡಿಸಲು ಯಾರೂ
ಇಲ್ಲದಂಥ ಕುರಿಗಳಂತೆಯೂ ಪ್ರತಿಯೊಬ್ಬನು ಸ್ವಜನರ ಕಡೆಗೆ ತಿರುಗುವನು; ಸ್ವದೇಶದ ಕಡೆಗೆ ಓಡುವನು.
15ಸಿಕ್ಕಿಸಿಕ್ಕಿದವರೆಲ್ಲರು ಇರಿತಕ್ಕೆ ಗುರಿಯಾಗುವರು. ಅಟ್ಟಿಹಿಡಿಯಲಾದವರೆಲ್ಲರು ಕತ್ತಿಗೆ ತುತ್ತಾಗುವರು.
16ಅವರ ಮಕ್ಕಳನ್ನು ಬಂಡೆಗೆ ಅಪ್ಪಳಿಸಲಾಗುವುದು. ಅವರ ಮನೆಗಳನ್ನು ಸೂರೆ ಮಾಡಲಾಗುವುದು. ಅವರ
ಹೆಂಗಳೆಯರು ಅತ್ಯಾಚಾರಕ್ಕೆ ಈಡಾಗುವರು.

17 "ಇಗೋ, ಬಾಬಿಲೋನಿಯದ ಜನರಿಗೆ ವಿರುದ್ಧವಾಗಿ ಮೇದ್ಯರನ್ನು ಎತ್ತಿಕಟ್ಟುವೆನು. ಇವರು
ಬೆಳ್ಳಿಬಂಗಾರಕ್ಕೆ ಮಾರುಹೋಗರು. 18ಇವರ ಬಿಲ್ಲುಗಳು ಯುವಜನರನ್ನು ಚೂರುಚೂರು ಮಾಡುವುವು;
ಇವರು ಕರುಳ ಕುಡಿಗಳನ್ನೂ ಕನಿಕರಿಸರು; ಮಕ್ಕಳುಮರಿಗಳನ್ನೂ ಕರುಣಿಸದು ಇವರ ಕಣ್ಣು.

19ಬಾಬಿಲೋನ್ ರಾಜ್ಯಗಳಿಗೆ ಶಿರೋಮಣಿ, ಕಸ್ದೀಯರ ಭವ್ಯ ಭೂಷಣ. ಆದರೆ ದೇವರಾದ ನಾನು
ಸೊದೋಮ್ ಮತ್ತು ಗೊಮೋರಾ ನಾಡುಗಳನ್ನು ನಾಶಮಾಡಿದಂತೆ ಇದನ್ನೂ ಕೆಡಿಸಿ ನಾಶಮಾಡುವೆನು.
20ಅದು ಎಂದಿಗೂ ನಿವಾಸಕ್ಕೆ ಯೋಗ್ಯವಾಗದು. ತಲತಲಾಂತರಕ್ಕೂ ಅಲ್ಲಿ ಜನರು ಒಕ್ಕಲು ಮಾಡರು.
ಯಾವ ಅರಬ್ಬಿಯನೂ ಅಲ್ಲಿ ಗುಡಾರಹಾಕನು. ಕುರುಬರು ಅಲ್ಲಿ ಮಂದೆಗಳನ್ನು ತಂಗಿಸರು. 21ಆ ನಾಡು
ಕಾಡುಮೃಗಗಳಿಗೆ ಬೀಡಾಗುವುದು. ಅದರ ಮನೆಗಳು ಗೂಬೆಗಳ ಗೂಡಾಗುವುವು, ಉಷ್ಟ್ರಪಕ್ಷಿಗಳು ಅಲ್ಲಿ
ವಾಸಮಾಡುವುವು. ಕಾಡು ಮೇಕೆಗಳು ಕುಣಿದಾಡುವುವು. 22ಅದರ ಅರಮನೆಗಳಲ್ಲಿ ನರಿಗಳು, ಮೋಜಿನ
ಮಹಲುಗಳಲ್ಲಿ ತೋಳಗಳು ಕೂಗಾಡುವುವು. ಬಾಬಿಲೋನಿಗೆ ಕಾಲ ಬಂದಿದೆ. ಅದರ ದಿನಗಳು
ಮುಗಿಯುತ್ತಿವೆ.

### ಗಡೀಪಾರಾದವರು ಹಿಂದಿರುಗುವರು

**14** ದಯೆತೋರಿಸುವರು ಸರ್ವೇಶ್ವರ ಯಕೋಬ್ಯರಿಗೆ, ಆರಿಸಿಕೊಳ್ಳುವರು ಮತ್ತೆ ಇಸ್ರಯೇಲರನ್ನೆ,
ನೆಲೆಗೊಳಿಸುವರವರನ್ನು ತಾಯಿನಾಡಿನಲ್ಲೆ. ಹೊರನಾಡಿಗರು ಕೂಡಿಕೊಳ್ಳುವರು ಅವರೊಡನೆ,
ಸೇರಿಕೊಳ್ಳುವರವರು ಯಕೋಬ ಮನೆತನಕ್ಕೆ. 2ರಾಷ್ಟ್ರಗಳೇ ಇಸ್ರಯೇಲರನ್ನು ಕರೆತಂದು ಸೇರಿಸುವುವು ಸ್ವಂತ
ನಾಡಿಗೆ. ಸರ್ವೇಶ್ವರನ ಆ ನಾಡಿನಲಿ ದಾಸದಾಸಿಯರನ್ನಾಗಿಸಿಕೊಳ್ಳುವುದು ಇಸ್ರಯೇಲ್ ಮನೆತನವು ಆ
ರಾಷ್ಟ್ರಗಳನ್ನೇ. ಸೆರೆಹಿಡಿಯುವರು ತಮ್ಮನ್ನು ಸೆರೆಹಿಡಿದವರನ್ನೇ. ಅಧೀನಪಡಿಸುವರು ತಮ್ಮನ್ನು
ಹಿಂಸಿಸಿದವರನ್ನೇ.

### ಬಾಬಿಲೋನಿನ ಅರಸನ ಪತನ

3 ಸಂಕಟದಿಂದಲೂ ನೋವುನಷ್ಟದಿಂದಲೂ ಕ್ರೂರವಾದ ಬಿಟ್ಟಿಜೀತದಿಂದಲೂ ಸರ್ವೇಶ್ವರ ನಿಮ್ಮನ್ನು
ಬಿಡುಗಡೆ ಮಾಡುವರು. ಆ ದಿನದಂದು ಬಾಬಿಲೋನಿನ ಅರಸನನ್ನು ಮೂದಲಿಸಿ ಈ ಪದ್ಯವನ್ನು ನೀವು
ಹಾಡಬೇಕು:

4 ಬಿದ್ದುಹೋದನಿದೊ ವಿಧ್ವಂಸಕ
ಸದ್ದಿಲ್ಲದಾಗಿದೆ ಅವನ ಅಟ್ಟಹಾಸದ ಬಿಂಕ.
5 ಮುರಿದಿಹನು ಸರ್ವೇಶ್ವರ ದುರುಳರಾ
ಗದೆಯನು
ಮುರಿದಿಹನು ಅರಸರ ರಾಜದಂಡವನು.
6 ಏಕೆನೆ, ಎಡೆಬಿಡದೆ ದಂಡಿಸಿದರು ಪ್ರಜೆಗಳನು
ಕೋಪೋದ್ರೇಕದಿಂದ
ತಡೆಯಿಲ್ಲದೆ ದಬ್ಬಾಳಿಕೆ ನಡೆಸಿದರು
ರಾಷ್ಟ್ರಗಳ ಮೇಲೆ ಸಿಟ್ಟಿನಿಂದ.
7 ಕಟ್ಟಕಡೆಗೆ ಶಾಂತಿಯಿಂದ ಸುರಕ್ಷಿತವಾಗಿದೆ
ಜಗವೆಲ್ಲ
ಹರ್ಷಧ್ವನಿಗೈಯುತ ಹಾಡುತಿಹರು ಜನರೆಲ್ಲ.
8 ನಲಿಯುತಿಹವು ತುರಾಯಿ, ಲೆಬನೋನಿನ
ದೇವದಾರು ವೃಕ್ಷಗಳು ಕೂಡಾ,
‘ಮಡಿದು ಹೋದನಿವನು, ಇನ್ನು,
ಕಡಿವವರಾರು ನಮ್ಮನು?’ ಎನ್ನುತಾ.
9 ನಿನ್ನ ಸ್ವಾಗತಿಸಲು ಸಡಗರದಿಂದಿದೆ
ಪಾತಾಳ ಲೋಕವು,

ಚೇತನಗೊಂಡಿವೆ ಲೋಕಮುಖಂಡರ
ಪ್ರೇತಗಳು,
ಎದ್ದು ನಿಂತಿಹರು ಸಕಲ ರಾಷ್ಟ್ರಗಳ
ಅರಸರುಗಳು.
10 ಇವರೆಲ್ಲರು ಇಂತೆನ್ನುವರು ನಿನಗೆ:
'ನೀನು ಸಹ ದುರ್ಬಲನಾದೆ ನಮ್ಮ ಹಾಗೆ
ನೀನೂ ಸರಿಸಮಾನನಾದೆ ನಮಗೆ'.
11 ಇಳಿದಿದೆ ನಿನ್ನ ವೈಭವ, ವೀಣಾನಾದ
ಪಾತಾಳಕೆ
ನಿನಗೀಗ ಹುಳುಗಳೇ ಹಾಸಿಗೆ,
ಕ್ರಿಮಿಗಳೇ ಹೊದಿಕೆ.
12 ಮುಂಜಾನೆಯ ನಕ್ಷತ್ರವೆ, ಉದಯ
ಕುಮಾರನೆ,
ಆಗಸದಿಂದ ಹೇಗೆ ಬಿದ್ದೆ?
ರಾಷ್ಟ್ರಗಳನ್ನು ಗೆದ್ದ ನೀನು,
ನೆಲಕ್ಕೆ ಅದು ಹೇಗೆ ಉರುಳಿದೆ?
13 'ಹತ್ತಿಹೋಗುವೆನು ನಾನು ಆಕಾಶ
ಮಂಡಲಕೆ
ಉತ್ತರದಿಕ್ಕಿನ ಕೊನೆಗಿರುವ ಸುರಗಣ
ಪರ್ವತಕ್ಕೆ
ಎತ್ತುವೆ ಸಿಂಹಾಸನವನ್ನು ದೇವ ನಕ್ಷತ್ರಗಳ
ಮೇಲಕೆ
'ಕುಳಿತಲ್ಲಿ ರಾಜ್ಯವಾಳುವೆ' ಎಂದುಕೊಂಡೆ
ನಿನ್ನೊಳಗೆ.
14 'ಏರುವೆ ಉನ್ನತ ಮೇಘಮಂಡಲದ ಮೇಲಕೆ,
ಸರಿಸಮಾನನಾಗುವೆ ಉನ್ನತೋನ್ನತನಿಗೆ'.
15 ಇಂತೆಂದ ನೀನು ದೂಡಲಾಗಿರುವೆ ಪಾತಾಳಕೆ
ಅಧೋಲೋಕದ ಅಗಾಧ ಕೂಪಗಳಿಗೆ.
16 ಸತ್ತವರು ದಿಟ್ಟಿಸಿ ನಿನ್ನನು:
'ಭುವಿಯನು ನಡುಗಿಸಿದವನು,
ರಾಜ್ಯಗಳನು ಕದಲಿಸಿದವನು,
17 ನಗರಗಳನು ಕೆಡವಿಸಿದವನು,
ನಾಡನು ಕಾಡಾಗಿಸಿದವನು,
ಖೈದಿಗಳನು ಬಂಧನದಿಂದ ಬಿಡಿಸಿದವನು
ಈತನೇ ಅಲ್ಲವೆ?' ಎಂದಾಡಿಕೊಳ್ವರು.
18 ಸಂಭ್ರಮದಿ ಸ್ವಂತ ಸಮಾಧಿಗಳಲಿ ನಿರಂತರ
ನಿದ್ರಿಸುತಿಹರು
ಸಕಲ ರಾಷ್ಟ್ರಗಳ ಅರಸರು, ಸಮಸ್ತ ರಾಜರು.
19 ನಿನ್ನನ್ನಾದರೊ ಕೊಳೆತ ಕಡ್ಡಿಯಂತೆ
ಬಿಸಾಡಿಹರು ಕೆಳಕೆ

ಗೋರಿಯಿಲ್ಲದ ನಿನ್ನ ಶವ
ಈಡಾಗಿದೆ ಪರರ ತುಳಿತಕ್ಕೆ,
ಕತ್ತಿ ತಿವಿದ, ಕಲ್ಲುಗುಂಡಿಗೆ ಪಾಲಾದ
ಹೆಣಗಳೇ ನಿನ್ನ ಹೊದಿಕೆ.
20 ಸ್ವಂತ ಜನರನೇ ಕೊಂದ ನಿನಗೆ
ಸ್ವಂತ ನಾಡನೇ ನಾಶಗೈದ ನಿನಗೆ
ಸಿಗದು ರಾಜ್ಯವೈಭವದ ಸಂಸ್ಕಾರ ಗೋರಿಗೆ,
'ಹೇಳಹೆಸರಿಲ್ಲದ ಗತಿ ದುರುಳರ ಸಂತಾನಕೆ'.
21 ತಲೆಯೆತ್ತಿ ಪೃಥ್ವಿಯನೇ
ವಶಪಡಿಸಿಕೊಳ್ಳದಂತೆ,
ಧರೆಯ ಮೇಲೆಲ್ಲ ನಗರಗಳನ್ನು
ಕಟ್ಟಿಕೊಳ್ಳದಂತೆ,
ಸಿದ್ಧಮಾಡಿರಿವನ ಮಕ್ಕಳಿಗೆ ವಧ್ಯಸ್ಥಾನ,
ಈತನ ಪಿತಾಪಿತೃಗಳ ಪಾಪಕೃತ್ಯಗಳ ಕಾರಣ.

**ಬಾಬಿಲೋನಿನ ವಿನಾಶ**

22 ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ
ನುಡಿಗಳು:
"ನಾನವರಿಗೆ ವಿರುದ್ಧವಾಗಿ ಎದ್ದು
ನಿರ್ನಾಮಮಾಡುವೆನು,
ಬಾಬಿಲೋನಿನ ಹೆಸರನು, ಜನಶೇಷವನು,
ಪುತ್ರಪೌತ್ರರನು.
23 ಪರಿವರ್ತಿಸುವೆನಾ ನಾಡನು ಜವುಗು
ನೆಲವನ್ನಾಗಿ,
ಅಹುದು, ಮುಳ್ಳುಹಂದಿಗಳ ರೊಪ್ಪವನ್ನಾಗಿ,
ಗುಡಿಸಿಬಿಡುವೆನು ನಾಶವೆಂಬ ಪೊರಕೆಯಿಂದ
ಪೂರ್ತಿಯಾಗಿ".

**ಅಸ್ಸೀರಿಯಾದ ದುರ್ಗತಿ**

24 ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ
ಪ್ರತಿಜ್ಞೆಯಿದು:
"ನೆರವೇರಿಯೇ ತೀರುವುದು ನಾ
ಸಂಕಲ್ಪಿಸಿದ್ದು,
ಈಡೇರಿಯೇ ತೀರುವುದು ನಾ ಯೋಚಿಸಿದ್ದು.
25 ನಶಿಸಿಬಿಡುವೆನಾ ಅಸ್ಸೀರಿಯರನು
ನನ್ನ ನಾಡಿನಲಿ,
ತುಳಿದುಬಿಡುವೆನು ಅವರನು
ನನ್ನ ಬೆಟ್ಟಗಳಲಿ,
ನೀಗುವುದಾಗ ನನ್ನ ಜನರಿಂದ ಅವರು
ಹೂಡಿದ ನೊಗವು,

ತೊಲಗುವುದಾಗ ಅವರು ಹೊರಿಸಿದ
ಹೊರೆಯು.
26 ವಿಶ್ವದ ಬಗ್ಗೆ ನಾ ಮಾಡಿರುವೆ
ಯೋಜನೆಯಿದು,
ರಾಷ್ಟ್ರಗಳನ್ನು ದಂಡಿಸಲೆತ್ತಿರುವ ಕೈಯಿದು".
27 ವ್ಯರ್ಥಗೊಳಿಸುವವರಾರು ಸೇನಾಧೀಶ್ವರ
ಸರ್ವೇಶ್ವರಸ್ವಾಮಿಯ ಯೋಜನೆಯನು?
ಹಿಂತೆಗೆವವರಾರು ಅವರೆತ್ತಿದ ಕೈಯನು?
28 ಅರಸ ಆಹಾಜನು ಕಾಲವಾದ ವರುಷದಲಿ
ಕೇಳಿಬಂದಿತು ಈ ದೈವೋಕ್ತಿ:
29 "ನಲಿಯದಿರಿ, ಎಲೈ ಫಿಲಿಷ್ಟಿಯರೇ,
ನಿಮ್ಮನ್ನು ಹೊಡೆದ ಕೋಲು ಮುರಿಯಿತೆಂದು.
ಹಾವು ಸತ್ತರೂ ಅದರ ಮೂಲದಿಂದ
ಹುಟ್ಟುವುದು ಕ್ರೂರ ಕಾಳಿಂಗವು,
ಅದರ ಮೊಟ್ಟೆಯಿಂದ ಹೊರಬರುವುದು
ಹಾರುವ ಘಟಸರ್ಪವು.
30 ಪೋಷಣೆಪಡೆಯುವರು ದೀನದಲಿತರು,
ನಿರ್ಭಯದಿಂದ ನಿದ್ರಿಸುವರು ದಿಕ್ಕಿಲ್ಲದವರು.
ನಿನ್ನ ಸಂತಾನದವರಾದರೋ ಸಾಯುವರು
ಕ್ಷಾಮದಿಂದ,
ಅಳಿದುಳಿದವರು ಹತರಾಗುವರು
ಆ ಘಟಸರ್ಪದಿಂದ.
31 ಪುರದ್ವಾರವೇ, ಗೋಳಾಡು;
ಪಟ್ಟಣವೇ, ಬೊಬ್ಬೆಯಿಡು,
ಫಿಲಿಷ್ಟಿಯವೇ, ಕರಗಿಹೋಗು,
ಉತ್ತರದಿಂದ ಬರುತ್ತಿದೆ ಧೂಮಧೂಳಿ
ಆ ದಂಡಿನಲ್ಲಿಲ್ಲ ನೋಡು, ಯಾವ ಹೇಡಿ.
32 ಹೊರನಾಡಿನ ರಾಯಭಾರಿಗಳಿಗೆ ನಮ್ಮ
ಉತ್ತರವೇನು?
"ಸರ್ವೇಶ್ವರಸ್ವಾಮಿ ಸ್ಥಾಪಿಸಿಹರು
ಸಿಯೋನನ್ನು,
ದೀನದಲಿತರು ಆಶ್ರಯಿಸಿಕೊಳ್ಳುವರು
ಅದನ್ನು."

### ಮೋವಾಬಿಗೆ ಬರಲಿರುವ ದಂಡನೆ

**15** ಮೋವಾಬನ್ನು ಕುರಿತ ದೈವೋಕ್ತಿ
ಇದು:
"ಅಳಿದು ಹಾಳಾಯಿತು ಒಂದೇ ರಾತ್ರಿಯೊಳು,
ಮೋವಾಬಿನ ಆರ್ ಪಟ್ಟಣವು.

ಅಳಿದು ಹಾಳಾಯಿತು ಒಂದೇ ರಾತ್ರಿಯೊಳು,
ಮೋವಾಬಿನ ಕೀರ್ ಪಟ್ಟಣವು.
2 ಹತ್ತಿಹರು ಗುಡಿಗೋಪುರಗಳನು
ಆಳುವುದಕ್ಕಾಗಿ, ದೀಬೋನಿನವರು,
ಗೋಳಾಡುತಿಹರು ನೆಬೋವಿನಲಿ ಮೇಣ್
ಮೇದೆಬದಲಿ,
ಮೋವಾಬ್ಯರು ತಲೆ ಬೋಳಿಸಿಹರು,
ಗಡ್ಡಕತ್ತರಿಸಿಹರು ದುಃಖದಿಂದ ಎಲ್ಲರು.
3 ಗೋಣಿತಟ್ಟನುಟ್ಟು ತಿರುಗುತಿಹರು
ಹಾದಿಬೀದಿಗಳಲಿ,
ಕಣ್ಣೀರಿಡುತ ಸೊರಗಿಹರು ಮಳಿಗೆಗಳಲಿ,
ಬೀದಿ ಚೌಕಗಳಲಿ.
4 ಕೂಗಿಕೊಳ್ಳುತಿಹವು ಹೆಷ್ಬೋನ್
ಎಲೆಯಾಲೆಗಳು,
ಕೇಳಿಬರುತಿಹುದು ಯಹಚಿನವರೆಗೂ
ಅವುಗಳ ರೋದನವು,
ಕಿರಿಚಿಕೊಳ್ಳುತಿಹರು ಮೋವಾಬಿನ
ಸೇನೆಯಾಳುಗಳು,
ತತ್ತರಿಸಿ ಹೋಗಿಹವು ಅವರ ಗುಂಡಿಗೆಗಳು.
5 ಮೊರೆಯಿಡುತ್ತಿದೆ ಎನ್ನ ಮನ ಮೋವಾಬಿನ
ನಿಮಿತ್ತ,
ಪಲಾಯನ ಗೈದವರು ಓಡುತಿಹರು
ಚೋಯರತ್ತ, ಎಗ್ಲತ್ – ಶೆಲಿಶೀಯ ದತ್ತ,
ಹತ್ತಿಹರು ಲೂಹೀತ್ ದಿಣ್ಣೆಯನ್ನು ಅಳುತ್ತ,
ಹಿಡಿದಿಹರು ಹೊರೋನಯಿಮಿನ ದಾರಿಯನು
ಹಾಳಾದೆವೆಂದು ಧ್ವನಿಗೈಯುತ.
6 ಬತ್ತಿಹೋಯಿತು ನಿಮ್ರೀಮ್ ನದಿಯು,
ಬಾಡಿಹೋಯಿತು ಹಸಿಹುಲ್ಲು,
ಮುಗಿಯಿತು ಮೇವು,
ಇಲ್ಲವಾಯಿತು ಪಚ್ಚೆಪಸಿರಾವುದು.
7 ಎಂತಲೇ ವಿಲ್ಲೊ ಕಣಿವೆಯಾಚೆ ಹೊತ್ತು
ಹೋಗುತಿಹರು,
ತಾವು ಗಳಿಸಿದ ಆಸ್ತಿಯನ್ನು, ಕೂಡಿಸಿಟ್ಟ
ಸ್ವತ್ತನ್ನು.
8 ಹಬ್ಬಿದೆ ಅದರ ಪ್ರಲಾಪ ಮೋವಾಬಿನ
ಎಲ್ಲೆಗಳ ಪರಿಯಂತ,
ವ್ಯಾಪಿಸಿದೆ ಅದರ ಆಕ್ರಂದ ಎಗ್ಲಯಿಮಿನ್,
ಬೆಯೇರ್ ಏಲೀಮಿನತನಕ.
9 ಹರಿಯುತಿದೆ ದೀಮೋನಿನ ನದಿ
ರಕ್ತಮಯವಾಗಿ,

ಕಾದಿದೆ ದೀಮೋನರಿಗೆ ಇನ್ನೂ ಹೆಚ್ಚಿನ ಹಾನಿ,
ಎರಗಲಿದೆ ಅಳಿದುಳಿದ ಮೋವಾಬ್ಯರ ಮೇಲೆ
ಒಂದು ಕೇಸರಿ.”

**ಮೋವಾಬ್ಯರ ದುರ್ಗತಿ**

16 ಕಳುಹಿಸಿ ಕುರಿಗಳನು ಕಪ್ಪಕಾಣಿಕೆ
ಯಾಗಿ ದೇಶಾಧಿಪತಿಗೆ,
ಕಳುಹಿಸಿ ಮರುಭೂಮಿಯ ಸೆಲಾದಿಂದ
ಸಿಯೋನ್ ಪರ್ವತಕೆ.
2 ಮೋವಾಬಿನ ಮಹಿಳೆಯರು ಅರ್ನೋನ್
ನದಿಯ ಹಾಯ್ಗಡಗಳಲಿ,
ಅಲೆಯುತಿಹರು ಗೂಡಿಂದ
ಹೊರದೂಡಲಾದ ಹಕ್ಕಿ ಮರಿಗಳ ಪರಿ.
3 ಇಂತೆನ್ನುವರವರು ಯೆಹೂದ ಜನತೆಗೆ:
“ನೀಡಿ ಸಲಹೆಯೊಂದನ್ನು ನಮಗೆ,
ಕೊಡಿ ನ್ಯಾಯ ತೀರ್ಪನೆಮಗೆ,
ಇರುಳಿನಂತಿರಲಿ ನಿಮ್ಮ ನೆರಳು
ಉರಿಬಿಸಿಲೊಳೆಮಗೆ,
ನೆಲೆನೀಡಿ ವಲಸಿಗರಿಗೆ, ದೂಡಬೇಡಿ
ಅಲೆಯುವವರನು ಬಯಲಿಗೆ.
4 ನೆಲೆನೀಡಿ ಮೋವಾಬ್ ನಾಡಿನಿಂದ
ವಲಸೆಬಂದಿಹ ನಮಗೆ,
ವಿನಾಶಕರಿಗೆ ವಶವಾಗದಂತೆ ಆಶ್ರಯ ನೀಡಿ
ನಮಗೆ.
ನಾಡಿನಿಂದ ನಿರ್ಮೂಲವಾಗುವರು
ವಿಧ್ವಂಸಕರು,
ನಿಂತು ಹೋಗುವುವು ನಾಶವಿನಾಶಗಳು,
ಅಳಿದುಹೋಗುವರು ತುಳಿದು
ಹಾಳುಮಾಡುವವರು.
5 ಸ್ಥಾಪಿತವಾಗುವುದಾಗ ಅಚಲ ಒಲವಿನ
ಸಿಂಹಾಸನವು,
ಅದನಲಂಕರಿಸುವನು ಪ್ರಾಮಾಣಿಕ ದಾವೀದ
ವಂಶಜನು.
ದೊರಕಿಸುವನಾತ ನ್ಯಾಯ ನೀತಿಯನು,
ಶೀಘ್ರದಲೆ ನೆರವೇರಿಸುವನು
ಸರಿಕಂಡದುದನು.”
6 ಯೆಹೂದ ಜನತೆ ಪೇಳ್ವರವರಿಗೆ: “ನಮ್ಮ
ಕಿವಿಗೆ ಬಿದ್ದಿದೆ ಮೋವಾಬ್ಯರ ಮದ,
ತಿಳಿದಿದೆ ನಮಗೆ ಅವರ ದುರಹಂಕಾರ,

ಅವರ ಒಣ ಡಂಭಾಚಾರ, ಗರ್ವೋದ್ರೇಕ".
7 ಇದಕಾರಣ ಮೋವಾಬ್ಯರೇ ಗೋಳಾಡಲಿ,
ಪ್ರಲಾಪಿಸಲಿ ಪ್ರತಿಯೊಬ್ಬನು
ಮೋವಾಬಿಗಾಗಿ,
ಕೀರ್ ಹರೆಷೆಥಿನ ದೀಪದ್ರಾಕ್ಷಿಯ
ಕಡುಬಿಗಾಗಿ,
ನೆನೆದು ನರಳಿ ಹಲುಬಲಿ ಅದಕ್ಕಾಗಿ.
8 ನಿಸ್ಸಾರವಾಗಿದೆ ಹೆಷ್ಬೋನಿನ ಹೊಲ, ಸಿಬ್ಮದ
ದ್ರಾಕ್ಷಾಲತೆ,
ಒಮ್ಮೆ ವ್ಯಾಪಿಸಿತ್ತು ಆ ರಾಜ್ಯದ್ರಾಕ್ಷಿ
ಯಜ್ಜೇರಿನವರೆಗೆ,
ಹಬ್ಬಿತ್ತದರ ಶಾಖೆ ಮರುಭೂಮಿಗೆ,
ಸಮುದ್ರದಾಚೆ,
ಮಾಡಿತು ನಾಡಿನೊಡೆಯರನು ಕುಡಿದು
ಮತ್ತರಾಗುವಂತೆ.
9 ಎಂದೇ ಸಿಬ್ಮದ ದ್ರಾಕ್ಷಾಲತೆಯ ನಿಮಿತ್ತ,
ಕಣ್ಣೀರಿಡುವೆನು ಯಜ್ಜೇರಿನವರ ಸಮೇತ,
ತೋಯಿಸುತಿಹೆನು ಹೆಷ್ಬೋನನು, ಎಲ್ಲಾನನು
ಕಣ್ಣೀರಿಂದ,
ಏಕೆನೆ ಇಲ್ಲವಾಗಿದೆ ಅಲ್ಲಿ ಹಣ್ಣುಹಂಪಲು
ಸುಗ್ಗಿಯ ಗೀತ.
10 ತೊಲಗಿದೆ ಹೊಲಗಳಿಂದ ಹರ್ಷಾನಂದ,
ಇಲ್ಲವಾಗಿದೆ ತೋಟಗಳಲಿ ಜಯಕಾರದ
ನಾದ,
ದ್ರಾಕ್ಷಾರಸವನು ತೆಗೆವವರಿಲ್ಲ
ಅರಮನೆಗಳಿಂದ,
ಎಂತಲೆ ನಿಂತು ಹೋಗಿಹುದಲ್ಲಿ ಸುಗ್ಗಿಯ
ಗೀತ.
11 ಮೋವಾಬಿನ ನಿಮಿತ್ತ ಮಿಡಿಯುತಿದೆಯೆನ್ನ
ಮನ ದುಃಖದಿಂದ,
ವೀಣೆಯ ತಂತಿಯಂತೆ ತುಡಿಯುತಿದೆಯೆನ್ನ
ಅಂತರಂಗ ಕೀರ್ ಹೆರೆಷಿನ ನಿಮಿತ್ತ.
12 ವ್ಯರ್ಥ, ಬೆಟ್ಟಗುಡ್ಡಗಳಿಗೆ ಮೋವಾಬ್ಯರು
ತೀರ್ಥಯಾತ್ರೆಗೈದರೂ,
ವ್ಯರ್ಥ, ಪ್ರಾರ್ಥನೆ ಮಾಡಲು ಅವರು
ಗರ್ಭಗುಡಿಗೆ ಹೋದರೂ.

13 ಮೋವಾಬ್ಯರ ವಿಷಯವಾಗಿ ಸರ್ವೇಶ್ವರ ಹಿಂದೆ ನುಡಿದ ದೇವೋಕ್ತಿಯಿದೇ:
14ಸರ್ವೇಶ್ವರ ಇಂತೆನ್ನುತ್ತಾರೆ: "ಗುಲಾಮಗಿರಿಯ ಕಟ್ಟುನಿಟ್ಟಿನ ಲೆಕ್ಕಾಚಾರದಂತೆ, ಮೂರು ವರ್ಷದೊಳಗೆ
ಮೋವಾಬಿನ ವೈಭವವು ಹೀನಾಯಕ್ಕೆ ಈಡಾಗುವುದು. ಅಲ್ಲಿನವರ ಅಗಣ್ಯ ಜನ ಸಂಖ್ಯೆಯಲ್ಲಿ
ಅಳಿದುಳಿಯುವವರು ಕೆಲವೇ ದುರ್ಬಲರು".

## ಸಿರಿಯ ಹಾಗೂ ಇಸ್ರಯೇಲಿಗೆಬರಲಿರುವ ದಂಡನೆ

**17** ದಮಸ್ಕಸ್ ವಿಷಯವಾಗಿ ದೈವೋಕ್ತಿ: "ಇದೋ, ದಮಸ್ಕಸ್ ಊರಾಗಿ ಉಳಿಯದು, ಅದೊಂದು ಹಾಳುದಿಬ್ಬವಾಗುವುದು. 2ಸಿರಿಯದ ನಗರಗಳೆಲ್ಲ ನಿರ್ಜನ ಪ್ರದೇಶಗಳಾಗಿ ಗೋಮಾಳವಾಗುವುವು. ಅಲ್ಲಿ ದನಕರುಗಳು ನಿರ್ಭಯದಿಂದ ತಂಗುವುವು. 3ಎಫ್ರಯಿಮಿಗೆ ಕೋಟೆ ಕೊತ್ತಲಗಳು, ದಮಸ್ಕಸ್ಸಿಗೆ ರಾಜ್ಯಾಡಳಿತವು ಇಲ್ಲದಂತಾಗುವುವು. ಸಿರಿಯದಲ್ಲಿ ಅಳಿದುಳಿದವರು ಅಪಮಾನಕ್ಕೀಡಾಗುವರು," ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ.

4 "ಆ ದಿನದಂದು ಇಸ್ರಯೇಲಿನ ಕೊಬ್ಬು ಕರಗುವುದು. ಅದರ ಮಹಿಮೆ ಕ್ಷಯಿಸಿ ಹೋಗುವುದು. 5ಅದು ಕೊಯ್ದು ಹೊಲದಂತಿರುವುದು, ತೆನೆಕತ್ತರಿಸಿದ ಹುಲ್ಲಿನಂತಿರುವುದು. ಕೂಳೆಯನ್ನೂ ಬಿಡದೆ ಆಯ್ದುಕೊಂಡ ರೆಫಾಯಿಮ್ ಕಣಿವೆಯಂತೆ ಇರುವುದು. 6ಓಲಿವ್ ಮರದಲ್ಲಿ ಕಾಯಿಯನ್ನು ಉದುರಿಸಿದ ನಂತರ ಅದರ ತುತ್ತ ತುದಿಯಲ್ಲಿ ಎರಡು ಮೂರೇ ಕಾಯಿಗಳಿರುವುವು: ಅದರ ಫಲಭರಿತ ರೆಂಬೆಗಳಲ್ಲಿ ನಾಲ್ಕೈದೇ ಕಾಯಿಗಳಿರುವುವು. ಅಂತೆಯೇ ಇಸ್ರಯೇಲಿನಲ್ಲಿ ಅಳಿದುಳಿಯುವವರು ಕೆಲವರು ಮಾತ್ರ" ಎನ್ನುತ್ತಾರೆ ಇಸ್ರಯೇಲಿನ ದೇವರಾದ ಸರ್ವೇಶ್ವರ.

7–8 ಆ ದಿನದಂದು ಜನರು ತಮ್ಮ ಕೈಯಿಂದ ಕಟ್ಟಿದ ಬಲಿಪೀಠಗಳನ್ನಾಗಲೀ, ಬೆರಳುಗಳಿಂದ ನಿರ್ಮಿಸಿದ ಆಶೇರಾ ದೇವತೆಯ ಸ್ತಂಭಗಳನ್ನಾಗಲೀ, ಧೂಪವೇದಿಕೆಗಳನ್ನಾಗಲೀ ಪೂಜಿಸದೆ ತಮ್ಮ ಸೃಷ್ಟಿಕರ್ತನನ್ನೇ ಲಕ್ಷಿಸಿ, ಇಸ್ರಯೇಲಿನ ಪರಮ ಪಾವನಸ್ವಾಮಿಯ ಕಡೆ ತಿರುಗಿಕೊಳ್ಳುವರು.

9 ಆ ದಿನದಂದು ನಾಡಿನ ಸುಭದ್ರವಾದ ನಗರಗಳು ನಿರ್ಜನ ಪ್ರದೇಶಗಳಾಗುವುವು. ಇಸ್ರಯೇಲರಿಗೆ ಹೆದರಿ ಅಮೋರ್ಯರು ಮತ್ತು ಹಿವ್ವಿಯರು ಬಿಟ್ಟುಹೋದ ಹಾಳು ನಿವೇಶನಗಳಂತಾಗುವುವು, ನಾಡೆಲ್ಲ ಹಾಳು ಬೀಳುವುದು.

10 ಇಸ್ರಯೇಲೇ, ನಿನ್ನ ಉದ್ಧಾರಕನಾದ ದೇವರನ್ನು ನೀನು ಸ್ಮರಿಸಲಿಲ್ಲ. ನಿನಗೆ ಆಶ್ರಯವಿತ್ತ ಪೊರೆಬಂಡೆಯನ್ನು ಮರೆತುಹೋದೆ. ಬದಲಿಗೆ ಅನ್ಯದೇವರ ಆರಾಧನೆಗಾಗಿ ನಿನಗಿಷ್ಟವಾದ ಉದ್ಯಾನವನಗಳನ್ನು ನೆಟ್ಟೆ. 11ಬೀಜವನ್ನು ನೆಟ್ಟ ದಿನವೇ ಬೇಲಿಕಟ್ಟಿದೆ. ಮಾರನೆಯ ದಿನವೇ ಅದು ಮೊಳೆಯುವಂತೆ ಮಾಡಿದೆ. ಆದರೂ ನಿನಗೆ ಸಿಗುವ ಸುಗ್ಗಿ, ವ್ಯಾಧಿ ಮತ್ತು ಅತೀವ ವ್ಯಥೆಯೇ.

## ಶತ್ರುರಾಷ್ಟ್ರಗಳ ಪರಾಜಯ

12 ಸಮುದ್ರದಂತೆ ಭೋರ್ಗರೆಯುವ, ಪ್ರಚಂಡ ಜಲಪ್ರವಾಹಗಳಂತೆ ಗರ್ಜಿಸುವ ಪ್ರಬಲ ರಾಷ್ಟ್ರಗಳ ಆರ್ಭಟವನ್ನು ಕೇಳಿ, 13ಹೌದು, ಪ್ರಚಂಡ ಜಲಪ್ರವಾಹಗಳಂತೆ ಪ್ರಬಲ ರಾಷ್ಟ್ರಗಳು ಆರ್ಭಟಿಸುತ್ತವೆ. ಆದರೆ ದೇವರು ಅವರನ್ನು ಗದರಿಸುವರು. ಅವರು ಬಿರುಗಾಳಿಗೆ ಸಿಕ್ಕಿದ ಬೆಟ್ಟದ ಹೊಟ್ಟಿನಂತೆ, ಸುಂಟರಗಾಳಿಗೆ ಸುತ್ತುವ ಧೂಳಿನಂತೆ ಓಡುವರು. 14ಬೈಗಿನಲ್ಲಿ ಇಗೋ, ಎಲ್ಲೆಲ್ಲೂ ಭಯ, ಬೆಳಗಾದಾಗ ಅವೆಲ್ಲ ಮಾಯ; ಇದೇ ನಮ್ಮನ್ನು ಸೂರೆ ಮಾಡುವವರ ಗತಿ, ನಮ್ಮನ್ನು ಕೊಳ್ಳೆ ಹೊಡೆಯುವವರ ಪಾಡು!

## ಎಥಿಯೋಪಿಯದವರಿಗೆ ಬರಲಿರುವ ದಂಡನೆ

**18** ಎಥಿಯೋಪಿಯದ ನದಿಗಳಾಚೆ ಇರುವ ಸೀಮೆಗೆ ಧಿಕ್ಕಾರ! ರೆಕ್ಕೆಗಳನ್ನು ಪಟಪಟನೆ ಬಡಿಯುವ ಮಿಡತೆಗಳಿಂದ ಕೂಡಿರುವ ನಾಡಿಗೆ ಧಿಕ್ಕಾರ! 2ಜೊಂಡು ಮರದ ದೋಣಿಗಳಲ್ಲಿ ನೈಲುನದಿಯ ಮಾರ್ಗವಾಗಿ, ರಾಯಭಾರಿಗಳನ್ನು ಕಳುಹಿಸುವ ಆ ದೇಶಕ್ಕೆ ಧಿಕ್ಕಾರ! ಶೀಘ್ರವಾಗಿ ಬರುತ್ತಿರುವ ದೂತರೇ, ಮೈಕಟ್ಟುಳ್ಳ, ಸರ್ವರಿಗೂ ಭಯಪ್ರದರಾಗಿರುವ, ಪ್ರಬಲ ಆಕ್ರಮಣಕಾರಿಗಳೂ ಆದ, ನದಿಗಳಿಂದ ಸೀಳಿಹೋಗಿರುವ ರಾಷ್ಟ್ರದವರ ಬಳಿಗೆ ತೆರಳಿ.

3 ಸಮಸ್ತ ಭೂನಿವಾಸಿಗಳೇ, ಜಗದ ಸಕಲ ಜನಾಂಗಗಳೇ, ಕೇಳಿ: ಬೆಟ್ಟಗಳ ಮೇಲೆ ಧ್ವಜಾರೋಹಣ ಮಾಡುವಾಗ ಕಣ್ಣಿಟ್ಟು ನೋಡಿ, ತುತೂರಿಯನ್ನು ಊದುವಾಗ ಕಿವಿಗೊಟ್ಟು ಕೇಳಿ, 4ಸರ್ವೇಶ್ವರ ನನಗೆ

ಹೀಗೆಂದು ಹೇಳಿದ್ದಾರೆ: “ಬಿಸಿಹಗಲಿನ ಸೂರ್ಯನಂತೆ, ಕೊಯಿಲುಗಾಲದಲ್ಲಿರುವ ಮಂಜಿನಂತೆ, ನಾನು ನನ್ನ
ನಿವಾಸ ಸ್ಥಾನದಿಂದ ಸುಮ್ಮನೆ ನೋಡುತ್ತಿರುವೆನು.” 5ಗಿಡದಲ್ಲಿ ಮೊಗ್ಗು ಕಚ್ಚಿ, ಹೂ ಅರಳಿ, ಹೀಚು
ದೋರೆಗಾಯಿಯಾಗುತ್ತಿರುವಾಗ, ಕೊಯಿಲು ಕಾಲಕ್ಕೆ ಮುಂಚೆಯೇ ಅದರ ಕೊಂಬೆಗಳನ್ನೂ ಕವಲುಗಳನ್ನೂ
ಶತ್ರುಗಳು ಕತ್ತರಿಸಿ ಹಾಕುವರು. 6ಹೀಗೆ ಕಡಿಯಲ್ಪಟ್ಟವರ ಶವಗಳೆಲ್ಲ ರಣಹದ್ದುಗಳ ಮತ್ತು ಕಾಡುಮೃಗಗಳ
ಪಾಲಾಗುವುವು; ಪಕ್ಷಿಗಳಿಗೆ ಬೇಸಿಗೆಯ ಆಹಾರವಾಗುವುವು, ಪ್ರಾಣಿಗಳಿಗೆ ಚಳಿಗಾಲದ ಉಣಿಸಾಗುವುವು.
7 ಆಗ ಎತ್ತರವಾದ, ನುಣುಪಾದ ಮೈಕಟ್ಟುಳ್ಳ, ಸರ್ವರಿಗೂ ಭಯಪ್ರದರಾದ, ಪ್ರಬಲ
ಆಕ್ರಮಣಕಾರಿಗಳಾದ, ನದಿಗಳಿಂದ ಸೀಳಿಹೋಗಿರುವ ರಾಷ್ಟ್ರದವರು ಸರ್ವೇಶ್ವರಸ್ವಾಮಿಯ ಹೆಸರಾಂತ
ಸಿಯೋನ್ ಪರ್ವತಕ್ಕೆ ಬರುವರು. ಸೇನಾಧೀಶ್ವರ ಸರ್ವೇಶ್ವರ ಅವರಿಂದ ಕಾಣಿಕೆಗಳನ್ನು ಸ್ವೀಕರಿಸುವರು.

### ಈಜಿಪ್ಟಿಗೆ ಬರಲಿರುವ ದಂಡನೆ

ಈಜಿಪ್ಟಿನ ವಿಷಯವಾಗಿ ದೈವೋಕ್ತಿ:

**19** ಇಗೋ, ಸರ್ವೇಶ್ವರ ವೇಗವಾಗಿ ಚಲಿಸುವ ಮೇಘಗಳ ಮೇಲೆ ಈಜಿಪ್ಟಿಗೆ ಬರುವರು. ಅವರ ಮುಂದೆ
ಈಜಿಪ್ಟಿನ ವಿಗ್ರಹಗಳು ನಡುಗುವುವು. ಈಜಿಪ್ಟಿನವರ ಹೃದಯ ಕರಗಿ ನೀರಾಗುವುದು. 2ಸರ್ವೇಶ್ವರ
ಇಂತೆನ್ನುತ್ತಾರೆ: “ನಾನು ಈಜಿಪ್ಟಿನವರಲ್ಲಿ ಒಳ ಜಗಳವನ್ನು ಎಬ್ಬಿಸುವೆನು. ಅಣ್ಣತಮ್ಮಂದಿರು,
ನೆರೆಹೊರೆಯವರು, ನಗರನಗರಗಳು, ರಾಜ ರಾಜರುಗಳು ಪರಸ್ಪರ ಕಾದಾಡುವರು. 3ಈಜಿಪ್ಟಿನವರ ಚೈತನ್ಯ
ಉಡುಗಿಹೋಗುವುದು. ಅವರ ಯೋಜನೆಗಳು ಭಂಗವಾಗುವುವು. ಜನರು ವಿಗ್ರಹಗಳನ್ನು, ಮಂತ್ರಗಾರರನ್ನು,
ಪ್ರೇತವಿಚಾರಕರನ್ನು, ಕಣಿಹೇಳುವವರನ್ನು ಆಶ್ರಯಿಸುವರು.”
4 “ಇದಲ್ಲದೆ ಈಜಿಪ್ಟಿನವರನ್ನು ಕ್ರೂರ ಅರಸನ ವಶಕ್ಕೆ ಒಪ್ಪಿಸುವೆನು. ರಾಜನು ದಬ್ಬಾಳಿಕೆಯಿಂದ
ಅವರನ್ನು ಆಳುವನು. ಇದು ಸರ್ವಶಕ್ತ ಸರ್ವೇಶ್ವರನ ನುಡಿ.”
5 ನೈಲ್ ನದಿಯ ನೀರು ಬತ್ತಿಹೋಗುವುದು. ಅದರ ಪ್ರಭಾವ ಕ್ರಮೇಣ ಒಣಗಿಹೋಗುವುದು.
6ಕಾಲುವೆಗಳು ನಾರುವುವು. ಈಜಿಪ್ಟಿನ ಉಪನದಿಗಳು ಇಳಿದು ಇಂಗಿಹೋಗುವುವು. 7ನದಿಯ ತೀರಗಳು
ಬರಡಾಗುವುವು. ನದಿಯಲ್ಲಿ ಬಿದ್ದ ಬೀಜಗಳೆಲ್ಲ ಒಣಗಿ ಗಾಳಿಗೆ ತೂರಿಹೋಗುವುವು. 8ಬೆಸ್ತರು
ಕಣ್ಣೀರಿಡುವರು; ಗಾಳಹಾಕುವವರು ಗೋಳಿಡುವರು; ಬಲೆಬೀಸುವವರು ಸೊರಗಿ ಹೋಗುವರು.
9ನಯವಾದ ನಾರುಮಡಿಯನ್ನು ಮತ್ತು ಬಿಳೀ ಬಟ್ಟೆಯನ್ನು ನೇಯುವವರೆಲ್ಲ ಹತಾಶರಾಗುವರು. 10ನಾಡಿನ
ಜವಳಿ ವ್ಯಾಪಾರಿಗಳು, ಕೂಲಿಯಾಳುಗಳು ಚಿಂತಾಕ್ರಾಂತರಾಗುವರು.
11 “ಚೋಯನಿನ ಅಧಿಪತಿಗಳು ಮಂದಮತಿಗಳು. ಫರೋಹನ ಮುಖ್ಯಮಂತ್ರಿಗಳು ಕೊಡುವುದು
ಹುಚ್ಚು ಆಲೋಚನೆಗಳನ್ನೇ. ‘ನಾವು ಪುರಾತನ ವಿದ್ವಾಂಸರ ವಂಶಜರು. ಊಜರ್ಷಿಗಳ ಸಂತತಿಯವರು’
ಎಂದು ನೀವು ಫರೋಹನಿಗೆ ಹೇಳಲು ಸಾಧ್ಯವೇ? 12ಈಜಿಪ್ಟಿನ ಅರಸನೇ, ನಿನ್ನ ವಿದ್ವಾಂಸರೆಲ್ಲಿ? ಅವರೇ
ನಿನಗೆ ತಿಳುವಳಿಕೆ ಕೊಡಲಿ. ಈಜಿಪ್ಟಿನ ವಿರೋಧವಾಗಿ ಸೇನಾಧೀಶ್ವರ ಸರ್ವೇಶ್ವರ ಯೋಚಿಸಿರುವುದನ್ನು
ಅವರೇ ನಿನಗೆ ತಿಳಿಯಪಡಿಸಲಿ. 13ಚೋಯನಿನ ಅಧಿಪತಿಗಳು ಮಂದಮತಿಗಳು. ನೋಫಿನ
ಮುಖ್ಯಮಂತ್ರಿಗಳು ಮೋಸಗಾರರು. ಈಜಿಪ್ಟ್ ಜನಾಂಗದ ಮೂಲೆಗಲ್ಲಿನಂತಿದ್ದವರೇ ಜನರನ್ನು ತಪ್ಪುದಾರಿಗೆ
ಎಳೆದಿದ್ದಾರೆ. 14ಸರ್ವೇಶ್ವರ ಅವರ ಮನಸ್ಸಿನಲ್ಲಿ ಚಂಚಲಭಾವವನ್ನು ಮೂಡಿಸಿದ್ದಾರೆ. ಅಮಲೇರಿದವನು
ಕಕ್ಕುತ್ತಾ ಅತ್ತಿತ್ತ ಓಲಾಡುವ ಪ್ರಕಾರ ಈಜಿಪ್ಟಿನವರು ತಮ್ಮ ಒಂದೊಂದು ಕೆಲಸಕಾರ್ಯದಲ್ಲೂ
ಅಸ್ಥಿರರಾಗಿರುವಂತೆ ಮಾಡಿದ್ದಾರೆ. 15ಹೀಗೆ ಈಜಿಪ್ಟಿಗೆ ತಲೆಯಾಗಲಿ ಬಾಲವಾಗಲಿ, ತಾಳೆಯಾಗಲಿ
ತೃಣವಾಗಲಿ ನೆರವಾಗಲು ಸಾಧ್ಯವಿಲ್ಲದಂತಾಗಿದೆ.

### ಈಜಿಪ್ಟ್, ಅಸ್ಸೀರಿಯದವರ ಪರಿವರ್ತನೆ

16 ಆ ದಿನದಂದು ಈಜಿಪ್ಟಿನವರು ಹೆಂಗಸರಂತೆ ಅಂಜುಬುರುಕರಾಗುವರು; ಸೇನಾಧೀಶ್ವರ
ಸರ್ವೇಶ್ವರ ತಮ್ಮನ್ನು ದಂಡಿಸಲು ಕೈಯೆತ್ತುವಾಗ ಅವರು ಭಯಪಟ್ಟು ನಡುಗುವರು. 17ಜುದೇಯ ನಾಡು

ಈಜಿಪ್ಟಿನವರಿಗೆ ಭಯಂಕರವಾಗಿರುವುದು. ಆ ನಾಡಿನ ಹೆಸರನ್ನು ಕೇಳಿದ್ದೇ ತಡ, ಪ್ರತಿಯೊಬ್ಬನೂ ಬೆಚ್ಚಿಬೀಳುವನು. ಪ್ರತಿಯೊಬ್ಬನೂ ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಈಜಿಪ್ಟಿನ ವಿರುದ್ಧ ಮಾಡಿರುವ ಸಂಕಲ್ಪವನ್ನು ತಿಳಿದು ನಿಬ್ಬೆರಗಾಗುವನು.

18 ಆ ದಿನದಂದು ಈಜಿಪ್ಟಿನ ನಾಡಿನಲ್ಲಿ ಐದು ಪಟ್ಟಣಗಳಲ್ಲಿ ಕಾನಾನಿನ (ಹಿಬ್ರು) ಭಾಷೆಯನ್ನಾಡುವ ಜನರು ತುಂಬಿರುವರು. ಅವರು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ಶರಣರೆಂದು ಪ್ರಮಾಣ ಮಾಡುವರು. ಆ ಪಟ್ಟಣಗಳಲ್ಲಿ ಒಂದಕ್ಕೆ "ರವಿಪುರ" ಎಂಬ ಹೆಸರಿರುವುದು.

19 ಆ ದಿನದಂದು ಈಜಿಪ್ಟಿನ ನಡುವೆ ಸರ್ವೇಶ್ವರಸ್ವಾಮಿಗೆ ಒಂದು ಬಲಿಪೀಠವಿರುವುದು ಮತ್ತು ನಾಡಿನ ಗಡಿಯಲ್ಲಿ ಸ್ವಾಮಿಯ ಸ್ಥಂಭ ಇರುವುದು. 20ಇವು ಈಜಿಪ್ಟ್ ದೇಶಕ್ಕೆ ಸರ್ವೇಶ್ವರ ಸ್ವಾಮಿಯ ಸಂಕೇತವಾಗಿಯೂ ಸಾಕ್ಷಿಯಾಗಿಯೂ ಇರುವುವು. ಅವರು ತಮ್ಮನ್ನು ಬಾಧಿಸುವವರ ವಿರುದ್ಧ ಸರ್ವೇಶ್ವರಸ್ವಾಮಿಗೆ ಮೊರೆಯಿಟ್ಟಾಗ, ಸ್ವಾಮಿಯು ವೀರನಾದ ರಕ್ಷಕನೊಬ್ಬನನ್ನು ಕಳುಹಿಸುವರು. ಆತನು ಆ ಜನರನ್ನು ಬಿಡುಗಡೆಮಾಡಿ ಉದ್ಧರಿಸುವನು. 21ಸರ್ವೇಶ್ವರಸ್ವಾಮಿಯೇ ಈಜಿಪ್ಟಿನವರಿಗೆ ತಿಳಿಯಪಡಿಸುವರು. ಜನರು ಸ್ವಾಮಿಯನ್ನು ಅರಿತುಕೊಂಡು, ಯಜ್ಞನೈವೇದ್ಯಗಳನ್ನು ಕಾಣಿಕೆಯಾಗಿ ಸಮರ್ಪಿಸುವರು, ಹೊತ್ತ ಹರಕೆಗಳನ್ನು ನೆರವೇರಿಸುವರು. 22ಇದಲ್ಲದೆ ಸರ್ವೇಶ್ವರ ಈಜಿಪ್ಟಿನವರನ್ನು ದಂಡಿಸುವರು, ಗಾಯಗೊಳಿಸಿದರೂ ಗುಣಪಡಿಸುವರು. ಈಜಿಪ್ಟಿನವರು ಸ್ವಾಮಿಯ ಕಡೆಗೆ ತಿರುಗಿಕೊಳ್ಳುವರು. ಸ್ವಾಮಿ ಅವರ ಮೊರೆಯನ್ನು ಆಲಿಸಿ ಅವರನ್ನು ಗುಣಪಡಿಸುವರು.

23 ಆ ದಿನದಂದು ಈಜಿಪ್ಟ್ ಮತ್ತು ಅಸ್ಸೀರಿಯದ ನಡುವೆ ಹೆದ್ದಾರಿ ಇರುವುದು. ಅಸ್ಸೀರಿಯದವರು ಈಜಿಪ್ಟಿಗೂ ಈಜಿಪ್ಟಿನವರು ಅಸ್ಸೀರಿಯಕ್ಕೂ ಸಂಚಾರ ಮಾಡುವರು. ಈಜಿಪ್ಟಿನವರು ಅಸ್ಸೀರಿಯದವರೊಡನೆ ಸೇರಿ ಸರ್ವೇಶ್ವರಸ್ವಾಮಿಯನ್ನು ಆರಾಧಿಸುವರು. 24ಆ ದಿನದಂದು ಇಸ್ರಯೇಲ್ ಈಜಿಪ್ಟಿನೊಂದಿಗೂ ಅಸ್ಸೀರಿಯದೊಂದಿಗೂ ಸೇರುವುದು. ಈ ಮೂರು ರಾಷ್ಟ್ರಗಳು ಇಡೀ ಜಗಕ್ಕೆ ಆಶೀರ್ವಾದದ ಕೇಂದ್ರವಾಗಿ ಪರಿಣಮಿಸುವುವು. 25"ನನ್ನ ಪ್ರಜೆಯಾದ ಈಜಿಪ್ಟ್, ನನ್ನ ಕೈಚಳಕದ ಅಸ್ಸೀರಿಯಾ, ನನ್ನ ಸೊತ್ತಾದ ಇಸ್ರಯೇಲ್ ನಿಮಗೆ ಶುಭಮಂಗಳ," ಎಂದು ಅವುಗಳನ್ನು ಸರ್ವಶಕ್ತ ಸರ್ವೇಶ್ವರ ಸ್ವಾಮಿ ಆಶೀರ್ವದಿಸುವರು.

### ಈಜಿಪ್ಟಿನ ಸುಲಿಗೆ – ಪ್ರವಾದಿಯ ಮುನ್ಸೂಚನೆ

**20** ಅಸ್ಸೀರಿಯಾದ ಅರಸನಾದ ಸರ್ಗೋನನು ಕಳುಹಿಸಿದ ದಳಪತಿ, ಫಿಲಿಷ್ಟಿಯರ ಪಟ್ಟಣವಾದ ಅಷ್ಡೋದಿಗೆ ಬಂದು ಅದನ್ನು ಮುತ್ತಿ ಆಕ್ರಮಿಸಿಕೊಂಡನು. 2ಅದಕ್ಕೆ ಮೂರು ವರ್ಷಗಳಿಗೆ ಮುಂಚೆಯೆ ಆಮೋಚನ ಮಗ ಯೆಶಾಯನಿಗೆ ಸರ್ವೇಶ್ವರ ಮುನ್ಸೂಚನೆಯಾಗಿ ಹೀಗೆಂದು ಹೇಳಿದ್ದರು: "ಎದ್ದೇಳು, ಸೊಂಟಕ್ಕೆ ಕಟ್ಟಿರುವ ಗೋಣಿತಟ್ಟನ್ನು ಬಿಚ್ಚು, ಕಾಲಿಗೆ ಹಾಕಿರುವ ಕೆರವನ್ನು ಕಳಚು." ಅಂತೆಯೇ ಯೆಶಾಯನು ದಿಗಂಬರನಾಗಿ ಬರಿಗಾಲಿನಲ್ಲೇ ತಿರುಗಾಡುತ್ತಿದ್ದನು. 3ಆಗ ಸರ್ವೇಶ್ವರ: "ನನ್ನ ದಾಸ ಯೆಶಾಯನು ಈಜಿಪ್ಟಿನ ಮತ್ತು ಸುಡಾನಿನ ವಿನಾಶಕ್ಕೆ ಸೋಜಿಗದ ಗುರುತಾಗಿ ಮೂರು ವರ್ಷ ಬಟ್ಟೆಯಿಲ್ಲದೆ ಬರಿಗಾಲಿನಲ್ಲಿ ತಿರುಗಾಡಿದನು. 4ಅದೇ ಪ್ರಕಾರ ಅಸ್ಸೀರಿಯದ ಅರಸನು ಈಜಿಪ್ಟಿನ ಸೆರೆಯಾಳುಗಳನ್ನೂ ಸುಡಾನಿನ ಕೈದಿಗಳನ್ನೂ – ದೊಡ್ಡವರು ಚಿಕ್ಕವರು ಎನ್ನದೆ ಎಲ್ಲರನ್ನೂ ಬಟ್ಟೆಯಿಲ್ಲದೆ ಬೆತ್ತಲೆಯಾಗಿಸಿ, ಬರಿಗಾಲಿನಲ್ಲೇ ಸೆರೆಮನೆಗೆ ನಡೆಯುವಂತೆ ಮಾಡುವನು. ಹೀಗೆ ಈಜಿಪ್ಟಿನ ನಿವಾಸಿಗಳನ್ನು ಮಾನಭಂಗಕ್ಕೆ ಗುರಿಪಡಿಸುವನು. 5ಸುಡಾನನ್ನು ನೆಚ್ಚಿಕೊಂಡಿದ್ದವರು ಮತ್ತು ಈಜಿಪ್ಟನ್ನು ಕುರಿತು ಕೊಚ್ಚಿಕೊಳ್ಳುತ್ತಿದ್ದವರು ನಾಚಿಕೆಪಟ್ಟು ನಿರಾಶೆಗೊಳ್ಳುವರು. 6ಆ ದಿನದಂದು (ಫಿಲಿಷ್ಟಿಯದ) ಕರಾವಳಿಯಲ್ಲಿ ವಾಸಿಸುವರು. 'ಅಯ್ಯೋ ಅಸ್ಸೀರಿಯರ ಅರಸನಿಂದ ನಾವು ಬಿಡುಗಡೆಯಾಗಬೇಕೆಂದು ಯಾರ ಆಶ್ರಯವನ್ನು ನಿರೀಕ್ಷಿಸಿಕೊಂಡಿದ್ದೇವೋ ಅವರಿಗೇ ಈ ಗತಿ ಬಂತಲ್ಲಾ; ಇನ್ನು ನಮ್ಮಂಥವರು ಉದ್ಧಾರವಾಗುವುದು ಹೇಗೆ?' ಎಂದುಕೊಳ್ಳುವರು."

## ಬಾಬಿಲೋನಿನ ಪತನ

ಕಡಲಡವಿಯ ಕುರಿತು ದೈವೋಕ್ತಿ:

**21** ದಕ್ಷಿಣ ಸೀಮೆಯ ನಾಡನ್ನು ಕಸದಂತೆ ಗುಡಿಸುವ ಸುಂಟರಗಾಳಿಯ ಹಾಗೆ, ಅರಣ್ಯದ ಕಡೆಯ ಭಯಂಕರ ನಾಡಿನಿಂದ ಗಂಡಾಂತರ ಬರಲಿದೆ. 2ಘೋರ ದರ್ಶನವೊಂದು ನನಗೆ ಕಂಡುಬಂತು: ದ್ರೋಹಿ ದ್ರೋಹವೆಸಗುತ್ತಿದ್ದಾನೆ. ಕೊಳ್ಳೆಗಾರ ಕೊಳ್ಳೆಹೊಡೆಯುತ್ತಿದ್ದಾನೆ. ಏಲಾಮೇ ಮುನ್ನುಗ್ಗು! ಮೇದ್ಯವೇ, ಮುತ್ತಿಗೆಹಾಕು! ಬಾಬಿಲೋನಿನಿಂದ ನಿನಗೊದಗಿದ ಗೋಳಾಟವನ್ನು ನಿಲ್ಲಿಸುತ್ತೇನೆ.

3 ನಾನು ಕಂಡ ಈ ಭೀಕರ ದರ್ಶನದಿಂದ ನನಗೆ ಸೊಂಟ ಮುರಿದಂತಾಗಿದೆ. ಹೆರಿಗೆಯಂಥ ಬೇನೆಯುಂಟಾಗಿದೆ. ಕಿವಿ ಕಿತ್ತುಹೋಗುವಂತಿದೆ. ಕಣ್ಣು ಕುರುಡಾಗುವಂತಿದೆ. 4ಹೃದಯ ಬಡಿದುಕೊಳ್ಳುತ್ತಿದೆ. ಭಯದಿಂದ ಮೈ ನಡುಗುತ್ತಿದೆ. ನಾ ಬಯಸಿದ ಸಂಜೆಯೇ ನನಗೆ ಅಂಜಿಕೆ ತರಬೇಕೆ?

5 ಔತಣ ಸಿದ್ಧವಾಗಿದೆ, ಚಾಪೆ ಹಾಸಿದ್ದಾರೆ. ಅತಿಥಿಗಳು ಭೋಜನ ಮಾಡುತ್ತಾ ಕುಡಿಯುತ್ತಾ ಇದ್ದಾರೆ. ಇದೋ, ಇದ್ದಕ್ಕಿದಂತೆ ಕೂಗೊಂದು ಕೇಳಿಬರುತ್ತಿದೆ: "ಪ್ರಭುಗಳೇ, ಎದ್ದೇಳಿ, ಗುರಾಣಿಗಳನ್ನು ಅಣಿಗೊಳಿಸಿರಿ." 6ಆಗ (ಸರ್ವೇಶ್ವರ ಸ್ವಾಮಿ) ನನಗೆ ಹೀಗೆಂದರು: "ಹೋಗು, ಪಹರೆಯೊಬ್ಬನನ್ನು ಇಡು. ಅವನು ಕಂಡದ್ದನ್ನು ವರದಿ ಮಾಡಲಿ. 7ಜೋಡಿಜೋಡಿಯಾಗಿ ಬರುವ ಸವಾರರ ಪಂಕ್ತಿಯನ್ನೂ ಕತ್ತೆಗಳ ಹಾಗೂ ಒಂಟೆಗಳ ಸಾಲನ್ನೂ ನೋಡಿದಾಗ, ಎಚ್ಚರಿಕೆಯಿಂದ ಗಮನಿಸಲಿ!"

8 ಬಳಿಕ ಪಹರೆಯವನು ಸಿಂಹಧ್ವನಿಯಿಂದ: "ಸ್ವಾಮಿ, ಹಗಲೆಲ್ಲಾ ಕಾವಲು ಗೋಪುರದಲ್ಲಿ ನಿಂತಿದ್ದೇನೆ. ರಾತ್ರಿಯಲ್ಲೂ ಕಾವಲುಗೈದಿದ್ದೇನೆ. 9ಇಗೋ, ಸವಾರರು ಜೋಡಿಜೋಡಿಯಾಗಿ ಬರುತಿಹರು" ಎಂದು ಕೂಗಿ ಹೇಳುತ್ತಿದ್ದಾನೆ. ಅನಂತರ ಅವನು, "ಬಾಬಿಲೋನ್ ಬಿದ್ದು ಹೋಯಿತು. ಅದರ ಪೂಜಾ ವಿಗ್ರಹಗಳೆಲ್ಲ ಒಡೆದು ಬೀದಿಪಾಲಾಗಿವೆ" ಎಂದನು.

10 ನನ್ನ ಪ್ರಜೆಯೇ, ನನ್ನ ಕಣಜದ ದವಸವೇ, ಬಡಿತಕ್ಕೆ ಈಡಾದ ಜನರೇ, ಇಸ್ರಯೇಲರ ದೇವರಾದ ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯಿಂದ ನಾನು ಕೇಳಿದ್ದನ್ನೇ ತಿಳಿಸುತ್ತಿದ್ದೇನೆ.

## ಎದೋಮನ್ನು ಕುರಿತ ಸಂದೇಶ

11 'ದೂಮ' ಕುರಿತ ದೈವೋಕ್ತಿ:

"ಪಹರೆಯವನೇ, ರಾತ್ರಿ ಕಳೆಯುವುದು ಯಾವಾಗ? ಪಹರೆಯವನೇ, ಕತ್ತಲು ಕಳೆಯುವುದು ಯಾವಾಗ?" ಎಂಬ ಕೂಗು ಸೇಯಾರಿನಿಂದ ನನಗೆ ಕೇಳಿಬಂತು. 12ಅದಕ್ಕೆ ಪಹರೆಯವನು, "ಹಗಲು ಬರುತ್ತಿದೆ ಮತ್ತೆ ರಾತ್ರಿಯೂ ಬರುತ್ತದೆ. ಬೇಕಾದರೆ ಆಮೇಲೆ ಬಂದು ವಿಚಾರಿಸಿರಿ," ಎಂದನು.

## ಅರೇಬಿಯ ಕುರಿತ ಸಂದೇಶ

13 ಅರೇಬಿಯ ವಿಷಯವಾದ ದೈವೋಕ್ತಿ: "ದೇದಾದಿನ ಜನರೇ ಒಂಟೆ ಸವಾರರೇ, ಅರೇಬಿಯದ ಮರುಭೂಮಿಯಲ್ಲಿ ಬೀಡು ಬಿಡುವವರೇ, 14ಬಾಯಾರಿದವರಿಗೆ ನೀರನ್ನು ಕೊಡಿ. ತೇಮಾ ನಾಡಿನ ನಿವಾಸಿಗಳೇ, ವಲಸೆ ಬಂದವರಿಗೆ ಉಣಲು ಕೊಡಿ. 15ಅವರೆಲ್ಲ ಖಡ್ಗದಿಂದ, ಹಿರಿದ ಕತ್ತಿಯಿಂದ, ಹೂಡಿದ ಬಿಲ್ಲಿನಿಂದ, ಯುದ್ಧದ ಬಾಧೆಯಿಂದ ತಪ್ಪಿಸಿಕೊಂಡು ಓಡಿ ಬಂದಿರುವರು."

16 ಸರ್ವೇಶ್ವರ ನನಗೆ ಹೀಗೆಂದರು: "ಗುಲಾಮಗಿರಿಯ ವಾಯಿದೆಯ ಪ್ರಕಾರ, ಒಂದು ವರ್ಷದೊಳಗೆ ಕೇದಾರಿನ ಸಕಲ ವೈಭವ ಗತಿಸಿ ಹೋಗುವುದು. 17ಅಲ್ಲಿನ ಬಿಲ್ಲುಗಾರರಲ್ಲಿ ಉಳಿದವರಾಗಲೀ, ಕೇದಾರಿನ ರಣವೀರರಾಗಲೀ, ವಿರಳರಾಗುವರು. ಇಸ್ರಯೇಲರ ದೇವರಾದ ಸರ್ವೇಶ್ವರಸ್ವಾಮಿ ನಾನೇ ಇದನ್ನು ನುಡಿದಿದ್ದೇನೆ."

## ಜೆರುಸಲೇಮನ್ನು ಕುರಿತ ಸಂದೇಶ

‘ದಿವ್ಯದರ್ಶನದ ಕಣಿವೆ’ಯ ಕುರಿತ ದೈವೋಕ್ತಿ:

**22** ಏನಾಯಿತು? ಜನರೆಲ್ಲರೂ ಮನೆ ಮಾಳಿಗೆಗಳನ್ನು ಏರಿ ಸಡಗರದಿಂದ ಇರುವುದೇಕೆ? 2ಊರಿಗೆ
ಊರೇ ಆರ್ಭಟಿಸುತ್ತಿರುವಂತಿದೆ! ಯುದ್ಧದಲ್ಲಿ ಸತ್ತ ನಿಮ್ಮ ಯೋಧರೆಲ್ಲ ಕಾದಾಟದಿಂದ ಮಡಿದವರಲ್ಲ.
3ನಿಮ್ಮ ಮುಖಂಡರೆಲ್ಲ ಒಟ್ಟಿಗೆ ಪಲಾಯನಗೈದರು; ಒಂದೇ ಒಂದು ಬಾಣವನ್ನು ಬಿಡುವುದಕ್ಕೆ ಮುಂಚೆ
ಸೆರೆಹೋದರು. ದೂರಕ್ಕೆ ಪಲಾಯನ ಗೈದಿದ್ದರೂ ಅವರೆಲ್ಲರೂ ಶತ್ರುವಿನ ಕೈಗೆ ಸಿಕ್ಕಿ ಬಿದ್ದಿದ್ದಾರೆ.
4“ಆದ್ದರಿಂದ ನನ್ನ ಕಡೆ ನೋಡಬೇಡಿ. ನನ್ನನ್ನು ಸಂತೈಸಲು ಪ್ರಯತ್ನಿಸಬೇಡಿ. ಸತ್ತುಹೋದ ನನ್ನ
ಜನರಿಗಾಗಿ ಕಣ್ಣೀರು ಸುರಿಸುತ್ತಿರುವೆನು” ಎಂದೆ ನಾನು. 5ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಕಳುಹಿಸಿರುವ
ದಿನವಿದು – ದಿವ್ಯದರ್ಶನದ ಕಣಿವೆಯ ದಿನ, ಗಲಿಬಿಲಿಯ ದಿನ, ತುಳಿದಾಟದ ದಿನ, ಭಯಭ್ರಾಂತಿಯ
ದಿನ. ಕೋಟೆಕೊತ್ತಲಗಳನ್ನು ಹೊಡೆದುರುಳಿಸುವ ದಿನ. ಕೂಗಾಟವು ಬೆಟ್ಟದಲ್ಲಿ ಮಾರ್ದನಿಸುವ ದಿನ!

6 ಏಲಾಮಿನ ಸೈನಿಕರು ಬಿಲ್ಲುಬಾಣಗಳನ್ನೂ, ರಥಾಶ್ವಗಳನ್ನೂ ಸಜ್ಜುಗೊಳಿಸಿರುವರು. ಕೀರಿನವರು
ಗುರಾಣಿಗಳನ್ನು ಅಣಿಗೊಳಿಸಿರುವರು. 7ನಿಮ್ಮ ಫಲವತ್ತಾದ ತಗ್ಗುಪ್ರದೇಶಗಳು ರಥಗಳಿಂದ ತುಂಬಿರುವುವು.
ಅಶ್ವದಳಗಳು ಪುರದ್ವಾರದ ಬಳಿ ಕಾವಲು ನಿಂತಿರುವುವು. 8ಜುದೇಯದ ಕೋಟೆ ನೆಲಸಮವಾಯಿತು.

ಆಗ ಲೆಬನೋನಿನ ವನಮಂದಿರದ ಕಡೆಗೆ ಕೈ ಚಾಚಿದಿರಿ. 9ದಾವೀದನ ಕೋಟೆಯ ಬಿರುಕುಗಳು
ಬಹಳವೆಂಬುದನ್ನು ಗಮನಿಸಿದಿರಿ. ಕೆಳಗಿನ ಕೊಳಕ್ಕೆ ನೀರನ್ನು ಹಾಯಿಸಿದಿರಿ. 10ಜೆರುಸಲೇಮಿನ ಮನೆಗಳನ್ನು
ಪರೀಕ್ಷಿಸಿದಿರಿ. ಕೋಟೆಯ ಗೋಡೆಗಳನ್ನು ಭದ್ರಪಡಿಸಲು ಆ ಮನೆಗಳನ್ನು ಕೆಡವಿಬಿಟ್ಟಿರಿ. 11ಎರಡು
ಗೋಡೆಗಳ ನಡುವೆ ಹಳೆಯ ಕೊಳದಿಂದ ಹರಿಯುವ ನೀರಿಗಾಗಿ ಜಲಾಶಯವನ್ನು ಕಟ್ಟಿದಿರಿ. ಆದರೆ
ಪುರಾತನ ಕಾಲದಿಂದ ನಿಯೋಜಿಸಿ ಇದನ್ನೆಲ್ಲಾ ನಡೆಸಿದಾತನ ಕಡೆಗೆ ಗಮನಕೊಡದೆ ಹೋದಿರಿ.

12 ಎಂದೇ ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಆ ದಿನದಂದು ನಿಮಗೆ ಆಜ್ಞಾಪಿಸಿ: “ನೀವು ಅತ್ತು
ಪ್ರಲಾಪಿಸಬೇಕು, ತಲೆಬೋಳಿಸಿಕೊಂಡು ಗೋಣಿತಟ್ಟನ್ನು ಉಟ್ಟುಕೊಳ್ಳಬೇಕು” ಎಂದು ಹೇಳಿದರು. 13ಆದರೆ
ನೀವು ಹರ್ಷಾನಂದಗೊಂಡಿರಿ. ದನಕರುಗಳನ್ನು ಕೊಯ್ದಿರಿ, ಮಾಂಸವನ್ನು ಭುಜಿಸಿ ಮದ್ಯಪಾನ ಮಾಡಿದಿರಿ.
“ಇಂದೇ ತಿಂದು ಕುಡಿಯೋಣ. ನಾಳೆ ಬರುತ್ತದೆ ಮರಣ” ಎಂದು ಹೇಳಿಕೊಂಡಿರಿ.

14 ಇಂತಿರಲು, ಸೇನಾಧೀಶ್ವರ ಸರ್ವೇಶ್ವರ ನನ್ನ ಕಿವಿಯಲ್ಲಿ ಉಸುರಿದ್ದೇನೆಂದರೆ: “ಇವರು
ಸಾಯುವತನಕ ಇವರಿಗೆ ಪಾಪಕ್ಷಮೆ ದೊರಕುವುದಿಲ್ಲ. ಸೇನಾಧೀಶ್ವರ ಸರ್ವೇಶ್ವರಸ್ವಾಮಿಯಾದ ನಾನೇ
ಇದನ್ನು ನುಡಿದಿದ್ದೇನೆ.”

## ಮೇಲ್ವಿಚಾರಕನಾದ ಶೆಬ್ನನಿಗೆ ಎಚ್ಚರಿಕೆ

15 ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಹೀಗೆ ನುಡಿದಿದ್ದಾರೆ: “ಹೋಗು, ಅರಮನೆಯ ಮೇಲ್ವಿಚಾರಕ
ಶೆಬ್ನ ಎಂಬ ಅಧ್ಯಕ್ಷನಿಗೆ ಹೀಗೆಂದು ಹೇಳು: 16ನಿನಗೇನು ಕೆಲಸವಿಲ್ಲ? ನಿನಗಾರಿಹರಿಲ್ಲಿ?
ತೋಡಿಸಿಕೊಂಡಿರುವೆಯಾ ಗೂಡನ್ನಿಲ್ಲಿ? ಗೋರಿಯನ್ನು ಕೊರೆಯಿಸಿ ಕೊಂಡಿರುವೆಯಾ ಎತ್ತರದ
ಬಂಡೆಯಲ್ಲಿ? ಕೆತ್ತಿಸಿಕೊಂಡಿರುವೆಯಾ ನಿನಗೊಂದು ನಿವಾಸವನಿಲ್ಲಿ? 17ಎಲೈ ಬಲಾಢ್ಯನೇ, ಸರ್ವೇಶ್ವರ
ನಿನ್ನನ್ನು ಬಿಗಿಹಿಡಿದು ದೂರಕ್ಕೆಸೆಯುವರು, 18ಚೆಂಡಿನಂತೆ ಉಂಡೆ ಮಾಡಿ ನಿನ್ನನ್ನು ಗಿರ್ರನೆ ಸುತ್ತಿಸಿ
ವಿಸ್ತಾರವಾದ ಬಯಲಿಗೆ ಬಿಸಾಡುವರು. ದಣಿಯ ಮನೆಗೆ ಅಪಮಾನ ತಂದವನೇ, ನೀನು ಸಾಯುವುದು
ಅಲ್ಲೇ. 19ನಿನ್ನನ್ನು ಕೆಲಸದಿಂದ ತೆಗೆದುಬಿಡುವರು, ನಿನ್ನ ಪದವಿಯಿಂದ ತೆಗೆದುಹಾಕುವರು.

20 “ಆ ದಿನದಂದು, ನನ್ನ ದಾಸನೂ ಹಿಲ್ಕೀಯನ ಮಗನೂ ಆದ ಎಲ್ಯಾಕೀಮನನ್ನು
ಬರಮಾಡುವೆನು. 21ನಿನ್ನ ವಸ್ತ್ರವನ್ನು ಅವನಿಗೆ ತೊಡಿಸುವೆನು. ನಿನ್ನ ನಡುಕಟ್ಟನ್ನು ಅವನಿಗೆ ಕಟ್ಟುವೆನು.
ನಿನ್ನ ಅಧಿಕಾರವನ್ನು ಅವನಿಗೆ ಒಪ್ಪಿಸುವೆನು. ಅವನು ಜೆರುಸಲೇಮಿನ ನಿವಾಸಿಗಳಿಗೂ ಜುದೇಯದ
ಮನೆತನಕ್ಕೂ ತಂದೆಯಾಗಿರುವನು. 22ದಾವೀದ ಮನೆತನದ ಅಧಿಕಾರವನ್ನು ಅವನ ಹೆಗಲ ಮೇಲೆ
ಹೊರಿಸುವೆನು. ಅವನು ತೆರೆದ ಬಾಗಿಲನ್ನು ಯಾರೂ ಮುಚ್ಚರು; ಅವನು ಮುಚ್ಚಿದ ಬಾಗಿಲನ್ನು ಯಾರೂ

ತೆರೆಯರು. 23ವಸ್ತುಗಳನ್ನು ತಗುಲಿ ಹಾಕುವ ಮೊಳೆಯಂತೆ ಗಟ್ಟಿಯಾದ ಸ್ಥಳದಲ್ಲಿ ಅವನನ್ನು ಬಿಗಿಯಾಗಿ ನಿಲ್ಲಿಸುವೆನು. ಅಲ್ಲದೆ, ಅವನು ತನ್ನ ವಂಶದವರಿಗೆ ಗೌರವಪೀಠವಾಗಿರುವನು."

24 "ಬಟ್ಟಲು, ಬಿಂದಿಗೆ ಮುಂತಾದ ಪಾತ್ರೆಗಳನ್ನು ಮೊಳೆಗೆ ತಗಲುಹಾಕುವಂತೆ, ತಂದೆಯ ಮಕ್ಕಳು, ಮೊಮ್ಮಕ್ಕಳೆಲ್ಲರು ಅವನಿಗೆ ನೇತು ಬೀಳುವರು. 25ಇದರಿಂದ ಬಿಗಿಯಾಗಿ ಹೊಡೆಯಲಾಗಿದ್ದ ಆ ಮೊಳೆ ಸಡಿಲವಾಗಿ ಕುಸಿದು ಬೀಳುವುದು. ಅದಕ್ಕೆ ತಗಲು ಹಾಕಿದ್ದ ವಸ್ತುಗಳೆಲ್ಲ ಕಳಚಿ ಬೀಳುವುವು. ಇದು ಸರ್ವೇಶ್ವರನಾದ ನನ್ನ ನುಡಿ," ಎಂದು ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಹೇಳಿರುವರು.

### ಫಿನೀಶಿಯ ಕುರಿತ ಸಂದೇಶ

**23** ಟೈರ್ ನಗರವನ್ನು ಕುರಿತ ದೈವೋಕ್ತಿ: "ಗೋಳಾಡಿರಿ ತಾರ್ಷೀಷಿನ ನಾವಿಕರೆಲ್ಲ, ಹಾಳಾಗಿವೆ ನಿಮ್ಮ ಬಂದರುಗಳೆಲ್ಲ; ಹಡಗುಗಳಿಗೆ ರೇವಿಲ್ಲ, ನೆಲೆಯಿಲ್ಲ, ಸೈಪ್ರಸ್ಸಿನಿಂದ ಬಂದ ನಾವಿಕರಿಂದ ಈ ಸುದ್ದಿ ನಿಮಗೆ ತಿಳಿಯುವುದು."

2 ಕರಾವಳಿಯ ನಿವಾಸಿಗಳೇ, ಸಿದೋನಿನ ವರ್ತಕರೇ, ಮೌನತಾಳಿರಿ. ನಿಮ್ಮ ಜನರು ವ್ಯಾಪಾರಕ್ಕಾಗಿ ವಿಶಾಲವಾದ ಸಮುದ್ರವನ್ನು ದಾಟುವಂತೆ ಮಾಡಿದಿರಿ. 3ಶೀಹೋರಿನ ಧಾನ್ಯದಿಂದಲೂ ನೈಲಿನ ಬೆಳೆಯಿಂದಲೂ ಆದಾಯ ಪಡೆದಿರಿ, ನಿಮ್ಮ ನಗರ ಹಲವಾರು ನಾಡುಗಳಿಗೆ ಮಾರುಕಟ್ಟೆಯಾಗಿತ್ತು.

4 ಸಿದೋನ್ ನಗರವೇ, ನಿನಗೆ ನಾಚಿಕೆ ಗೇಡು! ಸಮುದ್ರವೂ ಸಮುದ್ರ ತಳವೂ ನಿನ್ನನ್ನು ನಿರಾಕರಿಸುತ್ತಾ; "ನಾನು ಗರ್ಭಧರಿಸಲಿಲ್ಲ, ಪ್ರಸವಿಸಲಿಲ್ಲ, ಪುತ್ರಪುತ್ರಿಯರನ್ನು ಸಾಕಿ ಸಲಹಲಿಲ್ಲ" ಎಂದು ನುಡಿದಿದೆ.

5 ಟೈರಿನ ದುರ್ಗತಿಯ ಸುದ್ದಿಯನ್ನು ಕೇಳಿದ ಈಜಿಪ್ಟಿನವರು ಸಹ ಕಳವಳಪಡುವರು.

6 ಕರಾವಳಿಯ ನಿವಾಸಿಗಳೇ, ಗೋಳಾಡಿರಿ, ಸಮುದ್ರವನ್ನು ದಾಟಿ ತಾರ್ಷೀಷಿಗೆ ಹೋಗಿರಿ.

7 ಇದು ತಾನೋ, ನಿಮ್ಮ ವಸಾಹತುಗಳನ್ನು ನಿರ್ಮಿಸಿಕೊಳ್ಳಲು ಜನರನ್ನು ಕಳುಹಿಸಿದ ನಗರ! ಇದರ ವರ್ತಕರು ಪ್ರಭುಗಳು! 8ಇದರ ವ್ಯಾಪಾರಿಗಳು ವಿಶ್ವವಿಖ್ಯಾತರು. ಇಂಥ ಟೈರ್ ಪಟ್ಟಣಕ್ಕೆ ನಾಶವೊದಗಿದುದನ್ನು ಯೋಚಿಸಿದವರಾರು? 9ಇದು ಸೇನಾಧೀಶ್ವರ ಸರ್ವೇಶ್ವರ ಮಾಡಿದ ಸಂಕಲ್ಪವೇ ಸರಿ. ಗರ್ವಿಗಳ ಸಕಲ ದರ್ಪವನ್ನು ದಮನ ಮಾಡಲು, ವಿಶ್ವವಿಖ್ಯಾತರನ್ನು ಅವಮಾನಗೊಳಿಸಲು ಸೇನಾಧೀಶ್ವರ ಸರ್ವೇಶ್ವರ ಮಾಡಿದ ಯೋಜನೆಯಿದು.

10 ತಾರ್ಷೀಷ್ ನಗರವೇ, ನೈಲ್ ನದಿಯಂತೆ ನಿನ್ನ ನಾಡನ್ನು ಕೃಷಿ ಮಾಡು. ನಿನಗೆ ಬಂದರು ಇಲ್ಲವೇ ಇಲ್ಲ. 11ಸರ್ವೇಶ್ವರ ಸಮುದ್ರದ ಮೇಲೆ ಕೈಚಾಚಿ ರಾಜ್ಯಗಳನ್ನು ನಡುಗಿಸಿದ್ದಾರೆ. ಕಾನಾನಿನ ದುರ್ಗಗಳನ್ನು ನಾಶಮಾಡಲು ಅಪ್ಪಣೆಕೊಟ್ಟಿದ್ದಾರೆ. 12"ಹಿಂಸೆಗೆ ಈಡಾದ ಕನ್ಯೆಯಂತೆ ಇರುವ ಸಿದೋನ್ ನಗರವೇ, ಇನ್ನು ಮೇಲೆ ನಿನಗಿರದು ಸಂತೃಪ್ತಿ: ಸಮುದ್ರ ದಾಟಿ ಸೈಪ್ರಸ್ಸಿಗೆ ಹಾದು ಹೋಗು, ಅಲ್ಲಿಯೂ ನಿನಗೆ ದೊರಕದು ವಿಶ್ರಾಂತಿ" ಎಂದು ಹೇಳಿದ್ದಾರೆ.

13 ಬಾಬಿಲೋನಿನ ನಾಡನ್ನು ನೋಡು. ಅದರ ಜನಾಂಗ ನಿರ್ನಾಮವಾಯಿತು. ಅಸ್ಸೀರಿಯದವರು ಆ ನಾಡನ್ನು ಕಾಡುಮೃಗಗಳಿಗೆ ಈಡುಮಾಡಿದರು. ಅಲ್ಲಿ ಬುರುಜುಗಳನ್ನು ಕಟ್ಟಿ ಕೊಂಡರು. ಇದರ ಕೋಟೆಗಳನ್ನಾದರೋ ಕೆಡವಿ ನಾಶಮಾಡಿದರು. 14'ಗೋಳಾಡಿರಿ, ತಾರ್ಷೀಷಿನ ನಾವಿಕರೆಲ್ಲರು; ಹಾಳಾಗಿವೆ ನಿಮ್ಮ ಬಂದರುಗಳೆಲ್ಲವು.'

15 ಒಬ್ಬ ಅರಸನ ಜೀವಮಾನ ಕಾಲದಷ್ಟು ದಿನ – ಅಂದರೆ ಎಪ್ಪತ್ತು ವರ್ಷ ಕಾಲ – ನಗರವು ಯಾರ ನೆನಪಿಗೂ ಬಾರದೆ ಹೋಗುವುದು. ಆ ಅವಧಿಯು ಮುಗಿದ ಮೇಲೆ ಅದರ ಗತಿ ವೇಶ್ಯೆಯ ಗೀತದಂತಾಗುವುದು: 16'ಓ ವೇಶ್ಯೆಯೇ, ಮರೆತಿಹರು, ನೋಡು, ಜನರು ನಿನ್ನನು; ಎಂದೇ ತೆಗೆದುಕೋ ಕೈಯಲಿ ಕಿನ್ನರಿಯನು; ನುಡಿಸು ಇಂಪಾಗಿ ನಿನ್ನ ವಾದ್ಯವನು; ಹಾಡು ಅನೇಕಾನೇಕ ಗೀತಗಳನು; ಆಗಲಾದರೂ ನೆನಸಿಕೊಳ್ಳಲಿ ಜನರು ನಿನ್ನನು.'

17 ಎಪ್ಪತ್ತು ವರ್ಷಗಳಾದ ಮೇಲೆ ಸರ್ವೇಶ್ವರ ಟೈರಿಗೆ ಭೇಟಿ ನೀಡುವರು. ಆ ನಗರಿ ತನ್ನ ಕಸುಬಿಗೆ ಹಿಂದಿರುಗುವಳು. ಜಗದ ಎಲ್ಲ ರಾಷ್ಟ್ರಗಳೊಂದಿಗೆ ವ್ಯಾಪಾರ ಗೈಯುವಳು. 18ಅವಳ ವ್ಯಾಪಾರದಿಂದ ಬಂದ ಆದಾಯ ಅವಳಿಗೆ ನಿಧಿ ನಿಕ್ಷೇಪವಾಗದೆ ಸರ್ವೇಶ್ವರಸ್ವಾಮಿಗೆ ಮೀಸಲಾಗುವುದು. ಅದು ಸರ್ವೇಶ್ವರಸ್ವಾಮಿಯ ಸನ್ನಿಧಾನದಲ್ಲಿ ವಾಸಮಾಡುವವರಿಗೆ ಬೇಕಾದಷ್ಟು ಆಹಾರವನ್ನೂ ಅತ್ಯುತ್ತಮವಾದ ಉಡುಪನ್ನೂ ಒದಗಿಸುವುದು.

### ಧರೆಗೆ ಬರಲಿದೆ ದುರ್ಗತಿ

**24** ಇಗೋ, ಸರ್ವೇಶ್ವರ ಬರಿದುಮಾಡು
ವರು ಧರೆಯನ್ನು,
ನಿರ್ಜನ ಪ್ರದೇಶವಾಗಿಸುವರು
ವಿರೂಪಗೊಳಿಸಿ ಅದನು,
ಚದರಿಸುವರು ಅದರ ನಿವಾಸಿಗಳನು.
2 ಪ್ರಜೆಗೆ ಹೇಗೋ ಹಾಗೆ ಯಾಜಕನಿಗೆ,
ದಾಸನಿಗೆ ಹೇಗೋ ಹಾಗೆ ಯಾಜಕನಿಗೆ,
ದಾಸಿಗೆ ಹೇಗೋ ಹಾಗೆ ಯಜಮಾನಿಗೆ,
ಕೊಳ್ಳುವವನಿಗೆ ಹೇಗೋ ಹಾಗೆ ಕೊಡು
ವವನಿಗೆ
ಸಾಲ ಕೊಡುವವನಿಗೆ ಹೇಗೋ ಹಾಗೆ ಸಾಲ
ಪಡೆಯುವವನಿಗೆ,
ಬಡ್ಡಿ ತೆಗೆಯುವವನಿಗೆ ಹೇಗೋ ಹಾಗೆ ಬಡ್ಡಿ
ತೆರುವವನಿಗೆ,
– ಬರುವುದು ಒಂದೇ ಗತಿ ಇವರೆಲ್ಲರಿಗೆ.
3 ಬೆಟ್ಟ ಬರಿದಾಗಿ ಸಂಪೂರ್ಣ ಸುಲಿಗೆ
ಯಾಗುವುದು ಜಗವು
ಸರ್ವೇಶ್ವರಸ್ವಾಮಿಯ ನುಡಿಗಳಿವು:
4 ಸೊರಗಿಹೋಗುವುದು ಲೋಕ ದುಃಖಿಸುತ್ತಾ
ಕುಗ್ಗಿ ಹೋಗುವುದು ಬುವಿ ಗೋಳಾಡುತ್ತಾ
ಕಂಗೆಟ್ಟು ಹೋಗುವನು ಪ್ರತಿಯೊಬ್ಬ ವಿಶ್ವ
ವಿಖ್ಯಾತ.
5 ಭೂನಿವಾಸಿಗಳು ಮೀರಿಹರು
ದೈವಾಜ್ಞೆಗಳನು
ಉಲ್ಲಂಘಿಸಿಹರು ದೈವನಿಯಮಗಳನು,
ಭಂಗಪಡಿಸಿಹರು ಶಾಶ್ವತ
ಒಡಂಬಡಿಕೆಯನ್ನು,
ಮಲಿನವಾಗಿಸಿಹರು ನಡತೆಯಿಂದ
ಲೋಕವನು.
6 ಇದಕಾರಣ ಕಬಳಿಸಿದೆ ಜಗವನು ಶಾಪ,
ತಟ್ಟಿದೆ ಆ ಜನರಿಗೆ ದಂಡನೆಯ ತಾಪ.
ಸುಟ್ಟಮೇಲೆ ಉಳಿದಿಹರು ಅವರಲಿ ಕೆಲವರು

ಮಾತ್ರ.
7 ಬಾಡಿ ಹೋಗಿದೆ ದ್ರಾಕ್ಷಾಲತೆ,
ದುಬಾರಿಯಾಗಿದೆ ದ್ರಾಕ್ಷಾರಸ,
ನರಳುತಿದೆ ನಲಿಯುತ್ತಿದ್ದ ಜನಸಮೂಹ.
8 ನಿಂತುಹೋಗಿದೆ ದಮ್ಮಡಿಗಳ ಹರ್ಷನಾದ,
ಕೊನೆಗೊಂಡಿದೆ ಉಲ್ಲಾಸಿಗಳ ಕೋಲಾಹಲ,
ಅಡಗಿ ಹೋಗಿದೆ ಕಿನ್ನರಿಯ ಮಧುರ ಸ್ವರ.
9 ಇನ್ನಿಲ್ಲ ಮದ್ಯಪಾನ ಗೀತಾಗಾನ,
ಕಹಿಪಾನವಾಯಿತು ಕುಡುಕನಿಗೆ ಸುರಾಪಾನ.
10 ಪಾಳುಬಿದ್ದಿದೆ ಅಸ್ತವ್ಯಸ್ತವಾದ ನಗರ,
ಯಾರೂ ಪ್ರವೇಶಿಸದಂತೆ ಮುಚ್ಚಿದೆ
ಪ್ರತಿಯೊಂದು ಗೃಹ.
11 ಮದ್ಯಪಾನವಿಲ್ಲವೆಂದು ಬೀದಿಗಳಲಿ ಬೊಬ್ಬೆ
ಇಡುತಿಹರೆಲ್ಲ,
ಅಸ್ತಮಿಸಿ ಹೋಯಿತು ಜಗದ ಉಲ್ಲಾಸವೆಲ್ಲ,
ಸೆರೆಯಾಗಿ ತೊಲಗಿತು ಅದರ ಸಡಗರವೆಲ್ಲ.
12 ಪಾಳುಬಿದ್ದಿದೆ ನಗರ,
ಮುರಿದು ಬಿದ್ದಿದೆ ಪುರದ್ವಾರ.
13 ಉಳಿಯುವುವು ಜನಾಂಗಗಳು ಜಗದ ಮಧ್ಯೆ,
ಎಣ್ಣೆಯ ಬೀಜವನು ಉದುರಿಸಿದ ಮೇಲೆ
ಮಿಗುವ ಹೀಚಿನಂತೆ,
ದ್ರಾಕ್ಷಿ ಹಣ್ಣನು ಕೊಯ್ದಮೇಲೆ ಉಳಿದ
ಕೂಳೆಯಂತೆ.
14 ಆರ್ಭಟಿಸುವರು ಅಳಿದುಳಿದವರು ಆನಂದ
ದಿಂದ,
ಕೊಂಡಾಡುವರು ಸರ್ವೇಶ್ವರನ ಮಹಿಮೆ
ಯನು ಪಡುವಣದಿಂದ.
15 ಎಂದೇ ಮೂಡಣದವರೇ, ಸನ್ಮಾನಿಸಿರಿ
ಸರ್ವೇಶ್ವರಸ್ವಾಮಿಯನು,
ಕರಾವಳಿಯವರೇ, ಘನಪಡಿಸಿರಿ ಇಸ್ರಯೇಲಿನ
ದೇವರಾದ ಸ್ವಾಮಿಯ ನಾಮವನು.
16 ಜಗದ ಕಟ್ಟಕಡೆಯಿಂದ ಕೇಳಿಬರುತಿದೆ,
‘ಸತ್ಯಸ್ವರೂಪನಿಗೆ ಸ್ತೋತ್ರ’ ಎಂಬ ಗೀತೆ.
ಆದರೆ ನಶಿಸಿಹೋಗುತ್ತಿರುವೆನು ನಾನು,
ಹೌದು, ನಶಿಸಿ ನಾಶವಾಗುತ್ತಿರುವೆನು,
ಏನೆಂದು ಹೇಳಲಿ ನನ್ನ ಗತಿಯನು.
ಇದೋ, ಬಾಧಿಸುತ್ತಿಹರು ದ್ರೋಹಿಗಳು,
ದ್ರೋಹದ ಮೇಲೆ ದ್ರೋಹವೆಸಗುತಿಹರು.
17 ಎಲೈ ಭೂನಿವಾಸಿಗಳೇ, ಕೇಳಿರೆಲ್ಲರು,
ಕಾದಿದೆ ನಿಮಗೆ ಭಯಭೀತಿ,

ಕುಳಿ ಮತ್ತು ಬಲೆಯು.
18 ಬೀಳುವನು ಕುಳಿಯಲ್ಲಿ, ಭಯಭೀತಿಯ
ಸಪ್ಪಳಕ್ಕೆ ಓಡಿಹೋಗುವವನು,
ಸಿಕ್ಕಿ ಬೀಳುವನು ಬಲೆಯಲ್ಲಿ ಕುಳಿಯ
ಹತ್ತಿ ಬರುವವನು.
ತೆರೆದಿವೆ ನೋಡಿ, ಆಕಾಶದ ದ್ವಾರಗಳು,
ಕಂಪಿಸುತ್ತಿವೆ ಬುವಿಯ ಅಸ್ತಿವಾರಗಳು.
19 ಬಿರುಕು ಬಿಡುವುದು ಭೂಮಿ ಸೀಳುಪಾಳಾಗಿ
ಕತ್ತರಿಸುವುದು ಕದಲಿಹೋಗಿ.
20 ಓಲಾಡುವುದು ಭೂಮಿ ಅಮಲೇರಿದವನಂತೆ,
ತೂಗಾಡುವುದು ಬಿರುಗಾಳಿಗೆ ಸಿಕ್ಕಿದ
ಗುಡಿಸಲಂತೆ,
ಕುಸಿದು ಬೀಳುವುದು ದ್ರೋಹದ ಭಾರಕೆ,
ಮರಳಿ ಏಳದಂತೆ.
21 ಆ ದಿನ ಸರ್ವೇಶ್ವರ ದಂಡಿಸುವರು
ಮೇಲಣ ಸೇನಾಶೂರರನು,
ಕೆಳಗಣ ಭೂ ರಾಜರನು.
22 ತಳ್ಳುವರವರನು ಖೈದಿಗಳ ಗುಂಪಿನಂತೆ
ನೆಲಮಾಳಿಗೆಗೆ,
ಇರುವರವರು ಸೆರೆಯಲಿ ಬಹುದಿನಗಳವರೆಗೆ,
ತದನಂತರ ಗುರಿಯಾಗುವರು ದಂಡನೆಗೆ.
23 ನಾಚುವನು ಚಂದ್ರ, ಹೇಸುವನು ಸೂರ್ಯ,
ಏಕೆನೆ ಆಳುವರು ಸೇನಾಧೀಶ್ವರ ಸರ್ವೇಶ್ವರ
ಸಿಯೋನ್ ಪರ್ವತದೊಳು,
ಜೆರುಸಲೇಮ್ ನಗರದೊಳು.
ಪ್ರತ್ಯಕ್ಷವಾಗುವುದಾತನ ಮಹಿಮಾ
ಪ್ರಭಾವವು,
ಅಲ್ಲಿನ ಜನನಾಯಕರ ಸಮ್ಮುಖದೊಳು.

**ಸ್ತುತಿಗೀತೆ**

**25** ಸರ್ವೇಶ್ವರಾ, ನೀನೆನ್ನ ದೇವನು,
ಏಕೆನೆ ನೀನು ಸತ್ಯಸ್ವರೂಪನು,
ನಿಷ್ಠಾವಂತನು,
ಆದಿ ಯೋಜನೆಗಳನು ಪೂರೈಸುವವನು,
ಅದ್ಭುತಕಾರ್ಯಗಳನು ಎಸಗಿದಂತವನು.
ಘನಪಡಿಸುವೆ ನಾ ನಿನ್ನನು,
ಸ್ತುತಿಸುವೆನು ನಿನ್ನ ನಾಮ ಮಹಿಮೆಯನು.
2 ನಾಶಪಡಿಸಿದೆ ನೀ ನಗರವನು,
ದಿಬ್ಬವಾಗಿಸಿದೆ ದುರ್ಗವನು,

ಕೆಡವಿದೆ ವಿದೇಶೀಯರ ಕೋಟೆಯನು,
ಮರಳಿ ಕಟ್ಟಲಾಗದ ಹಾಳೂರನ್ನಾಗಿಸಿದೆ
ಅದನು.
3 ಹೊಗಳುವುವು ನಿನ್ನನ್ನು ಬಲಿಷ್ಟ ರಾಷ್ಟ್ರಗಳು,
ನಿನಗಂಜುವುವು ಕ್ರೂರಿಗಳ ಪಟ್ಟಣಗಳು.
4 ದುರ್ಗವಾಗಿರುವೆ ನೀನು ದೀನದಲಿತರಿಗೆ,
ಸುರಕ್ಷಿತ ಕೋಟೆಯಾಗಿರುವೆ
ದಟ್ಟದರಿದ್ರರಿಗೆ,
ನೆರಳಾಗಿರುವೆ ಬಿಸಿಲೊಳು ಬೆಂದವರಿಗೆ.
ಕ್ರೂರಿಗಳ ಹೊಡೆತ ಚಳಿಗಾಲದ
ಚಂಡಮಾರುತವಾಗಿರೆ,
ಬಿರುಗಾಳಿಯ ಆ ಬಡಿತಕೆ ನೀನಾದೆ ಆಸರೆ,
5 ಅನ್ಯರ ಆರ್ಭಟವನು ನೀ ಅಡಗಿಸುವೆ,
ಸುಡುವ ಒಣ ನೆಲವನು ಮೇಘ
ತಣಿಸುವಂತೆ.
ಕ್ರೂರಿಗಳ ಹರ್ಷೋದ್ಗಾರವನು ನಿಲ್ಲಿಸುವೆ,
ಬಿಸಿಲನು ತಡೆಯುವ ಮೋಡದ ನೆರಳಿನಂತೆ.

### ದೇವರು ಬಡಿಸುವ ಭೋಜನ

6 ಇದಲ್ಲದೆ ಸೇನಾಧೀಶ್ವರ ಸರ್ವೇಶ್ವರ ಈ ಪರ್ವತದಲ್ಲಿ ಸಕಲ ರಾಷ್ಟ್ರಗಳಿಗೆ ಸಾರವತ್ತಾದ ಮೃಷ್ಟಾನ್ನವನ್ನೂ ಶ್ರೇಷ್ಟವಾದ ದ್ರಾಕ್ಷಾರಸವನ್ನೂ ಭೋಜನಕ್ಕಾಗಿ ಅಣಿಗೊಳಿಸುವರು. 7ಸಮಸ್ತ ರಾಷ್ಟ್ರಗಳನ್ನು ಆವರಿಸಿರುವ ಮುಸುಕನ್ನೂ ಸಕಲ ದೇಶಗಳನ್ನು ಮುಚ್ಚಿರುವ ತೆರೆಯನ್ನೂ ಇದೇ ಪರ್ವತದಲ್ಲಿ ನಾಶಮಾಡುವರು. 8ಮರಣವನ್ನು ಶಾಶ್ವತವಾಗಿ ನಿರ್ನಾಮ ಮಾಡುವರು. ಸರ್ವೇಶ್ವರಸ್ವಾಮಿ ಎಲ್ಲರ ಕಣ್ಣೀರನ್ನು ಒರೆಸಿಬಿಡುವರು. ತಮ್ಮ ಪ್ರಜೆಗಾದ ಅವಮಾನವನ್ನು ಜಗದಿಂದಲೇ ತೊಲಗಿಸಿಬಿಡುವರು. ಸರ್ವೇಶ್ವರಸ್ವಾಮಿಯೇ ಇಂತೆಂದು ನುಡಿದಿದ್ದಾರೆ. 9ಇದು ನೆರವೇರಿದಾಗ ಜನರು:

"ಇವರೇ ನಮ್ಮ ದೇವರು;
ನಮ್ಮನ್ನು ರಕ್ಷಿಸುವರೆಂದು ಇವರನ್ನೇ
ನೆಚ್ಚಿಕೊಂಡಿದ್ದೆವು.
ಇವರೇ ಸರ್ವೇಶ್ವರ; ಇವರನ್ನೇ
ನೆಚ್ಚಿಕೊಂಡಿದ್ದೆವು.
ಇವರು ನೀಡುವ ರಕ್ಷಣೆಯಲ್ಲಿ
ಆನಂದಿಸೋಣ!"
ಎಂದು ಹೇಳಿಕೊಳ್ಳುವರು.

### ದೇವರು ನೀಡುವ ದಂಡನೆ

10 ಸರ್ವೇಶ್ವರಸ್ವಾಮಿಯ ಅಭಯ ಹಸ್ತವು ಈ ಪರ್ವತದ ಮೇಲೆ ಶಾಶ್ವತವಾಗಿ ನೆಲಸುವುದು. ಮೋವಾಬಾದರೋ ತಿಪ್ಪೆಗುಂಡಿಯ ರೊಚ್ಚಿನಲ್ಲಿ ಒಣಹುಲ್ಲು ತುಳಿತಕ್ಕೆ ಈಡಾಗುವಂತೆ ತಾನಿದ್ದಲ್ಲೇ ತುಳಿತಕ್ಕೀಡಾಗುವುದು. 11ಈಜುವವರು ಕೈಯಾಡಿಸುವಂತೆ ಮೋವಾಬ್ ರೊಚ್ಚಿನಲ್ಲಿ ಕೈಯಾಡಿಸುವುದು. ಅದರ ಗರ್ವವನ್ನೂ ಕೈಚಳಕವನ್ನೂ ಸರ್ವೇಶ್ವರಸ್ವಾಮಿ ಅಡಗಿಸಿ ಬಿಡುವರು. ದುರ್ಗದಂತೆ ಎತ್ತರವಾಗಿರುವ ಅದರ ಕೋಟೆಕೊತ್ತಲಗಳನ್ನು ಕೆಳಕ್ಕೆ ಕೆಡವಿ ನೆಲಸಮ ಮಾಡುವರು. ಅದು ಧೂಳು ಪಾಲಾಗುವುದು.

## ಜಯಗೀತೆ

**26** ಕಾಲ ಬರುವುದು; ಆಗ ಹಾಡುವರು ಜುದೇಯ ನಾಡಿನಲ್ಲಿ ಈ ಗೀತೆಯನು:

ನಮಗಿದೆ ಸುಭದ್ರ ನಗರ,
ದೇವರೇ ಅದರ ದುರ್ಗ, ಪ್ರಾಕಾರ.
2 ತೆರೆಯಿರಿ ನಗರ ದ್ವಾರಗಳನು,
ಪ್ರವೇಶಿಸಲಿ ವಿಶ್ವಾಸವುಳ್ಳ ಸಜ್ಜನರು.
3 ನಿನ್ನ ನೆಚ್ಚಿದವರಿಗೆ, ಸ್ಥಿರ ಚಿತ್ತವುಳ್ಳವರಿಗೆ,
ಚಿರಶಾಂತಿಯ ನೀ ನೀಡುವೆ.
4 ಶಾಶ್ವತ ಆಶ್ರಯಗಿರಿ, ಸ್ವಾಮಿ ಸರ್ವೇಶ್ವರನೇ,
ಸತತ ಭರವಸೆಯಿಡಿರಿ ಆತನಲ್ಲೇ.
5 ತಗ್ಗಿಸುವನಾತ ಎತ್ತರದಲಿ ವಾಸಿಸುವವರನು,
ಕೆಡವಿ, ನೆಲಸಮಮಾಡಿ, ಧೂಳಾಗಿಸುವನು
ಅವರು ವಾಸಮಾಡುವಾ ಉನ್ನತ
ನಗರವನು.
6 ಈಡಾಗುವುದದು ಕಾಲತುಳಿತಕೆ
ದೀನದಲಿತರ ಪಾದತುಳಿತಕೆ.
7 ನೇರವಾಗಿದೆ ಸಜ್ಜನನ ದಾರಿ
ಸುಗಮವಾಗಿದೆ ನಿನ್ನಿಂದ ಆತನ ಹಾದಿ.
8 ನಡೆವೆವು ನಾವು, ಸರ್ವೇಶ್ವರಾ,
ನಿನ್ನ ನೀತಿ ಮಾರ್ಗದೊಳು
ಕಾದಿರುವೆವು ನಿನಗಾಗಿ ಭರವಸೆಯಿಟ್ಟು
ನಿನ್ನೊಳು
ನಿನ್ನ ನಾಮಸ್ಮರಣೆಯ ಬಯಕೆ
ನಮ್ಮ ಅಂತರಾತ್ಮದೊಳು.
9 ಹಾರೈಸಿದೆ ಎನ್ನಾತ್ಮ ನಿನ್ನನು ಇರುಳೊಳು
ಅರಸಿತೆನ್ನ ಮನ ನಿನ್ನನು
ಮುಂಜಾನೆಯೊಳು.
ನೀನೀಯುವಾಗ ಜಗಕೆ ನ್ಯಾಯತೀರ್ಪನು
ಕಲಿತುಕೊಳ್ಳುವರು ಭೂನಿವಾಸಿಗಳು
ನ್ಯಾಯನೀತಿಯನು.
10 ದಯೆತೋರಿದರೂ ಕಲಿಯನು ದುಷ್ಟನು
ಆ ನ್ಯಾಯನೀತಿಯನು
ಧರ್ಮಕ್ಷೇತ್ರದೊಳು ಸಹ ಗೈವನು
ಅಕ್ರಮವನು
ಗೌರವಿಸನು ಸರ್ವೇಶ್ವರನ ಮಹಿಮೆಯನು.
11 ಅವರ ಮೇಲೆ ನೀ ಕೈಯೆತ್ತಿದರೂ,
ಸರ್ವೇಶ್ವರಾ, ಲಕ್ಷಿಸರವರು ನಿನ್ನನ್ನು.
ನಾಚಲಿ ಅವರು ನೋಡಿ ನಿನ್ನ
ಸ್ವಜನಾಭಿಮಾನವನು

ದಹಿಸಿಬಿಡಲಿ ಅಗ್ನಿಜ್ವಾಲೆಯು ಆ ನಿನ್ನ
ವಿರೋಧಿಗಳನು.
12 ಸರ್ವೇಶ್ವರಾ, ನೀಡೆಮಗೆ ಶಾಂತಿ ಸಮಾಧಾನ
ನಮ್ಮ ಸತ್ಕಾರ್ಯಗಳೆಲ್ಲವೂ ನಿನ್ನ
ಕೃಪಾಸಾಧನ.
13 ನಮ್ಮ ದೇವರಾದ ಸರ್ವೇಶ್ವರಾ,
ಇಗೋ, ನೋಡು
ನಮ್ಮ ನಾಳಿಹರು ಭೂರಾಜರು ನಿನ್ನ ಬಿಟ್ಟು.
ಆದರೇನು, ಹೊಗಳುವೆವು ನಿನ್ನ ನಾಮವನೆ
ಮುನ್ನಿಟ್ಟು.
14 ಮಡಿದುಹೋದರು ಆ ಒಡೆಯರೆಲ್ಲ
ಮರಳಿ ಅವರ ಪ್ರೇತಗಳು ಎದ್ದು
ಬರುವಂತಿಲ್ಲ.
ನೀನವರನು ಬಡಿದು ನಸುಕಿ ಹಾಕಿರುವೆ
ಅವರ ನೆನಪನೆ ಅಳಿಸಿ ಹಾಕಿರುವೆ.
15 ಹೆಚ್ಚಿಸಿರುವೆ ಸರ್ವೇಶ್ವರಾ, ನಿನ್ನ ಜನರನು
ಹೌದು, ವೃದ್ಧಿಗೊಳಿಸಿರುವೆ ನಿನ್ನ ಪ್ರಜೆಯನು.
ವಿಸ್ತರಿಸಿರುವೆ ನಾಡಿನ ಮೇರೆಗಳನು
ಈಪರಿ ಪಡೆದಿರುವೆ ಮಹಿಮೆಯನು.
16 ನಿನ್ನಾಶ್ರಯ ಕೋರಿದರು, ಸರ್ವೇಶ್ವರಾ,
ಜನ ಇಕ್ಕಟ್ಟಿಗೆ ಸಿಕ್ಕಿದಾಗ
ಪ್ರಾರ್ಥನೆ ಗೈದರವರು ನಿನ್ನ ಶಿಕ್ಷೆಗೆ
ಗುರಿಯಾದಾಗ.
17 ಹೆರಿಗೆ ಹತ್ತಿರವಾದ ಗರ್ಭಿಣಿ ಚೀರುವಂತೆ
ಯಾತನೆಪಡುವ ಬೇನೆಯಿಂದಾಕೆ
ಅರಚುವಂತೆ
ಮಾಡಿರುವೆ, ಸರ್ವೇಶ್ವರಾ, ನಿನಗಾಗಿ ನಾವು
ಮೊರೆಯಿಡುವಂತೆ.
18 ಪ್ರಸವವೇದನೆಪಟ್ಟು ನಾವು ಹಡೆದದ್ದು
ಗಾಳಿಯನ್ನೆ
ಆಗಲಿಲ್ಲ ಜಗಕೆ ನಮ್ಮಿಂದ ಯಾವ ರಕ್ಷಣೆ
ನೀಡಲಿಲ್ಲ ನಾವು ಜನ್ಮ ಲೋಕನಿವಾಸಿಗಳಿಗೆ.
19 ಬದುಕುವರು ನಿಧನರಾದ ನಮ್ಮ ಜನರು
ಜೀವದಿಂದೇಳುವುವು ನಮ್ಮವರ ಶವಗಳು.
ಎದ್ದು ಹರ್ಷಧ್ವನಿಗೈಯಲಿ ನೆಲದಲಿ
ಬಿದ್ದಿರುವವರು.
ನೀ ಸುರಿಸುವ ಇಬ್ಬನಿ ಜ್ಯೋತಿರ್ಮಯ,
ಆದುದರಿಂದ
ಸತ್ತವರು ಪುನರುತ್ಥಾನ ಹೊಂದುವರು
ನೆಲದಿಂದ.

## ದೈವದಂಡನೆ

20 ನನ್ನ ಜನರೇ, ಹೋಗಿ; ನಿಮ್ಮ ನಿಮ್ಮ ಮನೆಗಳನ್ನು ಸೇರಿ ಬಾಗಿಲು ಮುಚ್ಚಿಕೊಳ್ಳಿ. ದೇವರ
ಕೋಪ ತೀರುವತನಕ ಕೊಂಚಕಾಲ ಅವಿತುಕೊಳ್ಳಿ. 21ಇಗೋ, ಸರ್ವೇಶ್ವರ ಜಗದ ಜನಕ್ಕೆ ಅವರವರ
ಪಾಪದ ಫಲವನ್ನು ಉಣಿಸಲು ತಮ್ಮ ನಿವಾಸದಿಂದ ಹೊರಟಿರುವರು. ಭೂಮಿ ತನ್ನಲ್ಲಿ ಇಂಗಿದ ರಕ್ತವನ್ನು
ಬೆಳಕಿಗೆ ತರುವುದು; ಭೂನಿವಾಸಿಗಳಲ್ಲಿ ಹತರಾದವರನ್ನು ಇನ್ನು ಮರೆಮಾಚದು.

**27** ಆ ದಿನದಂದು ಸರ್ವೇಶ್ವರಸ್ವಾಮಿ ತಮ್ಮ ಘೋರವಾದ, ಕ್ರೂರವಾದ, ಮಾರಕವಾದ ಖಡ್ಗದಿಂದ
ವೇಗವಾಗಿ ಧಾವಿಸುವ ಹಾಗೂ ಡೊಂಕಾಗಿ ಹರಿಯುವ ಸರ್ಪವನ್ನು ಹೊಡೆಯುವರು. ಮಹಾನದಿಯಲ್ಲಿನ
ಘಟಸರ್ಪವನ್ನು ಸಹ ಕೊಂದುಹಾಕುವರು.

## ದ್ರಾಕ್ಷಾತೋಟದ ಗೀತೆ

2 ಆ ದಿನದಲ್ಲಿ ಪೇಳ್ವರು ಸರ್ವೇಶ್ವರ:
“ಇಗೋ, ನನ್ನ ವಿಹಾರದ ದ್ರಾಕ್ಷಾವನ,
ಇದ ಕುರಿತು ಹಾಡಿರಿ ಒಂದು ಗಾನ.
3 ಸರ್ವೇಶ್ವರನಾದ ನಾನೇ ಇದರ ತೋಟಗಾರ,
ಕ್ಷಣಕ್ಷಣಕ್ಕೂ ಇದಕೆ ಹೊಯ್ಯುವೆ ನೀರ,
ಇದನ್ನಾದರೂ ಮುಟ್ಟದಂತೆ ಕಾಯುವೆ
ನಿರಂತರ.
4 ಇದರ ಬಗ್ಗೆ ನನಗೆ ಇನ್ನಿಲ್ಲ ರೌದ್ರ,
ಇದರೊಳಗಿಲ್ಲ ಮುಳ್ಳುಕಳ್ಳಿಗಳ ಗಹ್ವರ,
ಇದ್ದಿದ್ದರೆ ಸುಟ್ಟು ಭಸ್ಮಮಾಡುತ್ತಿದ್ದೆ ಹೂಡಿ
ಸಮರ.
5 ಬೇಡವಾದರೆ ಆ ವೈರಿಗಳು
ಶರಣಾಗತರಾಗಲಿ,
ಬರಲಿ ನನ್ನ ಸಂಗಡ ಸಂಧಾನಕೆ,
ಹೌದು, ಬರಲಿ ನನ್ನೊಡನೆ ಸಂಧಾನಕೆ.
6 ಮುಂಬರುವ ಕಾಲದಲಿ ಬೇರೂರುವುದು
ಯಕೋಬ ಸಂತಾನ,
ಚಿಗುರಿ ಹೂಬಿಡುವುದು ಇಸ್ರಯೇಲ್
ಮನೆತನ,
ಆ ವೃಕ್ಷಫಲದಿಂದ ತುಂಬಿರುವುದು ಜಗದೆಲ್ಲ
ಜನ.

7 ಸರ್ವೇಶ್ವರ ತಮ್ಮ ಪ್ರಜೆಯ ಘಾತುಕರನ್ನು ದಂಡಿಸಿದಷ್ಟು ತಮ್ಮ ಪ್ರಜೆಯನ್ನು ದಂಡಿಸಲಿಲ್ಲ.
ಘಾತುಕರಿಗಾದ ಪ್ರಾಣನಷ್ಟ ತಮ್ಮ ಪ್ರಜೆಗೆ ಆಗಲಿಲ್ಲ. 8ಆದರೂ ಸರ್ವೇಶ್ವರ ತಮ್ಮ ಪ್ರಜೆಗೆ ಗಡೀಪಾರು
ಶಿಕ್ಷೆಯನ್ನು ವಿಧಿಸಿದರು. ದೂರದ ಮೂಡಣ ಬಿರುಗಾಳಿಯ ಬಡಿತಕ್ಕೆ ಗುರಿಮಾಡಿ ಅವರನ್ನು
ತೊಲಗಿಸಿದರು. 9ಇಂತಿರಲು ಯಕೋಬ್ಯರ ಅಧರ್ಮಕ್ಕೆ ಪ್ರಾಯಶ್ಚಿತ್ತವಾಗಬೇಕಾದರೆ, ಅವರ
ಪಾಪಪರಿಹಾರವನ್ನು ಸೂಚಿಸುವ ಪೂರ್ಣಫಲ ದೊರಕಬೇಕಾದರೆ, ಅವರ ವಿಗ್ರಹಾರಾಧಕ ಬಲಿಪೀಠದ
ಕಲ್ಲುಗಳೆಲ್ಲ ಸ್ಮಣ್ಣದಂತೆ ಪುಡಿಪುಡಿ ಆಗಬೇಕು; ಆಶೇರಾ ಎಂಬ ವಿಗ್ರಹಸ್ತಂಭಗಳನ್ನೂ ಸೂರ್ಯ
ಸ್ತಂಭಗಳನ್ನೂ ಪ್ರತಿಷ್ಠಾಪಿಸುವುದು ಇನ್ನು ನಿಲ್ಲಬೇಕು.

10 ಕೋಟೆಕೊತ್ತಲಗಳಿಂದ ಕೂಡಿದ ಪಟ್ಟಣ ಪಾಳುಬಿದ್ದಿದೆ; ಕಾಡಿನಂತೆ ನಿರ್ಜನ ಪ್ರದೇಶವಾಗಿದೆ. ದನಕರುಗಳು ಮೇದು ಮಲಗುವ ಗೋಮಾಳವಾಗಿದೆ. 11ಮರಗಳ ರೆಂಬೆಕೊಂಬೆಗಳು ಒಣಗಿ ಮುರಿದುಹೋಗಿವೆ. ಹೆಂಗಸರ ಕೈಗೆ ಒಲೆಪಾಲಾಗುವ ಸೌದೆಯಾಗಿವೆ. ಈ ಪ್ರಜೆಗಳು ಮಂದಮತಿಗಳೇ ಸರಿ. ಈ ಕಾರಣ, ಸೃಷ್ಟಿಕರ್ತನು ಇವರನ್ನು ಕರುಣಿಸನು. ನಿರ್ಮಿಸಿದಾತನು ಇವರಿಗೆ ದಯೆ ತೋರಿಸನು.

12 ಇಸ್ರಯೇಲಿನ ಜನರೇ, ದಿನವು ಬರಲಿದೆ. ಆಗ ಯೂಫ್ರಟಿಸ್ ನದಿಯಿಂದ ಈಜಿಪ್ಟ್ ದೇಶದ ನದಿಯವರೆಗೆ, ಸರ್ವೇಶ್ವರ ತೆನೆಗಳನ್ನು ಒಕ್ಕಣೆ ಮಾಡುವರು. ಆಗ ನಿಮ್ಮನ್ನು ಒಬ್ಬೊಬ್ಬರನ್ನಾಗಿ ಬೇರ್ಪಡಿಸಿ ಆಯ್ಕೆಮಾಡುವರು.

13 ಆ ದಿನ ಬಂದಾಗ, ಮಹಾ ತುತೂರಿಯೊಂದನ್ನು ಊದಲಾಗುವುದು. ಗಡೀಪಾರಾಗಿ ಚದುರಿಹೋಗಿರುವ ಇಸ್ರಯೇಲರನ್ನು ಅಸ್ಸೀರಿಯದಿಂದಲೂ ಈಜಿಪ್ಟಿನಿಂದಲೂ ಕರೆಯಲಾಗುವುದು. ಅವರೆಲ್ಲರೂ ಜೆರುಸಲೇಮಿಗೆ ಬಂದು ಪವಿತ್ರ ಪರ್ವತದ ಮೇಲೆ ಸರ್ವೇಶ್ವರಸ್ವಾಮಿಗೆ ಅಡ್ಡ ಬೀಳುವರು, ಆರಾಧನೆ ಮಾಡುವರು.

## ಉತ್ತರ ರಾಜ್ಯಗಳಿಗೆ ಎಚ್ಚರಿಕೆ

**28** ಕುಡುಕರಿಂದ ಕೂಡಿದ ಎಫ್ರಯಿಮಿನ ಕಿರೀಟದಂತಿರುವ ನಗರಕ್ಕೆ ಧಿಕ್ಕಾರ! ಒಮ್ಮೆ ಕುಡಿತಕ್ಕೆ ಸೋತು ಫಲವತ್ತಾದ ಕಣಿವೆಗೆ ಶ್ರೇಷ್ಠ ಶಿರೋಭೂಷಣವಾಗಿದ್ದು ಈಗ ಬಾಡಿ ಹೋಗುತ್ತಿರುವ ಆ ಹೂವಿಗೆ ಧಿಕ್ಕಾರ! 2ಇದೋ, ಸರ್ವೇಶ್ವರಸ್ವಾಮಿಯ ಬಳಿ ಮಹಾಬಲಿಷ್ಠನೊಬ್ಬನು ಇದ್ದಾನೆ. ಆತನು ರಭಸವಾಗಿರುವ ಕಲ್ಮಳೆಯಂತೆ, ವಿನಾಶಕರವಾದ ಬಿರುಗಾಳಿಯಂತೆ, ಕೊಚ್ಚಿ ಹರಿಯುವ ತುಂಬು ಪ್ರವಾಹದಂತೆ ಬರುವನು. ಆ ನಗರ ನೆಲಕ್ಕೆ ಕುಸಿದು ಬಿದ್ದು ನೆಲಸಮವಾಗುವಂತೆ ಮಾಡುವನು. 3ಎಫ್ರಯಿಮಿನ ಕುಡುಕರ ಮಹಾಮುಕುಟದಂತಿರುವ ಆ ನಗರ ಕಾಲಿನ ತುಳಿತಕ್ಕೆ ಈಡಾಗುವುದು. 4ಫಲವತ್ತಾದ ಕಣಿವೆಗೆ ಶ್ರೇಷ್ಠ ಶಿರೋಭೂಷಣವಾಗಿದ್ದು, ಈಗ ಬಾಡುತ್ತಿರುವ ಆ ನಗರ, ಹೂ ಕಾಲಕ್ಕೆ ಮುಂಚೆ ಮಾಗಿದ ಅಂಜೂರಕ್ಕೆ ಸಮಾನವಾಗುವುದು. ಆ ಹಣ್ಣನ್ನು ಕಂಡವರು ಕಿತ್ತ ಕೂಡಲೆ ತಿಂದು ಬಿಡುವರು.

5 ಆ ದಿನದಂದು ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯೇ ಅಳಿದುಳಿದ ತಮ್ಮ ಜನರಿಗೆ ಅಂದದ ಕಿರೀಟ, ಸುಂದರ ಮುಕುಟವಾಗುವರು. 6ಅವರು ನ್ಯಾಯಾಸನದಲ್ಲಿ ಕುಳಿತವನಿಗೆ ನ್ಯಾಯವಿವೇಚನೆಯನ್ನೂ ಊರ ಬಾಗಿಲಬಳಿ ಶತ್ರುಗಳನ್ನು ತಡೆಗಟ್ಟುವವರಿಗೆ ಶೌರ್ಯವನ್ನೂ ನೀಡುವರು.

## ಕುಡುಕ ಪ್ರವಾದಿಗಳಿಗೆ ಧಿಕ್ಕಾರ!

7 ಯಾಜಕರು ಪ್ರವಾದಿಗಳು ಮದ್ಯಪಾನದಿಂದ ಮತ್ತರಾಗಿದ್ದಾರೆ; ದ್ರಾಕ್ಷಾರಸದಿಂದ ಓಲಾಡುತ್ತಿದ್ದಾರೆ; ಕುಡಿತದಿಂದ ತೂರಾಡುತ್ತಿದ್ದಾರೆ. ದ್ರಾಕ್ಷಾರಸವೇ ಅವರನ್ನು ಮುಳುಗಿಸಿ ಬಿಟ್ಟಿದೆ. ಹೌದು, ಅವರು ಮದ್ಯದಲ್ಲಿ ತೇಲಾಡುತ್ತಿದ್ದಾರೆ. ದೈವದರ್ಶನವಾಗುತ್ತಿರುವಾಗಲೂ ಅವರು ಓಲಾಡುತ್ತಾರೆ. 8ಅವರು ಕುಳಿತುಕೊಳ್ಳುವ ಮೇಜುಗಳ ಮೇಲೆಲ್ಲಾ ಹೊಲಸು ವಾಂತಿ! ಸ್ವಚ್ಛವಾದ ಸ್ಥಳವಂತೂ ಕೊಂಚವೂ ಇಲ್ಲ.

9 ಇವರು ನನ್ನನ್ನು ಕುರಿತು: "ಇವನ ಜ್ಞಾನೋಪದೇಶ ಯಾರಿಗೆ? ಇವನು ಸಾರುವ ಸಂದೇಶ ಯಾರಿಗೆ? ಮೊಲೆಬಿಟ್ಟ ಕೂಸುಗಳಿಗೋ? ಎದೆಬಿಟ್ಟ ಮಕ್ಕಳಿಗೋ? 10ಆಜ್ಞೆಯ ಮೇಲೆ ಆಜ್ಞೆ, ಸೂತ್ರದ ಮೇಲೆ ಸೂತ್ರ; ಅಲ್ಲಿ ಸ್ವಲ್ಪ, ಇಲ್ಲಿ ಸ್ವಲ್ಪ" ಎಂದು ಹರಟೆ ಕೊಚ್ಚಿಕೊಳ್ಳುತ್ತಾರೆ.

11 ನೀವು ನನಗೆ ಕಿವಿಗೊಡದೆ ಹೋದರೆ, ಸರ್ವೇಶ್ವರ ಅಪರಿಚಿತವಾದ ಅನ್ಯ ಭಾಷೆಯನ್ನು ಆಡುವ ಜನರ ಮುಖಾಂತರ ನಿಮಗೆ ಪಾಠ ಕಲಿಸುವರು. 12"ಇದೇ ನಿಮಗೆ ಅವಶ್ಯಕವಾದ ವಿಶ್ರಾಂತಿ: ಬಳಲಿದವರನ್ನು ವಿಶ್ರಮಗೊಳಿಸಿರಿ; ಇದೇ ನಿಮಗೆ ಅನುಕೂಲವಾದ ಉಪಶಮನ" ಎಂದು ದೇವರು ನಿಮಗೆ ಹೇಳಿದಾಗ, ನೀವು ಕೇಳದೆ ಹೋದಿರಿ. 13ಆದುದರಿಂದಲೇ ಸರ್ವೇಶ್ವರ ನಿಮಗೆ 'ಆಜ್ಞೆಯ ಮೇಲೆ ಆಜ್ಞೆ, ಸೂತ್ರದ ಮೇಲೆ ಸೂತ್ರ, ಅಲ್ಲಿ ಸ್ವಲ್ಪ ಇಲ್ಲಿ ಸ್ವಲ್ಪ' ಎಂದು ಹೇಳಿ ಪಾಠಕಲಿಸುವರು. ಆಗ ನೀವು ನಡೆ ನಡೆದೂ ಎಡವಿ ಬೀಳುವಿರಿ, ಗಾಯಗೊಳ್ಳುವಿರಿ, ಉರುಲಿಗೆ ಸಿಕ್ಕಿಬೀಳುವಿರಿ, ಬಂಧನಕ್ಕೊಳಗಾಗುವಿರಿ.

### ಸಿಯೋನಿನ ಅಪೂರ್ವ ಮೂಲೆಗಲ್ಲು

14 ಆದಕಾರಣ, ಜೆರುಸಲೇಮಿನ ಜನರನ್ನಾಳುವ ಧರ್ಮನಿಂದಕರೇ, ಸರ್ವೇಶ್ವರಸ್ವಾಮಿಯ
ಮಾತನ್ನು ಕೇಳಿರಿ. 15ನೀವು ನಿಮ್ಮನಿಮ್ಮೊಳಗೆ: "ಮೃತ್ಯುವಿನೊಂದಿಗೆ ಮುಚ್ಚಳಿಕೆ, ಪಾತಾಳದೊಂದಿಗೆ ಒಪ್ಪಂದ
ಮಾಡಿಕೊಂಡಿದ್ದೇವೆ. ಮಹಾವಿಪತ್ತು ನಾಡನ್ನು ಹಾದು ಹೋಗುವಾಗ, ಅದು ನಮ್ಮನ್ನು ಮುಟ್ಟದು. ನಾವು
ಅಸತ್ಯವನ್ನು ಆಶ್ರಯಿಸಿಕೊಂಡಿದ್ದೇವೆ, ಮೋಸವನ್ನು ಮರೆ ಹೊಕ್ಕಿದ್ದೇವೆ" ಎಂದು ಕೊಚ್ಚಿಕೊಳ್ಳುತ್ತಿದ್ದೀರಿ.
16ಎಂದೇ, ಒಡೆಯರಾದ ಸರ್ವೇಶ್ವರ ಹೀಗೆನ್ನುತ್ತಾರೆ: 'ಇಗೋ, ನಾನು ಸಿಯೋನಿನಲ್ಲಿ ಅಸ್ತಿವಾರದ
ಕಲ್ಲೊಂದನ್ನು ಇಡುತ್ತೇನೆ. ಅದು ಸ್ಥಿರವಾದ, ಪರೀಕ್ಷಿತವಾದ, ಮೌಲ್ಯವಾದ ಮೂಲೆಗಲ್ಲು. ಇದರಲ್ಲಿ
ವಿಶ್ವಾಸವಿಡುವವನು ತಾಳ್ಮೆಯಿಂದ ಬಾಳುವನು. 17ನ್ಯಾಯನೀತಿಯನ್ನು ಅದರ ಅಳತೆಗೋಲನ್ನಾಗಿಯೂ
ಸತ್ಯಸಂಧತೆಯನ್ನು ಅದರ ಮಟ್ಟಗೋಲನ್ನಾಗಿಯೂ ಮಾಡುತ್ತೇನೆ. ನಿಮ್ಮ ಅಸತ್ಯದ ಆಶ್ರಯವನ್ನು ಕಲ್ಮಳೆ
ಕೊಚ್ಚಿಕೊಂಡು ಹೋಗುವುದು. ಜಲಪ್ರವಾಹವು ನಿಮ್ಮ ಮೋಸದ ಆಸರೆಯನ್ನು ಮುಳುಗಿಸುವುದು.
18ಮೃತ್ಯುವಿನೊಂದಿಗೆ ನೀವು ಮಾಡಿಕೊಂಡ ಒಪ್ಪಂದ ಬಿದ್ದುಹೋಗುವುದು. ಆ ಮಹಾವಿಪತ್ತು ನಾಡನ್ನು
ಹಾದುಹೋಗುವಾಗ ನಿಮ್ಮನ್ನು ತುಳಿದು ಹಾಕುವುದು. 19ಅದು ಹಾದುಹೋಗುವಾಗಲೆಲ್ಲಾ ನಿಮ್ಮನ್ನು
ಹಿಡಿದುಬಿಡುವುದು. ಪ್ರತಿದಿನವೂ ಹಗಲೂ ರಾತ್ರಿ ಅದು ಹಾದುಹೋಗುವುದು. ಸರ್ವೇಶ್ವರ ಸ್ವಾಮಿಯ ಈ
ಸಂದೇಶವನ್ನು ಅರ್ಥ ಮಾಡಿಕೊಳ್ಳುವವರಿಗೆ ಭಯಭ್ರಾಂತಿ ಉಂಟಾಗುವುದು. 20ನೀವಾದರೋ ಕಾಲು
ಚಾಚಲು ಚಾಪೆಸಾಲದವನಂತೆ, ಹೊದ್ದುಕೊಳ್ಳಲು ಕಂಬಳಿ ಸಾಲದವನಂತೆ ಇರುವಿರಿ. 21ಒಮ್ಮೆ ಸರ್ವೇಶ್ವರ
ಪೆರಾಚೀಮ್ ಬೆಟ್ಟದ ಮೇಲೆ ಎದ್ದಂತೆ ಏಳುವರು; ಗಿಬ್ಯೋನ್ ಕಣಿವೆಯಲ್ಲಿ ರೋಷಗೊಂಡಂತೆ
ರೋಷಗೊಳ್ಳುವರು. ಆಗ ಅಸಾಧಾರಣ ಕಾರ್ಯವೊಂದನ್ನು ನಡೆಸುವರು; ಅಪೂರ್ವವಾದ ತಮ್ಮ
ಕೆಲಸವನ್ನು ನೆರವೇರಿಸುವರು; 22ಆದಕಾರಣ, ನಿಮ್ಮ ಬಂಧನಗಳು ಇನ್ನೂ ಬಿಗಿಯಾಗದಂತೆ
ಧರ್ಮನಿಂದೆಯನ್ನು ಬಿಟ್ಟುಬಿಡಿ. 'ಇಡೀ ನಾಡೇ ನಾಶವಾಗಲಿ' ಎಂಬ ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ
ತೀರ್ಪನ್ನು ನಾನು ಕೇಳಿದ್ದೇನೆ.

### ದೇವರ ಕಾರ್ಯಗಳಲ್ಲಿ ಕಾಣುವ ಕುಶಲತೆ

23 ನನ್ನ ಮಾತಿಗೆ ಕಿವಿಗೊಡಿ, ನಾನು ಹೇಳುವುದನ್ನು ಗಮನವಿಟ್ಟು ಆಲಿಸಿ. 24ಬಿತ್ತನೆಗಾಗಿ
ಉಳುವವನು ಸದಾ ಉತ್ತುಕೊಂಡೇ ಇರುವನೋ? ಪ್ರತಿನಿತ್ಯವೂ ಮಣ್ಣನ್ನು ಕೆಳಮೇಲು ಮಾಡುತ್ತಾ
ಕುಂಟೆಹೊಡೆದುಕೊಂಡೇ ಇರುವನೋ? 25ಒಮ್ಮೆ ಭೂಮಿಯನ್ನು ಹಸನುಮಾಡಿದ ಮೇಲೆ ಜೀರಿಗೆಯನ್ನು
ಚೆಲ್ಲಿ, ಸದಾಪನ್ನು ಬಿತ್ತುವವನಲ್ಲವೆ? ಗೋದಿಯನ್ನು ಸಾಲುಸಾಲಾಗಿಯೂ ಬಾರ್ಲಿಯನ್ನು ತಕ್ಕ ಸ್ಥಳದಲ್ಲಿ ಬಿತ್ತಿ,
ಕಡಲೆಯನ್ನು ಅಂಚಿನಲ್ಲಿ ಹಾಕುವನಲ್ಲವೆ? 26ಅವನ ದೇವರು ಇದನ್ನೆಲ್ಲಾ ಸರಿಯಾಗಿ ತಿಳಿಸಿ
ಕಲಿಸಿಕೊಡುತ್ತಾರೆ. 27ಸದಾಪನ್ನು ಒಕ್ಕುವುದು ಕಣದ ಗುಂಡಿನಿಂದಲ್ಲ, ದೊಣ್ಣೆಯಿಂದಲೇ. 29ಗೋದಿಯನ್ನು
ಒಕ್ಕುವಾಗ ಕುದುರೆಗಳನ್ನು ಹೊಡೆದು ಗುಂಡನ್ನು ಉರುಳಿಸಿ ಕಾಳನ್ನು ಪುಡಿಪುಡಿ ಮಾಡುವನೋ? ಇಲ್ಲ.
29ಈ ವಿವೇಕವು ಕೂಡ ಸೇನಾಧೀಶ್ವರ ಸರ್ವೇಶ್ವರನಿಂದಲೇ ಬರುತ್ತದೆ. ಅವರ ಆಲೋಚನೆ
ಅತಿಶಯವಾದುದು. ಅವರ ಜ್ಞಾನ ಸರ್ವಶ್ರೇಷ್ಠವಾದುದು!

### ಜೆರುಸಲೇಮಿನ ದುರ್ಗತಿ

**29** ಅರೀಯೇಲೇ, ಅರೀಯೇಲೇ, ದಾವೀದನು ದಂಡಿಳಿದ ಪಟ್ಟಣವೇ, ನಿನಗೆ ಧಿಕ್ಕಾರ! ಒಂದೆರಡು
ವರ್ಷ ತುಂಬಲಿ. ಹಬ್ಬಹುಣ್ಣಿಮೆಗಳು ಕಳೆಯಲಿ. 2ಅನಂತರ ನಾನು ಅರೀಯೇಲನ್ನು ಬಾಧಿಸುವೆನು. ಅಲ್ಲಿ
ಅರಚಾಟ ಕಿರಿಚಾಟ ಇರುವುದು. ಆ ಪಟ್ಟಣವು ವಾಸ್ತವವಾಗಿ ನನಗೆ ಅರೀಯೇಲಾಗಿಯೇ
ಪರಿಣಮಿಸುವುದು. 3ನಾನು ನಿನ್ನ ಸುತ್ತಲೂ ದಂಡಿಳಿಸಿ ನಿನಗೆ ವಿರುದ್ಧವಾಗಿ ಕೊತ್ತಲ ಕಟ್ಟುವೆನು.
ದಿಬ್ಬವನ್ನೆಬ್ಬಿಸಿ ನಿನ್ನನ್ನು ಮುತ್ತುವೆನು. 4ನೀನು ಕುಗ್ಗಿ ಭೂಮಿಯೊಳಗಿಂದ ಮಾತಾಡುವೆ. ನಿನ್ನ ನುಡಿ

ಮಣ್ಣಿನೊಳಗಿಂದ ಶಿಥಿಲ ಸ್ವರವಾಗಿ ಹೊರಡುವುದು. ನಿನ್ನ ಧ್ವನಿ ಭೂತದ ಧ್ವನಿಯಂತೆ ನೆಲದೊಳಗಿಂದ ಬರುವುದು. ಧೂಳಿನೊಳಗಿಂದ ನಿನ್ನ ಮಾತು ಲೊಚಗುಟ್ಟುವಂತೆ ಕೇಳಿಸುವುದು.

5 ಅರೀಯೇಲೇ, ಗುಂಪುಗುಂಪಾಗಿ ಕೂಡಿ ಬರುವ ನಿನ್ನ ಶತ್ರುಗಳು ಧೂಳಿಪುಡಿಯಂತೆ ತೂರಿ ಹೋಗುವರು. ತಂಡೋಪತಂಡವಾಗಿ ಬಂದಿರುವ ಭಯಂಕರ ಸೈನಿಕರು ಹೊಟ್ಟಿನಂತೆ ಹಾರಿ ಹೋಗುವರು. ತಟ್ಟನೆ ಕ್ಷಣಮಾತ್ರದಲ್ಲಿ ಕಣ್ಮರೆಯಾಗುವರು. 6ಗುಡುಗು, ಭೂಕಂಪ, ಮಹಾಗರ್ಜನೆ, ಬಿರುಗಾಳಿ, ಚಂಡಮಾರುತ, ಭಸ್ಮ ಮಾಡುವಂಥ ಅಗ್ನಿಜ್ವಾಲೆ – ಇವುಗಳ ಮೂಲಕ ಸರ್ವೇಶ್ವರ ನಿನ್ನ ಪರವಾಗಿ ಪ್ರತ್ಯಕ್ಷವಾಗುವರು. 7ಆಗ, ನಿನ್ನ ಮೇಲೆ ಹೋರಾಡಿ, ನಿನಗೂ ನಿನ್ನ ಕೋಟೆಗೂ ವಿರುದ್ಧವಾಗಿ ಯುದ್ಧಮಾಡಿ, ನಿನ್ನನ್ನು ಬಾಧಿಸುವ ಸಕಲ ಜಾತಿಜನಾಂಗಗಳು ಕನಸಿನಂತೆ, ರಾತ್ರಿಕಾಲದ ಸ್ವಪ್ನದಂತೆ ಮಾಯವಾಗುವುವು. 8ಸಿಯೋನ್ ಪರ್ವತಕ್ಕೆ ವಿರುದ್ಧವಾಗಿ ಹೋರಾಡುವ ಸಕಲ ರಾಷ್ಟ್ರಗಳ ಸಮುದಾಯದ ಗತಿ ಸ್ವಪ್ನಕಾಣುವವನ ಗತಿಯಾಗುವುದು. ಹಸಿದಿರುವ ಅವನು ಉಣ್ಣುವಂತೆ ಕನಸುಕಂಡರೂ ಎಚ್ಚರವಾದಾಗ ಅವನ ಹೊಟ್ಟೆ ಬರಿದಾಗಿಯೇ ಇರುತ್ತದೆ. ಬಾಯಾರಿದ ಅವನು ಕುಡಿಯುವಂತೆ ಕನಸು ಕಂಡರೂ ಎಚ್ಚರವಾದಾಗ ಅವನ ಹೊಟ್ಟೆ ಬರಿದಾಗಿಯೇ ಇರುತ್ತದೆ. ಬಾಯಾರಿದ ಅವನು ಕುಡಿಯುವಂತೆ ಕನಸು ಕಂಡರೂ ಎಚ್ಚರವಾದಾಗ ಬಳಲಿ ಬಾಯಾರಿಕೆಯಿಂದಲೇ ಇರುತ್ತಾನೆ.

### ಎಚ್ಚರಿಕೆಯ ಮಾತುಗಳ ಉಪೇಕ್ಷೆ

9 ನಿಮ್ಮನ್ನು ನೀವೇ ಬೆರಗುಮಾಡಿಕೊಂಡು ನಿಬ್ಬೆರಗಾಗಿರಿ. ಕುರುಡು ಮಾಡಿಕೊಂಡು ಕಡು ಕುರುಡರಾಗಿರಿ. ಮದ್ಯಪಾನ ಮಾಡದೆಯೇ ಮತ್ತರಾಗಿರಿ, ಕುಡಿಯದೆಯೇ ಓಲಾಡಿರಿ. 10ಸರ್ವೇಶ್ವರ ನಿಮ್ಮ ಮೇಲೆ ಗಾಢನಿದ್ರೆಯನ್ನು ಬರಮಾಡಿ ಪ್ರವಾದಿಗಳೆಂಬ ಕಣ್ಣುಗಳನ್ನು ಕಟ್ಟಿಬಿಟ್ಟಿದ್ದಾರೆ. ದಿವ್ಯದರ್ಶನಗಳೆಂಬ ಕಲೆಗಳಿಗೆ ಮುಸುಕು ಹಾಕಿ ಬಿಟ್ಟಿದ್ದಾರೆ. 11ಈ ಕಾರಣ, ನಿನ್ನ ಕುರಿತ ದಿವ್ಯದರ್ಶನ ನಿಗೂಢ ಗ್ರಂಥವಾಕ್ಯವಾಗಿಬಿಟ್ಟಿದೆ. ಅದನ್ನು ಅಕ್ಷರಬಲ್ಲವನಿಗೆ, “ದಯಮಾಡಿ ಇದನ್ನು ಓದು” ಎಂದುಕೊಟ್ಟರೆ, ಅವನು: “ಇದು ನಿಗೂಢವಾಗಿದೆ, ಆಗುವುದಿಲ್ಲ” ಎನ್ನುತ್ತಾನೆ. 12ಅಕ್ಷರವಿಲ್ಲದವನಿಗೆ, “ದಯವಿಟ್ಟು ಇದನ್ನು ಓದು” ಎಂದು ಒಪ್ಪಿಸಿದರೆ, ಅವನು: “ನನಗೆ ಅಕ್ಷರವಿದ್ಯೆ ಇಲ್ಲ” ಎನ್ನುತ್ತಾನೆ.

13 ಸರ್ವೇಶ್ವರ ಹೀಗೆಂದರು:

“ಈ ಜನರು ನನ್ನನ್ನು ಸಮೀಪಿಸುವುದು
ಬರೀ ಮಾತಿನ ಮರ್ಯಾದೆಯಿಂದ,
ಇವರು ನನ್ನನ್ನು ಸನ್ಮಾನಿಸುವುದು
ಬರೀ ಮಾತಿನ ಮಾಲೆಯಿಂದ,
ಇವರ ಹೃದಯವಾದರೋ ಬಲು
ದೂರವಿದೆ ನನ್ನಿಂದ.
ಇವರು ನನಗೆ ಸಲ್ಲಿಸುವ ಭಕ್ತಿ ಕೂಡಿದೆ
ಕೇವಲ ಭಯದಿಂದ,
ಕಲಿತಿಹರಿವರು ಮಾನವಕಲ್ಪಿತ
ಕಟ್ಟಳೆಯನು ಬಾಯಿಪಾಠದಿಂದ.

14 ಇಂತಿರಲು ಇವರ ಮಧ್ಯೆ ಎಸಗುವೆನು
ಅಧಿಕಾಶ್ಚರ್ಯವಾದ ಅದ್ಭುತಕಾರ್ಯಗಳನು,
ಅಳಿವುದು ಇವರ ಜ್ಞಾನಿಗಳ ಜ್ಞಾನವು,
ಅಡಗುವುದು ವಿವೇಕಿಗಳ ವಿವೇಕವು”.

## ಭವ್ಯಭವಿಷ್ಯದ ಭರವಸೆ

15 ತಮ್ಮ ಆಲೋಚನೆಯನ್ನು ಸರ್ವೇಶ್ವರ ಸ್ವಾಮಿಯಿಂದ ಬಚ್ಚಿಡುವುದಕ್ಕಾಗಿ ಒಳಸಂಚು ಮಾಡುವವರಿಗೆ ಧಿಕ್ಕಾರ! ಇವರು, “ನಮ್ಮನ್ನು ಯಾರು ನೋಡಿಯಾರು? ನಮ್ಮನ್ನು ಯಾರು ಗಮನಿಸಿಯಾರು?” ಎಂದುಕೊಂಡು ಕತ್ತಲಲ್ಲೇ ತಮ್ಮ ಕೃತ್ಯಗಳನ್ನು ನಡೆಸುತ್ತಾರೆ. 16ಇವರು ಎಲ್ಲವನ್ನೂ ತಲೆಕೆಳಗಾಗಿಸುತ್ತಾರೆ. ಜೇಡಿಮಣ್ಣು ಕುಂಬಾರನಿಗೆ ಸಾಟಿಯೇ? ಕೃತಿಯು ತನ್ನ ಕರ್ತನನ್ನೇ ಕುರಿತು: “ನಿನಗೆ ಬುದ್ಧಿಯಿಲ್ಲ” ಎಂದೀತೆ? 17ಕೊಂಚ ಕಾಲದೊಳಗೆ ಲೆಬನೋನ್ ಅರಣ್ಯವು ತೋಟವಾಗುವುದು. ಈಗಿನ ತೋಟವಾದರೋ ಅರಣ್ಯವಾಗಿ ಕಾಣಿಸುವುದು.

18 ಆ ದಿನದಂದು ಕಿವುಡರು ಗ್ರಂಥ ವಾಕ್ಯಗಳನ್ನು ಓದುವುದನ್ನು ಕೇಳುವರು. ಕುರುಡರಿಗೆ ಮಬ್ಬಿನಲ್ಲೂ ಕತ್ತಲಲ್ಲೂ ಕಣ್ಣು ಕಾಣಿಸುವುದು. 19ದೀನದಲಿತರು ಸರ್ವೇಶ್ವರನಲ್ಲಿ ಅತಿಯಾಗಿ ಆನಂದಿಸುವರು. ಬಡಬಗ್ಗರು ಇಸ್ರಯೇಲಿನ ಪರಮ ಪಾವನ ಸ್ವಾಮಿಯಲ್ಲಿ ಉಲ್ಲಾಸಿಸುವರು. 20ಏಕೆಂದರೆ ಭಯೋತ್ಪಾದಕರು ನಿಶ್ಶೇಷರಾಗುವರು, ಧರ್ಮನಿಂದಕರು ನಿರ್ನಾಮವಾಗುವರು. 21ಸುಳ್ಳು ಸಾಕ್ಷಿ ಹೇಳಿ ತಪ್ಪುಹೊರಿಸುವವರು, ನ್ಯಾಯ ಸ್ಥಾನದಲ್ಲಿ ದೋಷವನ್ನು ಖಂಡಿಸುವವರಿಗೆ ಉರುಲೊಡ್ಡುವವರು, ನೀತಿವಂತನಿಗೆ ನ್ಯಾಯ ತಪ್ಪಿಸುವವರು – ಹೀಗೆ ಅಧರ್ಮದಲ್ಲಿ ನಿರತರಾಗಿರುವ ಇವರೆಲ್ಲರು ನಿರ್ಮೂಲರಾಗುವರು.

22 ಹೀಗಿರಲು ಅಬ್ರಹಾಮನನ್ನು ಉದ್ಧರಿಸಿದ ಸರ್ವೇಶ್ವರಸ್ವಾಮಿ ಯಕೋಬನ ಮನೆತನದ ವಿಷಯವಾಗಿ ಹೀಗೆನ್ನುತ್ತಾರೆ: “ಯಕೋಬ ವಂಶದವರೇ, ಇನ್ನು ಮೇಲೆ ನೀವು ನಾಚಿಕೆಗೀಡಾಗುವುದಿಲ್ಲ, ನಿಮ್ಮ ಮುಖ ಇನ್ನು ಬಾಡುವುದಿಲ್ಲ. 23ನಿಮ್ಮ ವಂಶಜರು ತಮ್ಮ ಮಧ್ಯದಲ್ಲಿ ನಾನು ಎಸಗುವ ಕಾರ್ಯಗಳನ್ನು ನೋಡಿ, ನನ್ನ ನಾಮವೇ ಪರಮಪೂಜಿತವೆಂದು ಸ್ಥಿರಪಡಿಸುವರು. ಹೌದು, ಯಕೋಬ ವಂಶದ ಪರಮಪಾವನ ಸ್ವಾಮಿಯಾದ ನನ್ನನ್ನು ಪ್ರತಿಷ್ಠಾಪಿಸುವರು. ಇಸ್ರಯೇಲರ ದೇವರಾದ ನನ್ನಲ್ಲಿ ಭಯಭಕ್ತಿಯಿಂದಿರುವರು. 24ಚಂಚಲಚಿತ್ತರು ಬುದ್ಧಿವಂತರಾಗುವರು. ಗೊಣಗುಟ್ಟುವವರು ಧ್ಯಾನ ಮಗ್ನರಾಗುವರು.

## ಈಜಿಪ್ಟಿನೊಡನೆ ಸಂಧಾನ ವ್ಯರ್ಥ

**30** ಸರ್ವೇಶ್ವರಸ್ವಾಮಿಯ ನುಡಿಯಿದು: “ದ್ರೋಹಿಗಳಾದ ಈ ಪೀಳಿಗೆಗೆ ಧಿಕ್ಕಾರ! ಇವರು ನನ್ನನ್ನು ಕೇಳದೆ ತಮ್ಮದೇ ಆದ ಯೋಜನೆಯನ್ನು ಸಾಧಿಸುತ್ತಾರೆ. ನನ್ನಾತ್ಮ ಪ್ರೇರಣೆಯಿಲ್ಲದೆ ತಂತ್ರೋಪಾಯಗಳನ್ನು ಹೂಡುತ್ತಾರೆ. ಪಾಪದ ಮೇಲೆ ಪಾಪವನ್ನು ಸೇರಿಸಿಕೊಳ್ಳುತ್ತಾರೆ. 2ನನ್ನ ಸಲಹೆಯನ್ನು ಕೇಳದೆ ಈಜಿಪ್ಟಿಗೆ ಪ್ರಯಾಣ ಬೆಳೆಸಿದ್ದಾರೆ. ಫರೋಹನ ಆಶ್ರಯವನ್ನು ಬಯಸುತ್ತಾರೆ. ಈಜಿಪ್ಟಿನವರನ್ನು ಮರೆಹೋಗಬೇಕೆಂದಿದ್ದಾರೆ. 3ಆದರೆ ಫರೋಹನ ಆಶ್ರಯದಿಂದ ಅವರಿಗೆ ನಾಚಿಕೆಯಾಗುವುದು. ಈಜಿಪ್ಟಿನವರನ್ನು ಮರೆಹೋಗುವುದರಿಂದ ಅವರಿಗೆ ಅವಮಾನ ಉಂಟಾಗುವುದು. 4ಫರೋಹನ ಸಾಮಂತರಾಜರು ಚೊವನಿನಲ್ಲಿದ್ದಾರೆ. ಅವನ ರಾಯಭಾರಿಗಳು ಹಾನೇಸನ್ನು ತಲುಪಿದ್ದಾರೆ. 5ಆದರೂ ಅವರು ಯಾವ ಸಹಾಯವನ್ನಾಗಲೀ ಸೌಕರ್ಯವನ್ನಾಗಲೀ ನೀಡಲಾರರು. ಬದಲಿಗೆ, ಈ ಪೀಳಿಗೆಯವರಿಗೆ ನಾಚಿಕೆಯಾಗುವುದು, ಅವಮಾನವಾಗುವುದು, ಆ ನಿಷ್ಪ್ರಯೋಜಕ ರಾಷ್ಟ್ರದ ಬಗ್ಗೆ ಎಲ್ಲರೂ ವಿಷಾದಿಸುವರು.

6 ನೆಗೇಬಿನ ಮೃಗಗಳನ್ನು ಕುರಿತ ದೈವವಾಣಿ: ಸಿಂಹಸಿಂಹಿಣಿಗಳಿಂದಲೂ ವಿಷಸರ್ಪ – ಘಟಸರ್ಪಗಳಿಂದಲೂ ಕೂಡಿದ ಭಯಂಕರ ಹಾಗೂ ಸಂಕಟಕರವಾದ ಆ ನಾಡಿನ ಮಾರ್ಗವಾಗಿ ತಮ್ಮ ಧನಕನಕಗಳನ್ನು ಕತ್ತೆಗಳ ಮೇಲೂ ಆಸ್ತಿಪಾಸ್ತಿಗಳನ್ನು ಒಂಟೆಗಳ ಮೇಲೂ ಹೊರಿಸಿಕೊಂಡು ನಿಷ್ಪ್ರಯೋಜಕವಾದ ಆ ರಾಷ್ಟ್ರಕ್ಕೆ ಹೋಗುತ್ತಾರೆ.

7 ಈಜಿಪ್ಟ್ ನೀಡುವ ಸಹಾಯ ನಿರರ್ಥಕ, ನಿಷ್ಪ್ರಯೋಜಕ. ಆದುದರಿಂದಲೇ ಅದಕ್ಕೆ ನಾನು ಜಡವಾಗಿ ಬಿದ್ದಿರುವ ಘಟಸರ್ಪ ಎಂದು ಹೆಸರು ಇಟ್ಟಿದ್ದೇನೆ.

## ಈಜಿಪ್ಟಿನಿಂದಾಗುವ ದುರ್ಗತಿ

8 ಸರ್ವೇಶ್ವರ ನನಗೆ ಇಂತೆಂದರು: "ನೀನು ಈಗಲೇ ಹೋಗಿ, ನಾನು ಹೇಳುವುದನ್ನು
ಅವರೆದುರಿನಲ್ಲಿಯೆ ಹಲಗೆಯ ಮೇಲೆ ಕೆತ್ತು, ಪುಸ್ತಕದಲ್ಲಿ ಬರೆ. ಅದು ಮುಂದಿನ ಕಾಲಕ್ಕೆ ಶಾಶ್ವತ
ಸಾಕ್ಷಿಯಾಗಿರಲಿ. 9ಇವರು ದಂಗೆ ಏಳುವ ಜನರು. ಸುಳ್ಳಾಡುವ ಪೀಳಿಗೆ, ಸರ್ವೇಶ್ವರನ ಉಪದೇಶಕ್ಕೆ
ಕಿವಿಗೊಡದ ಸಂತಾನ, 10ಇವರು ದಿವ್ಯದರ್ಶಿಗಳನ್ನು ನೋಡಿ: "ನಿಮಗೆ ದರ್ಶನವಾಗದಿರಲಿ" ಎನ್ನುತ್ತಾರೆ.
ಪ್ರವಾದಿಗಳಿಗೆ: "ನಯವಾದುದ್ದನ್ನು ನಮಗೆ ನುಡಿಯಿರಿ. ಮಾಯವಾದವುಗಳನ್ನೇ ಪ್ರವಾದನೆ ಮಾಡಿರಿ.
11ನಮಗೆ ಅಡ್ಡ ಬರಬೇಡಿ. ನಮ್ಮ ದಾರಿಯಿಂದ ದೂರವಿರಿ. ಇಸ್ರಯೇಲರ ಪರಮ ಪಾವನ ಸ್ವಾಮಿಯ
ವಿಷಯವನ್ನು ನಮ್ಮ ಮುಂದೆ ಎತ್ತಬೇಡಿ" ಎಂದು ಹೇಳುತ್ತಾರೆ.

12 ಆದಕಾರಣ, ಇಸ್ರಯೇಲಿನ ಪರಮ ಪಾವನ ಸ್ವಾಮಿ ಹೀಗೆನ್ನುತ್ತಾರೆ: "ನೀವು ನನ್ನ ಮಾತನ್ನು
ತಿರಸ್ಕರಿಸಿ ಹಿಂಸೆ ಕುತಂತ್ರಗಳನ್ನೇ ನೆಚ್ಚಿಕೊಂಡಿದ್ದೀರಿ. 13ಇದ್ದಕ್ಕಿದ್ದಂತೆ ಆ ಗೋಡೆ ತಟ್ಟನೆ
ಬಿದ್ದುಹೋಗುವುದು. ಅಂತೆಯೇ ನಿಮ್ಮ ಅಪರಾಧ ನಿಮಗೆ ಅಪಾಯಕರವಾಗಿರುವುದು. 14ಆ
ಗೋಡೆಯೆಂಬ ಕುಂಬಾರನ ಮಡಕೆಯ ಚೂರಿನಿಂದ, ಬೆಂಕಿಯ ಒಲೆಯಿಂದ ಕೆಂಡವನ್ನು
ತೆಗೆಯುವುದಕ್ಕಾಗಲೀ ತೊಟ್ಟಿಯ ನೀರನ್ನು ತೋಡಿಕೊಳ್ಳುವುದಕ್ಕಾಗಲೀ ಸಾಧ್ಯವಾಗದು."

15 ಪರಮಪಾವನವಾಗಿರುವ ಇಸ್ರಯೇಲಿನ ಸರ್ವೇಶ್ವರಸ್ವಾಮಿಯಾದ ನಾನು ನಿಮಗೆ
ಹೇಳುವುದೇನೆಂದರೆ: "ನೀವು ಪಶ್ಚಾತ್ತಾಪಪಟ್ಟು ನನಗೆ ಅಭಿಮುಖವಾಗಿ ನೆಮ್ಮದಿಯಿಂದಿದ್ದರೆ
ಉದ್ಧಾರವಾಗುವಿರಿ. ಶಾಂತಿಸಮಾಧಾನ ಮತ್ತು ಭಕ್ತಿ ಭರವಸೆಯಲ್ಲೇ ಶಕ್ತಿಯನ್ನು ಪಡೆಯುವಿರಿ." ಆದರೆ
ನೀವು ಒಪ್ಪಿಕೊಂಡಿಲ್ಲ. 16ಬದಲಿಗೆ "ಬೇಡ ಬೇಡ, ನಾವು ಕುದುರೆಗಳ ಮೇಲೆ ಓಡಿ ಹೋಗುತ್ತೇವೆ"
ಎಂದುಕೊಂಡಿರಿ. ಅಂತೆಯೇ ಓಡಿಹೋಗುವಿರಿ. "ನಾವು ದೌಡೋಡುವ ಕುದುರೆಗಳ ಮೇಲೆ
ಸವಾರಿಮಾಡುತ್ತೇವೆ" ಎಂದುಕೊಂಡಿರಿ. ಅಂತೆಯೇ ದೌಡೋಡುವವರೇ ನಿಮ್ಮನ್ನು ಅಟ್ಟಿಕೊಂಡು
ಬರುವರು. 17ಒಬ್ಬ ಸೈನಿಕನ ಬೆದರಿಕೆಗೆ ಸಾವಿರ ಜನರು ಪರಾರಿಯಾಗುವರು. ಐದು ಸೈನಿಕರ ಬೆದರಿಕೆಗೆ
ನೀವೆಲ್ಲರೂ ಓಡಿಹೋಗುವಿರಿ. ಕಟ್ಟ ಕಡೆಗೆ ಬೆಟ್ಟದ ತುದಿಯಲ್ಲಿರುವ ಧ್ವಜಸ್ತಂಭದಂತೆ, ಗುಡ್ಡದ ಮೇಲಿರುವ
ಕೈಕಂಬದಂತೆ ಒಬ್ಬಂಟಿಗನಾಗಿ ಉಳಿಯುವಿರಿ. 18ಆದರೆ ಸರ್ವೇಶ್ವರ ನಿಮಗೆ ಕೃಪೆತೋರಬೇಕೆಂದು
ಕಾದಿರುತ್ತಾರೆ. ನಿಮ್ಮನ್ನು ಕರುಣಿಸಲು ಎದ್ದುನಿಂತಿದ್ದಾರೆ. ಅವರು ನ್ಯಾಯಪರರಾದ ದೇವರು, ಅವರಿಗಾಗಿ
ಕಾದಿರುವವರೆಲ್ಲರೂ ಧನ್ಯರು.

## ಸಿಯೋನಿಗೆ ಶಾಂತಿಯ ಸಂದೇಶ

19 ಜೆರುಸಲೇಮಿನಲ್ಲಿ ವಾಸಿಸುವ ಸಿಯೋನಿನ ಜನರೇ, ನೀವಿನ್ನು ಅಳಬೇಕಾಗಿಲ್ಲ. ನಿಮ್ಮ ಕೂಗನ್ನು
ಕೇಳಿದ್ದೇ, ಸರ್ವೇಶ್ವರ ನಿಮಗೆ ಕೃಪೆತೋರಿಸುವರು. ನಿಮ್ಮ ಸ್ವರವನ್ನು ಕೇಳಿದಾಕ್ಷಣ ಸದುತ್ತರವನ್ನು
ದಯಪಾಲಿಸುವರು. 20ಅವರು ನಿಮಗೆ ಕಷ್ಟಸಂಕಟವನ್ನು ಅನ್ನಪಾನವಾಗಿ ಕೊಟ್ಟರೂ ನಿಮ್ಮ ಬೋಧಕರು
ಇನ್ನು ನಿಮಗೆ ಮರೆಯಾಗಿ ಇರುವುದಿಲ್ಲ. ನೀವು ಅವರನ್ನು ಕಣ್ಣಾರೆ ಕಾಣುವಿರಿ. 21ನೀವು ಬಲಕ್ಕಾಗಲೀ
ಎಡಕ್ಕಾಗಲೀ ತಿರುಗಿದರೆ 'ಇದೇ ಮಾರ್ಗ, ಇದರಲ್ಲೇ ನಡೆಯಿರಿ' ಎಂಬ ಮಾತು ಹಿಂದಿನಿಂದ ನಿಮ್ಮ ಕಿವಿಗೆ
ಕೇಳಿಸುವುದು. 22ಆಗ ಬೆಳ್ಳಿಯ ಕವಚಗಳಿಂದ ಕೂಡಿದ ನಿಮ್ಮ ವಿಗ್ರಹಗಳನ್ನೂ ಚಿನ್ನದಿಂದ ಲೇಪಿತವಾದ
ನಿಮ್ಮ ಬೊಂಬೆಗಳನ್ನೂ ಬಿಸಾಡುವಿರಿ. ಅವುಗಳನ್ನು ಹೊಲೆ ಮಾಡಿ 'ತೊಲಗಿ' ಎಂದು ಹೇಳುತ್ತಾ ಎಸೆದು
ಬಿಡುವಿರಿ.

23 ಆಗ ಸರ್ವೇಶ್ವರ ಹೊಲದ ಬಿತ್ತನೆಗೆ ಬೇಕಾದ ಮಳೆಯನ್ನು ನಿಮಗೆ ಸುರಿಸುವರು. ಆ ಹೊಲದ
ಬೆಳೆಯಿಂದ ಸಾರವತ್ತಾದ ಆಹಾರವನ್ನು ಸಮೃದ್ಧಿಯಾಗಿ ಒದಗಿಸುವರು. ಅಂದು ನಿಮ್ಮ ದನಕರುಗಳು
ವಿಶಾಲವಾದ ಹುಲ್ಲು ಗಾವಲುಗಳಲ್ಲಿ ಮೇಯುವುವು. 24ಹೊಲಗೇಯುವ ನಿಮ್ಮ ಎತ್ತು ಕತ್ತೆಗಳು
ಮೊರದಿಂದಲೂ ಕವೆಗೋಲಿನಿಂದಲೂ ತೂರಿದ ರುಚಿಕರವಾದ ಮೇವನ್ನು ತಿನ್ನುವುವು.
25ಕೋಟೆಕೊತ್ತಲಗಳು ಬಿದ್ದುಹೋಗುವುವು. ಶತ್ರುಗಳ ಮಹಾಸಂಹಾರ ನಡೆಯುವ ಆ ದಿನದಂದು ಉನ್ನತ
ಪರ್ವತಗಳಿಂದಲೂ ಎತ್ತರವಾದ ಗುಡ್ಡಗಳಿಂದಲೂ ತೊರೆಗಳೂ ನೀರಿನ ಕಾಲುವೆಗಳೂ ಹರಿಯುವುವು.

26ಇದಲ್ಲದೆ ಚಂದ್ರನ ಬೆಳಕು ಸೂರ್ಯನ ಬೆಳಕಿನಂತಿರುವುದು. ಸೂರ್ಯನ ಬೆಳಕು ಏಳ್ಮಡಿ ಹೆಚ್ಚುವುದು. ಏಳು ದಿನಗಳ ಬೆಳಕು ಒಂದೇ ದಿನದ ಬೆಳಕಿನಂತಾಗುವುದು. ಅಂದು ಸರ್ವೇಶ್ವರ ತಮ್ಮ ಜನರ ಹುಣ್ಣುಗಳನ್ನು ಕಟ್ಟುವರು. ತಮ್ಮ ಪೆಟ್ಟಿನಿಂದ ಜನರಿಗಾದ ಗಾಯಗಳನ್ನು ಗುಣಪಡಿಸುವರು.

### ಅಸ್ಸೀರಿಯಾಕ್ಕೆ ಬರಲಿರುವ ದಂಡನೆ

27 ಇಗೋ, ಸರ್ವೇಶ್ವರನಾಮಧೇಯನು
ಬರುತಿಹನು ದೂರದಿಂದ;
ಭುಗಿಲೇರುತಿದೆ ಆತನ ಕೋಪ
ಏಳುತಿದೆ ದಟ್ಟವಾದ ಧೂಮ ಅದರಿಂದ.
ದಹಿಸುವ ಅಗ್ನಿಯಂತಿದೆ ಆತನ ನಾಲಗೆ.
ಭರಿತವಾಗಿದೆ ಆತನ ತುಟಿಗಳು
ರೋಷದಿಂದ.
28 ತುಂಬಿತುಳುಕಿ ಕಂಠದವರೆಗೆ ಏರುವ
ತೊರೆಯಂತಿದೆ ಆತನ ಶ್ವಾಸ
ಆತನ ಕೈಯಲ್ಲಿದೆ ಜನಾಂಗಗಳನ್ನು
ಜಾಲಿಸುವ ಜರಡಿಯ ವಿನಾಶ
ಜನರ ಕಟಿಬಾಯಲ್ಲಿರುವುದು ದಾರಿ ತಪ್ಪಿಸುವ
ಕಡಿವಾಣದ ಪಾಶ.
29 ನೀವಾದರೋ ಹಾಡುವಿರಿ ಹಬ್ಬದ
ರಾತ್ರಿಯಲ್ಲೋ ಎಂಬಂತೆ
ಹೃದಯಾನಂದ ಪಡುವಿರಿ, ಇಸ್ರಯೇಲರ
ರಕ್ಷಣೆಯ ಕೋಟೆಗೆ,
ಸರ್ವೇಶ್ವರನ ಶಿಖರಕ್ಕೆ ಕೊಳಲನೂದುತ
ಹೋಗುವವರಂತೆ.

30 ಆಗ ಸರ್ವೇಶ್ವರ ತಮ್ಮ ಗಂಭೀರವಾದ ವಾಣಿಯನ್ನು ಕೇಳುವಂತೆ ಮಾಡುವರು. ತೀವ್ರ ಕೋಪ, ದಹಿಸುವ ಅಗ್ನಿಜ್ವಾಲೆ, ಸಿಡಿಯುವ ಮೋಡ, ಚಂಡಮಾರುತ, ಕಲ್ಮಳೆ – ಇವುಗಳಿಂದ ತಮ್ಮ ಶಿಕ್ಷಾಹಸ್ತವನ್ನು ಪ್ರದರ್ಶಿಸುವರು. 31ಹೀಗೆ ಸರ್ವೇಶ್ವರಸ್ವಾಮಿಯ ವಾಣಿಯನ್ನು ಕೇಳಿದ ಅಸ್ಸೀರಿಯಾದವರು ದಿಗ್ಭ್ರಮೆಗೊಳ್ಳುವರು. ರಾಜದಂಡದ ಶಿಕ್ಷೆಯನ್ನು ಸವಿಯುವರು. 32ಸರ್ವೇಶ್ವರ ಸ್ವಾಮಿ ವಿಧಿಸುವ ಪ್ರತಿಯೊಂದು ಪೆಟ್ಟು ತಾಳ ತಮ್ಮಟೆಯಂತೆ ಅವರ ಮೇಲೆ ಬೀಳುವುದು. ಸರ್ವೇಶ್ವರ ತಾವೇ ಅವರ ವಿರುದ್ಧವಾಗಿ ಕೈಬೀಸಿ ಯುದ್ಧಮಾಡುವರು. 33ಪುರಾತನ ಕಾಲದಿಂದಲೇ ಅಸ್ಸೀರಿಯದ ಅರಸನಿಗೆ ಅಗ್ನಿಕುಂಡವು ಅಣಿಯಾಗಿದೆ. ಅದನ್ನು ಆಳವಾಗಿಯೂ ಅಗಲವಾಗಿಯೂ ಮಾಡಲಾಗಿದೆ. ಅದರಲ್ಲಿನ ಚಿತೆಯೊಳಗೆ ಬೆಂಕಿಯೂ ಸೌದೆಯೂ ತುಂಬಿದೆ. ಗಂಧಕದ ಪ್ರವಾಹದೋಪಾದಿಯಲ್ಲಿ ಸರ್ವೇಶ್ವರಸ್ವಾಮಿ ತಮ್ಮ ಶ್ವಾಸವನ್ನೂದಿ ಅದನ್ನು ಭುಗಿಲೆಬ್ಬಿಸುವರು.

### ಜೆರುಸಲೇಮಿಗೆ ದೇವರ ರಕ್ಷಣೆ

**31** ಇಸ್ರಯೇಲರ ಪರಮಪಾವನ ಸ್ವಾಮಿಯನ್ನು ಆಶ್ರಯಿಸದೆ, ಸಹಾಯಕ್ಕಾಗಿ ಈಜಿಪ್ಟಿಗೆ ತೆರಳುವವರಿಗೆ
ಧಿಕ್ಕಾರ! ಅವರಿಗೆ ಬೇಕು ಆ ನಾಡಿನ ಅಶ್ವಬಲ, ರಥಗಳ ಸಂಖ್ಯಾಬಲ, ಸವಾರರ ಶೌರ್ಯ. 2ಆದರೆ ಸರ್ವೇಶ್ವರ
ಸ್ವಾಮಿ ಬುದ್ಧಿವಂತರು, ಆಡಿದ ಮಾತನ್ನು ಹಿಂದಕ್ಕೆ ತೆಗೆದುಕೊಳ್ಳದವರು, ಕೇಡನ್ನು ಬರಮಾಡಬಲ್ಲವರು.
ಕೇಡುಕರ ಕೊಂಪೆಗೂ ದುರುಳರ ಸಹಾಯಕರಿಗೂ ವಿರುದ್ಧವಾಗಿ ನಿಲ್ಲಬಲ್ಲವರು. 3ಈಜಿಪ್ಟಿನವರು ಕೇವಲ

ಮನುಷ್ಯರೇ ಹೊರತು ದೇವರಲ್ಲ. ಅವರ ಅಶ್ವಗಳು ಮೂಳೆಮಾಂಸವೇ ಹೊರತು ಆಧ್ಯಾತ್ಮಿಕ ದಿವ್ಯಶಕ್ತಿಯಲ್ಲ. ಸರ್ವೇಶ್ವರ ಕೈಯೆತ್ತುವಾಗ ಅದಕ್ಕೆ ವಿರುದ್ಧ ಸಹಾಯ ಮಾಡಿದ ಅವನು ಮುಗ್ಗರಿಸುವನು. ಆ ಸಹಾಯ ಪಡೆದ ಅವನು ಬಿದ್ದು ಹೋಗುವನು. ಎಲ್ಲರೂ ಒಟ್ಟಿಗೆ ಅಳಿದು ಹೋಗುವರು.

4 ಸರ್ವೇಶ್ವರ ನನಗೆ ಹೀಗೆಂದು ಹೇಳಿದ್ದಾರೆ: "ಸಿಂಹವೋ ಪ್ರಾಯದ ಸಿಂಹವೋ ಬೇಟೆಯ ಮೇಲೆ ಬಿದ್ದು ಗುರುಗುಟ್ಟುತ್ತಿರುವಾಗ, ಆ ಕೂಗನ್ನು ಕೇಳಿ ಕುರುಬರನೇಕರು ಕೂಡಿಬಂದರೂ ಅದು ಅವರ ಕೂಗಾಟಕ್ಕೆ ಹೆದರದು, ಅವರ ಗದ್ದಲಕ್ಕೆ ಎದೆಗುಂದದು. ಅಂತೆಯೇ ಸೇನಾಧೀಶ್ವರ ಸರ್ವೇಶ್ವರಸ್ವಾಮಿ ಆದ ನಾನು ಯುದ್ಧಮಾಡಲು ಸಿಯೋನ್ ಶಿಖರದ ಮೇಲೆ ಇಳಿದು ಬರುವಾಗ ನನ್ನನ್ನು ಯಾರೂ ಹೆದರಿಸುವುದಿಲ್ಲ, ಎದೆಗುಂದಿಸುವಂತಿಲ್ಲ. 5ಹಕ್ಕಿಗಳು ಹಾರಾಡುತ್ತಾ ತನ್ನ ಮರಿಗಳನ್ನು ಕಾಪಾಡುವಂತೆ ಸೇನಾಧೀಶ್ವರ ಸರ್ವೇಶ್ವರನಾದ ನಾನು ಜೆರುಸಲೇಮನ್ನು ಕಾಪಾಡುವೆನು. ಅದನ್ನು ಸಂರಕ್ಷಿಸಿ ಕಾಯುವೆನು, ಅಪಾಯದಿಂದ ತಪ್ಪಿಸುವೆನು."

6 ಸರ್ವೇಶ್ವರ ಇಂತೆಂದರು: "ಇಸ್ರಯೇಲಿನ ಜನರೇ, ನೀವು ನನಗೆ ದೊಡ್ಡ ದ್ರೋಹ ಮಾಡಿದಿರಿ. ಈಗಲಾದರೂ ನನ್ನ ಕಡೆಗೆ ತಿರುಗಿಕೊಳ್ಳಿರಿ. 7ನೀವು ಪಾಪಕಳಂಕಿತವಾದ ನಿಮ್ಮ ಕೈಯಿಂದ ನಿರ್ಮಿಸಿರುವ ಬೆಳ್ಳಿಬಂಗಾರದ ವಿಗ್ರಹಗಳನ್ನು ಎತ್ತಿ ಬಿಸಾಡುವ ದಿನ ಬರಲಿದೆ. 8ಆ ಅಸ್ಸೀರಿಯಾದವರು ಕತ್ತಿಯಿಂದ ಹತರಾಗುವರು, ಮನುಷ್ಯರ ಕತ್ತಿಯಿಂದಲ್ಲ; ಖಡ್ಗವು ಅವರನ್ನು ಕಬಳಿಸುವುದು, ಅದು ಮಾನವ ಖಡ್ಗವಲ್ಲ. ಅವರು ಕತ್ತಿಗೆ ಹೆದರಿ ಓಡುವರು. ಅವರ ಯುವಕರು ಗುಲಾಮರಾಗುವರು. 9ಅವರಿಗೆ ಆಶ್ರಯ ನೀಡಿದವನು, ಭಯದಿಂದ ಪಲಾಯನ ಮಾಡಿಬಿಡುವನು, ಅವರ ದಳಪತಿಗಳು ಧ್ವಜವನ್ನೇ ಬಿಟ್ಟು ದಿಕ್ಕು ಪಾಲಾಗುವರು." ಇದು ಸರ್ವೇಶ್ವರಸ್ವಾಮಿಯ ನುಡಿ. ಪ್ರಭುವಿನ ಅಗ್ನಿ ಇರುವುದು ಸಿಯೋನಿನಲ್ಲಿ, ಅವರ ಅಗ್ನಿಕುಂಡ ಜೆರುಸಲೇಮಿನಲ್ಲಿ.

### ಆದರ್ಶಪೂರ್ವಕ ರಾಜ್ಯ

**32** ಇಗೋ, ರಾಜನೊಬ್ಬನು ನೀತಿಗನುಸಾರ ರಾಜ್ಯವಾಳುವನು. ದೇಶಾಧಿಪತಿಗಳು ನ್ಯಾಯದಿಂದ ದೊರೆತನಮಾಡುವರು. 2ಪ್ರತಿಯೊಬ್ಬನೂ ಬಿರುಗಾಳಿಗೆ ತಡೆಯಂತೆ, ಬಿರುಮಳೆಗೆ ಬಿಡಾರದಂತೆ, ಮರುಭೂಮಿಯಲ್ಲಿ ಜಲಧಾರೆಯಂತೆ, ಬೆಂಗಾಡಿನಲ್ಲಿ ಭಾರಿಬಂಡೆಯ ನೆರಳಿನಂತೆ ಇರುವನು. 3ಆಗ ನೋಡುವವರ ಕಣ್ಣು ಮಬ್ಬಾಗದು, ಕೇಳುವವರ ಕಿವಿ ಮಂದವಾಗದು. 4ಆತುರಗಾರರ ಬುದ್ಧಿ ಸಾವಧಾನದಿಂದ ಗ್ರಹಿಸುವುದು. ತೊದಲುಮಾತಿನವರ ನಾಲಿಗೆ ಸ್ವಚ್ಛವಾಗಿಯೂ ತ್ವರಿತವಾಗಿಯೂ ನುಡಿಯುವುದು. 5ಇನ್ನು ಮೇಲೆ ಮೂರ್ಖನು ಮಹಾತ್ಮನೆನಿಸಿಕೊಳ್ಳನು. ಕಳ್ಳನು ಒಳ್ಳೆಯವನೆನಿಸಿಕೊಳ್ಳನು. 6ಮೂರ್ಖನು ಆಡುವುದು ಕೆಡುಕನ್ನೇ, ಅವನು ಮಾಡುವುದು ಅಧರ್ಮವನ್ನೇ, ನುಡಿಯುವುದು ಸರ್ವೇಶ್ವರಸ್ವಾಮಿಗೆ ವಿರುದ್ಧವಾದ ಅಸತ್ಯವನ್ನೇ. ಆತ ಹಸಿದವರಿಗೆ ಆಹಾರವನ್ನು ಕೊಡುವುದಿಲ್ಲ. ಬಾಯಾರಿದವರಿಗೆ ನೀರನ್ನು ಕೊಡಿಸುವುದಿಲ್ಲ. 7ಕಳ್ಳನ ಸಾಧನಗಳು ಕೆಟ್ಟವುಗಳೇ. ಅವನ ಯೋಜನೆಗಳು ಅಬದ್ಧವಾದುವೇ. ದೀನದಲಿತರ ಕೋರಿಕೆಗಳು ನ್ಯಾಯಬದ್ಧವಾಗಿದ್ದರೂ ಸುಳ್ಳು ಮಾತುಗಳಿಂದ ಅವರನ್ನು ಹಾಳು ಮಾಡುತ್ತಾನೆ. 8ಆದರೆ ಧರ್ಮವಂತನು ಮಹತ್ಕಾರ್ಯಗಳಲ್ಲಿಯೇ ನಿರತನಾಗಿರುತ್ತಾನೆ.

### ಜೆರುಸಲೇಮಿನ ಮಹಿಳೆಯರಿಗೆ ಎಚ್ಚರಿಕೆ

9 ಸುಖಜೀವಿಗಳಾದ ಮಹಿಳೆಯರೇ, ಏಳಿ ನನ್ನ ಮಾತನ್ನು ಕೇಳಿ. ನಿಶ್ಚಿಂತೆಯಿಂದಿರುವ ಯುವತಿಯರೇ, ನನ್ನ ಧ್ವನಿಗೆ ಕಿವಿಗೊಡಿ. 10ಈಗ ಸುಖವಾಗಿ ಕುಳಿತಿದ್ದೀರಿ, ನಿಶ್ಚಿಂತೆಯಿಂದಿದ್ದೀರಿ. ಇನ್ನು ಒಂದು ವರ್ಷದ ಮೇಲೆ ಕೆಲವು ದಿನಗಳಲ್ಲಿ ಕಳವಳಗೊಳ್ಳುವಿರಿ. ಏಕೆಂದರೆ, ಆಗ ದ್ರಾಕ್ಷೆಯ ಕೊಯಿಲು ನಿಂತುಹೋಗುವುದು. ಯಾವ ಬೆಳೆಯೂ ನಿಮಗೆ ದಕ್ಕದು. 11ಸುಖವಾಗಿರುವವರೇ, ಗಡಗಡನೆ ನಡುಗಿರಿ. ನಿಶ್ಚಂತರಾಗಿರುವವರೇ, ಕಳವಳಗೊಳ್ಳಿರಿ. ನಿಮ್ಮ ಬಟ್ಟೆಗಳನ್ನು ಕಿತ್ತುಹಾಕಿ ಸೊಂಟಕ್ಕೆ ಗೋಣಿತಟ್ಟನ್ನು ಸುತ್ತಿಕೊಳ್ಳಿರಿ. 12ಎದೆ ಬಡಿದುಕೊಂಡು ಗೋಳಾಡಿರಿ. ಏಕೆಂದರೆ ಹುಲುಸಾದ ಹೊಲಗಳು ಫಲವತ್ತಾದ

ದ್ರಾಕ್ಷಾ ತೋಟಗಳು ನಾಶವಾಗಿವೆ. 13ನನ್ನ ಜನರ ಹೊಲಗದ್ದೆಗಳಲ್ಲಿ ಮುಳ್ಳುಪೊದರುಗಳು ಹುಟ್ಟಿಕೊಂಡಿವೆ. ಉಲ್ಲಾಸದಿಂದ ಕೂಡಿದ್ದ ಮನೆಗಳೂ ಲವಲವಿಕೆಯಿಂದ ತುಂಬಿದ್ದ ನಗರಗಳೂ ಶೂನ್ಯವಾಗಿವೆ, ಅರಮನೆ ಪಾಳುಬಿದ್ದಿದೆ. 14ಗಿಜಿಗುಟ್ಟುವ ಪಟ್ಟಣವು ನಿರ್ಜನವಾಗುವುದು; ಓಫೆಲ್‌ಗುಡ್ಡವು, ಕೀಸ್ ಕೋವರವು ಶಾಶ್ವತವಾಗಿ ಗುಹೆಗಳಾಗುವುವು. ಕಾಡುಕತ್ತೆಗಳಿಗೆ ಬಯಲಾಗಿಯೂ ದನಕರುಗಳಿಗೆ ಹುಲ್ಲು ಗಾವಲುಗಳಾಗಿಯೂ ಇರುವುವು.

15 ಆದರೆ ದೇವರು ಉನ್ನತಲೋಕದಿಂದ ತಮ್ಮ ಪವಿತ್ರಾತ್ಮ ಧಾರೆಯನ್ನು ನಮ್ಮ ಮೇಲೆ ಸುರಿಯುವರು: ಆಗ ಪಾಳುಭೂಮಿ ಫಲಭರಿತ ಭೂಮಿಯಾಗುವುದು; ಫಲಭರಿತ ಭೂಮಿ ಸಮೃದ್ಧವಾದ ಅರಣ್ಯವಾಗಿ ಮಾರ್ಪಡುವುದು. 16ಸತ್ಯಸಂಧತೆ ಕಾಡುಮೇಡೆನ್ನದೆ ಎಲ್ಲೆಡೆ ನೆಲೆಗೊಳ್ಳುವುದು. ಸರ್ವರೂ ಸತ್ಯಸಂಧರಾಗಿರುವುದರಿಂದ ಸಮಾಧಾನ ನೆಲೆಗೊಳ್ಳುವುದು. 17ಆ ಸತ್ಯಸಂಧತೆಯಿಂದ ಚಿರಶಾಂತಿ ಮತ್ತು ಸುಭದ್ರತೆ ಪರಿಣಮಿಸುವುದು. 18ನನ್ನ ಜನರು ಶಾಂತಿ ಸದನಗಳಲ್ಲಿಯೂ ನಿರ್ಭಯವಾದ ನಿಲಯಗಳಲ್ಲಿಯೂ ನೆಮ್ಮದಿಯಾಗಿರುವ ಆಶ್ರಯಗಳಲ್ಲಿಯೂ ನೆಲೆಗೊಳ್ಳುವರು. 19ಕಲ್ಮಳೆ ಸುರಿದು ಕಾಡು ಹಾಳಾದರೂ ಶತ್ರುಗಳ ಪಟ್ಟಣವು ನೆಲಸಮವಾದರೂ ನೀವು ಸಂತೋಷದಿಂದ ಬಾಳುವಿರಿ. 20ನೀರಿರುವ ಕಡೆಗಳಲ್ಲೆಲ್ಲಾ ಬಿತ್ತನೆ ಮಾಡುವಿರಿ. ದನಕತ್ತೆಗಳನ್ನು ಇಷ್ಟಬಂದ ಹಾಗೆ ಮೇಯಲು ಬಿಡುವಿರಿ.

## ಬರಲಿದೆ ಬಿಡುಗಡೆ

**33** ಹಾಳು ಮಾಡುತ್ತಿರುವವನೇ, ನಿನಗೆ ಧಿಕ್ಕಾರ! ನಿನ್ನನ್ನು ಯಾರೂ ಹಾಳು ಮಾಡದಿದ್ದರೂ ನೀನು ಹಾಳುಮಾಡುತ್ತಿರುವೆ. ನಿನ್ನನ್ನು ಯಾರೂ ವಂಚಿಸದಿದ್ದರೂ ನೀನು ವಂಚನೆ ಮಾಡುತ್ತಿರುವೆ. ಇದಕ್ಕೆಲ್ಲ ಅಂತ್ಯವಿದೆ. ಈಗ ಹಾಳುಮಾಡುತ್ತಿರುವ ನೀನು ಆಗ ನೀನೇ ಹಾಳಾಗುವೆ. ಈಗ ವಂಚನೆ ಮಾಡುತ್ತಿರುವ ನೀನೇ ವಂಚಿತನಾಗುವೆ.

2 ಸರ್ವೇಶ್ವರಾ, ನಮಗೆ ಕೃಪೆತೋರಿ. ನಿಮಗಾಗಿ ಕಾದಿದ್ದೇವೆ. ದಿನದಿಂದ ದಿನಕ್ಕೆ ನಮಗೆ ಬೆಂಬಲವಾಗಿರಿ. ಆಪತ್ಕಾಲದಲ್ಲಿ ನಮಗೆ ರಕ್ಷಣೆ ನೀಡಿರಿ. 3ನಿಮ್ಮ ಮೇಘಗರ್ಜನೆಗೆ ಜನಾಂಗಗಳು ಓಡುತ್ತವೆ. ನೀವು ಎದ್ದು ನಿಂತಾಗ ರಾಷ್ಟ್ರಗಳು ದಿಕ್ಕುಪಾಲಾಗುತ್ತವೆ. 4ಅವರು ಕೊಳ್ಳೆಗೆ ಒಳಗಾಗುವರು; ಜನ ಮಿಡತೆಗಳಂತೆ ಆ ಕೊಳ್ಳೆಗೆ ಹಾರಿ ಬೀಳುವರು.

5 ಸರ್ವೇಶ್ವರಸ್ವಾಮಿ ಉನ್ನತೋನ್ನತರು, ಮೇಲಿನ ಲೋಕದಲ್ಲಿ ಆಸೀನರು. ಅವರು ಜೆರುಸಲೇಮನ್ನು ನ್ಯಾಯನೀತಿಯಿಂದಲೂ ಸತ್ಯ ಸಂಧತೆಯಿಂದಲೂ ತುಂಬಿಸುವರು. 6ನಿಮ್ಮ ಕಾಲಕ್ಕೆ ಬೇಕಾದ ಸ್ಥಿರತೆಯನ್ನು ನೀಡುವರು. ರಕ್ಷಣೆಗೆ ಬೇಕಾದ ಜ್ಞಾನವನ್ನೂ ತಿಳುವಳಿಕೆಯನ್ನೂ ಕೊಡುವರು. ಸರ್ವೇಶ್ವರಸ್ವಾಮಿಯಲ್ಲಿ ನಿಮಗಿರುವ ಭಯಭಕ್ತಿಯೇ ನಿಮ್ಮ ನಿಧಿಯಾಗಿರುವುದು.

7 ಇಗೋ, ವೀರರು ಹೊರಗೆ ಹಾಹಾಕಾರ ಮಾಡುತಿಹರು. ಶಾಂತಿದೂತರಾದ ರಾಯಭಾರಿಗಳು ಘೋರವಾಗಿ ಅಳುತಿಹರು. 8ರಾಜ ಮಾರ್ಗಗಳು ಬರಿದಾಗಿವೆ. ದಾರಿಗರೇ ಇಲ್ಲ. ಶತ್ರುಗಳು ಒಪ್ಪಂದವನ್ನು ಮುರಿದಿದ್ದಾರೆ. ಸಾಕ್ಷಿಗಳನ್ನು ತಿರಸ್ಕರಿಸಿದ್ದಾರೆ. ಮಾನವರನ್ನು ಗಣನೆಗೆ ತಂದುಕೊಳ್ಳದವರಾಗಿದ್ದಾರೆ. 9ನಾಡು ದುಃಖದಿಂದ ಸೊರಗುತ್ತಿದೆ. ಲೆಬನೋನ್ ನಾಚಿಕೆಯಿಂದ ಒಣಗುತ್ತಿದೆ. ಶಾರೋನ್ ಬೆಂದು ಬೆಂಡಾಗಿದೆ. ಬಾಷಾನ್ ಮತ್ತು ಕರ್ಮೆಲ್ ಎಲೆಗಳಿಲ್ಲದೆ ಬೋಳಾಗಿವೆ.

## ಶತ್ರುಗಳಿಗೆ ದೇವರಿತ್ತ ಎಚ್ಚರಿಕೆ

10 ಸರ್ವೇಶ್ವರ ಹೀಗೆನ್ನುತ್ತಾರೆ: "ಈಗ ಏಳುವೆನು. ಈಗಲೇ ಎದ್ದು ಸಿದ್ಧನಾಗುವೆನು. ಇದೀಗಲೇ ನನ್ನ ಮಹಿಮೆಯನ್ನು ತೋರಿಸುವೆನು. 11ನೀವು ಹೊಟ್ಟನ್ನು ಗರ್ಭದಲ್ಲಿ ಬೆಳೆಸಿ ಕೂಳೆಯನ್ನು ಹೆರುವಿರಿ. ನಿಮ್ಮ ನಿಟ್ಟುಸಿರು ನಿಮ್ಮನ್ನೇ ನುಂಗುವ ಬೆಂಕಿಯಾಗುವುದು. 12ನೀವು ಸುಟ್ಟ ಸುಣ್ಣದಂತಾಗುವಿರಿ. 13ದೂರ ಇರುವವರೇ, ನಾನು ಎಸಗಿದ ಕಾರ್ಯಗಳನ್ನು ಕೇಳಿ ತಿಳಿದುಕೊಳ್ಳಿರಿ. ಹತ್ತಿರ ಇರುವವರೇ, ನನ್ನ ಪರಾಕ್ರಮವನ್ನು ಒಪ್ಪಿಕೊಳ್ಳಿರಿ."

14 ಸಿಯೋನಿನಲ್ಲಿರುವ ಪಾಪಾತ್ಮರು ಭಯಪಡುತ್ತಾರೆ. ಭಕ್ತಿಹೀನರು ಗಡಗಡನೆ ನಡುಗುತ್ತಾರೆ. 'ನಮ್ಮಲ್ಲಿ ಯಾರು ತಾನೇ ಕಬಳಿಸುವ ಕಿಚ್ಚಿನ ಬಳಿ ವಾಸಿಸಬಲ್ಲರು?' ಎಂದು ಹೇಳಿಕೊಳ್ಳುತ್ತಾರೆ. 15ಸನ್ಮಾರ್ಗದಲ್ಲಿ ನಡೆವವನು, ಸತ್ಯವನ್ನೇ ನುಡಿವವನು, ಬಲಾತ್ಕಾರದಿಂದ ಲಭಿಸಿದ್ದನ್ನು ತಿರಸ್ಕರಿಸುವವನು, ಲಂಚಕ್ಕೆ ಕೈಚಾಚದೆ ಹಿಂದಕ್ಕೆ ಸರಿವವನು, ಕೊಲೆಮಾತುಗಳಿಗೆ ಕಿವಿ ಮುಚ್ಚಿಕೊಳ್ಳುವವನು, ಕೆಟ್ಟದ್ದನ್ನು ನೋಡದಂತೆ ಕಣ್ಣು ಮುಚ್ಚಿಕೊಳ್ಳುವವನು – ಇಂಥವನೇ ಉನ್ನತ ಸ್ಥಾನದಲ್ಲಿ ವಾಸಿಸುವನು. 16ಅಂಥವನಿಗೆ ಗಿರಿದುರ್ಗವೇ ಆಶ್ರಯ, ಅನ್ನ ಆಹಾರ ಉಚಿತ, ನೀರುನಿಡಿ ನಿಸ್ಸಂದೇಹ.

### ಭವ್ಯವಾದ ಭವಿಷ್ಯ

17 ಅಲಂಕೃತ ರಾಜನನ್ನು ನಿಮ್ಮ ಕಣ್ಣುಗಳು ಕಾಣುವುವು. ಸವಿಸ್ತಾರವಾದ ನಾಡೊಂದನ್ನು ನಿಮ್ಮ ಕಣ್ಣುಗಳು ನೋಡಿ ನಲಿಯುವುವು. 18ಆಗ ನೀವು ಹಿಂದಿನ ಭಯಂಕರವಾದ ವಿಷಯಗಳನ್ನು ಮನಸ್ಸಿಗೆ ತಂದುಕೊಳ್ಳುತ್ತಾ – "ಕಪ್ಪವನ್ನು ಲೆಕ್ಕಿಸಿದವನು ಎಲ್ಲಿ? ತೂಕಮಾಡಿದವನು ಎಲ್ಲಿ? ಗೋಪುರಗಳನ್ನು ಗಣಿಸಿದವನು ಎಲ್ಲಿ?" ಎಂದು ಹೇಳಿಕೊಳ್ಳುವಿರಿ. 19ನಿಮಗೆ ತಿಳಿಯಲಾಗದ ಅನ್ಯ ಭಾಷೆಯನ್ನು, ನೀವು ಗ್ರಹಿಸಲಾಗದ ಅಸ್ಪಷ್ಟ ಮಾತುಗಳನ್ನು ಆಡುವ ಅಹಂಕಾರದ ಜನರನ್ನು ಇನ್ನು ಮೇಲೆ ಕಾಣಲಾರಿರಿ. 20ನಮ್ಮ ಹಬ್ಬ ಆಚರಣೆಗಳ ನಗರವಾದ ಸಿಯೋನನ್ನು ದೃಷ್ಟಿಸಿ ನೋಡಿ. ಆ ಜೆರುಸಲೇಮನ್ನು ಕಣ್ಣಿಟ್ಟು ನೋಡಿ. ಅದು ನೆಮ್ಮದಿಯ ನಿವಾಸವಾಗಿ, ಕೀಳಲಾಗದ, ಕೆಡವಲಾಗದ ದೃಢವಾದ ಗುಡಾರದಂತೆ ನಿಂತಿರುವುದನ್ನು ನೀವು ಕಣ್ಣಾರೆ ಕಾಣುವಿರಿ. 21ಅಲ್ಲಿ ಸರ್ವೇಶ್ವರ ತಮ್ಮ ಶಕ್ತಿಯನ್ನು ತೋರ್ಪಡಿಸುವರು. ನದಿಸರೋವರಗಳಂತೆ ನಮ್ಮನ್ನು ಸುತ್ತುವರಿಯುವರು. ಹುಟ್ಟುಗೋಲಿನ ದೋಣಿಯಾಗಲಿ, ದೊಡ್ಡದಾದ ಹಡಗಾಗಲಿ ಅದನ್ನು ದಾಟವು. 22ಸರ್ವೇಶ್ವರ ಸ್ವಾಮಿಯೇ ನಮ್ಮ ನ್ಯಾಯಾಧಿಪತಿ, ಸರ್ವೇಶ್ವರಸ್ವಾಮಿಯೇ ನಮಗೆ ಶಾಸನದಾಯಕ, ಸರ್ವೇಶ್ವರಸ್ವಾಮಿಯೇ ನಮ್ಮ ರಾಜ. ಅವರೇ ನಮ್ಮ ಉದ್ಧಾರಕ. 23ಶತ್ರು ಹಡಗುಗಳ ಹಗ್ಗಗಳು ಸಡಿಲ, ಅದರ ಕೂವೆಯ ಬುಡ ಸಡಿಲ; ಅದರ ಹಾಯಿಯನ್ನು ಮುದುರದಂತೆ ಹಿಡಿದುಕೊಳ್ಳಲು ಅಸಾಧ್ಯ. ಅವುಗಳನ್ನು ಸೂರೆಮಾಡಿ ಕೊಳ್ಳೆಹೊಡೆದು, ಸಮನಾಗಿ ಹಂಚಿಕೊಳ್ಳಲು ಎಲ್ಲರಿಗೂ ಆಸ್ಪದವುಂಟು. ಕುಂಟರು ಕೂಡ ತಮ್ಮ ಪಾಲನ್ನು ಪಡೆಯಬಲ್ಲರು. 24ಸಿಯೋನಿನ ಯಾವ ನಿವಾಸಿಯೂ "ನಾನು ಅಸ್ವಸ್ಥನು" ಎಂದು ಹೇಳನು, ಅಲ್ಲಿಯ ಜನರ ಪಾಪವು ಪರಿಹಾರವಾಗುವುದು.

### ಶತ್ರುರಾಷ್ಟ್ರಗಳಿಗೆ ಬರಲಿರುವ ಶಿಕ್ಷೆ

**34** ರಾಷ್ಟ್ರಗಳೇ, ಬನ್ನಿ, ಹತ್ತಿರಕ್ಕೆ ಬಂದು ಕೇಳಿರಿ; ಜನಾಂಗಗಳೇ, ಕಿವಿಗೊಡಿರಿ; ಜಗವೂ ಅದರಲ್ಲಿರುವ ಸಮಸ್ತವೂ, ಲೋಕವೂ ಅದರ ನಿವಾಸಿಗಳೆಲ್ಲರೂ ಆಲಿಸಲಿ. 2ಸರ್ವೇಶ್ವರ ಸ್ವಾಮಿ ಸಕಲ ರಾಷ್ಟ್ರಗಳ ಮೇಲೆ ಕೋಪಗೊಂಡಿದ್ದಾರೆ – ಅವುಗಳ ಸೈನ್ಯಗಳ ಮೇಲೆ ರೋಷಗೊಂಡಿದ್ದಾರೆ. ಅವರನ್ನು ಕೊಲೆಗೆ ಈಡುಮಾಡಿ ಸಂಪೂರ್ಣವಾಗಿ ಸಂಹರಿಸಲು ನಿಶ್ಚಯಿಸಿದ್ದಾರೆ. 3ಅವರಲ್ಲಿ ಹತರಾದವರು ಬೀದಿ ಪಾಲಾಗುವರು, ಅವರ ಶವಗಳಿಂದ ದುರ್ವಾಸನೆಯು ಬಡಿಯುವುದು. ಅವರ ರಕ್ತಪ್ರವಾಹವು ಗುಡ್ಡಗಳನ್ನು ತೋಯಿಸುವುದು. 4ಗಗನದ ನಕ್ಷತ್ರವ್ಯೂಹವು ಕ್ಷಯಿಸುವುದು, ಆಕಾಶಮಂಡಲವು ಸುರುಳಿಯಂತೆ ಸುತ್ತಿಕೊಳ್ಳುವುದು. ದ್ರಾಕ್ಷಿಯ ಎಲೆಗಳು ಒಣಗಿಬೀಳುವಂತೆ, ಅಂಜೂರದ ತರಗುಗಳು ಉದುರುವಂತೆ ತಾರಾಮಂಡಲವೆಲ್ಲ ಕಳಚಿ ಬೀಳುವುದು.

5 ಆಕಾಶದಲ್ಲಿ ನನ್ನ ಖಡ್ಗವು ಆವೇಶದಿಂದ ಕಾರ್ಯಮಾಡಿದೆ. ಇಗೋ, ನಾನು ಶಪಿಸಿದ ಎದೋಮ್ ಎಂಬ ಜನಾಂಗದ ಮೇಲೆ ನ್ಯಾಯ ತೀರಿಸಲು ಅದು ಎರಗಲಿದೆ. 6ಸರ್ವೇಶ್ವರ ಸ್ವಾಮಿಯ ಖಡ್ಗವು ರಕ್ತಮಯವಾಗಿದೆ; ಅದು ಕೊಬ್ಬಿನಿಂದಲೂ ಕುರಿಹೋತಗಳ ರಕ್ತದಿಂದಲೂ ಟಗರುಗಳ ಮೂತ್ರಪಿಂಡಗಳ ವಪೆಯಿಂದಲೂ ತುಂಬಿದೆ; ಸರ್ವೇಶ್ವರ ಬೊಚ್ರದಲ್ಲಿ ಈ ಬಲಿಯನ್ನೂ ಎದೋಮಿನಲ್ಲಿ ಈ ದೊಡ್ಡ ಸಂಹಾರವನ್ನೂ ಮಾಡಬೇಕೆಂದಿದ್ದಾರೆ. 7ಕಾಡುಕೋಣಗಳಂತೆ, ಹೋರಿಗೂಳಿಗಳಂತೆ, ಈ ಯಜ್ಞಪಶುಗಳು ಬೀಳುವುವು; ನಾಡು ರಕ್ತದಿಂದ ತೊಯಿದಿರುವುದು, ಅಲ್ಲಿನ ದೂಳು ಕೊಬ್ಬಿನಿಂದ

ಜಿಡ್ಡಾಗಿರುವುದು. 8ಏಕೆಂದರೆ ಸರ್ವೇಶ್ವರ ಮುಯ್ಯಿತೀರಿಸುವ ದಿನವು ಬಂದಿದೆ. ಸಿಯೋನಿಗೆ ನ್ಯಾಯ ದೊರಕಿಸಿ ಎದೋಮಿಗೆ ದಂಡನೆ ವಿಧಿಸುವ ವರ್ಷವು ಒದಗಿದೆ.

9 ಎದೋಮಿನ ತೊರೆಗಳು ಡಾಂಬರಾಗಿ ಹರಿಯುವುವು. ಅದರ ಮಣ್ಣು ಗಂಧಕವಾಗುವುದು, ನಾಡೆಲ್ಲಾ ಉರಿಯುವ ಡಾಂಬರಿನಂತೆ ಇರುವುದು. 10ಅದು ಹಗಲಿರುಳು ಆರದೆ ಉರಿಯುವುದು. ಅದರ ಹೊಗೆ ನಿರಂತರವಾಗಿ ಏರುತ್ತಿರುವುದು. ನಾಡು ತಲತಲಾಂತರಕ್ಕೂ ಹಾಳು ಬಿದ್ದಿರುವುದು, ಯುಗಯುಗಾಂತರಕ್ಕೂ ಅಲ್ಲಿ ಯಾರೂ ಹಾದು ಹೋಗರು. 11ಅದು ಹದ್ದುಗಳ, ಮುಳ್ಳುಹಂದಿಗಳ ಸ್ವಾಧೀನವಾಗುವುದು. ಕಾಗೆ ಗೂಗೆಗಳಿಗೆ ಅದು ಗೂಡಾಗುವುದು. ಸರ್ವೇಶ್ವರ ಹಾಳುಪಾಳನ್ನೇ ಅದರ ಅಳತೆಗೋಲನ್ನಾಗಿಯೂ ಅಸ್ತವ್ಯಸ್ತತೆಯನ್ನೇ ಅದರ ಮಟ್ಟಗೋಲನ್ನಾಗಿಯೂ ಮಾಡುವರು. 12ಅಲ್ಲಿ ಪಟ್ಟಕ್ಕೆ ಪ್ರಮುಖರಾರೂ ಸಿಕ್ಕರು, ನಾಡಿಗೆ ಒಡೆಯರಾರೂ ಇಲ್ಲದಾಗುವರು. 13ಅಲ್ಲಿನ ಅರಮನೆಗಳಲ್ಲಿ ಕಳ್ಳಬಳ್ಳಿಗಳೂ ಕೋಟೆಗಳಲ್ಲಿ ಮುಳ್ಳುಗಿಳ್ಳುಗಳೂ ಹಬ್ಬಿಕೊಳ್ಳುವುವು. ಅದು ಮರಿಗಳಿಗೆ ಗುಹೆಯಾಗಿಯೂ ಗೂಬೆಗಳಿಗೆ ಗೂಡಾಗಿಯೂ ಇರುವುದು. 14ಕಾಡುನಾಯಿಗಳೂ ತೋಳಗಳೂ ಅಲ್ಲಿ ಸೇರುವುವು; ಕಾಡುಮೇಕೆ ತನ್ನ ಜೊತೆ ಮೇಕೆಯನ್ನು ಕರೆದು ಕೂಗುವುದು; ಭೂತ ಪ್ರೇತಗಳು ಅಲ್ಲಿ ಹಾಯಾಗಿ ವಾಸಮಾಡುವುವು. 15ಹಾರುವ ಹಾವು ಅಲ್ಲಿ ಗೂಡು ಮಾಡಿಕೊಂಡು, ಮೊಟ್ಟೆಯಿಕ್ಕಿ ಮರಿಮಾಡಿ, ರೆಕ್ಕೆಗಳ ಅಡಿಯಲ್ಲಿ ಅವುಗಳನ್ನು ಕೂಡಿಸಿಕೊಳ್ಳುವುದು. ರಣಹದ್ದುಗಳು ಅಲ್ಲಿ ಜೋಡಿಜೋಡಿಯಾಗಿ ಸೇರಿಕೊಳ್ಳುವುವು. 16ಸರ್ವೇಶ್ವರಸ್ವಾಮಿಯ ಗ್ರಂಥದಲ್ಲಿ ಬರೆದಿರುವುದನ್ನು ಹುಡುಕಿ ಓದಿರಿ. ಆ ಸೃಷ್ಟಿಗಳಲ್ಲಿ ಯಾವುದೂ ಇಲ್ಲದಿರದು. ಎಲ್ಲವು ಜೊತೆಜೊತೆಯಾಗಿ ಇರುವುವು. ಸ್ವಾಮಿಯ ಬಾಯಿಂದ ಅಪ್ಪಣೆ ಆಯಿತು, ಅವರ ಆತ್ಮವು ಅವುಗಳನ್ನು ಒಟ್ಟಿಗೆ ಬರಮಾಡಿತು. 17ಅವರೇ, ಇವುಗಳಿಗೆ ಹಂಚಿಕೊಟ್ಟಿದ್ದಾರೆ, ಅವರ ಕೈಯೇ ನೂಲುಹಿಡಿದು ನಾಡನ್ನು ಇವುಗಳಿಗೆ ವಿಭಾಗ ಮಾಡಿದೆ; ಅದು ಇವುಗಳಿಗೆ ಶಾಶ್ವತ ಸೊತ್ತಾಗುವುದು, ತಲತಲಾಂತರಕ್ಕೂ ಅವು ಅಲ್ಲಿ ವಾಸ ಮಾಡುವುವು.

### ಸಿಯೋನಿಗೆ ಸಿಗುವ ಸೌಭಾಗ್ಯ

**35** ಆನಂದಿಸಲಿ ಅರಣ್ಯವೂ
ಮರುಭೂಮಿಯೂ
ಹೂಗಳಂತೆ ಅರಳಿ ಹರ್ಷಿಸಲಿ
ಒಣನೆಲವು.
2 ಉಲ್ಲಾಸಿಸಲಿ ಅದು ಹುಲುಸಾಗಿ
ಹೂಬಿಟ್ಟು
ಹೌದು, ಸಂತಸ ಸಂಗೀತ
ಹಾಡುವಷ್ಟು.
ದೊರಕಲಿ ಅದಕ್ಕೆ ಲೆಬನೋನಿನ
ಮಹಿಮೆಯು
ಕರ್ಮೆಲಿನ ಮತ್ತು ಶಾರೋನಿನ ವೈಭವವು.
ಕಾಣುವುವು ಸರ್ವೇಶ್ವರನ ಮಹಿಮೆಯನು
ನೋಡುವುವು ಇವೆಲ್ಲ ನಮ್ಮ ದೇವರ
ವೈಭವವನು.
3 ಜೋಲುಬಿದ್ದ ಕೈಗಳನ್ನು ಬಲಗೊಳಿಸಿರಿ
ನಡುಗುವ ಕಾಲುಗಳನ್ನು
ದೃಢಗೊಳಿಸಿರಿ.
4 ಚಂಚಲ ಹೃದಯರಿಗೆ ಹೀಗೆಂದು ಹೇಳಿ:

“ಭಯಪಡಬೇಡಿ; ಎದೆಗುಂದಬೇಡಿ;
ಬರುವನು ಆ ದೇವನು ಮುಯ್ಯಿತೀರಿಸಲು
ಬರುವನು ಆ ದೇವನು ಪ್ರತೀಕಾರವೆಸಗಲು
ತಾನೇ ಬರುವನು ನಿಮ್ಮನ್ನು ರಕ್ಷಿಸಲು.”
5 ಕುರುಡರ ಕಣ್ಣು ಕಾಣುವುದಾಗ
ಕಿವುಡರ ಕಿವಿ ತೆರೆಯುವುದಾಗ.
6 ಜಿಗಿಯುವನು ಕುಂಟನು ಜಿಂಕೆಯಂತೆ
ಹಾಡುವುದು ಮೂಕನ ನಾಲಿಗೆ
ಹರ್ಷಗೀತೆ.
ಒರತೆಗಳು ಒಡೆಯುವುವು ಅರಣ್ಯದಲಿ
ನದಿಗಳು ಹುಟ್ಟಿಹರಿಯುವುವು
ಒಣನೆಲದಲಿ.
7 ಸರೋವರವಾಗುವುದಾ ಉರಿಗಾಡು
ಬುಗ್ಗೆಯಾಗುವುದಾ ಬುವಿ ಬರಡು.
ನರಿಗಳು ನಿವಾಸಿಸುವ ಗುಹೆಗಳು
ಆಗುವುವು ಹುಲುಸಾದ
ಹುಲ್ಲುಗಾವಲುಗಳು.
8 ಅಲ್ಲಿರುವುದೊಂದು ರಾಜಮಾರ್ಗ
ಅದೆನಿಸಿಕೊಳ್ಳುವುದು ಪವಿತ್ರಮಾರ್ಗ
ನಡೆಯನು ಅದರೊಳು ಪಾಪಾತ್ಮನು;
ಅದಾಗುವುದು ಜನರಿಗೆ ಮೀಸಲು
ದಾರಿತಪ್ಪನು ಅಲ್ಲಿ ನಡೆಯುವ ಮೂಢನು.
9 ಅಲ್ಲಿರದು ಸಿಂಹ ಸಿಂಹಿಣಿ,
ಅಲ್ಲಿ ಸೇರದು ಕ್ರೂರ ಪ್ರಾಣಿ.
ಕಾಣಸಿಗದಲ್ಲಿ ಇದಾವ ಹಾನಿ,
ಪಾಪವಿಮುಕ್ತರೇ ನಡೆವರಲ್ಲಿ.
10 ಹಿಂದಿರುಗುವರು ಸರ್ವೇಶ್ವರನಿಂದ
ವಿಮೋಚನೆ ಪಡೆದವರು
ಜಯಜಯಕಾರದೊಂದಿಗೆ ಸಿಯೋನನು
ಸೇರುವರು.
ನಿತ್ಯಾನಂದ ಸುಖವಿರುವುದು
ಕಿರೀಟಪ್ರದವಾಗಿ
ಸಿಗುವುದವರಿಗೆ ಹರ್ಷಾನಂದದ ಸವಿ
ತೊಲಗುವುದು ದುಃಖದುಗುಡದ ಕಹಿ.

### ಅಸ್ಸೀರಿಯಾದವರು ಜೆರುಸಲೇಮಿಗೆ ಹಾಕಿದ ಬೆದರಿಕೆ

**36** ಅರಸ ಹಿಜ್ಕೀಯನ ಆಳ್ವಿಕೆಯ ಹದಿನಾಲ್ಕನೆಯ ವರ್ಷದಲ್ಲಿ, ಅಸ್ಸೀರಿಯದ ಅರಸ ಸನ್ಹೇರೀಬನು
ಬಂದು ಜುದೇಯ ಪ್ರಾಂತ್ಯದ ಸುಭದ್ರ ಪಟ್ಟಣಗಳನ್ನೆಲ್ಲಾ ಸ್ವಾಧೀನ ಮಾಡಿಕೊಂಡನು. 2ಬಳಿಕ ಅವನು
ಲಾಕೀಷಿನಿಂದ ರಬ್ಷಾಕೆ ಎಂಬ ಒಬ್ಬ ದಳಪತಿಯನ್ನು ಮಹಾಸೈನ್ಯದೊಂದಿಗೆ ಜೆರುಸಲೇಮಿನಲ್ಲಿದ್ದ ರಾಜ

ಹಿಜ್ಕೀಯನ ಬಳಿಗೆ ಕಳುಹಿಸಿದನು. ಈ ದಳಪತಿ ಅಗಸರ ಹೊಲದಮೇಲೆ ಹಾದು ಹೋಗುವ
ರಾಜಮಾರ್ಗದ ಹತ್ತಿರವಿರುವ ಕೆರೆಯ ಕಾಲುವೆಯ ಬಳಿ ಪಾಳೆಯ ಮಾಡಿಕೊಂಡನು. 3ಆಮೇಲೆ
ಹಿಲ್ಕೀಯನ ಮಗನೂ ರಾಜಗೃಹಾಧಿಪತಿಯೂ ಆದ ಎಲ್ಯಾಕೀಮ್, ಕಾರ್ಯದರ್ಶಿಯಾದ ಶೆಬ್ನ ಮತ್ತು
ಆಸಾಫನ ಮಗನೂ ಮಂತ್ರಿಯೂ ಆಗಿದ್ದ ಯೋವ ಎಂಬ ಮೂವರು ಅಲ್ಲಿಗೆ ಬಂದರು. 4ದಳಪತಿ ಅವರಿಗೆ
"ನೀವು ಹೋಗಿ ಅಸ್ಸೀರಿಯದ ಮಹಾರಾಜನ ಈ ಮಾತುಗಳನ್ನು ಹಿಜ್ಕೀಯನಿಗೆ ತಿಳಿಸಿರಿ: 'ನಿನ್ನ ಭರವಸೆಗೆ
ಆಧಾರವಾದರೂ ಏನು? 5ಯುದ್ಧಕ್ಕೆ ಬೇಕಾದ ವಿವೇಕ ಹಾಗೂ ಶಕ್ತಿ ಉಂಟೆಂಬ ನಿನ್ನ ಮಾತು ಬರೀ
ಬಾಯಿಮಾತು ಎಂದು ನಾನು ಹೇಳಬಲ್ಲೆ. ನೀನು ಯಾರನ್ನು ನಂಬಿಕೊಂಡು ನನಗೆ ವಿರೋಧವಾಗಿ
ಎದ್ದಿರುವೆ? 6ಮುರಿದ ಜೊಂಡಿಗೆ ಸಮಾನವಾದ ಈಜಿಪ್ಟ್ ಎಂಬ ಊರುಗೋಲಿನ ಮೇಲೆ ನಿನಗೆ
ಭರವಸೆಯಿದೆಯಷ್ಟೆ. ಆದರೆ ಅದು ಊರಿಕೊಳ್ಳುವವನ ಕೈಯನ್ನು ಚುಚ್ಚಿ ತಿವಿಯುವ ಕೋಲು. ಈಜಿಪ್ಟಿನ
ರಾಜ ಫರೋಹನಲ್ಲಿ ಭರವಸೆಯಿಟ್ಟವರಿಗೆ ಆಗುವ ಗತಿ ಇದೇ.

7 'ಬಹುಶಃ, ನೀನು 'ನಮ್ಮ ದೇವರಾದ ಸರ್ವೇಶ್ವರನನ್ನೇ ನಂಬಿಕೊಂಡಿದ್ದೇವೆ', ಎಂದು
ಹೇಳಬಹುದು. ಹಿಜ್ಕೀಯನು, ಇದೇ ಬಲಿಪೀಠದ ಮುಂದೆ ಆರಾಧನೆ ಮಾಡಬೇಕು ಎಂದು ಯೆಹೂದ್ಯರಿಗೆ
ಮತ್ತು ಜೆರುಸಲೇಮಿನವರಿಗೆ ಆಜ್ಞಾಪಿಸಿ ಆ ಸರ್ವೇಶ್ವರಸ್ವಾಮಿಯ ಪೂಜಾಸ್ಥಳಗಳನ್ನೂ ಬೇರೆ ಎಲ್ಲಾ
ಬಲಿಪೀಠಗಳನ್ನೂ ಹಾಳುಮಾಡಿದನಲ್ಲವೆ? 8ಆದುದರಿಂದ ಬಾ, ಬಂದು ನನ್ನ ಒಡೆಯನಾದ ಅಸ್ಸೀರಿಯದ
ಅರಸನೊಂದಿಗೆ ಒಂದು ಒಪ್ಪಂದ ಮಾಡಿಕೊ. ಅವನು ನಿನಗೆ ಎರಡು ಸಾವಿರ ಕುದುರೆಗಳನ್ನು ಕೊಡುವನು;
ಅವುಗಳ ಮೇಲೆ ಕೂರಿಸುವಷ್ಟು ಮಂದಿ ಸವಾರರು ನಿನಗಿದ್ದಾರೋ? 9ಇದು ಕೂಡ ನಿನಗೆ ಅಸಾಧ್ಯವಾದರೆ
ನನ್ನ ಒಡೆಯನ ಸೇನಾಪತಿಗಳಲ್ಲಿ ಅತ್ಯಲ್ಪನನ್ನಾದರೂ ಸೋಲಿಸುವುದು ಹೇಗೆ? ರಥಾಶ್ವಬಲಗಳಿಗಾಗಿ
ಈಜಿಪ್ಟಿನವರನ್ನು ನೀನು ನಂಬಿಕೊಂಡಿರುವಂತೆ ಕಾಣುತ್ತದೆ. 10ಈ ನಾಡನ್ನು ಹಾಳುಮಾಡುವುದಕ್ಕೆ
ಸರ್ವೇಶ್ವರ ಸ್ವಾಮಿಯ ಒಪ್ಪಿಗೆಯಿಲ್ಲದೆ ಇಲ್ಲಿಗೆ ನಾನು ಬಂದೆನೆಂದು ನೆನಸುತ್ತೀಯೋ? 'ಇಲ್ಲಿಗೆ ಬಂದು
ಇದನ್ನು ಹಾಳುಮಾಡಿಬಿಡು' ಎಂದು ಆ ಸರ್ವೇಶ್ವರಸ್ವಾಮಿಯೇ ನಿನಗೆ ಆಜ್ಞೆ ಮಾಡಿದ್ದಾರೆ,' ಎಂಬ ಈ
ಮಾತುಗಳು ಅರಸನ ಮಾತುಗಳೆಂದು ಹೋಗಿ ತಿಳಿಸಿರಿ" ಎಂದನು. 11ಆಗ ಎಲ್ಯಾಕೀಮ್, ಶೆಬ್ನ ಮತ್ತು
ಯೋವ ಎಂಬವರು ಆ ದಳಪತಿಗೆ, "ದಯವಿಟ್ಟು ನಿನ್ನ ಸೇವಕರಾದ ನಮ್ಮೊಡನೆ ಆರಾಮಾಯಿಕ
ಭಾಷೆಯಲ್ಲಿ ಮಾತನಾಡಿ, ಅದು ನಮಗೆ ಅರ್ಥವಾಗುತ್ತದೆ. ಆದರೆ ಹಿಬ್ರು ಭಾಷೆಯಲ್ಲಿ ಮಾತನಾಡಬೇಡಿ,
ಅದು ನಮಗೆ ಅರ್ಥವಾಗುತ್ತದೆ. ಆದರೆ ಹಿಬ್ರು ಭಾಷೆಯಲ್ಲಿ ಮಾತನಾಡಬೇಡಿ, ಅದು ಪೌಳಿಗೋಡೆಯ
ಮೇಲಿರುವ ಎಲ್ಲರಿಗೂ ಅರ್ಥವಾಗುತ್ತದೆ," ಎಂದರು.

12 ಅದಕ್ಕೆ ಆ ದಳಪತಿಯು, "ನನ್ನ ಯಜಮಾನನು, ನಿಮ್ಮ ಸಂಗಡವಾಗಲಿ ಮತ್ತು ನಿಮ್ಮ ಒಡೆಯರ
ಸಂಗಡವಾಗಲಿ ಮಾತ್ರ ಮಾತನಾಡಬೇಕೆಂದು ನನ್ನನ್ನು ಕಳುಹಿಸಲಿಲ್ಲ. ಆ ಗೋಡೆಯ ಮೇಲೆ ಕುಳಿತಿರುವ
ಜನರ ಸಂಗಡವೂ ಮಾತನಾಡುವುದಕ್ಕಾಗಿ ಕಳುಹಿಸಿದ್ದಾರೆ. ಈ ಜನರು ನಮಗೆ ವಿರುದ್ಧವಾಗಿ ಹೋರಾಡಿದರೆ
ನಿಮ್ಮ ಹಾಗೆ ಇವರು ಕೂಡ ತಮ್ಮ ಸ್ವಂತ ಮಲಮೂತ್ರವನ್ನು ತಿಂದು ಕುಡಿಯಬೇಕಾಗುತ್ತದೆ" ಎಂದು
ಉತ್ತರಕೊಟ್ಟನು. 13ಬಳಿಕ ಆ ದಳಪತಿಯು ಆ ಗೋಡೆಯ ಮೇಲೆ ನಿಂತಿದ್ದವರನ್ನು ಉದ್ದೇಶಿಸಿ ಹಿಬ್ರು
ಭಾಷೆಯಲ್ಲಿ, "ನೀವು ಅಸ್ಸೀರಿಯದ ರಾಜಾಧಿರಾಜನ ಮಾತನ್ನು ಕೇಳಿರಿ; 14ಹಿಜ್ಕೀಯನ ಮಾತನ್ನು ಕೇಳಿ
ಮೋಸಹೋಗಬೇಡಿ; ನಿಮ್ಮನ್ನು ಬಿಡಿಸಲು ಅವನಿಂದಾಗದು. 15ಹಿಜ್ಕೀಯನು ನಿಮಗೆ,
'ಸರ್ವೇಶ್ವರಸ್ವಾಮಿಯಲ್ಲಿ ನಂಬಿಕೆಯಿಡಿ; ಅವರು ನಿಮ್ಮನ್ನು ಹೇಗಾದರೂ ಮಾಡಿ ರಕ್ಷಿಸುವರು; ಈ ಪಟ್ಟಣವು
ಅಸ್ಸೀರಿಯದ ರಾಜನ ವಶವಾಗುವುದಿಲ್ಲ,' ಎಂಬುದಾಗಿ ಹೇಳಿದರೆ ಅವನಿಗೆ ಕಿವಿಗೊಡಬೇಡಿ,
ಒಪ್ಪಿಕೊಳ್ಳಬೇಡಿ. 16ಅಸ್ಸೀರಿಯದ ಅರಸನಾದ ನನ್ನ ಒಡೆಯನ ಮಾತನ್ನು ಕೇಳಿ; ಆತನೊಡನೆ ಒಪ್ಪಂದ
ಮಾಡಿಕೊಂಡು ಆತನ ಆಶ್ರಯವನ್ನು ಸೇರಿರಿ. ಆಗ ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ತನ್ನ ಅಂಜೂರಮರದ
ಹಾಗೂ ದ್ರಾಕ್ಷಾಲತೆಯ ಹಣ್ಣುಗಳನ್ನು ತಿನ್ನುವನು; ತನ್ನ ಬಾವಿಯ ನೀರನ್ನು ಕುಡಿಯುವನು. 17ಸ್ವಲ್ಪ
ಕಾಲವಾದನಂತರ ಆತನು ಬಂದು ನಿಮ್ಮನ್ನು ಇನ್ನೊಂದು ನಾಡಿಗೆ ಕರೆದುಕೊಂಡು ಹೋಗುವನು. ಅಲ್ಲಿ
ಧಾನ್ಯ, ದ್ರಾಕ್ಷಾರಸ, ಆಹಾರ, ದ್ರಾಕ್ಷಿತೋಟ ಇವು ಸಮೃದ್ಧಿಯಾಗಿರುವುವು, ನಿಮ್ಮ ನಾಡಿಗೆ ಸರಿ
ಸಮಾನವಾಗಿರುವುವು; 18'ಸರ್ವೇಶ್ವರ ನಮ್ಮನ್ನು ರಕ್ಷಿಸುವರು' ಎಂಬ ನಂಬಿಕೆಯನ್ನು ಹಿಜ್ಕೀಯನು ನಿಮ್ಮಲ್ಲಿ

ಮೂಡಿಸದಂತೆ ಎಚ್ಚರಿಕೆಯಾಗಿರಿ. ಯಾವ ರಾಷ್ಟ್ರದ ದೇವರುಗಳು ತಾನೇ ಅಸ್ಸೀರಿಯದ ಅರಸನ ಕೈಯಿಂದ
ನಾಡನ್ನು ಬಿಡಿಸಿಕೊಂಡಿದ್ದಾರೆ? 19ಹಮಾತ್, ಅರ್ಪಾದ್, ಸೆಫರ್ವಯಿಮ್ ಎಂಬ ಊರುಗಳ ದೇವರುಗಳು
ಏನಾದರು? ಅವರು ಸಮಾರ್ಯವನ್ನು ನನ್ನ ಅರಸನ ಕೈಯಿಂದ ಬಿಡಿಸಿಕೊಂಡರೋ? 20ಯಾವ ರಾಷ್ಟ್ರದ
ದೇವರುಗಳೂ ತಮ್ಮ ನಾಡನ್ನು ನನ್ನ ಅರಸನ ಕೈಯಿಂದ ಬಿಡಿಸಲಾರದೆ ಹೋದಮೇಲೆ ಸರ್ವೇಶ್ವರ
ಜೆರುಸಲೇಮನ್ನು ಆತನ ಕೈಯಿಂದ ಬಿಡಿಸಿ ಕಾಪಾಡಲು ಸಾಧ್ಯವೋ?" ಎಂದು ಕೇಳಿದನು.

21 ಆ ಸೇನಾಧಿಪತಿಗೆ ಯಾವ ಉತ್ತರವನ್ನು ಕೊಡಬಾರದೆಂದು ರಾಜ ಹಿಜ್ಕೀಯನು
ಆಜ್ಞಾಪಿಸಿದ್ದರಿಂದ ಆ ಮೂವರು ಏನನ್ನು ಹೇಳದೆ ಸುಮ್ಮನಿದ್ದರು. 22ಬಳಿಕ, ಹಿಲ್ಕೀಯನ ಮಗನೂ ರಾಜ
ಗೃಹಾಧಿಪತಿಯೂ ಆಗಿದ್ದ ಎಲ್ಯಾಕೀಮ್, ಕಾರ್ಯದರ್ಶಿ ಶೆಬ್ನ, ಆಸಾಫನ ಮಗನೂ ಮಂತ್ರಿಯೂ ಆಗಿದ್ದ
ಯೋವ ಎಂಬವರು ಸಿಟ್ಟಿನಿಂದ ಬಟ್ಟೆಗಳನ್ನು ಹರಿದುಕೊಂಡು, ಅರಸ ಹಿಜ್ಕೀಯನ ಬಳಿಗೆ ಬಂದು, ಅವನಿಗೆ
ಆ ಸೇನಾಪತಿಯ ಮಾತುಗಳನ್ನು ತಿಳಿಸಿದರು.

### ಪ್ರವಾದಿ ಯೆಶಾಯನ ಮುಖಾಂತರ ದೇವರಿತ್ತ ಆಶ್ವಾಸನೆ

**37** ಈ ವರದಿಯನ್ನು ಕೇಳಿದ ಹಿಜ್ಕೀಯನು ಕೂಡ ಬಟ್ಟೆಯನ್ನು ಹರಿದುಕೊಂಡು, ಗೋಣಿತಟ್ಟನ್ನು
ಕಟ್ಟಿಕೊಂಡು, ಸರ್ವೇಶ್ವರ ಸ್ವಾಮಿಯ ಆಲಯಕ್ಕೆ ಹೋದನು. 2ಇದಲ್ಲದೆ, ಅವನು ರಾಜಗೃಹಾಧಿಪತಿಯಾದ
ಎಲ್ಯಾಕೀಮ್, ಕಾರ್ಯದರ್ಶಿ ಶೆಬ್ನ, ಹಿರಿಯ ಯಾಜಕರು ಇವರನ್ನು ಕರೆಸಿ: "ನೀವು ಗೋಣಿತಟ್ಟನ್ನು
ಕಟ್ಟಿಕೊಂಡು, ಆಮೋಚನ ಮಗನೂ ಪ್ರವಾದಿಯೂ ಆದ ಯೆಶಾಯನ ಬಳಿಗೆ ಹೋಗಿ 3ಅವನಿಗೆ
ಹೀಗೆಂದು ಹೇಳಿ: 'ಈ ದಿನ ನಮಗೆ ಮಹಾಸಂಕಟದ ದಿನ, ದಂಡನೆಯ ದಿನ, ನಿಂದೆ ಅವಮಾನದ ದಿನ.
ಹೆರಿಗೆಯ ಕಾಲ ಬಂದಿದೆ, ಆದರೆ ಹೆರುವುದಕ್ಕೆ ಶಕ್ತಿ ಸಾಲದು. 4ಅಸ್ಸೀರಿಯದ ಅರಸನಿಂದ ಬಂದಿರುವ
ಸೇನಾಪತಿ ಆಡಿದ ಮಾತುಗಳನ್ನು ನಿನ್ನ ದೇವರಾದ ಸರ್ವೇಶ್ವರ ಕೇಳಿದ್ದಾರೆ. ಆ ಸೇನಾಪತಿ ತನ್ನ ಒಡೆಯನ
ಹೆಸರಿನಲ್ಲಿ ಜೀವ ಸ್ವರೂಪರಾದ ಆ ದೇವರನ್ನು ದೂಷಿಸಿದ್ದಾನೆ. ಅವನಿಗೆ ತಕ್ಕ ದಂಡನೆಯಾಗಬೇಕು.
ಹೀಗಿರಲು ಅಳಿದುಳಿದಿರುವ ಜನರಿಗಾಗಿ ದೇವರನ್ನು ನೀನು ಪ್ರಾರ್ಥನೆ ಮಾಡಬೇಕೆಂದು ಹಿಜ್ಕೀಯ
ಕೇಳಿಕೊಂಡಿದ್ದಾನೆ,' ಎಂದು ತಿಳಿಸಿ."

5 ಅರಸ ಹಿಜ್ಕೀಯನ ಸೇವಕರು ತನ್ನ ಬಳಿಗೆ ಬಂದು ವರದಿ ಮಾಡಿದ ಮೇಲೆ ಯೆಶಾಯನು,
6"ನೀವು ಹಿಂದಿರುಗಿ ಹೋಗಿ ನಿಮ್ಮ ರಾಜನಿಗೆ ಹೀಗೆಂದು ತಿಳಿಸಿರಿ: 'ಇದು ಸರ್ವೇಶ್ವರನ ನುಡಿ:
ಅಸ್ಸೀರಿಯದ ಅರಸನ ಸೇವಕರು ನನ್ನನ್ನು ದೂಷಿಸಿ ಆಡಿದ ಮಾತುಗಳನ್ನು ಕೇಳಿದ್ದೇನೆ. ಅವುಗಳಿಗಾಗಿ
ನೀನು ಹೆದರಬೇಕಾಗಿಲ್ಲ. 7ಅವನ ಮೇಲೆ ಭಯಾತ್ಮನನ್ನು ಬರಮಾಡುವೆನು, ಅವನ ಒಂದು ಸುದ್ದಿಯನ್ನು
ಕೇಳಿ ಸ್ವದೇಶಕ್ಕೆ ಹಿಂದಿರುಗಿ ಅಲ್ಲೆ ಕತ್ತಿಗೆ ತುತ್ತಾಗುವಂತೆ ಮಾಡುವೆನು."

### ಅಸ್ಸೀರಿಯಾದವರು ಹಾಕಿದ ಮತ್ತೊಂದು ಬೆದರಿಕೆ

8 ಅಸ್ಸೀರಿಯದ ಸೇನಾಪತಿಯು ತನ್ನ ಅರಸನು ಲಾಕೀಷನ್ನು ಬಿಟ್ಟು ಲಿಬ್ನಕ್ಕೆ ಹೋಗಿ ಆ ರಾಜ್ಯದ
ವಿರುದ್ಧ ಯುದ್ಧಮಾಡುತ್ತಿರುವುದಾಗಿ ಸಮಾಚಾರ ಪಡೆದನು. ಆದುದರಿಂದ ಅವನು ಅಲ್ಲಿಗೆ ತೆರಳಿದನು.
9ಅಷ್ಟರಲ್ಲೆ ಸುಡಾನಿನ ಅರಸ ತಿರ್ಹಾಕನು ತನಗೆ ವಿರುದ್ಧವಾಗಿ ಹೊರಟಿದ್ದಾನೆ ಎಂಬ ದುದ್ದಿ ಅಸ್ಸೀರಿಯದ
ಅರಸನಿಗೆ ಮುಟ್ಟಿತು. ಆಗ ಅವನು ಜುದೇಯದ ಅರಸ ಹಿಜ್ಕೀಯನಿಗೆ, 10"ಜೆರುಸಲೇಮ್ ನನ್ನ
ವಶವಾಗುವುದಿಲ್ಲವೆಂದು ನೀನು ನಂಬುವ ದೇವರು ಹೇಳಿ, ನಿನ್ನನ್ನು ಮೋಸಗೊಳಿಸಿದ್ದಾನೆ. 11ಅಸ್ಸೀರಿಯದ
ಅರಸನು ಎಲ್ಲಾ ರಾಜ್ಯಗಳನ್ನು ಸಂಪೂರ್ಣವಾಗಿ ನಾಶಪಡಿಸಿದ್ದಾನೆಂಬ ಸಮಾಚಾರ ನಿನಗೆ ಮುಟ್ಟಿರಬೇಕು.
ಹೀಗಿರುವಲ್ಲಿ ನೀನು ಮಾತ್ರ ತಪ್ಪಿಸಿಕೊಳ್ಳುವಿಯೋ? 12ನನ್ನ ತಂದೆ ತಾತಂದಿರು ಗೋಜಾನ್, ಹಾರನ್,
ರೆಚೆಪ್ ಎಂಬ ನಗರಗಳ ಜನರನ್ನು ಮತ್ತು ತೆಲಸ್ಸಾರ್ ಪ್ರಾಂತ್ಯದಲ್ಲಿರುವ ಎದೆನಿನ ಜನರನ್ನು
ನಾಶಮಾಡಿದರು. ಆಗ ಅವರ ದೇವರುಗಳು ಅವರನ್ನು ರಕ್ಷಿಸಲಾಗಲಿಲ್ಲ. 13ಹಮಾತ್, ಅರ್ಪಾದ್,

ಸೆಫರ್ವಯಿಮ್, ಹೇನ್ ಮತ್ತು ಇವ್ವಾ ಎಂಬ ನಗರಗಳ ಅರಸರ ಗತಿ ಏನಾಯಿತು?" ಎಂದು ಪತ್ರ ಬರೆದು ದೂತರ ಸಮೇತ ಕಳುಹಿಸಿದನು.

14 ಹಿಜ್ಕೀಯನು ಆ ದೂತರು ತಂದ ಪತ್ರವನ್ನು ತೆಗೆದುಕೊಂಡು ಓದಿದ ನಂತರ, ದೇವಾಲಯಕ್ಕೆ
ಹೋಗಿ ಅದನ್ನು ಸರ್ವೇಶ್ವರಸ್ವಾಮಿಯ ಮುಂದೆ ತೆರೆದಿಟ್ಟು, 15ಹೀಗೆಂದು ಪ್ರಾರ್ಥನೆ ಮಾಡಿದನು:
16"ಇಸ್ರಯೇಲಿನ ದೇವರೇ, ಸೇನಾಧೀಶ್ವರ ಸರ್ವೇಶ್ವರಾ, ಕೆರೂಬಿಗಳ ಮೇಲೆ ಆಸೀನಾರೂಢರಾಗಿರುವವರೇ,
ಎಲ್ಲಾ ಭೂರಾಜ್ಯಗಳನ್ನು ಆಳುವ ದೇವರು ನೀವೊಬ್ಬರೇ; ಪರಲೋಕ ಭೂಲೋಕಗಳನ್ನುಂಟು ಮಾಡಿದವರು
ನೀವೇ. 17ಸರ್ವೇಶ್ವರಾ, ಕಿವಿಗೊಟ್ಟು ಕೇಳಿ; ಸರ್ವೇಶ್ವರಾ, ಕಣ್ಣಿಟ್ಟು ನೋಡಿ. ಸನ್ಹೇರೀಬನು ಜೀವಸ್ವರೂಪ
ದೇವರಾದ ನಿಮ್ಮನ್ನು ನಿಂದಿಸುವುದಕ್ಕೋಸ್ಕರ ಹೇಳಿಕಳುಹಿಸಿದ ಈ ಮಾತುಗಳನ್ನೆಲ್ಲಾ ಮನಸ್ಸಿಗೆ ತಂದುಕೊಳ್ಳಿ.
18ಸರ್ವೇಶ್ವರಾ, ಅಸ್ಸೀರಿಯರ ರಾಜರು ಸಕಲ ರಾಷ್ಟ್ರಗಳನ್ನೂ ಹಾಗೂ ಅವರ ನಾಡುಗಳನ್ನೂ
ಹಾಳುಮಾಡಿದ್ದಾರೆ. 19ಅವರ ದೇವರುಗಳನ್ನೂ ಬೆಂಕಿಗೆ ಹಾಕಿದ್ದು ನಿಜ. ಅವು ದೇವರುಗಳಲ್ಲ, ಕೇವಲ
ಮನುಷ್ಯರು ಕೆತ್ತಿದ ಕಲ್ಲುಮರಗಳ ಬೊಂಬೆಗಳಷ್ಟೆ, ಆದುದರಿಂದಲೇ ಅವು ಅವರಿಂದ ಹಾಳಾದವು. 20ನಮ್ಮ
ದೇವರಾದ ಸರ್ವೇಶ್ವರಾ, ನೀವೇ ಏಕೈಕ ಸರ್ವೇಶ್ವರ ಎಂಬುದನ್ನು ಭೂಮಿಯ ರಾಷ್ಟ್ರಗಳೆಲ್ಲವೂ
ತಿಳಿದುಕೊಳ್ಳುವಂತೆ ನಮ್ಮನ್ನು ಅಸ್ಸೀರಿಯರ ಕೈಯಿಂದ ಬಿಡಿಸಿರಿ."

### ಸನ್ಹೇರೀಬನ ಪತನ

(2 ಅರಸು 18.20-37)

21 ಆಗ ಆಮೋಚನ ಮಗ ಯೆಶಾಯನು ಹಿಜ್ಕೀಯನಿಗೆ ಹೇಳಿಕಳುಹಿಸಿದ್ದೇನೆಂದರೆ: "ಇಸ್ರಯೇಲಿನ
ದೇವರಾದ ಸರ್ವೇಶ್ವರಸ್ವಾಮಿಯ ಈ ಮಾತುಗಳನ್ನು ಕೇಳು: ನೀನು ಅಸ್ಸೀರಿಯದ ಅರಸ ಸನ್ಹೇರೀಬನ
ವಿಷಯವಾಗಿ ಮಾಡಿದ ಬಿನ್ನಹಗಳು ಸರ್ವೇಶ್ವರಸ್ವಾಮಿಗೆ ಮುಟ್ಟಿವೆ. ಅವರು ಅವನಿಗೆ ವಿರುದ್ಧ
ಹೀಗೆಂದಿದ್ದಾರೆ – 22"ನಿನ್ನನ್ನು ಪರಿಹಾಸ್ಯಮಾಡಿ ತಿರಸ್ಕರಿಸುತಿಹಳು ಕನ್ಯೆಯಾದ ಸಿಯೋನಿನ ಕುವರಿಯು,
ನಿನ್ನ ಹಿಂದೆ ತಲೆಯಾಡಿಸಿ ಮೂದಲಿಸುತಿಹಳು ಜೆರುಸಲೇಮಿನ ಆ ಕುವರಿಯು. 23ನೀನು ನಿಂದಿಸಿ
ದೂಷಿಸುತ್ತಿರುವುದು ಯಾರನ್ನು? ಕಿರಿಚಿ ಹೀಯಾಳಿಸುತ್ತಿರುವುದು ಯಾರನ್ನು? ಗರ್ವದಿಂದ ದುರುಗುಟ್ಟಿ
ನೋಡಿದುದು ಯಾರನ್ನು? ಇಸ್ರಯೇಲರ ಪರಮಪಾವನ ಸ್ವಾಮಿಯನ್ನಲ್ಲವೇನು? 24ನೀನು ನಿನ್ನ ಸೇವಕರ
ಮೂಲಕ ಸರ್ವೇಶ್ವರನನ್ನು ನಿಂದಿಸಿರುವೆ. ಅಲ್ಲದೆ, ಈ ಮಾತುಗಳನ್ನಾಡಿ ಜಂಬಕೊಚ್ಚಿಕೊಂಡಿರುವೆ:

'ಹತ್ತಿದ್ದೇನೆ ಗಿರಿಶಿಖರಗಳನ್ನು
  ರಥಸಮೂಹದೊಡನೆ,
ಸೇರಿದ್ದೇನೆ ಲೆಬನೋನಿನ
  ದುರ್ಗಮ ಸ್ಥಳಗಳನ್ನೇ.
ಕಡಿದಿದ್ದೇನೆ ಅದರ ಎತ್ತರವಾದ
  ದೇವದಾರು ವೃಕ್ಷಗಳನ್ನೇ,
ಕತ್ತರಿಸಿದ್ದೇನೆ ಅದರ ಶ್ರೇಷ್ಠವಾದ
  ತುರಾಯಿ ಮರಗಳನ್ನೇ.
ಒಳಹೊಕ್ಕಿದ್ದೇನೆ ಅಲ್ಲಿನ ದೂರದ
  ಶಿಖರವನ್ನೇ,
ಪ್ರವೇಶಿಸಿದ್ದೇನೆ ದಟ್ಟವಾದ ಆ
  ಕಾಡುಮೇಡುಗಳನ್ನೇ.
25 ಪರನಾಡುಗಳಲ್ಲಿ ಬಾವಿತೋಡಿ
  ನೀರುಕುಡಿದ್ದೇನೆ,
ನನ್ನ ಅಂಗಾಲಿನಿಂದಲೇ ಈಜಿಪ್ಟಿನ
  ನದಿಗಳನ್ನೆಲ್ಲಾ ಬತ್ತಿಸಿದ್ದೇನೆ.

26 ಇದನ್ನೆಲ್ಲಾ ಬಹುಕಾಲದ ಹಿಂದೆ
ಗೊತ್ತು ಮಾಡಿದವನು ನಾನೇ,
ಪೂರ್ವಕಾಲದಲ್ಲಿ ನಿರ್ಣಯಿಸಿದುದನ್ನು
ಈಗ ನೆರವೇರಿಸಿದ್ದೇನೆ.
ಕೋಟೆ ನಗರಗಳನ್ನು ನೀನು
ಹಾಳು ದಿಬ್ಬಗಳನ್ನಾಗಿಸಿದೆ,
ಆದರೆ ಸಾಧ್ಯವಾಯಿತಿದು ನನ್ನಿಂದಲೇ,
ನಿನಗಿದು ತಿಳಿಯದೆ ಹೋಯಿತೆ?
27 ಬಲವಿಲ್ಲದವರಾದರು ಆ
ನಗರವಾಸಿಗಳು ನನ್ನ ನಿಮಿತ್ತವೆ,
ಸಮಾನರಾದರು ಹೊಲದ ಸಸಿಗೆ,
ಎಳೆಗರಿಕೆಗೆ,
ಮಾಳಿಗೆ ಮೇಲಿನ ಹುಲ್ಲಿಗೆ.
ಬೆಳೆಯುವುದಕ್ಕೆ ಮೊದಲೆ ತುತ್ತಾದರು
ಬಿರುಗಾಳಿಯ ಹೊಡೆತಕ್ಕೆ.
28 ನನಗೆ ಗೊತ್ತಿದೆ ನೀ ಕೂರುವುದು
ಹೋಗಿಬರುವುದು,
ನನಗೆ ತಿಳಿದಿದೆ ನೀ ನನ್ನ ಮೇಲೆ
ರೌದ್ರಾವೇಶಗೊಂಡಿರುವುದು.
29 ನನ್ನ ವಿರುದ್ಧ, ನಿನಗಿರುವ ಕ್ರೋಧ, ಗರ್ವ
ತಿಳಿದಿದೆ ನನಗೆ,
ಎಂದೇ ಹಾಕುವೆ ಮೂಗಿಗೆ ದಾರ,
ಬಾಯಿಗೆ ಕಡಿವಾಣ.
ನೀ ಬಂದ ದಾರಿಯಿಂದಲೇ ಅಟ್ಟುವೆ
ನಿನ್ನನ್ನು ಹಿಂದಕ್ಕೆ’.”

30 ಬಳಿಕ ಯೆಶಾಯನು ರಾಜ ಹಿಜ್ಕೀಯನಿಗೆ, “ಈ ಮಾತುಗಳು ನೆರವೇರುತ್ತವೆಂಬುದಕ್ಕೆ ಸೂಚನೆ
ಇದು: ಈ ವರ್ಷದಲ್ಲಿ ನೀವು ಕೂಳೆಬೆಳೆಯನ್ನು, ಮುಂದಿನ ವರ್ಷದಲ್ಲಿ ತನ್ನಷ್ಟಕ್ಕೆ ತಾನೇ ಅದು
ಬೆಳೆದುದನ್ನು, ಆದರೆ ಮೂರನೆಯ ವರ್ಷ ಹೊಲಗಳಲ್ಲಿ ಬಿತ್ತಿ ಕೊಯ್ದುದನ್ನು, ದ್ರಾಕ್ಷಿ ತೋಟದಲ್ಲಿ
ವ್ಯವಸಾಯ ಮಾಡಿ ಶೇಖರಿಸಿದ್ದನ್ನು ಅನುಭವಿಸುವಿರಿ. 31ಅಳಿದುಳಿದ ಯೆಹೂದ್ಯರು ನಾಡಿನಲ್ಲಿ ಬೇರೂರಿ
ನೆಲೆಗೊಳ್ಳುವರು; ಬೆಳೆದು ಅಭಿವೃದ್ಧಿಯಾಗುವರು. 32ಆ ಅಳಿದುಳಿದವರು ಜೆರುಸಲೇಮಿನಲ್ಲೇ
ಹರಡಿಕೊಳ್ಳುವರು, ಸಿಯೋನ್ ಪರ್ವತದಲ್ಲಿ ಅಭಿವೃದ್ಧಿಯಾಗುವರು, ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ
ಆಗ್ರಹವೇ ಇದನ್ನು ಸಾಧಿಸುವುದು.

33 “ಅಸ್ಸೀರಿಯದ ಅರಸನನ್ನು ಕುರಿತು ಸರ್ವೇಶ್ವರ ಹೇಳಿರುವ ಮಾತಿದು – ಅವನು ಪಟ್ಟಣವನ್ನು
ಸಮೀಪಿಸುವುದಿಲ್ಲ, ಅದರತ್ತ ಬಾಣವನ್ನೆಸೆಯುವುದಿಲ್ಲ, ಕವಚಧಾರಿಗಳನ್ನು ಕಳುಹಿಸುವುದಿಲ್ಲ. ಅದರ
ಆಕ್ರಮಣಕ್ಕಾಗಿ ಮಣ್ಣು ದಿಬ್ಬಗಳನ್ನು ಎಬ್ಬಿಸುವುದಿಲ್ಲ. 34ಅವನು ಬಂದ ದಾರಿಯಿಂದಲೇ ಹಿಂದಿರುಗಿ
ಹೋಗುವನು; ಈ ಪಟ್ಟಣಕ್ಕೆ ಕಾಲಿಡನು. 35ನನಗಾಗಿಯೂ ನನ್ನ ದಾಸ ದಾವೀದನಿಗಾಗಿಯೂ ಈ
ಪಟ್ಟಣವನ್ನು ಉಳಿಸಿ ಕಾಪಾಡುವೆನು – ಎಂದಿದ್ದಾರೆ,” ಎಂದು ಹೇಳಿದನು.

**ಸನ್ಹೇರೀಬನ ಮರಣ**

36 ಆಗ ಸರ್ವೇಶ್ವರಸ್ವಾಮಿಯ ದೂತನು ಹೊರಟು ಬಂದು ಅಸ್ಸೀರಿಯರ ಪಾಳೆಯದಲ್ಲಿ 185,000 ಮಂದಿ ಸೈನಿಕರನ್ನು ಮರಣಕ್ಕೆ ಈಡು ಮಾಡಿದನು; ಬೆಳಿಗ್ಗೆ ಎದ್ದುನೋಡುವಾಗ ಅವರೆಲ್ಲರೂ ಹೆಣಗಳಾಗಿದ್ದರು. 37ಆದ್ದರಿಂದ ಅಸ್ಸೀರಿಯರ ಅರಸನಾದ ಸನ್ಹೇರೀಬನು ಹಿಂದಿರುಗಿದನು. ನಿನೆವೆ ಪಟ್ಟಣಕ್ಕೆ ಹೋಗಿ ಅಲ್ಲಿನ ದೇವರಾದ ನಿಸ್ರೋಕನನ್ನು ಆರಾಧನೆ ಮಾಡುತ್ತಿರುವಾಗ, ಅದ್ರಮ್ಮೆಲೆಕ್ ಮತ್ತು ಸರೆಚೆರ್ ಎಂಬ ಅವನ ಇಬ್ಬರು ಮಕ್ಕಳು ಅವನನ್ನು ಕತ್ತಿಯಿಂದ ಕೊಂದು ಅರರಾಟ್ ನಾಡಿಗೆ ಪಲಾಯನ ಗೈದರು. ಬಳಿಕ ಅವನ ಇನ್ನೊಬ್ಬ ಮಗ ಏಸರ್ ಹದ್ದೋನನು ಅರಸನಾದನು.

**ಹಿಜ್ಕೀಯನ ರೋಗನಿವಾರಣೆ**

(2 ಅರಸು 20.1–11)

**38** ಆ ದಿನಗಳಲ್ಲಿ ಹಿಜ್ಕೀಯನು ರೋಗದಿಂದ ಮರಣಾವಸ್ಥೆಯಲ್ಲಿದ್ದನು. ಆಗ ಆಮೋಚನ ಮಗನೂ ಪ್ರವಾದಿಯೂ ಆದ ಯೆಶಾಯನು ಅವನ ಬಳಿಗೆ ಬಂದು, "ನೀನು ಉಳಿಯುವ ಹಾಗಿಲ್ಲ, ಸಾಯಬೇಕಾಗಿದೆ. ಆದುದರಿಂದ ನಿನ್ನ ಸಂಸಾರವನ್ನು ವ್ಯವಸ್ಥೆ ಮಾಡಬೇಕು ಎಂದು ಸರ್ವೇಶ್ವರ ಹೇಳಿದ್ದಾರೆ," ಎಂದು ತಿಳಿಸಿದನು.

2 ಇದನ್ನು ಕೇಳಿದೊಡನೆ ಹಿಜ್ಕೀಯನು ಗೋಡೆಯ ಕಡೆಗೆ ತಿರುಗಿಕೊಂಡು, 3"ಸರ್ವೇಶ್ವರಾ, ನಿಮಗೆ ಶ್ರದ್ಧೆಯಿಂದಲೂ, ಪ್ರಾಮಾಣಿಕತೆಯಿಂದಲೂ ಸೇವೆ ಮಾಡಿದ್ದೇನೆ. ನಿಮ್ಮ ದೃಷ್ಟಿಯಲ್ಲಿ ಒಳ್ಳೆಯವನಾಗಿಯೇ ನಡೆದುಕೊಂಡಿದ್ದೇನೆ. ಇದನ್ನು ದಯೆಯಿಂದ ನೆನಪಿಗೆ ತಂದುಕೊಳ್ಳಿ," ಎಂದು ಬಹಳವಾಗಿ ಕಣ್ಣೀರಿಡುತ್ತಾ ಪ್ರಾರ್ಥನೆ ಮಾಡಿದನು.

4 ಆಗ ಸರ್ವೇಶ್ವರ ಯೆಶಾಯನಿಗೆ, 5"ನೀನು ಹೋಗಿ ಹಿಜ್ಕೀಯನಿಗೆ ಹೀಗೆಂದು ತಿಳಿಸು: 'ನಾನು ನಿನ್ನ ಪ್ರಾರ್ಥನೆಯನ್ನು ಕೇಳಿದ್ದೇನೆ, ನಿನ್ನ ಕಣ್ಣೀರನ್ನು ನೋಡಿದ್ದೇನೆ; ಇಗೋ, ನಿನ್ನ ಆಯುಷ್ಯಕ್ಕೆ ಇನ್ನೂ ಹದಿನೈದು ವರ್ಷಗಳನ್ನು ಸೇರಿಸುತ್ತೇನೆ. 6ನಿನ್ನನ್ನು ಮತ್ತು ಈ ಪಟ್ಟಣವನ್ನು ಅಸ್ಸೀರಿಯದ ಅರಸನ ಕೈಗೆ ಸಿಕ್ಕದಂತೆ ತಪ್ಪಿಸುತ್ತೇನೆ. ಈ ಪಟ್ಟಣವನ್ನು ಉಳಿಸಿ ಕಾಪಾಡುತ್ತೇನೆ'." 21ಯೆಶಾಯನು ಹಿಜ್ಕೀಯನಿಗೆ, ಅಂಜೂರದ ಹಣ್ಣುಗಳ ಅಡೆಯನ್ನು ತರಿಸಿ, 'ನಿನ್ನ ಕರುವಿನ ಮೇಲೆ ಕಟ್ಟು, ಆಗ ನೀನು ಗುಣ ಹೊಂದುವೆ," ಎಂದು ಹೇಳಲು 22ಹಿಜ್ಕೀಯನು, "ನಾನು ಗುಣಹೊಂದಿ ಸರ್ವೇಶ್ವರಸ್ವಾಮಿಯ ಆಲಯವನ್ನು ಸೇರುವೆನು ಎಂಬುದಕ್ಕೆ ಗುರುತೇನು?" ಎಂದು ಕೇಳಿದನು. 7ಅದಕ್ಕೆ ಯೆಶಾಯನು, "ಸರ್ವೇಶ್ವರ ನುಡಿದದ್ದನ್ನು ನೆರವೇರಿಸುವರು ಎಂಬುದಕ್ಕೆ ಈ ಗುರುತನ್ನು ಕಾಣುವೆ: 8ಇಗೋ, ಅಹಾಜನು ಕಟ್ಟಿಸಿದ ನೆರಳುಗಡಿಯಾರದಲ್ಲಿ ಸೂರ್ಯನ ನೆರಳು ಹತ್ತು ಮೆಟ್ಟಲು ಹಿಂದಕ್ಕೆ ಬರುವಂತೆ ಮಾಡುವರು," ಎಂದು ತಿಳಿಸಿದನು. ಅಂತೆಯೇ ಮುಂದೆ ಹೋಗಿದ್ದ ನೆರಳು ಹತ್ತು ಮೆಟ್ಟಲು ಹಿಂದಕ್ಕೆ ಬಂದಿತು.

9 ಜುದೇಯದ ಅರಸ ಹಿಜ್ಕೀಯನು ರೋಗದಿಂದ ಗುಣಹೊಂದಿದಾಗ ಬರೆದ ಸ್ತುತಿ ಗೀತೆ:

10 ನನ್ನ ರೋಗದಲ್ಲಿ ನಾನು
ಇಂತೆಂದುಕೊಂಡೆ:
ಮಧ್ಯಪ್ರಾಯದಲ್ಲೇ ಮೃತ್ಯುಲೋಕವನ್ನು
ಸಮೀಪಿಸಿರುವೆ
ನನ್ನ ಆಯುಷ್ಯವನ್ನು ನಾ
ಕಳೆದುಕೊಂಡಿರುವೆ.
11 ಜೀವಲೋಕದಲ್ಲಿ ಇನ್ನು ದೇವನನ್ನು
ಕಾಣೆನೆಂದುಕೊಂಡೆ
ಭೂಲೋಕನಿವಾಸಿಗಳಲ್ಲಿ ಒಬ್ಬನನ್ನೂ
ನೋಡಲಾರೆನೆಂದುಕೊಂಡೆ.

12 ಕುರುಬನು ತನ್ನ ಗುಡಿಸಲನ್ನು
ಕಿತ್ತುಹಾಕುವಂತೆ
ನೇಯಿಗೆಯವನು ತನ್ನ ಹಾಸನ್ನು
ಸುತ್ತುವಂತೆ
ಮಗ್ಗದಿಂದ ಅವನು ದಾರವನ್ನು
ಕತ್ತರಿಸುವಂತೆ
ಬೆಳಗುಬೈಗಿನೊಳಗೆ ನನ್ನ ಆಯುಷ್ಯವನ್ನು
ನೀ ಮುಗಿಸುತ್ತಿರುವೆನೆಂದು.
13 ಸಿಂಹವು ಮೇಲೆಬಿದ್ದು ಮೂಳೆ ಮುರಿದಂತೆ
ನನಗಾಗುತ್ತಿತ್ತು ಅತೀವ ಬಾಧೆ,
ಆದರೂ ಇರುಳೆಲ್ಲ ಮೊರೆಯಿಡುತ್ತಿದ್ದೆ
ಬೆಳಗು ಬೈಗಿನೊಳಗೆ ನೀ ನನ್ನ
ಮುಗಿಸುತ್ತಿರುವೆನೆಂದೆ.
14 ಕಿಚುಗುಟ್ಟಿದೆ ನಾ ಬಾನಕ್ಕಿ–ಬಕಗಳಂತೆ
ಗುಬ್ಬಳಿಸಿದೆ ನಾ ಪಾರಿವಾಳದಂತೆ,
ಕಂಗೆಟ್ಟೆ, ನಾ ಮೇಲೆ ಮೇಲಕ್ಕೆ
ನೋಡುತಾ
ಸರ್ವೇಶ್ವರಾ, ನಾನಿರುವೆ ಬಾಧೆಪಡುತಾ
ನೀ ಎನಗೆ ನೆರವಾಗಲು ಬಾ ಎನ್ನುತಾ.
15 ನುಡಿದಂತೆ ಪ್ರಭು ನೆರವೇರಿಸಿಹನು;
ನಾನೇನು ಹೇಳಲಿ;
ಮುಳುಗಿದೆ ನನ್ನಾತ್ಮ ದುಃಖಸಾಗರದಲಿ
ನಿದ್ರೆಯಿಲ್ಲದೆ ಸೊರಗುತಿದೆ ನನ್ನ
ಜೀವಮಾನವಿಡೀ.
16 ಸರ್ವೇಶ್ವರಾ, ಮಾನವನ ಜೀವನ ಇಂತಿದೆ,
ಇವುಗಳಿಂದಲೇ ನನ್ನ ಆತ್ಮ
ಚೇತನಗೊಳ್ಳುತಿದೆ,
ನೀನೀಗ ಗುಣಪಡಿಸು, ನಾ ಬಾಳುವೆ.
17 ನಾ ಪಟ್ಟ ದುಃಖವು ನನ್ನ ಸುಖಕ್ಕಾಗಿಯೇ
ನನ್ನಾತ್ಮವನ್ನು ನಾಶಕೂಪದಿಂದ
ರಕ್ಷಿಸಿದ್ದು ನಿನ್ನ ಪ್ರೀತಿಯೇ:
ನನ್ನ ಪಾಪಗಳನ್ನೆಲ್ಲಾ ನೀ ಹಾಕಿರುವೆ ನಿನ್ನ
ಬೆನ್ನ ಹಿಂದೆ.
18 ಸತ್ತವರು ನಿನ್ನನ್ನು ಕೀರ್ತಿಸರು
ಪಾತಾಳದವರು ನಿನ್ನನ್ನು ಸ್ತುತಿಸರು
ಅಧೋಲೋಕಕ್ಕೆ ಇಳಿದು ಹೋದವರು
ನಿನ್ನ ಸತ್ಯಸಂಧತೆಯನ್ನು ಆಶ್ರಯಿಸರು.
19 ಜೀವಂತನು, ಜೀವಂತನು ಮಾತ್ರವೇ ನಿನ್ನ
ಸ್ತುತಿಮಾಡುವಂತೆ
ನಾನಿಂದು ನಿನ್ನನ್ನು ಜೀವಂತನಾಗಿ

ಸ್ತುತಿಮಾಡುತ್ತಿರುವೆ
ನಿನ್ನ ಸತ್ಯಸಂಧತೆಯನ್ನು ಮಕ್ಕಳಿಗೆ
ಬೋಧಿಸುವನು ತಂದೆ.
20 ಸರ್ವೇಶ್ವರಾ, ನೀ ನನ್ನ ಉದ್ಧಾರಕ
ಹೊಗಳುವೆ ನಿನ್ನ ನಾ ತಂತಿವಾದ್ಯ ಸಮೇತ
ದಿನನಿತ್ಯ, ನಿನ್ನಾಲಯದೊಳು,
ಜೀವವಿರುವ ತನಕ.

### ಬಾಬಿಲೋನಿಯದಿಂದ ಬಂದ ದೂತರು

(2 ಅರಸು 20.12–19)

**39** ಅದೇ ಕಾಲದಲ್ಲಿ ಬಲದಾನನ ಮಗನು ಹಾಗೂ ಬಾಬಿಲೋನಿಯದ ಅರಸನು ಆದ ಮೆರೋದಕಬಲದಾನ ಎಂಬವನು, ರಾಜ ಹಿಜ್ಕೀಯನು ರೋಗದಿಂದ ಗುಣಹೊಂದಿದನು ಎಂದು ಕೇಳಿ ಅವನಿಗೆ ಉಡುಗೊರೆಯೊಂದಿಗೆ ಒಂದು ಪತ್ರವನ್ನು ಕಳುಹಿಸಿದನು.
2ಹಿಜ್ಕೀಯನು ಆ ದೂತರನ್ನು ಸಂತೋಷದಿಂದ ಬರಮಾಡಿಕೊಂಡು ಅವರಿಗೆ ಬಳ್ಳಿಬಂಗಾರ, ಸುಗಂಧದ್ರವ್ಯ, ಪರಿಮಳತೈಲ ಮೊದಲಾದ ಪದಾರ್ಥಗಳಿಂದ ಕೂಡಿದ ಕರಂಡಗಳನ್ನು, ಆಯುಧ ಶಾಲೆಯನ್ನು ಮತ್ತು ತನ್ನ ಭಂಡಾರದಲ್ಲಿದ್ದ ಒಡವೆವಸ್ತುಗಳನ್ನು ತೋರಿಸಿದನು. ಅವನ ಅರಮನೆಯಲ್ಲೂ ರಾಜ್ಯದಲ್ಲೂ ಇದ್ದ ಸಮಸ್ತವನ್ನು ತೋರಿಸಿದನು.
3ಆಗ ಪ್ರವಾದಿ ಯೆಶಾಯನು ಹಿಜ್ಕೀಯನ ಬಳಿಗೆ ಬಂದು, "ಆ ದೂತರು ಎಲ್ಲಿಯವರು? ಏನು ಕೇಳಿದರು?" ಎಂದನು. ಅದಕ್ಕೆ ಹಿಜ್ಕೀಯನು, "ಅವರು ಬಹುದೂರದ ನಾಡಾದ ಬಾಬಿಲೋನಿಯದಿಂದ ಬಂದವರು," ಎಂದು ಉತ್ತರಕೊಟ್ಟನು.

4 ಯೆಶಾಯನು ಮತ್ತೆ ಅವನನ್ನು, "ಅವರು ನಿನ್ನ ಅರಮನೆಯಲ್ಲಿ ಏನೇನನ್ನು ನೋಡಿದರು?" ಎಂದು ಕೇಳಲು ಹಿಜ್ಕೀಯನು, "ಅರಮನೆಯಲ್ಲಿ ಇರುವುದೆಲ್ಲವನ್ನು ನೋಡಿದರು. ನನ್ನ ಭಂಡಾರದಲ್ಲಿ ನಾನು ಅವರಿಗೆ ತೋರಿಸದ ಒಡವೆ ವಸ್ತು ಒಂದೂ ಇಲ್ಲ," ಎಂದನು.

5 ಆಗ ಯೆಶಾಯನು ಅವನಿಗೆ, "ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ಈ ಮಾತನ್ನು ಕೇಳು:
6ನಿನ್ನ ಪೂರ್ವಜರ ಕಾಲದಿಂದ ಇಂದಿನವರೆಗೆ ಅರಮನೆಯಲ್ಲಿ ಕೂಡಿಸಿಟ್ಟ ಎಲ್ಲವನ್ನು ಬಾಬಿಲೋನಿಯಾಗೆ ಕೊಂಡೊಯ್ಯುವ ದಿನ ಬರುವುದು; ಇಲ್ಲಿ ಏನೂ ಉಳಿಯುವುದಿಲ್ಲ.
7ನೀನು ಪಡೆದ ಮಕ್ಕಳಲ್ಲಿ ಕೆಲವರನ್ನು, ನಿನ್ನ ಸ್ವಂತ ಪುತ್ರರನ್ನು ತೆಗೆದುಕೊಂಡು ಹೋಗಿ ಬಾಬಿಲೋನಿಯರ ಅರಸರ ಅರಮನೆಯಲ್ಲಿ ಕಂಚುಕಿಗಳನ್ನಾಗಿ ನೇಮಿಸಿಕೊಳ್ಳುವರು," ಎಂದು ಹೇಳಿದನು.

8 ಆಗ ರಾಜ ಹಿಜ್ಕೀಯನು ಹೇಗೂ ತನ್ನ ಜೀವಮಾನದಲ್ಲಿ ಶಾಂತಿ ಸೌಭಾಗ್ಯ ಇರುವುದೆಂದು ತಿಳಿದುಕೊಂಡು ಯೆಶಾಯನಿಗೆ, "ನೀನು ತಿಳಿಸಿದ ಸರ್ವೇಶ್ವರಸ್ವಾಮಿಯ ಮಾತು ಹಿತಕರವಾದುದು," ಎಂದು ಉತ್ತರಕೊಟ್ಟನು.

### ವಾಗ್ದಾನ – ಅಭಯದಾನ

**40** ನಿಮ್ಮ ದೇವರು ಇಂತೆನ್ನುತ್ತಾರೆ:
"ಸಂತೈಸಿ, ನನ್ನ ಜನರನ್ನು ಸಂತೈಸಿರಿ.
2 ಜೆರುಸಲೇಮಿನೊಡನೆ ಪ್ರೀತಿಯಿಂದ
ಮಾತನಾಡಿ;
ಅದರ ಊಳಿಗತನ ಮುಗಿಯಿತೆನ್ನಿ;
ತಕ್ಕ ಪ್ರಾಯಶ್ಚಿತ್ತವಾಗಿದೆ ಅದು ಗೈದ
ದೋಷಕೆ

ಸರ್ವೇಶ್ವರಸ್ವಾಮಿಯಿಂದಲೇ ಅದರ
ಎಲ್ಲಾ ಪಾಪಕೃತ್ಯಗಳಿಗೆ
ಇಮ್ಮಡಿ ಶಿಕ್ಷೆಯಾಗಿದೆ ಎಂದು ಕೂಗಿ
ಹೇಳಿ ಆ ನಗರಿಗೆ"
3 ಇಗೋ, ಈ ವಾಣಿಯನ್ನು ಕೇಳಿ:
"ಸರ್ವೇಶ್ವರಸ್ವಾಮಿಗೆ ಮಾರ್ಗವನ್ನು
ಸಿದ್ಧಮಾಡಿ ಅರಣ್ಯದಲಿ
ನಮ್ಮ ದೇವರಿಗೆ ರಾಜಮಾರ್ಗವನ್ನು
ಸರಾಗಮಾಡಿ ಅಡವಿಯಲಿ.
4 ತುಂಬಬೇಕು ಎಲ್ಲ ಹಳ್ಳಕೊಳ್ಳಗಳನು
ಮಟ್ಟಮಾಡಬೇಕು ಎಲ್ಲ ಬೆಟ್ಟ
ಗುಡ್ಡಗಳನು.
ನೆಲಸಮಮಾಡಬೇಕು ದಿಬ್ಬದಿಣ್ಣೆಗಳನು
ಸಮತಲಗೊಳಿಸಬೇಕು ತಗ್ಗು
ಮುಗ್ಗಾದ ಸ್ಥಳಗಳನು.
5 ಗೋಚರವಾಗುವುದಾಗ ಸರ್ವೇಶ್ವರ
ಸ್ವಾಮಿಯ ಮಹಿಮೆಯು,
ಮಾನವರೆಲ್ಲರೂ ಅದನ್ನು ಕಾಣುವರು
ಒಟ್ಟಿಗೆ,
ಸರ್ವೇಶ್ವರಸ್ವಾಮಿಯೇ ಇದನ್ನು
ಬಾಯಾರೆ ನುಡಿದಿದ್ದಾರೆ."
6 ಆ ವಾಣಿ ಮತ್ತೆ ಕೇಳಿಸಿತು:
'ಗಟ್ಟಿಯಾಗಿ ಕೂಗು' ಎಂದಿತು
ನಾನೇನೆಂದು ಕೂಗಲಿ ಎನ್ನಲು
ಈ ಪರಿಯಾಗಿ ಉತ್ತರಿಸಿತು:
"ನರಮಾನವರೆಲ್ಲ ಬರೀ ಹುಲ್ಲಿನಂತೆ
ಅವರ ಸೊಬಗೆಲ್ಲಾ ಬಯಲಿನ
ಕುಸುಮದಂತೆ.
7 ಪ್ರಭುವಿನ ಶ್ವಾಸ ಬೀಸಲು
ಒಣಗಿ ಹೋಗುವುದಾ ಹುಲ್ಲು
ಬಾಡಿ ಹೋಗುವುದಾ ಹೂವು
ಮಾನವರೆಲ್ಲ ಹುಲ್ಲೇ ಹುಲ್ಲು.
8 ಒಣಗಿ ಹೋಗುವುದಾ ಹುಲ್ಲು,
ಬಾಡಿಹೋಗುವುದಾ ಹೂವು,
ನಮ್ಮ ದೇವರ ನುಡಿಯಾದರೋ
ಇರುವುದು ಚಿರಕಾಲವು."
9 ಪರ್ವತವನ್ನೇರು ಶುಭಸಂದೇಶಕಳಾದ
ಸಿಯೋನೇ,
ಧ್ವನಿಯೇರಿಸು, ಶುಭವಾರ್ತೆ ಸಾರಬಲ್ಲ
ಜೆರುಸಲೇಮೇ,

ಧ್ವನಿಯೇರಿಸು, ನಿರ್ಭಯದಿಂದ ಏರಿಸು
'ಇಗೋ, ನಿಮ್ಮ ದೇವರು' ಎಂದು
ಜೂದ ನಗರಗಳಿಗೆ ಸಾರು.
10 ಇಗೋ, ಬರುತಿಹನು ಸ್ವಾಮಿ ಸರ್ವೇಶ್ವರ
ಶೂರನಂತೆ
ರಾಜ್ಯವಾಳುವನು ತನ್ನ ಭುಜಬಲದಿಂದಲೇ
ಇಗೋ, ಶ್ರಮಕ್ಕೆ ತಕ್ಕ ಪ್ರತಿಫಲ ಆತನ
ಕೈಯಲ್ಲಿದೆ
ಆತ ಜಯಿಸಿದ ಪರಿವಾರ ಆತನ ಮುಂದಿದೆ.
11 ಆತ ಮೇಯಿಸುವನು ತನ್ನ ಮಂದೆಯನ್ನು
ಕುರುಬನ ಹಾಗೆ
ಮರಿಗಳನ್ನು ಕೈಗೆ ಎತ್ತಿಕೊಳ್ಳುವನು,
ಅಪ್ಪಿಕೊಳ್ಳುವನು ಎದೆಗೆ
ನಡೆಸುವನು ಹಾಲೂಡಿಸುವ ಕುರಿಗಳನ್ನು
ಮೆಲ್ಲಗೆ.

**ಇಸ್ರಯೇಲಿನ ಅನುಪಮದೇವ**

12 ಅಳೆವನಾರು ಸಮುದ್ರಸಾಗರಗಳನ್ನು
ಬೊಗಸೆಗೈಯಿಂದ?
ಮೊಳ ಹಾಕುವವನಾರು ಆಕಾಶಮಂಡಲ
ವನ್ನು ಕೈಗೇಣಿನಿಂದ?
ತುಂಬುವವನಾರು ಧರೆಯ ಮರಳನ್ನೆಲ್ಲಾ
ಕೊಳಗದೊಳಗೆ?
ತೂಗಿದವನಾರು ಬೆಟ್ಟಗುಡ್ಡಗಳನ್ನು
ತ್ರಾಸುತಕ್ಕಡಿಯೊಳಗೆ?
13 ಆದೇಶವಿತ್ತವನಾರು ಸರ್ವೇಶ್ವರನ ಆತ್ಮಕೆ?
ಉಪದೇಶವಿತ್ತ ಸಲಹೆಗಾರನಾರು ಆತನಿಗೆ?
14 ಜ್ಞಾನೋದಯ ನೀಡಿದವನಾರು ಆತನಿಗೆ?
ನ್ಯಾಯಮಾರ್ಗ ತೋರಿಸಿದವನಾರು
ಆತನಿಗೆ?
ಬುದ್ಧಿ ಕಲಿಸಿದವನಾರು ಆತನಿಗೆ?
ಏನೇ ಮಾರ್ಗವನ್ನು ಸೂಚಿಸಿದವನಾರು
ಆತನಿಗೆ?
15 ಆತನ ಗಣನೆಗೆ ರಾಷ್ಟ್ರಗಳು ಕಪಿಲೆಯಿಂದ
ಉದುರುವ ತುಂತುರುಗಳು
ತ್ರಾಸಿನ ತಟ್ಟೆಯ ಮೇಲಿರುವ ಧೂಳಿನ
ಕಣಗಳು
ದ್ವೀಪಗಳೋ ಆತನ ತೂಕಕ್ಕೆ
ಅಣುರೇಣುಗಳು.
16 ಲೆಬನೋನಿನ ಪಶುಗಳು ಸಾಲವು
ದಹನಬಲಿಗೆ

ಅಲ್ಲಿನ ಮರಗಳು ಸಾಲವು ಅದರ ಸೌದೆಗೆ.
17 ಸಕಲ ರಾಷ್ಟ್ರಗಳು ಆತನ ದೃಷ್ಟಿಗೆ ಏನೂ
ಇಲ್ಲದಂತೆ
ಅವುಗಳು ಆತನ ಎಣಿಕೆಗೆ ಶುದ್ಧ
ಸೊನ್ನೆಯಂತೆ.
18 ಇಂತಿರಲು ಯಾರಿಗೆ ಹೋಲಿಸಬಲ್ಲಿರಿ
ದೇವರನು?
ಕೊಡಬಲ್ಲಿರಾ ಆತನಿಗೆ ಯಾವುದಾದ
ರೊಂದು ಉಪಮಾನವನು?
19 ವಿಗ್ರಹವಾದರೋ ಎರಕ ಹೊಯ್ಯಲ್ಪಟ್ಟಿತು
ಶಿಲ್ಪಿಯಿಂದ
ಅದಕ್ಕೆ ಬಡಿದಿರುವ ಚಿನ್ನದ ಕವಚ
ಅಕ್ಕಸಾಲಿಗನಿಂದ
ಅದಕ್ಕೆ ತೊಡಿಸಿರುವ ಬೆಳ್ಳಿಸರಪಣಿ ಆ
ವಾಜನಿಂದ.
20 ಇಷ್ಟು ಹಣವನ್ನು ವೆಚ್ಚ ಮಾಡಲಾಗದ
ಬಡವನು
ಹುಡುಕುವನು ಹುಳಿತು ಹೋಗದ
ಮರವನು
ಬಾಗಿ ಬೀಳದ ವಿಗ್ರಹವನ್ನು ಮಾಡಬಲ್ಲಾ
ಕುಶಲವನು.
21 ನಿಮಗೆ ತಿಳಿದಿಲ್ಲವೋ, ನೀವು ಕೇಳಿಲ್ಲವೋ
ಆದಿಯಿಂದ ನಿಮಗೆ ಉಪದೇಶವಾಗಿ
ಬಂದಿಲ್ಲವೋ?
ಪೃಥ್ವಿಸ್ಥಾಪನೆ ಹೇಗಾಯಿತೆಂದು ನೀವು
ಗ್ರಹಿಸಿಲ್ಲವೋ?
22 ಆಸೀನನಾಗಿಹನು ಆತ ಭೂಮಂಡಲಕ್ಕಿಂತ
ಮೇಲೆ
ಭೂನಿವಾಸಿಗಳು ಕಾಣುತಿಹರು ಆತನಿಗೆ
ಮಿಡತೆಗಳಂತೆ
ಹರಡಿಹನು ಆಕಾಶಮಂಡಲವನು ನವಿರು
ಬಟ್ಟೆಯಂತೆ
ಮೇಲೆತ್ತಿಕಟ್ಟಿಹನು ಅದನ್ನು ನಿವಾಸದ
ಗುಡಾರದಂತೆ.
23 ನಾಶಗೊಳಿಸುವನಾತ ದೇಶಾಧಿಪತಿಗಳನು
ನಿರ್ನಾಮಗೊಳಿಸುವನು ರಾಜಾಧಿರಾಜರನು.
24 ನೆಟ್ಟಕೂಡಲೇ, ಬಿತ್ತಿದಾಕ್ಷಣವೇ,
ಭೂಮಿಯಲ್ಲಿ ಬೇರೂರುವಾಗಲೆ
ಬಾಡುವುದು ಇವರ ಸಂತಾನ
ಆತನ ಶ್ವಾಸದಿಂದಲೆ;

ಬಡಿದು ಹೊಯ್ಯಲ್ಪಡುವುದು
ಒಣಹುಲ್ಲಿನಂತೆ ಬಿರುಗಾಳಿಯಿಂದಲೆ.
25 “ಇಂತಿರಲು ನನ್ನನ್ನು ಯಾರಿಗೆ
ಹೋಲಿಸಬಲ್ಲಿರಿ?”
ಯಾರಿಗೆ ನನ್ನನ್ನು ಸರಿಸಮಾನ
ಮಾಡಬಲ್ಲಿರಿ?”
ಎಂದು ಕೇಳುತ್ತಿಹರು ಪರಮಪಾವನಸ್ವಾಮಿ.
26 ಕಣ್ಣೆತ್ತಿ, ದಿಟ್ಟಿಸಿನೋಡಿ ಆಕಾಶದತ್ತ
ಯಾರು ಆ ತಾರೆಗಳನ್ನು ರಚಿಸಿದಾತ?
ಆ ತಾರಾಸಮೂಹವನ್ನು ಕ್ರಮಾನುಸಾರ
ನಡೆಸುವಾತ,
ಒಂದೊಂದನ್ನೂ ಹೆಸರಿಟ್ಟು ಕರೆಯುವಾತ,
ಅವುಗಳಲ್ಲಿ ಒಂದನ್ನೂ ಕಾಣೆಯಾಗಲು
ಬಿಡದಾತ,
ಅಷ್ಟು ಬಲಾಢ್ಯನು, ಶಕ್ತಿವಂತನು ಆಗ !
27 ಹೀಗಿರಲು ಎಲೈ ಯಕೋಬ್ಯರೇ,
ಇಸ್ರಯೇಲರೇ,
‘ಮರೆಯಾಗಿದೆ ಪ್ರಭುವಿಗೆ ನನ್ನ
ಕುಂದುಕೊರತೆ,
ನ್ಯಾಯನೀತಿ ದೊರಕದಿದೆ ನನಗೆ
ಇದರತ್ತ ದೇವರ ಲಕ್ಷ್ಯ ಬೀಳದಿದೆ’
ಎನ್ನುತ್ತಿರುವಿರಿ ಏಕೆ?
28 ನೀವು ಕೇಳಿಲ್ಲವೇ? ನಿಮಗೆ ತಿಳಿದಿಲ್ಲವೇ?
ಸರ್ವೇಶ್ವರ ಅನಂತ ದೇವರಲ್ಲವೇ?
ಭೂದಿಗಂತಗಳನ್ನು ಆತ ಸೃಜಿಸಿದನಲ್ಲವೇ?
ದಣಿವೆಂಬುದು ಇಲ್ಲ, ಬಳಲಿಕೆ
ಎಂಬುದು ಇಲ್ಲ ಆತನಿಗೆ.
ಆತನ ದಕ್ಷಸಾಮರ್ಥ್ಯ ಅಗಮ್ಯ
ಪರಿಶೋಧನೆಗೆ.
29 ದಯಪಾಲಿಸುವನಾತ ಬಲಾಭಿವೃದ್ಧಿಯನ್ನು
ಬಳಲಿದವನಿಗೆ
ಅನುಗ್ರಹಿಸುವನಾತ ಚೈತನ್ಯವನು
ನಿತ್ರಾಣನಿಗೆ.
30 ಯುವಕರೂ ದಣಿದು ಬಳಲುವರು
ತರುಣರೂ ಸೊರಗಿ ಮುಗ್ಗರಿಸುವರು.
31 ಸರ್ವೇಶ್ವರನನ್ನು ಎದುರು ನೋಡುವವರು
ಹೊಸ ಚೇತನವನ್ನು ಹೊಂದುವರು.
ರೆಕ್ಕೆ ಚಾಚಿದ ಹದ್ದುಗಳಂತೆ ಹಾರುವರು
ಓಡಿದರೂ ದಣಿದರು, ನಡೆದರೂ
ಬಳಲರು.

### ಇಸ್ರಯೇಲರಿಗೆ ದೇವರಿತ್ತ ಭರವಸೆ

**41** ದೂರದೇಶದವರೇ, ಮೌನದಿಂದ ನನಗೆ
ಕಿವಿಗೊಡಿ:
ರಾಷ್ಟ್ರಗಳು ಎಷ್ಟೇ ಬಲಿಷ್ಠರಾಗಿರಲಿ
ಬಂದು ಮಾತಾಡಲಿ ಸಮೀಪದಲಿ.
ಒಟ್ಟಿಗೆ ಸೇರೋಣ ನ್ಯಾಯಸ್ಥಾನದಲಿ.
2 ಕರೆತಂದವರಾರು ಆ ಪರಾಕ್ರಮಿಯನ್ನು
ಪೂರ್ವದಿಂದ?
ಅವನು ಗೆದ್ದು ಬರುವಂತೆ
ಮಾಡಿದವರಾರು ದಿಗ್ವಿಜಯದಿಂದ?
ರಾಷ್ಟ್ರಗಳನ್ನು, ರಾಜರುಗಳನ್ನು
ಸೋಲಿಸಿದವರಾರು ಅವನ ಕೈಯಿಂದ?
ಧೂಳು ಧೂಳಾಗಿಸುತ್ತಾನೆ ಅವರನ್ನು
ಅವನ ಖಡ್ಗದಿಂದ
ಗಾಳಿಗೆ ತೂರಿಹೋಗುವ ಹುಲ್ಲನ್ನಾಗಿಸು
ತ್ತಾನೆ ಅವನ ಬಿಲ್ಲಿನಿಂದ.
3 ಹಿಂದಟ್ಟುತ್ತಾನೆ ಅವರನ್ನು ನಿರ್ಭೀತಿಯಿಂದ
ಮುನ್ನುಗ್ಗುತ್ತಾನೆ ಕಾಲು
ನೆಲ ಊರದಷ್ಟು ವೇಗದಿಂದ.
4 ಇದನ್ನೆಲ್ಲಾ ನಡೆಯಿಸಿ ನೆರವೇರಿಸಿದವನು
ಯಾರು?
ಆದಿಯಿಂದ ಈಗಿನವರೆಗೂ
ತಲತಲಾಂತರಗಳನ್ನು
ಬರಮಾಡುವವರು ಯಾರು?
ಸರ್ವೇಶ್ವರನಾದ ನಾನೇ.
ಹೌದು, ಆದಿಯಲ್ಲಿದ್ದವನು,
ಅಂತ್ಯದಲ್ಲಿ ಇರುವವನು ಆದ ನಾನೇ.
5 ದೂರದೇಶದವರು ಕಂಡು ಬೆರಗಾದರು
ಭೂಮಿಯ ಕಟ್ಟಕಡೆಯವರು
ನಡುಗಿದರು
ಎಲ್ಲರೂ ಇಲ್ಲಿಗೆ ನೆರೆದುಬಂದಿಹರು.
6 ಸಹಾಯಮಾಡಿದರು ಒಬ್ಬರಿಗೊಬ್ಬರು
ಧೈರ್ಯ ಹೇಳಿಕೊಂಡರು ಒಬ್ಬರಿ
ಗೊಬ್ಬರು.
7 ಚೆನ್ನಾಗಿದೆ ಎನ್ನುತ್ತಾನೆ ಬಡಗಿ
ಅಕ್ಕಸಾಲಿಗನಿಗೆ;
ಪ್ರೋತ್ಸಾಹ ನೀಡುತ್ತಾನೆ
ನುಣುಪು ಮಾಡುವವನು

ಅಡಿಗಲ್ಲನ್ನು ತಟ್ಟುವವನಿಗೆ.
ಬೆಸುಗೆ ಚೆನ್ನಾಗಿದೆ ಎಂದವರು
ಮೊಳೆಗಳನ್ನು ಬಡಿಯುತ್ತಾರೆ
ವಿಗ್ರಹ ಅಲುಗದಂತೆ.
8 ಇಂತಿರಲು ನನ್ನ ದಾಸನಾದ ಇಸ್ರಯೇಲೇ,
ನಾನು ಆಯ್ದುಕೊಂಡ ಯಕೋಬೇ,
ನನ್ನ ಗೆಳೆಯ ಅಬ್ರಹಾಮನ ಸಂತತಿಯೇ,
9 ಬರಮಾಡಿದೆ ನಾನು ನಿನ್ನನ್ನು ಭೂಮಿಯ
ಕಟ್ಟಕಡೆಯಿಂದ
ಕರೆದುತಂದೆ ನಿನ್ನನ್ನು ದಿಗಂತದಿಂದ.
ನಿನಗೆ ನಾನು ಇಂತೆಂದೆ:
ನೀನೆನ್ನ ದಾಸ, ನಿನ್ನ ನಾ ತಿರಸ್ಕರಿಸದೆ
ಆರಿಸಿಕೊಂಡೆ!
10 ಹೆದರಬೇಡ, ನಾನಿದ್ದೇನೆ ನಿನ್ನೊಂದಿಗೆ
ಭಯಭ್ರಾಂತನಾಗಬೇಡ, ನಾನೇ
ದೇವರು ನಿನಗೆ.
ಶಕ್ತಿ ನೀಡುವೆ, ಸಹಾಯಮಾಡುವೆ ನಿನಗೆ
ನನ್ನ ವಿಜಯಹಸ್ತದ ಆಧಾರ ಇದೆ ನಿನಗೆ.
11 ಆಶಾಭಂಗಪಟ್ಟು ಅವಮಾನ ಹೊಂದುವರು
ನಿನ್ನ ಮೇಲೆ ಕೋಪಗೊಂಡವರು
ನಾಶವಾಗಿ ನಿರ್ಮೂಲವಾಗುವರು
ನಿನ್ನ ಸಂಗಡ ವ್ಯಾಜ್ಯವಾಡಿದವರು.
12 ಹುಡುಕಿದರೂ ಸಿಗರು
ನಿನ್ನೊಡನೆ ಹೋರಾಡಿದವರು
ನಾಶವಾಗಿ ನಿರ್ನಾಮವಾಗುವರು
ನಿನ್ನ ವಿರುದ್ಧ ಯುದ್ಧಮಾಡಿದವರು.
13 ನಿನ್ನ ದೇವರಾದ ಸರ್ವೇಶ್ವರ ನಾನೇ
ಭಯಪಡಬೇಡ, ನಿನಗೆ ನಾನೇ
ನೆರವಾಗುವೆ
ಎಂತಲೇ, ನಿನ್ನ ಕೈ ಹಿಡಿದುಕೊಳ್ಳುವೆ.
14 ಸರ್ವೇಶ್ವರ ಇಂತೆನ್ನುತ್ತಾರೆ:
“ಹುಳುವಿನಂತಿರುವ ಯಕೋಬೇ,
ಇಸ್ರಯೇಲಿನ ಜನತೆಯೇ,
ಭಯಪಡಬೇಡ, ನಾನೇ ನಿನಗೆ ಸಹಾಯಕ
ಇಸ್ರಯೇಲಿನ ಪರಮಪಾವನ
ಸ್ವಾಮಿಯೇ ನಿನಗೆ ವಿಮೋಚಕ.
15 ಮಾಡಿರುವೆ ನಿನ್ನನ್ನು ಮಸೆದ ಮೊನೆಹಲ್ಲಿನ
ಹೊಸ ಕುಂಟೆಯಂತೆ.
ನೀನು ಒಕ್ಕುತ್ತಾ ಪುಡಿಪುಡಿ ಮಾಡುವೆ
ಬೆಟ್ಟಗಳನೆ

ಹೊಟ್ಟು ಧೂಳಾಗಿಸುವೆ ಗುಡ್ಡಗಳನೆ.
16 ನೀನು ತೂರಲು ಅವುಗಳನ್ನು
ಕೊಂಡೊಯ್ವುದು ಗಾಳಿ
ಚಂಡಮಾರುತವು ಮಾಡುವುದವುಗಳನ್ನು
ಚೆಲ್ಲಾಪಿಲ್ಲಿ.
ನೀನಾದರೋ ಆನಂದಿಸುವೆ ಸರ್ವೇಶ್ವರ
ಸ್ವಾಮಿಯಲಿ.
17 ದೀನದರಿದ್ರರು ನೀರಿಗಾಗಿ ಪರದಾಡುವಾಗ
ಬಾಯಾರಿ ಅವರ ನಾಲಿಗೆ
ಒಣಗಿಹೋದಾಗ
ಪ್ರಸನ್ನನಾಗುವೆ ಸರ್ವೇಶ್ವರನಾದ ನಾನೇ.
ಇಸ್ರಯೇಲಿನ ದೇವರಾದ ನಾನವರನ್ನು
ಕೈಬಿಡುವೆನೆ?
18 ಹೊರಡಿಸುವೆನು ಬೋಳುಗುಡ್ಡಗಳಲ್ಲಿ
ನದಿಗಳನು
ತಗ್ಗುತಿಟ್ಟುಗಳಲ್ಲಿ ಒರತೆಗಳನು
ಮಾರ್ಪಡಿಸುವೆನು ಕೆರೆಯಾಗಿ ಅರಣ್ಯವನು
ಬುಗ್ಗೆಗಳಾಗಿ ಮರುಭೂಮಿಯನು.
19 ನೆಡುವೆನು ಅಡವಿಯಲಿ ದೇವದಾರು,
ಕಸ್ತೂರಿ, ಜಾಲಿ,
ಸುಗಂಧ ಓಲೀವ್ ಮರಗಳನು;
ತೋಪಾಗಿ ಬೆಳೆಸುವೆನು ಅರಣ್ಯದೊಳು
ತುರಾಯಿ, ತಪಸಿ, ತಿಲಕ ವೃಕ್ಷಗಳನು.
20 ಇದನು ಕಂಡರಿತು ಗ್ರಹಿಸಿಕೊಳ್ಳುವರು
ಜನರು ಮನಸಾರೆ,
ನುಡಿವರಾಗ, 'ಇದನ್ನು ಮಾಡಿದ ಹಸ್ತವು
ಸರ್ವೇಶ್ವರಸ್ವಾಮಿಯದೇ,
ಇದನ್ನು ಸೃಷ್ಟಿಸಿದಾತ ಇಸ್ರಯೇಲಿನ
ಪರಮಪಾವನ ಸ್ವಾಮಿಯೇ.'

## ಸುಳ್ಳುದೇವತೆಗಳಿಗೆ ಸರ್ವೇಶ್ವರನ ಸವಾಲು

21 ಯಕೋಬ್ಯರ ಅರಸನಾದ ಸರ್ವೇಶ್ವರ
ಇಂತೆನ್ನುತ್ತಾರೆ:
"ನಾಡದೇವತೆಗಳೇ, ಹೊರಗೆ ಬರಲಿ
ನಿಮ್ಮ ವ್ಯಾಜ್ಯ
ಸಾಬೀತಾಗಲಿ ನಿಮ್ಮ ನ್ಯಾಯ.
22 ಬನ್ನಿರಿ ಮುಂದಕ್ಕೆ
ತಿಳಿಸಿ ಭವಿಷ್ಯತ್ತನು ನಮಗೆ.
ವಿವರಿಸಿ ಗತಿಸಿದ ಘಟನೆಗಳು ಏನೇನೆಂದು;

ಗ್ರಹಿಸುವೆವು ಅವುಗಳ ಪರಿಣಾಮವನ್ನು
ಮನಸ್ಸಿಗೆ ತಂದು,
ಇಲ್ಲವಾದರೆ ತಿಳಿಸಿ ನಮಗೆ
ಸಂಭವಿಸಲಿರುವುದೇನೆಂದು.
23 ತಿಳಿಸಿ ನಮಗೆ ಮುಂದೆ
ನಡೆಯಬೇಕಾದವುಗಳನು
ನಂಬುವೆವು ಆಗ ನೀವು
ದೇವರುಗಳೆಂಬುದನು,
ಪ್ರದರ್ಶಿಸಿ ಒಳಿತನ್ನಾಗಲಿ ಕೆಡುಕನ್ನಾಗಲಿ
ಆಗ ನೋಡುವೆವು ಒಟ್ಟಿಗೆ ನಿಬ್ಬೆರಗಾಗಿ !
24 ಇಗೋ, ನೀವು ಶೂನ್ಯರೇ ಸರಿ,
ನಿಮ್ಮ ಕಾರ್ಯವು ವ್ಯರ್ಥವೇ, ಸರಿ
ನಿಮ್ಮನ್ನು ಮರೆಹೋಗುವವರು
ತುಚ್ಛರೇ ಸರಿ !
25 ಹುರಿದುಂಬಿಸಿ ಕರೆತಂದಿರುವೆನು
ಒಬ್ಬನನ್ನು ಉತ್ತರದಿಂದ
ನನ್ನ ನಾಮವನ್ನು ಪ್ರಚುರಪಡಿಸಲು
ಬಂದಿಹನಾತ ಪೂರ್ವದಿಂದ
ಕುಂಬಾರನು ಜೇಡಿಮಣ್ಣನ್ನು
ತುಳಿಯುವಂತೆ
ತುಳಿಯುವನಾತ ರಾಜರನ್ನು ಮಣ್ಣಂತೆ.
26 ಈ ಘಟನೆಯನ್ನು ಅರುಹಿದವನಾರು
ಅದು ನೆರವೇರುವ ಮುಂದೆ?
ಇದನ್ನು ಮುನ್ನ ತಿಳಿಸಿದವನಾರು
ನಮಗೆ ಗೊತ್ತಾಗುವಂತೆ?
ತಿಳಿಸಿದ್ದರೆ ಹೇಳುತ್ತಿದ್ದೆವು ಅವನು
ಸತ್ಯವಂತನೆಂದೆ.
ಆದರೆ ಇದನ್ನು ತಿಳಿಸಿದವನಿಲ್ಲ
ಮುನ್ನತಿಳಿಸಬಲ್ಲವನಾರೂ ಇಲ್ಲ
ನಿಮ್ಮಿಂದ ಮಾತೊಂದನ್ನು
ಕೇಳಿದವನಾರೂ ಇಲ್ಲ.
27 ಕೇಳಿ, ಇದನ್ನು ಮೊದಲು ತಿಳಿಸಿದವನು
ನಾನೇ ಸಿಯೋನಿಗೆ;
ಶುಭಸಂದೇಶಕ ದೂತನನ್ನು ಕಳುಹಿಸಿ
ದವನು ನಾನೇ ಜೆರುಸಲೇಮಿಗೆ.
28 ನಾ ನೋಡಲು ಅವರಲ್ಲಿ ಸಮರ್ಥರಾರು
ಇಲ್ಲ
ನಾ ಪ್ರಶ್ನಿಸಲು ಉತ್ತರಿಸಬಲ್ಲ ವಿವೇಕಿ ಇಲ್ಲ.
29 ನಿಶ್ಚಯವಾಗಿ ಆ ದೇವತೆಗಳೆಲ್ಲ ಕ್ಷುದ್ರರೇ
ಅವರ ಕಾರ್ಯಗಳೆಲ್ಲ ಶೂನ್ಯವೇ

ಆ ಎರಕದ ಬೊಂಬೆಗಳೆಲ್ಲಾ ಬರಿ ಗಾಳಿಯೆ!

### 'ದೇವರ ದಾಸ' ಕುರಿತ ಮೊದಲನೆಯ ಗೀತೆ

**42** ಇಗೋ, ನನ್ನ ದಾಸನು !
ನನ್ನ ಆಧಾರ ಪಡೆದವನು
ನನ್ನಿಂದ ಆಯ್ಕೆಯಾದವನು
ನನಗೆ ಪರಮ ಪ್ರಿಯನು.
ನೆಲೆಗೊಳಿಸಿರುವೆ ಇವನಲ್ಲಿ ನನ್ನ ಆತ್ಮವನು
ಅನ್ಯರಾಷ್ಟ್ರಗಳಿಗೆ ಸಾರುವನಿವನು
ಸದ್ಧರ್ಮವನು.
2 ಆತ ಕೂಗಾಡುವಂಥವನಲ್ಲ,
ಕಿರಿಚಾಡುವಂಥವನಲ್ಲ,
ಹಾದಿಬೀದಿಗಳಲ್ಲಿ ಅವನ ಧ್ವನಿ
ಕೇಳಿಸುವುದೇ ಇಲ್ಲ.
3 ಮುರಿಯುವುದಿಲ್ಲ ಆತ, ಜಜ್ಜಿದ ದಂಟನು
ನಂದಿಸುವುದಿಲ್ಲ ಆತ, ಕಳೆಗುಂದಿದ
ದೀಪವನು
ತಪ್ಪದೆ ಸಿದ್ಧಿಗೆ ತರುವನಾತ ಸದ್ಧರ್ಮವನು.
4 ಎಡವಿ ಬೀಳನವನು, ಎದೆಗುಂದನವನು
ಜಗದೊಳು ಸ್ಥಾಪಿಸುವ ತನಕ
ಸದ್ಧರ್ಮವನು,
ಎದುರುನೋಡುವುವು ದ್ವೀಪ-
ದ್ವೀಪಾಂತರಗಳು
ಆತನ ಧರ್ಮಶಾಸ್ತ್ರವನು.
5 ಆಕಾಶಮಂಡಲವನ್ನುಂಟುಮಾಡಿ ಹರಡಿದ
ದೇವರು,
ಭೂಮಂಡಲವನ್ನೂ ಅದರಲ್ಲಿ ಬೆಳೆದು
ದೆಲ್ಲವನ್ನೂ ವೃದ್ಧಿಗೊಳಿಸುವವನು,
ಭೂನಿವಾಸಿಗಳಿಗೆ ಜೀವವನ್ನೂ ಭೂಚರರಿಗೆ
ಜೀವಾತ್ಮವನ್ನೂ
ಅನುಗ್ರಹಿಸುವಾ ಸರ್ವೇಶ್ವರ
ಇಂತೆನ್ನುತಿಹನು:
6 ಸರ್ವೇಶ್ವರಸ್ವಾಮಿಯಾದ ನಾನು
ಕೈ ಹಿಡಿದು ಕಾದಿರಿಸುವೆನು ನಿನ್ನನು,
ಕರೆದಿಹೆನು ನಿನ್ನನ್ನು ಸದ್ಧರ್ಮ ಸಾಧನೆಗಾಗಿ
ಇತ್ತಿರುವೆನು ನಿನ್ನನು ಜನರಿಗೆ
ಒಡಂಬಡಿಕೆಯಾಗಿ
ನೇಮಿಸಿರುವೆನು ನಿನ್ನನು ರಾಷ್ಟ್ರಗಳಿಗೆ
ಬೆಳಕಾಗಿ.

7 ಕೊಡುವೆ ನೀನು ಕಣ್ಣನ್ನು ಕುರುಡರಿಗೆ
ತರುವೆ ಬಂಧಿಗಳನ್ನು ಸೆರೆಯಿಂದ ಹೊರಗೆ
ಕತ್ತಲೆಯ ಕಾರಾಗೃಹದಿಂದ ಅವರನ್ನು
ಬೆಳಕಿಗೆ.
8 ನಾನೇ ಸರ್ವೇಶ್ವರ, ನನ್ನ ನಾಮವು ಅದುವೆ.
ಸಲ್ಲಿಸೆನು ನನ್ನ ಮಹಿಮೆಯನ್ನು
ಮತ್ತೊಬ್ಬರಿಗೆ
ನನ್ನ ಸ್ತೋತ್ರವನು ವಿಗ್ರಹಗಳ ಪಾಲಿಗೆ.
9 ಮುಂತಿಳಿಸಿದ ಸಂಗತಿಗಳಿದೋ ಈಡೇರಿವೆ
ಹೊಸ ಸಂಗತಿಗಳನಿದೋ ಪ್ರಕಟಿಸುವೆ
ಅವು ತಲೆದೋರುವುದಕ್ಕೆ ಮುಂಚೆಯೇ
ನಿಮಗೆ ತಿಳಿಸುವೆ."

### ಸ್ತುತಿಗೀತೆ

10 ಸಮುದ್ರಯಾತ್ರಿಕರೇ, ಸಕಲ ಜಲಚರಗಳೇ,
ದ್ವೀಪಗಳೇ, ದ್ವೀಪಾಂತರ ನಿವಾಸಿಗಳೇ,
ನೂತನ ಗೀತವ ಹಾಡಿ ಹೊಗಳಿ
ಸರ್ವೇಶ್ವರನನು,
ದಿಗಂತಗಳಲ್ಲಿಯೂ ಕೀರ್ತಿಸಿ ಆತನನು.
11 ಘೋಷಿಸಲಿ ಮರುಭೂಮಿಯೂ ಅದರ
ನಗರಗಳೂ
ಕೇದಾರಿನವರೂ ಗ್ರಾಮನಿವಾಸಿಗಳೂ
ಜಯಘೋಷಮಾಡಲಿ
ಸೆಲ ಪಟ್ಟಣದವರೂ ಸಂತೋಷದಿಂದ
ಹರ್ಷಧ್ವನಿಗೈಯಲಿ ಆ ಪರ್ವತದ
ತುತ್ತತುದಿಗಳಿಂದ
12 ಸರ್ವೇಶ್ವರನ ಮಹಿಮೆಯನು ಹೊಗಳಲಿ
ಆತನ ಸ್ತೋತ್ರವ ಪಸರಿಸಲಿ
ದ್ವೀಪದ್ವೀಪಗಳಲಿ.
13 ಸರ್ವೇಶ್ವರ ಹೊರಟಿರುವನು ಶೂರನಂತೆ
ರೌದ್ರದಿಂದಿರುವನು ಯುದ್ಧವೀರನಂತೆ
ಆರ್ಭಟಿಸಿ ಗರ್ಜಿಡುವನು ರಣಕಹಳೆಯಂತೆ
ಪರಾಕ್ರಮಿಯಂತೆ.

### ದೇವರ ಅಭಯದಾನ

14 ನನ್ನನ್ನೇ ತಡೆಹಿಡಿದೆನು;
ಆದರೀಗ ಸಮಯ ಬಂದಿಹುದು;
ಪ್ರಸವವೇದನೆಯನು ಅನುಭವಿಸುವ
ಸ್ತ್ರೀಯಂತೆ ಅಬ್ಬರಿಸುವೆನು
15 ನಾಶಪಡಿಸುವೆನು ಬೆಟ್ಟಗುಡ್ಡಗಳನು

ಒಣಗಿಸಿಬಿಡುವೆನು ಹುಲ್ಲುಸಸಿಗಳನು.
ಒಣನೆಲ ಮಾಡುವೆನು ನದಿಗಳನು
ಬತ್ತಿಸಿಬಿಡುವೆನು ಕೆರೆಕುಂಟೆಗಳನು.
16 ಕುರುಡರನ್ನು ನೆಪ್ಪಿಲ್ಲದ ಮಾರ್ಗದಲ್ಲಿ
ಬರಮಾಡುವೆನು
ಗೊತ್ತಿಲ್ಲದ ದಾರಿಗಳಲ್ಲಿ ಅವರನ್ನು
ನಡೆಸುವೆನು.
ಅವರೆದುರಿನ ಕತ್ತಲನ್ನು ಬೆಳಕಾಗಿಸುವೆನು
ಅವರ ಹಾದಿಯ ಡೊಂಕನು
ನೇರಮಾಡುವೆನು.
ಬಿಡದೆ ಮಾಡುವೆನು ಈ ಕಾರ್ಯಗಳನು.
17 ಆದರೆ, ಕೆತ್ತಿದ ವಿಗ್ರಹಗಳಲ್ಲಿ
ಭರವಸೆಯಿಡುವವರು:
"ನೀವೇ ನಮ್ಮ ದೇವರು"ಗಳು ಎಂದು
ಎರಕದ ಬೊಂಬೆಗಳಿಗೆ ಅರಿಕೆ
ಮಾಡುವವರು;
ಅವಮಾನಕ್ಕೆ ಈಡಾಗುವರು ಹಿಂಜರಿದು.

### ಇಸ್ರಯೇಲಿನ ಹಟಮಾರಿತನ

18 "ಕಿವುಡ ಜನರೇ ಕೇಳಿ
ಕುರುಡರಾದ ನೀವು ಕಣ್ಣಿಟ್ಟು ನೋಡಿ;
19 ನನ್ನ ಸೇವಕನಿಗಿಂತ ಕುರುಡರು ಯಾರು?
ನನ್ನ ದೂತನಿಗಿಂತ ಕಿವುಡರು ಯಾರು?
ನನ್ನ ಭಕ್ತನಿಗಿಂತ ಕುರುಡರು ಯಾರು?
ಸರ್ವೇಶ್ವರನ ದಾಸನಿಗಿಂತ ಅಂಧಕರು
ಯಾರು?
20 ನೀವು ಗಮನಿಸುವುದಿಲ್ಲ
ಹಲವಿಷಯಗಳನ್ನು ಕಂಡಿದ್ದರೂ
ನೀವು ಕೇಳುವುದಿಲ್ಲ ನಿಮ್ಮ ಕಿವಿಗಳು
ತೆರೆದಿದ್ದರೂ.
21 ಸರ್ವೇಶ್ವರ ಮುಕ್ತಿದಾತನಾದುದರಿಂದ
ಧರ್ಮಶಾಸ್ತ್ರಕ್ಕೆ ಮಹಿಮೆಯಿತ್ತು
ಅದನು ಮಹತ್ತಾಗಿಸಿದ.
22 ಈ ಜನರಾದರೋ ಸೂರೆಯಾಗಿದ್ದಾರೆ
ಕೊಳ್ಳೆಗೆ ಈಡಾಗಿ,
ಎಲ್ಲರೂ ಬಿದ್ದಿದ್ದಾರೆ ಹಳ್ಳಕೊಳ್ಳಗಳಲ್ಲಿ,
ಸೆರೆಮನೆಗಳಲ್ಲಿ ಬಂಧಿಗಳಾಗಿ;
ಸುಲಿಗೆಯಾಗಿದ್ದರೂ ಅವರನ್ನು
ಬಿಡಿಸುವವರಾರೂ ಇಲ್ಲ
ಸೂರೆಯಾಗಿದ್ದರೂ ಅವರನ್ನು ಬಿಟ್ಟುಬಿಡಿ

ಎನ್ನುವವರಾರೂ ಇಲ್ಲ.
23 ಈ ಮಾತಿಗೆ ನಿಮ್ಮಲ್ಲಿ
ಕಿವಿಗೊಡುವವರಾರು?
ಮುಂದಕ್ಕಾದರೂ ಕಿವಿಗೊಟ್ಟು
ಆಲಿಸುವವರಾರು?
24 ಕೊಟ್ಟವರಾರು ಯಕೋಬನ್ನು ಸುಲಿಗೆಗೆ,
ಇಸ್ರಯೇಲನ್ನು ಕೊಳ್ಳೆಗೆ?
ಯಾವ ಸರ್ವೇಶ್ವರನಿಗೆ ದ್ರೋಹ
ಮಾಡಿದ್ದೇವೋ ಆತನೇ ಅಲ್ಲವೇ?
ಆನರು ಆತನ ಮಾರ್ಗದಲ್ಲಿ ನಡೆಯದೇ,
ಆತನ ಉಪದೇಶವನ್ನು ಕೇಳದೆ
ಹೋದರಲ್ಲವೆ?
25 ಎಂದೇ ಸುರಿಸಿದನಾತ ರೋಷಾಗ್ನಿಯನು,
ಯುದ್ಧದ ರೌದ್ರವನು ಅವರ ಮೇಲೆಲ್ಲ;
ಸುತ್ತಲು ಉರಿ ಹತ್ತಿದರೂ ಅವರು
ಅರಿಯಲಿಲ್ಲ,
ದಹಿಸಿದರೂ ಅವರು ಕಲಿಯಲಿಲ್ಲ.

### ದೇವರೇ ತಮ್ಮ ಜನತೆಯ ರಕ್ಷಕ

**43** ಈಗಲಾದರೋ ಯಕೋಬ ವಂಶವೇ,
ಇಸ್ರಯೇಲ್ ಸಂತಾನವೇ ಕೇಳು:
ನಿನ್ನನ್ನು ಸೃಷ್ಟಿಸಿದ, ರೂಪಿಸಿದ
ಸರ್ವೇಶ್ವರನ ನುಡಿಯನ್ನು ಕೇಳು:
"ಭಯಪಡಬೇಡ, ನಿನ್ನನ್ನು ರಕ್ಷಿಸಿದಾತ
ನಾನಲ್ಲವೆ?
ನಿನ್ನನ್ನು ಹೆಸರು ಹಿಡಿದು ಕರೆದಾತ
ನಾನಲ್ಲವೆ?
ನೀನು ನನ್ನವನೇ ಅಲ್ಲವೆ?
2 ನಾನೇ ಇರುವೆ ನಿನ್ನ ಸಂಗಡ
ನೀ ಜಲರಾಶಿಯನ್ನು ದಾಟುವಾಗ
ಮುಳುಗಿಸದು ನದಿ ನೀ ಅದನ್ನು
ಹಾದುಹೋಗುವಾಗ
ಸುಡದು ಬೆಂಕಿ, ದಹಿಸದು ಜ್ವಾಲೆ,
ಅದರ ಮಧ್ಯೆ ನೀ ನಡೆಯುವಾಗ.
3 ನಿನ್ನ ದೇವರಾದ ಸರ್ವೇಶ್ವರ ನಾನು,
ಇಸ್ರಯೇಲರ ಪರಮಪಾವನ ಸ್ವಾಮಿ,
ನಿನ್ನ ರಕ್ಷಕ ನಾನು.
ಈಡುಮಾಡಿದ್ದೇನೆ ಈಜಿಪ್ಟನ್ನು ನಿನ್ನ
ವಿಮೋಚನೆಗಾಗಿ

ಕೊಟ್ಟಿದ್ದೇನೆ ಸುಡಾನ್ ಸೆಬಾ ನಾಡುಗಳನ್ನು
ನಿನಗೆ ಈಡಾಗಿ.
4 ನೀನೆನ್ನ ದೃಷ್ಟಿಗೆ ಅಮೂಲ್ಯನು,
ಘನವಂತನು, ಅತಿಪ್ರಿಯನು.
ಎಂದೇ ನಿನ್ನ ಪ್ರಾಣರಕ್ಷಣೆಗಾಗಿ
ತ್ಯಜಿಸುವೆನು ಜನರನ್ನೂ
ಜನಾಂಗಗಳನ್ನೂ.
5 ಭಯಪಡಬೇಡ, ನಾನಿರುವೆ ನಿನ್ನ ಸಂಗಡ
ಕರೆತರುವೆ ನಿನ್ನ ಸಂತತಿಯನ್ನು
ಮೂಡಣದಿಂದ
ಒಟ್ಟುಗೂಡಿಸುವೆ ನಿನ್ನವರನ್ನು
ಪಡುವಣದಿಂದ.
6 ನಾನಪ್ಪಣೆ ಕೊಡುವೆ 'ಬಿಟ್ಟುಕೊಡು' ಎಂದು
ಬಡಗಲಿಗೆ
'ತಡೆಯಬೇಡ' ಎಂದು ನಾನೇ ಹೇಳುವೆ
ತೆಂಕಲಿಗೆ.
ಹೀಗೆ ಬರಮಾಡುವೆ ನನ್ನ ಕುವರರನ್ನು
ದೂರದಿಂದ
ಬರಮಾಡುವೆ ನನ್ನ ಕುವರಿಯರನ್ನು
ದಿಗಂತಗಳಿಂದ.
7 ಕರೆತರುವೆ ಈಪರಿ ನನ್ನ
ನಾಮಧಾರಿಗಳೆಲ್ಲರನು
ನನ್ನ ಮಹಿಮೆಗಾಗಿ ನಾನು ಸೃಷ್ಟಿಸಿ
ರೂಪಿಸಿದವರನು.

**ಸರ್ವೇಶ್ವರನಿಗೆ ಇಸ್ರಯೇಲರೇ ಸಾಕ್ಷಿ**

8 ಕರೆಗೊಡಿರಿ ಆ ಜನರಿಗೆ
ಕಣ್ಣಿದ್ದರೂ ಕುರುಡರಾದವರಿಗೆ
ಕಿವಿಯಿದ್ದರೂ ಕಿವುಡಾದವರಿಗೆ.
9 ಬರಲಿ, ಎಲ್ಲಾ ಜನಾಂಗಗಳು ಒಟ್ಟಿಗೆ
ನೆರೆಯಲಿ, ಸಕಲ ದೇಶಿಯರು ಇಲ್ಲಿಯೇ.
ಅವರ ದೇವರುಗಳಲ್ಲಿ ಭವಿಷ್ಯವನ್ನು
ನುಡಿಯಬಲ್ಲವರು ಯಾರು?
ಗತಿಸಿದ ಘಟನೆಗಳನ್ನು
ಮುಂತಿಳಿಸಿದವರಾರು?
ಕರೆತರಲಿ, ಆ ದೇವರುಗಳು ಸಾಕ್ಷಿಗಳನು
ಸ್ಥಾಪಿಸಿಕೊಳ್ಳಲಿ, ತಾವು
ಸತ್ಯವಂತರೆಂಬುದನು;
ರುಜುಪಡಿಸಲಿ ಕೇಳುವವರಿಗೆ ತಮ್ಮ
ಮಾತು ನಿಜವೆಂಬುದನು.

10 ಇಂತೆನ್ನುತ್ತಾರೆ ಸರ್ವೇಶ್ವರ:
"ನೀವೇ ನನಗೆ ಸಾಕ್ಷಿಗಳು;
ನನ್ನಿಂದ ಆಯ್ಕೆಯಾದ ನನ್ನ ದಾಸರು;
ಏಕೆನೆ ನಾನೇ ಪರಮಾತ್ಮನೆಂದು ಅರಿತು,
ವಿಶ್ವಾಸವಿಟ್ಟು, ಗ್ರಹಿಸಬೇಕಾದವರು;
ದೇವರಾರೂ ನನಗಿಂದ ಮುಂದೆ ಇರಲಿಲ್ಲ
ನನ್ನಾನಂತರವೂ ಇರುವುದಿಲ್ಲ.
11 "ನಾನು, ನಾನೇ ಸರ್ವೇಶ್ವರ,
ನನ್ನ ಹೊರತು ಇಲ್ಲ ಬೇರೆ ಉದ್ಧಾರಕ.
12 ಶ್ರುತಪಡಿಸಿದವನು ನಾನೇ,
ಉದ್ಧರಿಸಿದವನು ನಾನೇ,
ಘೋಷಿಸಿದವರು ನಾನೇ.
ಇದನ್ನು ಮಾಡಿಲ್ಲ ಅನ್ಯದೇವರಾರು ನಿಮ್ಮ
ಮಧ್ಯೆ.
ನನಗೆ ಸಾಕ್ಷಿಗಳು ನೀವೇ, ದೇವರು
ನಾನೊಬ್ಬನೇ.
13 ಹೌದು, ನಾನೇ ಪರಮಾತ್ಮ ಆದಿಯಿಂದ
ಬಿಡಿಸುವವರಾರು ಇಲ್ಲ ನನ್ನ ಕೈಯಿಂದ
ನಾಗೈದುದನು ತಡೆಯಲಾಗದು
ಯಾರಿಂದ."

### ಬಾಬಿಲೋನಿನ ವಿನಾಶ

ಈ ಪರಿ ನುಡಿದಿಹನು ಸರ್ವೇಶ್ವರನು,
ನಿಮ್ಮ ಉದ್ಧಾರಕನು, ಇಸ್ರಯೇಲಿನ
ಪರಮಪಾವನನು:
14 "ಬಾಬಿಲೋನಿಯಗೆ ಕಳಿಸುವೆನು
ಒಬ್ಬಾತನನು ನಿಮಗಾಗಿ
ಮುರಿವನಾತ ಆ ಕಾರಾಗೃಹದ ಕಂಬಿಗಳನು
ತುಂಡುತುಂಡಾಗಿ
ಬಾಬಿಲೋನಿಯರ ಕೂಗಾಟವನು
ಮಾರ್ಪಡಿಸುವೆನು ಗೋಳಾಟವನ್ನಾಗಿ.
15 ನಾನೇ ಸರ್ವೇಶ್ವರನು, ನಿಮ್ಮ
ಪರಮಪೂಜ್ಯನು
ಇಸ್ರಯೇಲಿನ ಸೃಷ್ಟಿಕರ್ತನು, ನಿಮ್ಮ
ಅರಸನು."
16 ಸಮುದ್ರದ ಮಧ್ಯೆ ದಾರಿಮಾಡಿದವನಾರೋ,
ಭೋರ್ಗರೆವ ಜಲರಾಶಿಗಳಲ್ಲಿ
ಮಾರ್ಗವೇರ್ಪಡಿಸಿದವನಾರೋ,
17 ಅಶ್ವರಥಭಟಸೈನ್ಯಗಳನ್ನು
ಹೊರಡಿಸಿದವನಾರೋ,

ಅವು ಬಿದ್ದು ಏಳಲಾಗದೆ, ಬತ್ತಿಕರಗಿ
ಹೋಗುವಂತೆ ಮಾಡಿದವನಾರೋ,
ಆ ಸ್ವಾಮಿ ಸರ್ವೇಶ್ವರ ನುಡಿದ ಮಾತಿದೋ:
18 "ಗತಿಸಿಹೋದ ಘಟನೆಗಳನ್ನು
ನೆನೆಯಬೇಕಾಗಿಲ್ಲ
ಪುರಾತನ ಕಾರ್ಯಗಳ
ನೆನಸಿಕೊಳ್ಳಬೇಕಾಗಿಲ್ಲ.
19 ಇಗೋ, ನೂತನ ಕಾರ್ಯವನು ನಾನೆಸಗುವೆ
ಈಗಲೇ ಅದು ತಲೆದೋರುತಲಿದೆ,
ನಿಮಗೆ ಕಾಣುವುದಿಲ್ಲವೇ?
ಮಾರ್ಗವನ್ನು ಏರ್ಪಡಿಸುವೆ
ಮರುಭೂಮಿಯಲಿ,
ಹರಿಸುವೆ ತೊರೆಗಳನ್ನು ಅರಣ್ಯದಲಿ.
20 ಕಾಡುಮೃಗಗಳು, ನರಿ, ಉಷ್ಟ್ರಪಕ್ಷಿಗಳು
ಕೂಗಿ ಕೊಂಡಾಡುವುವು ನನ್ನನ್ನು.
ಏಕೆನೆ ಕೊಡುವೆನು ನೀರನ್ನು
ಮರುಭೂಮಿಯಲಿ
ಹರಿಸುವೆನು ತೊರೆನದಿಗಳನ್ನು ಅರಣ್ಯದಲಿ.
21 ನಾ ಸೃಷ್ಟಿಸಿದ ಆಪ್ತ ಜನಕೆ ನೀಡುವೆನು
ಜಲಪಾನವನು;
ಎಂದೇ ಸ್ತುತಿಸಿಕೊಂಡಾಡುವರು ನನ್ನನು."

### ಇಸ್ರಯೇಲಿನ ಪಾಪದೋಷ

22 "ಯಕೋಬೇ, ನೀನೆನ್ನ ನಾಮಸ್ಮರಣೆ
ಮಾಡದೆ ಹೋದೆ;
ಇಸ್ರಯೇಲೇ, ನನ್ನ ವಿಷಯದಲ್ಲಿ ನೀನು
ಬೇಸರಗೊಂಡೆ.
23 ಕುರಿಮೇಕೆಗಳನ್ನು ನೀನು ತರಲಿಲ್ಲ
ನನಗೆ ಹೋಮಕ್ಕಾಗಿ
ಬಲಿಗಳನ್ನು ಅರ್ಪಿಸಲಿಲ್ಲ ನನ್ನ ಘನತೆಗಾಗಿ
ನಾ ನಿನ್ನನ್ನು ಒತ್ತಾಯಿಸಲಿಲ್ಲ
ನೈವೇದ್ಯಕ್ಕಾಗಿ
ನಾ ನಿನ್ನನ್ನು ಬೇಸರಗೊಳಿಸಲಿಲ್ಲ
ಧೂಪಾರತಿಗಾಗಿ.
24 ನನಗೋಸ್ಕರ ನೀನು ಹಣ ತೆತ್ತು ಅಗರಬತ್ತಿ
ತರಲಿಲ್ಲ
ಯಜ್ಞಪಶುಗಳ ವಪೆಯಿಂದ ನನ್ನನ್ನು
ತೃಪ್ತಿಪಡಿಸಲಿಲ್ಲ.
ಬದಲಿಗೆ ನನ್ನನ್ನು ಪೀಡಿಸಿರುವೆ ನಿನ್ನ
ಪಾಪಗಳಿಂದ

ಬೇಸರಗೊಳಿಸಿರುವೆ ನನ್ನನು ನಿನ್ನ
ದೋಷಗಳಿಂದ.
25 ಆದರೂ ನಾನೇ ನಾನಾಗಿ ಅಳಿಸಿಬಿಡುವೆ
ನಿನ್ನ ದ್ರೋಹಗಳನು,
ನನ್ನ ನೆನಪಿನಿಂದ ತೆಗೆದು ಹಾಕುವೆ
ನಿನ್ನ ಪಾಪಗಳನು.
26 ಮಂಡಿಸು ನನ್ನ ವಿರುದ್ಧ ನಿನ್ನ ಆಪಾದನೆ
ಯನ್ನು; ಒಟ್ಟಿಗೆ ವಾದಿಸೋಣ
ಮಂಡಿಸು ನಿನ್ನ ನ್ಯಾಯವನ್ನು:
ನೀನು ನಿರ್ದೋಷಿಯೆಂದು
ರುಜುಪಡಿಸು ನೋಡೋಣ.
27 ಪಾಪಿಷ್ಟನಾಗಿದ್ದನು ನಿನ್ನ ಮೂಲಪಿತೃವು
ನನಗೆ ದ್ರೋಹಿಗಳಾಗಿದ್ದರು ನಿನ್ನ
ಪರವಾದಿಗಳು
ನನ್ನ ಪವಿತ್ರಾಲಯವನ್ನು ಹೊಲೆಮಾಡಿದರು
ನಿನ್ನ ಅಧಿಪತಿಗಳು.
28 ಎಂದೇ ಗುರಿಮಾಡಿದೆ ಯಕೋಬನ್ನು ಶಾಪಕ್ಕೆ
ಈಡುಪಡಿಸಿದೆ ಇಸ್ರಯೇಲನ್ನು
ನಿಂದೆದೂಷಣೆಗೆ."

### ಇಸ್ರಯೇಲಿನ ಏಳಿಗೆ

**44** "ಕೇಳೀಗ ನನ್ನ ದಾಸ ಯಕೋಬೇ,
ನಾನು ಆರಿಸಿಕೊಂಡ ಇಸ್ರಯೇಲೇ,
2 ನಿನ್ನನ್ನು ಸೃಷ್ಟಿಸಿದ ಸರ್ವೇಶ್ವರ ನಾನೆ
ತಾಯ ಗರ್ಭದಿಂದ ನಿನ್ನನ್ನು
ರೂಪಿಸಿದವನು ನಾನೆ
ಅಂದಿನಿಂದ ನಿನಗೆ ನೆರವಾಗುತ್ತಾ
ಬಂದವನು ನಾನೆ.
ಭಯಪಡಬೇಡ, ನನ್ನ ದಾಸ ಯಕೋಬನೇ,
ಅಂಜಬೇಡ, ನಾನು ಆರಿಸಿಕೊಂಡ
ಯೆಶುರೂನೇ.
3 ಮಳೆಗರೆವೆನು ಬತ್ತಿದ ಭೂಮಿಯಲಿ
ಹರಿಸುವೆನು ಕಾಲುವೆಗಳನು ಒಣನೆಲದಲಿ.
ಮಳೆಗರೆವೆನು ನನ್ನಾತ್ಮವನು
ನಿನ್ನ ಸಂತಾನದ ಮೇಲೆ
ನನ್ನ ಆಶೀರ್ವಾದವನು ನಿನ್ನ ಸಂತತಿಯ
ಮೇಲೆ.
4 ವೃದ್ಧಿಯಾಗುವರವರು ನೀರನಾಲೆ ಬದಿಯ
ಪಚ್ಚೆಪಸಿರಂತೆ,

ಹರಿವ ಕಾಲುವೆಗಳ ಬಳಿಯ
ಜೊಂಡುಹುಲ್ಲಿನಂತೆ.
5 ಹೇಳಿಕೊಳ್ಳುವನೊಬ್ಬನು ತಾನು
ಸರ್ವೇಶ್ವರನ ಶರಣನೆಂದು
ಹೆಸರಿಸಿಕೊಳ್ಳುವನು ಇನ್ನೊಬ್ಬನು
ತಾನು ಯಕೋಬ್ಯನೆಂದು
ಕೈಯಲ್ಲಿ ಹಚ್ಚೆ ಹೊಯ್ದುಕೊಳ್ಳುವನು
ಮತ್ತೊಬ್ಬನು ಸರ್ವೇಶ್ವರನ ದಾಸನೆಂದು
ಬಿರುದನ್ನು ಧರಿಸಿಕೊಳ್ಳುವನವನು
ತಾನು ಇಸ್ರಯೇಲ್ಯನೆಂದು."
6 ಇಂತೆನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ,
ಇಸ್ರಯೇಲರ ಅರಸ, ಅವರ ಉದ್ಧಾರಕ:
"ಆದಿಯು ನಾನೇ, ಅಂತ್ಯವು ನಾನೇ,
ನನ್ನ ಹೊರತು ದೇವರಾರು ಇಲ್ಲ ಬೇರೆ.
7 ನನಗೆ ಸಮಾನರು ಯಾರು?
ರುಜುಪಡಿಸಲಿ,
ನನ್ನ ಎದುರಿಗೆ ಬಂದು ವಾದಿಸಿ
ಸ್ಥಿರಪಡಿಸಲಿ.
ನರ ಸೃಷ್ಟಿಯಾದಂದಿನಿಂದ
ನಡೆದುದೆಲ್ಲವನು ತಿಳಿಸಲಿ
ಮುಂದಿನವುಗಳನು, ಭವಿಷ್ಯತ್ತುಗಳನು,
ಈಗ ಊಹಿಸಿ ಹೇಳಲಿ.
8 ಹೆದರಬೇಡಿ, ಅಂಜದಿರಿ, ನನ್ನ ಜನರೇ,
ನನಗೆ ಸಾಕ್ಷಿಗಳು ನೀವೇ:
ಪೂರ್ವಕಾಲದಿಂದ ನಡೆದವುಗಳನು ನಾ
ನಿಮಗೆ ಮುಂತಿಳಿಸಿ ಶ್ರುತಪಡಿಸಿಲ್ಲವೆ?
ನನ್ನ ಹೊರತು ಬೇರೆ ದೇವನಿರುವನೆ?
ನನ್ನ ಹೊರತು ಬೇರೆ ಸೇನಾಧೀಶ್ವರನಿರುವನೆ?
ಅಂಥವನಾರೋ ನಾನರಿಯೆ."

## ವಿಗ್ರಹಾರಾಧನೆ ಹಾಸ್ಯಾಸ್ಪದ

9 ವಿಗ್ರಹಗಳನ್ನು ಕೆತ್ತುವವರೆಲ್ಲರು ನಿರರ್ಥಕರು; ಅವರ ಇಷ್ಟಬೊಂಬೆಗಳು ಏತಕ್ಕೂ ಬಾರವು;
ಅವುಗಳಲ್ಲಿ ವಿಶ್ವಾಸವಿಡುವವರು ಕುರುಡರು, ತಿಳುವಳಿಕೆ ಇಲ್ಲದವರು. ಅಂಥವರು ನಾಚಿಕೆಗೆ
ಗುರಿಯಾಗುವರು. 10ದೇವತೆಯನ್ನು ರೂಪಿಸುವವರು ಹಾಗೂ ನಿರರ್ಥಕ ಬೊಂಬೆಗಳನ್ನು ಎರಕ
ಹೊಯ್ಯುವವರು ನಿಷ್ಪ್ರಯೋಜಕರು. 11ವಿಗ್ರಹಾರಾಧಕರೆಲ್ಲರೂ ಆಶಾಭಂಗ ಪಡುವರು. ಅದನ್ನು ಕೆತ್ತಿದವರು
ಕೇವಲ ಮನುಷ್ಯ ಮಾತ್ರರು. ಅವರೆಲ್ಲರು ಇಲ್ಲಿಗೆ ಕೂಡಿಬರಲಿ; ನಿಶ್ಚಯವಾಗಿ ಅವರು ಹೆದರಿ ಲಜ್ಜೆಪಡುವರು.

12 ಕಮ್ಮಾರನು ಮುಟ್ಟನ್ನು ತೆಗೆದುಕೊಂಡು ಕೆಂಡದಲ್ಲಿ ಕೆಲಸ ಮಾಡುತ್ತಾನೆ; ಬಲವಾದ ತೋಳಿನಿಂದ ಚಮಟಿಕೆ ಹಿಡಿದು ಬಡಿದು ವಿಗ್ರಹವನ್ನು ರೂಪಿಸುತ್ತಾನೆ; ಹಸಿದು ಬಳಲುತ್ತಾನೆ, ಬಾಯಾರಿ ಸೊರಗುತ್ತಾನೆ.

13 ಬಡಗಿಯು ಮರಕ್ಕೆ ನೂಲು ಹಿಡಿದು, ಮೊಳೆಯಿಂದ ಗೆರೆ ಎಳೆಯುತ್ತಾನೆ; ಕೈವಾರದಿಂದ
ಗುರುತಿಸುತ್ತಾನೆ, ಉಳಿ ಬಾಚಿಗಳಿಂದ ಕೆತ್ತುತ್ತಾನೆ; ಸುಂದರವಾದ ನರನಂತೆ ರೂಪಿಸಿ ಮಂದಿರದಲ್ಲಿ ಇಡಲು
ಯೋಗ್ಯವಾಗುವಂತೆ ಮಾಡುತ್ತಾನೆ. 14 ತನ್ನ ಕೆಲಸಕ್ಕಾಗಿ ದೇವದಾರುಗಳನ್ನು ಕಡಿಯುತ್ತಾನೆ, ತುರಾಯಿ
ಅಲ್ಲೋನ್ ಮರಗಳನ್ನು ಆರಿಸಿಕೊಳ್ಳುತ್ತಾನೆ; ಅವುಗಳನ್ನು ವನವೃಕ್ಷಗಳ ನಡುವೆ ಬೆಳೆಸುತ್ತಾನೆ; ಪೀತದಾರ
ಮರವನ್ನು ನೆಟ್ಟು, ಮಳೆಸುರಿದು ಬೆಳೆಯುವವರೆಗೂ ಕಾಯುತ್ತಾನೆ, 15ಅದರ ಒಂದು ಭಾಗ ಒಲೆಗಾಗುತ್ತದೆ,
ಚಳಿ ಕಾಯಿಸಿಕೊಳ್ಳುವುದಕ್ಕೆ ಆಗುತ್ತದೆ, ರೊಟ್ಟಿಸುಡುವುದಕ್ಕಾಗುತ್ತದೆ. ಇನ್ನೊಂದು ಭಾಗದಿಂದ ದೇವತೆಯನ್ನು
ಮಾಡಿ ಮನುಷ್ಯ ಪೂಜಿಸುತ್ತಾನೆ; ವಿಗ್ರಹ ಕೆತ್ತಿ ಅದಕ್ಕೆ ಮನುಷ್ಯ ಪೂಜಿಸುತ್ತಾನೆ; ವಿಗ್ರಹ ಕೆತ್ತಿ ಅದಕ್ಕೆ
ಅಡ್ಡಬೀಳುತ್ತಾನೆ. 16ಒಂದು ಭಾಗವನ್ನು ಬೆಂಕಿಯಲ್ಲಿ ಉರಿಸುತ್ತಾನೆ. ಅದು ಮಾಂಸ ಬೇಯಿಸಲಾಗುತ್ತದೆ,
ಆ ಸುಟ್ಟ ಮಾಂಸದಿಂದ ಹಸಿವೆ ತೀರಿಸಿಕೊಳ್ಳುತ್ತಾನೆ. ಆ ಬೆಂಕಿಯಿಂದ ಮೈ ಬೆಚ್ಚಗಾಯಿತು,'
ಎಂದುಕೊಳ್ಳುತ್ತಾನೆ. 17ಉಳಿದ ಭಾಗದಿಂದ ತನ್ನ ದೇವತೆಯ ವಿಗ್ರಹವನ್ನು ಕೆತ್ತಿ, ಅದಕ್ಕೆ ಎರಗಿ
ಅಡ್ಡಬೀಳುತ್ತಾನೆ; "ನೀನೇ ನನ್ನ ದೇವರು; ನನ್ನನ್ನು ರಕ್ಷಿಸು," ಎಂದು ಪ್ರಾರ್ಥಿಸುತ್ತಾನೆ. 18ಇಂಥವರು
ಮಂದಮತಿಗಳು, ಏನೂ ಗ್ರಹಿಸಲಾಗದವರು; ಅವರ ಕಣ್ಣು ಕಾಣದಂತೆಯೂ ಹೃದಯ ಗ್ರಹಿಸದಂತೆಯೂ
ಅವರಿಗೆ ಅಂಟು ಬಳಿಯಲಾಗಿದೆ. 19"ಒಂದು ಭಾಗವನ್ನು ಬೆಂಕಿಯಲ್ಲಿ ಉರಿಸಿದ್ದೇನೆ. **ಹೌದು. ಅದರ
ಕೆಂಡದಲ್ಲಿ ರೊಟ್ಟಿಮಾಡಿ**, ಮಾಂಸ ಸುಟ್ಟು ತಿಂದಿದ್ದೇನೆ; ಮಿಕ್ಕಿದ್ದರಿಂದ ವಿಗ್ರಹ ಮಾಡುವುದು ಸರಿಯೇ? ಆ
ಮರದ ತುಂಡಿಗೆ ಅಡ್ಡ ಬೀಳುವುದು ಅಸಹ್ಯವಲ್ಲವೆ?" ಎಂದುಕೊಳ್ಳುವಷ್ಟು ವಿವೇಕ ಯಾರಿಗೂ ಇಲ್ಲ;
ಯಾರೂ ಇದನ್ನು ಮನಸ್ಸಿನಲ್ಲಿ ಅರ್ಥೈಸಿಕೊಳ್ಳುವುದಿಲ್ಲ. 20ಅಂಥವನು ಮುಕ್ಕುವುದು ಬೂದಿಯನ್ನೇ; ಅವನ
ಹೃದಯ ಮೋಸಗೊಂಡು ಅವನನ್ನು ತಪ್ಪು ದಾರಿಗೆ ಎಳೆದಿದೆ. ಎಂದೇ, ಅವನು ಅಂಗೈ ಹುಣ್ಣಿನಂತಿರುವ
ಆ ಸುಳ್ಳನ್ನೂ ಅರಿಯದೆ ಇದ್ದಾನೆ; ತನ್ನನ್ನೇ ರಕ್ಷಿಸಿಕೊಳ್ಳಲು ಆಗದೆ ಇದ್ದಾನೆ.

### ಸರ್ವೇಶ್ವರ ಸೃಷ್ಟಿಕರ್ತ ಹಾಗೂ ಉದ್ಧಾರಕ

21 "ಯಕೋಬೇ, ಇಸ್ರಯೇಲೇ, ನೆನಪಿನಲ್ಲಿಡು
ಇದನ್ನು:
ನೀನೆನ್ನ ದಾಸನು, ಇಸ್ರಯೇಲ್, ನಿನ್ನ
ನಿರ್ಮಿಸಿದವನು ನಾನು;
ನೀನೆನ್ನ ದಾಸನು, ನಿನ್ನನ್ನು ನಾನು
ಮರೆತುಬಿಡೆನು.
22 ಪರಿಹರಿಸಿದೆ ನಿನ್ನ ದ್ರೋಹಗಳನ್ನು ಮಂಜಿನಂತೆ
ಚದರಿಸಿದ್ದೇನೆ ನಿನ್ನ ಪಾಪಗಳನು
ಮೋಡದಂತೆ
ವಿಮೋಚಿಸಿದ್ದೇನೆ ನೀ ನನಗೆ
ಅಭಿಮುಖನಾಗಬೇಕೆಂದೆ."
23 ಜಯ ಜಯಕಾರ ಮಾಡು ಓ ಆಕಾಶವೇ,
ಜಯಘೋಷ ಮಾಡು ಭೂ ತಳವೇ,
ಹರ್ಷಧ್ವನಿಗೈಯಿರಿ ಬೆಟ್ಟಗುಡ್ಡಗಳೇ
ವನವೃಕ್ಷಗಳೇ.
ವಿಮೋಚಿಸಿದನು ಸರ್ವೇಶ್ವರ
ಯಕೋಬನನು,
ಇಸ್ರಯೇಲನ್ನು ರಕ್ಷಿಸಿ ಪ್ರಚಾರಗೊಳಿಸಿದನು
ತನ್ನ ಮಹಿಮೆಯನು.
24 ತಾಯ ಗರ್ಭದಿಂದ ರೂಪಿಸಿ ನಿನ್ನನು

ಹೊರತಂದ ಸರ್ವೇಶ್ವರ ಹೇಳಿಹನು
ಇದನ್ನು:
"ಸರ್ವವನು ಸೃಷ್ಟಿಸಿದ ಸರ್ವೇಶ್ವರನು ನಾನೆ
ಗಗನಮಂಡಲವನು ವಿಸ್ತರಿಸಿದವನು ನಾನೆ
ಭೂಮಂಡಲವನು ಹರಡಿದವನು ನಾನೆ
ನನಗಾಗ ನೆರವಾಗಲು ಯಾರಾದರೂ
ಇದ್ದರೆ?
25 ಸುಳ್ಳುಶಕುನ ಹೇಳುವವರನು
ನಿರರ್ಥಕಗೊಳಿಸುವವನು ನಾನೆ
ಕಣಿಹೇಳುವವರನು ಮರುಳುಗೊಳಿಸುವವನು
ನಾನೆ
ವಿವೇಕಿಗಳೊಡನೆ ವಾದಿಸಿ ಅವರ ವಿವೇಕವೇ
ಅವಿವೇಕವೆಂದು ತೋರಿಸಿದವನು ನಾನೆ.
26 ನನ್ನ ದಾಸನ ಮಾತನ್ನಾದರೋ
ದೃಢೀಕರಿಸುವವನು ನಾನೆ
ನನ್ನ ದೂತರ ಯೋಜನೆಯನ್ನು
ಸಫಲಗೊಳಿಸುವವನು ನಾನೆ.
ಆನನಿವಾಸವಾಗುವುದು ಜೆರುಸಲೇಮ್
ನಗರವು
ಪುನಃ ಕಟ್ಟಲ್ಪಡುವುವು ಜುದೇಯ ಪಟ್ಟಣಗಳು.
ಅಲ್ಲಿ ಹಾಳುಬಿದ್ದವುಗಳು ಮರಳಿ ಎದ್ದು
ನಿಲ್ಲುವುವು.
27 'ಬತ್ತಿಹೋಗು' ಎಂದು ಜಲರಾಶಿಗಳಿಗೆ
'ಒಣಗಿ ಹೋಗು' ಎಂದು ನಿನ್ನ ಸೇರುವ
ನದಿಗಳಿಗೆ
ಅಪ್ಪಣೆ ಕೊಡುವಾತನು ನಾನೆ.
28 ಕೋರೆಷನಿಗೆ ಇಂತೆನ್ನುವೆನು ನಾನು:
ನನ್ನ ಮುಂದೆ ಕಾಯುವವನು ನೀನು
ನನ್ನ ಇಷ್ಟಾರ್ಥವನು ನೆರವೇರಿಸುವವನು
ನೀನು;
'ಪುನಃ ನಿರ್ಮಾಣವಾಗುವೆ' ಎನ್ನುವೆ
ಜೆರುಸಲೇಮಿಗೆ, ನೀನು;
'ಪುನಃ ನಿನಗೆ ಅಸ್ತಿವಾರ ಹಾಕಿಸುವೆ' ಎನ್ನುವೆ
ಆ ದೇವಾಲಯಕೆ ನೀನು."

### ಸೈರಸ್ ಅರಸನ ಬಗ್ಗೆ ಸರ್ವೇಶ್ವರನ ಸಂಕಲ್ಪ

**45** ಇಂತೆಂದರು ಸರ್ವೇಶ್ವರ ತಾನು
ಅಭಿಷೇಕಿಸಿದ ಕೋರೆಷನಿಗೆ
"ರಾಷ್ಟ್ರಗಳನ್ನು ನೀ ಸದೆಬಡಿಯುವಂತೆ

ರಾಜಮಹಾರಾಜರನು ನಿಶ್ಯಸ್ತ್ರರನ್ನಾಗಿ
ಮಾಡುವಂತೆ
ಮುಚ್ಚಲಾಗದ ಹಾಗೆ ಬಾಗಿಲು
ಹೆಬ್ಬಾಗಿಲುಗಳನು ತೆರೆಯುವಂತೆ
ನಾನಿನ್ನ ಕೈಹಿಡಿದು ನಡೆಸುವೆನು ಮುಂದೆ.
2 ನಿನ್ನ ಮುಂದೆ ಸಾಗುವೆನು ನಾನು
ಸಮಮಾಡುವೆನು ಬೆಟ್ಟಗುಡ್ಡಗಳನು
ಒಡೆದುಹಾಕುವೆನು ಕಂಚಿನ ಕದಗಳನು
ಮುರಿದುಬಿಡುವೆನು ಕಬ್ಬಿಣದ
ಅಗುಳಿಗಳನು.
3 ಹೆಸರು ಹಿಡಿದು ನಿನ್ನ ಕರೆಯುವ ಸರ್ವೇಶ್ವರ
ನಾನು
ಕೊಡುವೆ ನಾ ನಿನಗೆ ಕತ್ತಲಲಿ ಬಚ್ಚಿಟ್ಟ
ಭಂಡಾರಗಳನು
ಗುಪ್ತಸ್ಥಳಗಳಲ್ಲಿ ಮರೆಮಾಡಿರುವ
ನಿಧಿನಿಕ್ಷೇಪಗಳನು.
ಈಪರಿ ಅರಿತುಕೊಳ್ಳುವೆ ನೀನು
ನಾನೇ ಇಸ್ರಯೇಲರ ದೇವರೆಂಬುದನು.
4 ನನ್ನ ಸೇವಕನಾದ ಯಕೋಬನ ನಿಮಿತ್ತ
ನಾನು ಆರಿಸಿಕೊಂಡ ಇಸ್ರಯೇಲಿನ ನಿಮಿತ್ತ
ನನ್ನ ಅರಿವೇ ಇಲ್ಲದ ನಿನ್ನನು
ಹೆಸರುಹಿಡಿದು ಕರೆದಿರುವೆನು,
ಬಿರುದಿತ್ತು ಸನ್ಮಾನಿಸಿರುವೆನು.
5 ಸರ್ವೇಶ್ವರ ನಾನಲ್ಲದೆ ಬೇರಾರು ಅಲ್ಲ
ನನ್ನ ಹೊರತು ಯಾವ ದೇವರು ಇಲ್ಲ.
ನೀನು ನನ್ನನು ಅರಿಯದವನಾಗಿರುವೆ
ಆದರೂ ನಿನ್ನನ್ನು ಶಸ್ತ್ರಧಾರಿಯಾಗಿಸುವೆ.
6 ಇದ ಕಂಡು ತಿಳಿಯುವರೆಲ್ಲರು ಪೂರ್ವದಿಂದ
ಪಶ್ಚಿಮದವರೆಗು:
ನನ್ನ ವಿನಾ ದೇವರಾರು ಇಲ್ಲವೆಂದು
ನಾನೇ ಸರ್ವೇಶ್ವರ ಮತ್ತಾರು ಅಲ್ಲವೆಂದು;
7 ಬೆಳಕಿಗೂ ಕತ್ತಲಿಗೂ ನಾನೆ ಸೃಷ್ಟಿಕರ್ತನೆಂದು
ಸುಖದುಃಖಗಳಿಗೆ ಕಾರಣಕರ್ತನೆಂದು
ಸಕಲವನು ನಡೆಸುವ ಸರ್ವೇಶ್ವರ
ನಾನೇ ಎಂದು.
8 ವರ್ಷಿಸಲಿ ಸದ್ಧರ್ಮವನು ಆಕಾಶಮಂಡಲ
ಸುರಿಸಲಿ ಮೇಲಿಂದ ಅದನ್ನು ಆ
ಗಗನಮಂಡಲ;
ಅಂಕುರಿಸಲಿ ಜೀವೋದ್ಧಾರವನು ಭೂಮಂಡಲ
ಬೆಳೆಯಲಿ ಅದರೊಡನೆಯೇ ಸದ್ಧರ್ಮದ

ಫಲ,
ಸರ್ವೇಶ್ವರನಾದ ನಾನೇ ಕರ್ತ ಇದಕ್ಕೆಲ್ಲ."

### ಸರ್ವೇಶ್ವರ ಸೃಷ್ಟಿಗೂ ಇತಿಹಾಸಕ್ಕೂ ಕರ್ತ

9 ಧಿಕ್ಕಾರ! ತನ್ನನ್ನು ರೂಪಿಸಿದವನೊಡನೇ
ವ್ಯಾಜ್ಯ ಮಾಡುವವನಿಗೆ;
ಅವನು ಕೂಡ ಮಣ್ಣುಮಡಕೆಗಳಲ್ಲಿ ಒಂದು
ಮಡಕೆ ಅಲ್ಲವೇ?
"ಏನು ಮಾಡುತ್ತಿ" ಎಂದು ಮಣ್ಣು
ಕುಂಬಾರನನು ಕೇಳುವುದುಂಟೆ?
'ನಾನು ನಿನ್ನ ಕೈಯ ಕೃತಿ ಅಲ್ಲ' ಎಂದು ಆ
ಮಡಕೆ ಹೇಳುವುದುಂಟೆ?
10 'ನೀನು ಹುಟ್ಟಿಸುವುದೇನು' ಎಂದು ತಂದೆಯನು
ಕೇಳುವವನಿಗೆ ಧಿಕ್ಕಾರ!
'ನೀನು ಹೆರುವುದೇನು' ಎಂದು ತಾಯಿಯನು
ಕೇಳುವವನಿಗೆ ಧಿಕ್ಕಾರ!
11 ಸರ್ವೇಶ್ವರ ಇಸ್ರಯೇಲಿನ ಪರಮಪಾವನ
ಸ್ವಾಮಿ, ಅದರ ಸೃಷ್ಟಿಕರ್ತ.
ಆ ಸರ್ವೇಶ್ವರನ ನುಡಿಯಿದು:
"ನನ್ನ ಮಕ್ಕಳ ಬಗ್ಗೆ ನೀ ಕೇಳುವುದೆಂತು?
ನನ್ನ ಕೈಯ ಕೃತಿಗಳ ಬಗ್ಗೆ ನೀ ವಿಧಿಸುವುದೆಂತು?
12 ಜಗವನು, ಅದರಲ್ಲಿನ ಮನುಜರನು
ಸೃಜಿಸಿದವನು ನಾನೇ,
ಆಕಾಶಮಂಡಲವನು ವಿಶಾಲವಾಗಿ ಹರಡಿದ್ದು
ನನ್ನ ಕೈಗಳೇ,
ಸೂರ್ಯ, ಚಂದ್ರ, ನಕ್ಷತ್ರಗಳನು
ನಿಯಂತ್ರಿಸುವವನು ನಾನೆ.
13 ಧರ್ಮಸಾಧನೆಗಾಗಿ ಕೋರೆಷನನ್ನು
ಉದಯಗೊಳಿಸಿರುವೆನು
ಅವನ ಮಾರ್ಗಗಳನ್ನು
ನಾನೇ ಸರಾಗಮಾಡುವೆನು
ನನ್ನ ನಗರವನು ಪುನರ್ ನಿರ್ಮಾಣ
ಮಾಡುವನು ಅವನು
ಸೆರೆಯಾದ ನನ್ನ ಜನರನು
ಬಿಡುಗಡೆ ಮಾಡುವನು
ಸಂಬಳವನ್ನಾಗಲಿ ಸಂಭಾವನೆಯನ್ನಾಗಲಿ
ಸ್ವೀಕರಿಸನು.
ಇದ ನುಡಿದಿರುವೆನು ಸೇನಾಧೀಶ್ವರ
ಸರ್ವೇಶ್ವರನಾದ ನಾನು."
14 ಕೇಳಿರಿ ಸರ್ವೇಶ್ವರನ ಈ ಮಾತನ್ನು:

“ನಿಮ್ಮದಾಗುವುದು ಈಜಿಪ್ಟಿನ ಸಿರಿಯು,
ಸುಡಾನಿನ ಸಂಪದವು.
ನಿಮ್ಮನ್ನು ಸೇರಿ ನಿಮಗಧೀನರಾಗುವರು
ಎತ್ತರದ ಸೆಬಾಯರು.
ಬೇಡಿತೊಟ್ಟು ಅಡ್ಡಬೀಳುವರು ನಿಮ್ಮ ಮುಂದೆ
ಅರಿಕೆಮಾಡಿಕೊಳ್ಳುವರು ಹೀಗೆಂದೆ:
‘ನಿಶ್ಚಯವಾಗಿ ನಿಮ್ಮಲ್ಲಿಹರು ದೇವರು
ಅವರಲ್ಲದೆ ದೇವರಿಲ್ಲ ಬೇರೆಯಾರು.’
15 ಇಸ್ರಯೇಲರ ದೇವರೇ, ಉದ್ಧಾರಕನೇ,
ನಿಶ್ಚಯವಾಗಿ ದೇವರಾದ ನೀನು
ಮರೆಯಾಗಿರುವೆ.
16 ಮೂರ್ತಿಗಳನು ಮಾಡುವವರೆಲ್ಲರು
ಈಡಾಗುವರು ನಾಚಿಕೆಗೆ
ಮಾನಭಂಗಪಟ್ಟು ಒಟ್ಟಿಗೆ
ಮುಳುಗುವರವರು ಅವಮಾನದೊಳಗೆ.
17 ಇಸ್ರಯೇಲಿಗಾದರೋ, ದೊರೆವುದು
ಶಾಶ್ವತ ರಕ್ಷಣೆ ಸರ್ವೇಶ್ವರನಿಂದ;
ಯುಗಯುಗಾಂತರಕ್ಕೂ ಅದಕ್ಕಾಗದು ಲಜ್ಜೆ,
ಮಾನಭಂಗ.”
18 ಕೇಳಿ, ಆಕಾಶಮಂಡಲವನ್ನು ಸೃಷ್ಟಿಸಿದ
ಸರ್ವೇಶ್ವರನ ಮಾತನ್ನು:
ಭೂಲೋಕವನು ನಿರ್ಮಿಸಿ, ರೂಪಿಸಿ,
ಸ್ಥಾಪಿಸಿದ ದೇವರು ಆತನು.
ಅದನ್ನು ಶೂನ್ಯಸ್ಥಾನವಾಗಿ ಸೃಷ್ಟಿಸದೆ,
ಜನನಿವಾಸಕ್ಕಾಗಿಯೇ ರೂಪಿಸಿದವನು
ಆತನು.
ಅಂಥವನು ಇಂತೆನ್ನುತ್ತಾನೆ:
“ಸರ್ವೇಶ್ವರ ನಾನೇ; ನಾನಲ್ಲದೆ ಇನ್ನಾರೂ
ಇಲ್ಲ.
19 ನಾನು ಗುಟ್ಟುಗುಟ್ಟಾಗಿ ಮಾತಾಡಿದವನಲ್ಲ
ಕಗ್ಗತ್ತಲೆಯೊಳಗಿನಿಂದ ನುಡಿದವನಲ್ಲ
ಶೂನ್ಯದಲ್ಲಿ ನನ್ನ ಹುಡುಕಿರಿ ಎಂದು
ಯಕೋಬ ವಂಶಕ್ಕೆ ಹೇಳಿದವನಲ್ಲ.
ಸರ್ವೇಶ್ವರನಾದ ನಾನು ಸತ್ಯಾನುಸಾರ
ನುಡಿಯುವವನು,
ನೆಟ್ಟನೆಯ ಮಾತುಗಳನ್ನೆ ಸ್ಪಷ್ಟವಾಗಿ
ಹೇಳುವವನು.”

**ಸರ್ವೇಶ್ವರ ಜಗದಾದ್ಯಂತಕ್ಕೆ ಒಡೆಯ**

20 “ಅಳಿದುಳಿದ ಅನ್ಯಜನರೇ, ನೆರೆದು ಬನ್ನಿ,
ಒಟ್ಟಿಗೆ ನನ್ನ ಬಳಿಗೆ ಬನ್ನಿ.
ತಮ್ಮ ಮರದ ಬೊಂಬೆಯನು ಹೊತ್ತು
ತಿರುಗುವವರು
ರಕ್ಷಿಸಲಾಗದ ದೇವತೆಗೆ ಮೊರೆಯಿಡುವ
ಬುದ್ಧಿಹೀನರು.
21 ಹೇಳಿ, ನ್ಯಾಯಸ್ಥಾನಕ್ಕೆ ಬಂದು
ನಿಮ್ಮ ವಾದವನ್ನು ಮಂಡಿಸಿ;
ನಿಮ್ಮ ದೇವರುಗಳು ತಮ್ಮತಮ್ಮೊಳಗೆ
ಪರ್ಯಾಲೋಚಿಸಿ ನೋಡಲಿ.
ಪ್ರಾರಂಭದಿಂದಲೂ ಈ ವಿಷಯವನ್ನು
ಪ್ರಕಟಿಸಿದವರು ಯಾರು?
ಅದು ನಡೆಯುವುದಕ್ಕೆ ಮುಂಚೆಯೇ
ತಿಳಿಸಿದವನು ನಾನಲ್ಲದೆ ಇನ್ಯಾರು?
ನನ್ನ ಹೊರತು ಇನ್ನು ಯಾವ ದೇವರೂ
ಇಲ್ಲ;
ನಾನಲ್ಲದೆ ಸತ್ಯಸ್ವರೂಪವನು, ಉದ್ಧಾರಕನು
ಆದ ದೇವನಿಲ್ಲವೇ ಇಲ್ಲ.
22 “ಎಲ್ಲೆ ಎಲ್ಲೆಗಳಲ್ಲಿರುವ ಜನರೇ,
ತಿರುಗಿಕೊಳ್ಳಿರಿ ನನ್ನ ಕಡೆಗೆ,
ಆಗ ಉದ್ಧಾರವಾಗುವಿರಿ.
ದೇವರು ಬೇರಾರೂ ಇಲ್ಲ, ನಾನೊಬ್ಬನೆ
ಎಂಬುದನರಿಯಿರಿ.
23 ಪ್ರತಿಯೊಬ್ಬರು ಮೊಣಕಾಲೂರುವರು ನನಗೆ
ಎಲ್ಲರು ನಾನೇ ದೇವರೆಂದು ಮಾಡುವರು
ಪ್ರತಿಜ್ಞೆ,
ಆ ನುಡಿ ಹೊರಟಿದೆ ನನ್ನ ಸತ್ಯದ ಬಾಯಿಂದ
ಅದನ್ನು ಹಿಂತೆಗೆಯೆನು ನನ್ನ ಮೇಲಿಟ್ಟ
ಆಣೆಯಿಂದ.
24 “ಜೀವೋದ್ಧಾರವು, ಶಕ್ತಿಯು ಸರ್ವೇಶ್ವರನಲ್ಲಿ
ಮಾತ್ರ ಉಂಟು
ಆತನ ವಿರೋಧಿಗಳೆಲ್ಲರೂ ಆತನನ್ನೇ
ಮರೆಹೋಗುವರು ನಾಚಿಕೆಪಟ್ಟು.
25 ಪಡೆವರು ಇಸ್ರಯೇಲಿನ ವಂಶಜರೆಲ್ಲರು
ಸರ್ವೇಶ್ವರನಲ್ಲೇ ಜೀವೋದ್ಧಾರವನು,
ಆನಂದವನು.”

## ಬಾಬಿಲೋನಿಯದ ಪತನ

**46** ತಗ್ಗಿದೆ ಬೇಲ್ ದೇವತೆ
ಕುಗ್ಗಿದೆ ನೆಬೋ ದೇವತೆ
ಅವುಗಳ ಪ್ರತಿಮೆಗಳನು ಕತ್ತೆಗಳು ಹೊತ್ತಿವೆ.
ನೀವು ಮೆರವಣಿಗೆಯಾಗಿ ಹೊರುತ್ತಿದ್ದ
ಆ ಬೊಂಬೆಗಳೆ,
ಭಾರವಾದ ಹೊರೆಯಾಗಿವೆ, ಬಳಲಿದಾ
ಪಶುಗಳಿಗೆ.
2 ಆ ಬೊಂಬೆಗಳೆಲ್ಲ ಬಗ್ಗಿ ಕುಗ್ಗಿ ಹೋಗಿವೆ
ಭಾರವನ್ನು ನೀಗಿಸಲು ಅವು ನಿಶ್ಯಕ್ತವಾಗಿವೆ
ತಾವೆ ಸೆರೆಮನೆ ಸೇರಿಹೋಗಿವೆ.
3 "ಕಿವಿಗೊಡು, ಓ ಯಕೋಬ ಮನೆತನವೆ,
ಅಳಿದುಳಿದಾ ಇಸ್ರಯೇಲಿನ ಮನೆತನವೆ,
ಹೊರುತ್ತಿರುವೆ ನಿಮ್ಮನು ಗರ್ಭದಿಂದ
ಸಾಕಿ ಸಲಹುತ್ತಿರುವೆ ಹುಟ್ಟಿದಂದಿನಿಂದ.
4 ನಾನೇ ನಿಮಗೆ ಆಧಾರ ಮುಪ್ಪಿನ ತನಕ
ಹೊತ್ತು ಸಲಹುವೆನು ನಿಮ್ಮನು
ನರೆಬಂದಾಗ.
ಉಂಟುಮಾಡಿದವನು ನಾನೇ, ಹೊರುವವನು
ನಾನೇ
ಹೌದು, ನಿಮ್ಮನು ಹೊತ್ತು ಸಲಹುವವನು
ನಾನೇ.
5 ನನ್ನನ್ನು ಯಾರಿಗೆ ಸರಿಹೋಲಿಸಬಲ್ಲಿರಿ?
ನನ್ನನ್ನು ಯಾರಿಗೆ ಸಾಟಿಮಾಡಬಲ್ಲಿರಿ?
6 ಸುರಿಯುತ್ತಾರೆ ಜನರು ಚಿನ್ನವನು ಚೀಲದಿಂದ
ತೂಗಿ ತೂಕಹಾಕುತ್ತಾರೆ ಬೆಳ್ಳಿಯನ್ನು
ತಕ್ಕಡಿಯಿಂದ.
ದೇವರನ್ನು ಮಾಡಿಸುತ್ತಾರೆ ಕೂಲಿಕೊಟ್ಟು
ಅಕ್ಕಸಾಲಿಗನಿಂದ
ಪೂಜಿಸುತ್ತಾರೆ ಅದನ್ನು ಸಾಷ್ಟಾಂಗ
ನಮಸ್ಕಾರದಿಂದ.
7 ಅದನ್ನು ಮೆರವಣಿಗೆ ಮಾಡುತ್ತಾರೆ ಹೊತ್ತು
ಹೆಗಲಮೇಲೆ
ಪ್ರತಿಷ್ಠಾಪನೆ ಮಾಡುತ್ತಾರೆ ಇಟ್ಟು
ಪೀಠದ ಮೇಲೆ.
ಕೂಗಿಕೊಂಡರೂ ಜರುಗದದು ಅಲ್ಲಿಂದ
ಉತ್ತರಿಸಿ ಬಿಡಿಸದು ಯಾರನ್ನು ಕಷ್ಟದಿಂದ.
8 ಮತಭ್ರಷ್ಟರೇ, ಜ್ಞಾಪಕದಲ್ಲಿಡಿ ಇದನ್ನು

ಧೈರ್ಯದಿಂದ ಒಪ್ಪಿಕೊಳ್ಳಿ ನಿಮ್ಮ ತಪ್ಪನ್ನು.
9 ನೆನಪಿಗೆ ತಂದುಕೊಳ್ಳಿ ಪ್ರಾಚೀನ ಘಟನೆಗಳನ್ನು
ಅರಿತುಕೊಳ್ಳಿ ನಾನೇ ದೇವರು, ಇನ್ನಾರೂ
ಇಲ್ಲ ಎಂಬುದನ್ನು
ನಾನೇ ಪರಮದೇವರು, ನನಗೆ
ಸರಿಸಮಾನವಿಲ್ಲ ಎಂಬುದನ್ನು.
10 ಆರಂಭದಲ್ಲಿಯೇ ಅಂತ್ಯವನು ತಿಳಿಸಿದವನು
ನಾನು
ಭೂತಕಾಲದಲ್ಲಿಯೆ ಭವಿಷ್ಯವನು
ಅರುಹಿದವನು ನಾನು.
ಸ್ಥಿರವಿರುವುದು ನನ್ನ ಸಂಕಲ್ಪ,
ನೆರವೇರುವುದು ನನ್ನ ಇಷ್ಟಾರ್ಥ.
11 ಮೂಡಲಿಂದ ಬೇಟೆಗಾಗಿ ರಣಹದ್ದನು
ಕರೆದಂತೆ
ಕರೆದಿಹೆನು ದೂರದೇಶದಿಂದ ನನ್ನ ಸಂಕಲ್ಪ
ಈಡೇರಿಸಲೆಂದೇ.
ನುಡಿದಿರುವೆನು ನಾನು; ಈಡೇರಿಸುವೆನು
ಅದನ್ನು
ಯೋಜಿಸಿರುವೆನು ನಾನು; ಸಾಧಿಸುವೆನು
ಅದನ್ನು.
12 ಧರ್ಮಕ್ಕೆ ದೂರವಾದ ಹಟಮಾರಿಗಳೇ,
ಕಿವಿಗೊಡಿರಿ ನೀವು ನನ್ನ ಮಾತಿಗೆ.
13 ಬರಮಾಡುವೆನು ಮುಕ್ತಿಯನು ಹತ್ತಿರಕೆ
ಅದಿನ್ನು ದೂರವಿರದು ನಿಮಗೆ.
ತಡವಾಗದು ನಿಮಗೆ ನನ್ನ ರಕ್ಷಣೆ
ಸಾಧಿಸುವೆನು ರಕ್ಷಣೆಯನ್ನು ಸಿಯೋನಿನಲೇ,
ಬೀರುವೆನು ನನ್ನ ಮಹಿಮೆಯನ್ನು ಇಸ್ರಯೇಲ
ಮೇಲೆ."

### ಬಾಬಿಲೋನಿಯ ಕುರಿತು ವ್ಯಂಗ್ಯ ಗೀತೆ

**47** "ಕೆಳಕ್ಕಿಳಿದು ಬಾ, ಯುವತಿಯೇ
ಧೂಳಲ್ಲಿ ಕುಳಿತುಕೋ, ಬಾಬೆಲೆ!
ಕುವರಿಯೇ, ಕುಕ್ಕರಿಸು ನೆಲದಲಿ
ಸಿಂಹಾಸನವಿಲ್ಲ ಇಲ್ಲಿ.
ಎಲೈ, ಕಸ್ದೀಯರ ನಗರಿಯೇ,
ನೀನಲ್ಲ ಇನ್ನು ಕೋಮಲೆ,
ಸುಕುಮಾರಿ ಎಂದು ಎನಿಸಿಕೊಳ್ಳೆ.
2 ಬೀಸುವ ಕಲ್ಲನು ಹಿಡಿ, ಹಿಟ್ಟಿಗಾಗಿ
ನೆರಿಗೆಯನ್ನು ಹರಿ, ಮುಸುಕನ್ನು ತೆಗೆದುಹಾಕಿ

ಹೊಳೆಗಳನ್ನು ಹಾದುಹೋಗು, ನಡೆ
ಬರೆಗಾಲಿನಲ್ಲಿ.
3 ಮುಯ್ಯಿತೀರಿಸುವೆನು ಯಾರನ್ನೂ ಕರುಣಿಸದೆ
ಬೀದಿಪಾಲಾಗುವೆ ನೀನು ಲಜ್ಜೆಗೆಟ್ಟು
ಮಾನವಿಲ್ಲದೆ."
4 ನಮ್ಮ ಉದ್ಧಾರಕನ ನಾಮಧೇಯ
ಸೇನಾಧೀಶ್ವರ ಸರ್ವೇಶ್ವರ
ಆತನೇ ಇಸ್ರಯೇಲರಿಗೆ ಪರಮಪವಿತ್ರ.
5 "ಕಸ್ದೀಯ ನಗರಿಯೇ,
ಕುಳಿತುಕೊ ಮೌನವಾಗಿ ಕತ್ತಲೆಯೊಳಗೆ
ಇನ್ನು ಎನಿಸಿಕೊಳ್ಳೆ ರಾಣಿಯೆಂದು
ರಾಜ್ಯಗಳಿಗೆ."
6 "ನಾ ರೋಷಗೊಂಡು ನನ್ನ ಜನರನ್ನೇ ನಿನ್ನ
ಕೈವಶಮಾಡಿದೆ
ನನಗೆ ಸ್ವಂತವಾದವರನ್ನೆ ಈ ಪರಿ
ಹೊಲೆಗೆಡಿಸಿದೆ.
ನೀನಾದರೋ ಕರುಣೆ ತೋರಿಸದೆ ಹೋದೆ
ಮುದುಕರ ಮೇಲೂ ತೂಕದ ನೊಗವನು ಹೊರಿಸಿದೆ.
7 ನನ್ನ ಜನರ ಹಿಂಸೆಬಾಧೆಗಳನ್ನು ಗಮನಿಸದೆ
ಬರಲಿರುವ ಪರಿಣಾಮವನ್ನು ನೆನೆಸಿಕೊಳ್ಳದೆ
ನೀನೇ ಶಾಶ್ವತ ರಾಣಿಯೆಂದು ಮೆರೆದೆ.
8 ಭೋಗಾಸಕ್ತಳೆ, ನೆಮ್ಮದಿಯಾಗಿ
ನೆಲೆಗೊಂಡಿರುವವಳೇ,
'ಏಕೈಕಳು ನಾನೇ, ನನ್ನ ಹೊರತು ಇನ್ನಾರು
ಇಲ್ಲ,' ಎನ್ನುವವಳೇ,
'ವಿಧವೆಯಾಗೆನು, ಪುತ್ರಶೋಕ ಎನಗಿರದು'
ಎನ್ನುವವಳೇ, ಇದನು ಕೇಳು:
9 ಒಂದೇ ದಿನದೊಳಗೆ, ಒಂದೇ ಕ್ಷಣದೊಳಗೆ
ಪುತ್ರಶೋಕ, ವೈಧವ್ಯ – ಇವೆರಡು
ಒದಗುವುವು ನಿನಗೆ.
ಎಷ್ಟೇ ಮಂತ್ರತಂತ್ರಗಳನು ನಡೆಸಿದರೂ
ಅನುಭವಿಸುವೆ ನೀ ಪೂರ್ತಿಯಾಗಿ
ಇವುಗಳನು.
10 ಕೇಡನು ನೀ ಮಾಡಿದೆ ಭಯಪಡದೆ
ನೋಡರಾರೂ ಎಂದುಕೊಂಡಿದ್ದೆ,
ನೀನು ಜ್ಞಾನಿ ವಿವೇಕಿಯೆಂದು ತಿಳಿದುಕೊಂಡೇ
ಮರುಳಾದೆ;
'ಏಕೈಕಳು ನಾನೇ, ಇನ್ನಾರೂ ಇಲ್ಲ'
ಎಂದುಕೊಂಡೆ.
11 ಇಂತಿರಲು ನಿನಗೊದಗುವುದು ಮಂತ್ರಕ್ಕು

ಮೀರಿದ ಆಪತ್ತು
ನಿನ್ನ ಮೇಲೆರಗುವುದು ಪರಿಹರಿಸಲಾಗದ
ವಿಪತ್ತು
ತಟ್ಟನೆ ತಟ್ಟುವುದು ನಿನಗೆ ತಪ್ಪಿಸಲಾಗದ
ಕುತ್ತು.
12 ಪ್ರಯೋಗಿಸಿ ನೋಡು ನಿನ್ನ ಅಗಣಿತ
ಮಂತ್ರತಂತ್ರಗಳನು
ಬಾಲ್ಯಾರಭ್ಯ ನೀ ಕಲಿತ ಮಾಯಮಾಟಗಳನು
ಪ್ರಾಯಶಃ ನಿನಗವು ಪ್ರಯೋಜನವಾದಾವು
ಬಹುಶಃ ನಿನಗವು ಭಯಹುಟ್ಟಿಸಿಯಾವು.
13 ಬೇಸರವಾಯಿತೆ ನಿನಗೆ ಕೇಳಿ
ಮಂತ್ರಾಲೋಚನೆಗಳನು?
ಉದ್ಧರಿಸಲಿ ಬರಲಿರುವ ಆ ವಿಪತ್ತುಗಳಿಂದ
ನಿನ್ನನು
ಖಗೋಳಜ್ಞರು, ಜೋಯಿಸರು ನೋಡಿ
ಪಂಚಾಂಗವನು.
14 ಇರುವರವರೆಲ್ಲರು ಒಣಹುಲ್ಲಿನ ಕೂಳೆಯಂತೆ
ಸುಟ್ಟುಬಿಡುವುದವರನು ಉರಿಯುವ ಚಿತೆ
ತುತ್ತಾಗುವರವರು ಆ ಜ್ವಾಲಾಗ್ನಿಗೆ ತಪ್ಪದೆ.
ಅದು ಚಳಿಗೆ ಮೈಕಾಯಿಸಿಕೊಳ್ಳುವ
ಬೆಂಕಿಯಂತಲ್ಲ
ಮೈಬೆಚ್ಚಗಾಗಿಸಿಕೊಳ್ಳುವ ಉರಿಯಂತಲ್ಲ.
15 ಇಂತಾಗುವುದು ನೀ ಗೈದ ಪ್ರಯತ್ನಗಳೆಲ್ಲ.
ಬಾಲ್ಯದಿಂದ ನಿನ್ನೊಡನೆ ವ್ಯವಹರಿಸಿದವರು
ಸರಿವರು ದೂರಕೆ
ಹಿಂದಿರುಗುವರೆಲ್ಲರು ತಂತಮ್ಮ ನಾಡಿಗೆ
ಅಂತ್ಯದಲಿ ಯಾರೂ ಆಗರು ರಕ್ಷಣೆ
ನಿನಗೆ."

### ಭವಿಷ್ಯತ್ತಿನ ನಿರ್ಮಾಪಕರಾದ ಸರ್ವೇಶ್ವರ

**48** ಇಸ್ರಯೇಲೆಂಬ ನಾಮಧಾರಿಗಳೇ,
ಯೆಹೂದ ವಂಶೋತ್ಪನ್ನರೇ,
ಯಕೋಬ ಮನೆತನದವರೇ,
ಇಡುತ್ತೀರಿ ನೀವು ಸರ್ವೇಶ್ವರನ
ಮೇಲೆ ಆಣೆ
ಸ್ಮರಿಸುತ್ತೀರಿ ನಿಸ್ಸಂದೇಹವಾಗಿ
ಇಸ್ರಯೇಲಿನ ದೇವರನೆ.
ಆದರೆ, ದೂರವಾಗಿದೆ ಸತ್ಯಕ್ಕೂ ಧರ್ಮಕ್ಕೂ
ನಿಮ್ಮ ಕಾರ್ಯಾಚರಣೆ.

2 ಹೆಮ್ಮೆ ಪಡುವರಿವರು ತಾವು ಪವಿತ್ರ
ನಗರದವರೆಂದು
ಭರವಸೆಯಿಂದಿರುವರು ದೇವರು
ಇಸ್ರಯೇಲಿನವನೇ ಎಂದು
ಆತನ ಹೆಸರು ಸೇನಾಧೀಶ್ವರ ಸರ್ವೇಶ್ವರನೇ
ಎಂದು.
3 "ಕೇಳು, ಎಲೈ ಯಕೋಬ ಮನೆತನವೇ,
ನಿನಗೆ ತಿಳಿಸಿದೆ ಈವರೆಗೆ ನಡೆದ
ಸಂಗತಿಗಳನು ಪೂರ್ವದಲೇ.
ಹೌದು ಪ್ರಕಟಿಸಿದೆ ನಾನು, ಹೊರಡಿಸಿದೆ ನನ್ನ
ಬಾಯಿಂದಲೇ
ಕೈಗೂಡುವಂತೆ ಮಾಡಿದೆ ನಾನವುಗಳನು
ಕೂಡಲೆ.
4 ತಿಳಿದಿದೆ ನನಗೆ ನಿನ್ನ ಹಟಮಾರಿತನ
ನಿನ್ನ ಕುತ್ತಿಗೆಯ ನರಗಳು ಕಬ್ಬಿಣ
ನಿನ್ನ ಹಣೆ ಕಂಚಿನಂತೆ ಕಠಿಣ.
5 'ಈ ಕಾರ್ಯಗಳನ್ನು ನಡೆಸಿದ್ದು ನನ್ನ
ವಿಗ್ರಹವೇ
ವಿಧಿಸಿದ್ದು ನನ್ನ ಕೆತ್ತನೆಯ ಬೊಂಬೆಯೇ,
ಎರಕದ ಮೂರ್ತಿಯೇ'
ಎಂದು ನೀ ಜಂಬ ಕೊಚ್ಚಿಕೊಳ್ಳದಂತೆ
ಪುರಾತನ ಕಾಲದಲ್ಲೆ ನಾನಿವುಗಳನು
ಮುಂತಿಳಿಸಿದೆ.
ಅವುಗಳು ನೆರವೇರುವುದಕ್ಕೆ ಮುಂಚೆಯೇ
ಪ್ರಕಟಿಸಿದೆ.
6 ನೋಡು, ನೀ ಕೇಳಿದವೆಲ್ಲ ನಡೆದಿದೆಯೊ
ಇಲ್ಲವೋ ಎಂಬುದನು.
ಆದರೂ ಘೋಷಿಸುತ್ತಾರೆಯೇ ನಿನ್ನವರು
ಅವುಗಳನ್ನು?
ಅರುಹುವೆನು ನಿನಗಿಂದಿನಿಂದ ಹೊಸ
ಸಂಗತಿಗಳನು
ಈವರೆಗೂ ನೀನರಿಯದ ಗುಪ್ತ
ವಿಷಯಗಳನು.
7 ಪುರಾತನ ಕಾಲದಲ್ಲಿ ಅಲ್ಲ, ಈಗ ನಡೆಯುತ್ತಿವೆ
ಈ ಘಟನೆಗಳೆಲ್ಲ.
'ಇದೆಲ್ಲ ನನಗೆ ಮೊದಲೇ ತಿಳಿದಿತ್ತಲ್ಲಾ,'
ಎಂದು ನೀ ಕೊಚ್ಚಿಕೊಳ್ಳದಂತೆ, ನಾ ನಿನಗೆ
ಮುಂತಿಳಿಸಲಿಲ್ಲ.
8 ಹೌದು, ಹೌದು ನೀ ಕೇಳಿಲ್ಲ, ತಿಳಿದೂ ಇಲ್ಲ
ಆದಿಯಿಂದ ನಿನ್ನ ಕಿವಿ ತೆರೆದೂ ಇಲ್ಲ

ನೀನು ಆಗರ್ಭ ದ್ರೋಹಿ, ಮಹಾ ಕುಟಿಲ
ಎಂಬುದು ನನಗೆ ತಿಳಿದು ಇದೆಯಲ್ಲ !
9 ಆದರೂ ನನ್ನ ಹೆಸರು ಕೆಡದಂತೆ
ತಡೆಹಿಡಿವೆನು ನಿನ್ನ ಮೇಲಣ ಕೋಪವನು;
ನನ್ನ ಕೀರ್ತಿಗೆ ಕಳಂಕ ಬಾರದಂತೆ
ತಾಳಿಕೊಳ್ಳುವೆನು, ನಿರ್ಮೂಲಮಾಡದೆ
ನಿನ್ನನು.
10 ಬೆಳ್ಳಿಯನು ಪುಟಕ್ಕೆ ಹಾಕಿದಂತಲ್ಲ; ನಿನ್ನನು
ಸಂಕಟವೆಂಬ ಕೆಂಡಕ್ಕೆ ಹಾಕಿರುವೆ.
ಶೋಧಿಸಿರುವೆನು, ಪರಿಶೋಧಿಸಿರುವೆನು
ನಿನ್ನನು ನನಗಾಗೆ;
11 ಇದನ್ನು ಮಾಡುವೆ ನನಗೋಸ್ಕರವೆ
ಇದನ್ನು ಮಾಡುವೆ ಕಳಂಕಬಾರದಂತೆ
ನನ್ನ ಹೆಸರಿಗೆ
ಸಲ್ಲಗೊಡಿಸೆನು ನನ್ನ ಮಹಿಮೆಯನು
ಮತ್ತೊಬ್ಬನಿಗೆ."

**ಸರ್ವೇಶ್ವರನಿಂದ ಆಯ್ಕೆಯಾದ ಸೈರಸನು**

12 "ಯಕೋಬೆ, ನಾ ಕರೆದ ಇಸ್ರಯೇಲೆ
ನನಗೆ ಕಿವಿಗೊಡು, ಪರಮಾತ್ಮ ನಾನೆ
ಆದಿಯು ನಾನೆ, ಅಂತ್ಯವು ನಾನೆ.
13 ಭೂಮಿಗೆ ಅಸ್ತಿವಾರ ಹಾಕಿದ್ದು ನನ್ನ ಕೈಯೇ,
ಆಕಾಶವನ್ನು ಹರಡಿದ್ದು ನನ್ನ ಬಲಗೈಯೇ
ಇವೆರಡೂ ಬರುತ್ತವೆ ನಾ ಕರೆದ ಮಾತ್ರಕ್ಕೇ.
14 ಒಟ್ಟುಗೂಡಿ ಕೇಳಿ ನೀವೆಲ್ಲರು ಇದನ್ನು:
ಆ ದೇವರುಗಳಲ್ಲಿ ಮುಂತಿಳಿಸಿದವನಾರು
ಈ ಸಂಗತಿಯನು?
ನನ್ನ ಪ್ರೀತಿಗೆ ಪಾತ್ರನಾದ ವ್ಯಕ್ತಿ ಸೈರಸನು
ಕಸ್ದೀಯರ ಮೇಲೆ ಕೈಯೆತ್ತುವನು,
ಈಡೇರಿಸುವನು ಬಾಬೆಲಿನಲ್ಲಿ ನನ್ನ
ಇಷ್ಟಾರ್ಥವನು.
15 ಆತನನ್ನು ಹೆಸರಿಸಿ ಕರೆದವನು ನಾನೇ
ಆತನನ್ನು ಬರಮಾಡಿದವನೂ ನಾನೇ.
ಆತನು ಗಳಿಸುವುದು ಜಯವನ್ನೇ.
16 ಬಂದು ಕೇಳಿ ಇದನ್ನು ಹತ್ತಿರದಿಂದ
ನಾ ಮಾತಾಡಿಲ್ಲ ಗುಟ್ಟಾಗಿ ಆದಿಯಿಂದ
ಪ್ರಸನ್ನನಾಗಿಹೆನು ಭುವಿ
ಉಂಟಾದಂದಿನಿಂದ."

(ಕಳುಹಿಸಿದ್ದಾರೆ ದೇವರಾದ ಸರ್ವೇಶ್ವರ
ನನ್ನನ್ನೀಗ ತಮ್ಮ ಪವಿತ್ರಾತ್ಮರ ಸಮೇತ).

### ಇಸ್ರಯೇಲಿನ ಬಗ್ಗೆ ದೇವರ ಸಂಕಲ್ಪ

17 ನಿನ್ನ ಜೀವೋದ್ಧಾರಕನು
ಇಸ್ರಯೇಲಿನ ಪರಮಪಾವನನು
ಆದ ಸರ್ವೇಶ್ವರಸ್ವಾಮಿಯೆ ನುಡಿದಿಹನು:
“ನಿನಗೆ ಕ್ಷೇಮಕರವಾದ ಮಾರ್ಗವನು
ಬೋಧಿಸುವವನೂ
ನೀ ಹೋಗಬೇಕಾದ ಹಾದಿಯಲಿ
ನಡೆಯಿಸುವವನೂ
ಆದಂಥ ಸರ್ವೇಶ್ವರಸ್ವಾಮಿ ದೇವರು ನಾನು.
18 ಎಷ್ಟೋ ಚೆನ್ನಾಗಿರುತ್ತಿತ್ತು ನೀ ನನ್ನ
ಆಜ್ಞೆಗಳನ್ನು ಪಾಲಿಸಿದ್ದರೆ
ಇರುತಿತ್ತು ನಿನಗೆ ಸುಖಶಾಂತಿ
ಮಹಾನದಿಯಂತೆ
ನಿನ್ನ ಸತ್ಯಸಂಧತೆ ಸಮುದ್ರ ಅಲೆಗಳಂತೆ.
19 ಅಗಣಿತವಾಗಿರುತಿತ್ತು ನಿನ್ನ ಸಂತತಿ
ಕಡಲ ಮರಳಿನಂತೆ,
ನಿನ್ನ ಕರುಳಿನ ಕುಡಿಗಳು
ಉಸುಬಿನ ಅಣುರೇಣುಗಳಂತೆ,
ಅವರ ಹೆಸರುಗಳು ಕೆಟ್ಟು
ಅಳಿದುಹೋಗುತ್ತಿರಲಿಲ್ಲ ನನ್ನ ಮುಂದೆ.”
20 ಹೊರಡಿರಿ ಬಾಬಿಲೋನ್ ನಗರದಿಂದ,
ಓಡಿರಿ ಕಸ್ದೀಯರ ಕಡೆಯಿಂದ
ಪ್ರಚುರಪಡಿಸಿರಿ ಹರ್ಷಧ್ವನಿಯಿಂದ,
ಪ್ರಕಟಿಸಿರಿ ಭೂಮಿಯ ಕಟ್ಟಕಡೆಯತನಕ,
ಈ ಪರಿ ತಿಳಿಸಿರಿ: “ಸರ್ವೇಶ್ವರ, ತಮ್ಮ ದಾಸ
ಯಕೋಬನ ಉದ್ಧಾರಕ”.
21 ಆತ ಮರುಭೂಮಿಯಲ್ಲಿ ತನ್ನ ಜನರನ್ನು
ನಡೆಸಿದಾಗ
ಬಳಲಲಿಲ್ಲ ಅವರು ಬಾಯಾರಿಕೆಯಿಂದ;
ಹರಿಸಿದನು ನೀರನ್ನು ಅವರಿಗಾಗಿ
ಕಲ್ಲಿನೊಳಗಿಂದ
ಜಲವಾಹಿನಿ ಹರಿಯಿತು ಆತ ಸೀಳಿದ
ಬಂಡೆಯಿಂದ.
22 “ದುಷ್ಟರಿಗಿಲ್ಲ ಶಾಂತಿಸಮಾಧಾನ’
ಇದು ಸರ್ವೇಶ್ವರಸ್ವಾಮಿಯ ವಚನ.

## 'ದೇವರ ದಾಸ' ಕುರಿತ ಎರಡನೆಯ ಗೀತೆ

**49** ಕಿವಿಗೊಡಿ ನನ್ನ ದ್ವೀಪನಿವಾಸಿಗಳೇ,
ಆಲಿಸಿ ನನ್ನನ್ನು ದೂರದ
ಜನಾಂಗಗಳೇ,
ಸರ್ವೇಶ್ವರ ಕರೆದನೆನ್ನನ್ನು
ಗರ್ಭದಲ್ಲಿದ್ದಾಗಲೇ;
ಹೆಸರಿಟ್ಟನೆನಗೆ ನಾನು ತಾಯಿಯ
ಉದರಲ್ಲಿದ್ದಾಗಲೇ.
2 ಮಾಡಿದನು ನನ್ನ ನುಡಿಯನ್ನು ಹರಿತವಾದ
ಖಡ್ಗವನ್ನಾಗಿ
ಮುಚ್ಚಿಟ್ಟಿಹನು ನನ್ನನ್ನು ತನ್ನ ಕರದ ನೆರಳಿನಲ್ಲಿ
ರೂಪಿಸಿಹನು ನನ್ನನ್ನು ಚೂಪಾದ
ಬಾಣವನ್ನಾಗಿ,
ಬಚ್ಚಿಟ್ಟಿಹನು ನನ್ನನು ತನ್ನ ಬತ್ತಳಿಕೆಯಲ್ಲಿ.
3 ಆತನೆನಗೆ ಇಂತೆಂದ: "ನೀನೆನ್ನ ದಾಸ;
ನನ್ನ ಮಹಿಮೆ ಬೆಳಗಿಸುವ ಇಸ್ರಯೇಲ."
4 ಇಂತೆಂದುಕೊಂಡೆ ನಾನಾಗ:
ವ್ಯರ್ಥವಾಯಿತು ನನ್ನ ಸಾಮರ್ಥ್ಯವೆಲ್ಲ
ಶೂನ್ಯವಾಗಿ ಹೋಯಿತು ನನ್ನ ಶಕ್ತಿಯೆಲ್ಲ
ನನಗೆ ದೊರಕುವುದು ನ್ಯಾಯ
ಸರ್ವೇಶ್ವರನ ಕೈಯಲ್ಲೇ,
ನನಗೆ ಬರುವುದು ಬಹುಮಾನ
ಆ ದೇವರಿಂದಲೇ.
5 ಯಕೋಬ್ಯರನ್ನು ತನ್ನ ಬಳಿಗೆ ಕರೆತರಲು
ಇಸ್ರಯೇಲರನ್ನು ತನ್ನೊಂದಿಗೆ
ಸೇರಿಸಿಕೊಳ್ಳಲು
ತನ್ನ ದಾಸನನ್ನಾಗಿ ನನ್ನ ರೂಪಿಸಿದನು,
ತಾಯ ಗರ್ಭದಲ್ಲಿದ್ದಾಗಲೇ
ಮಾಡಿದನಿದನು.
ಸನ್ಮಾನ್ಯನು ನಾನು ಸರ್ವೇಶ್ವರನ ದೃಷ್ಟಿಯಲಿ
ನನ್ನ ಶಕ್ತಿಸಾಮರ್ಥ್ಯ ಇರುವುದು
ಆ ದೇವರಲಿ.
6 ಮತ್ತೆ ಆತ ಇಂತೆಂದನು ನನಗೆ:
"ಮಹತ್ಕಾರ್ಯವೇನೂ ಅಲ್ಲ ನನ್ನ
ದಾಸನಾದ ನಿನಗೆ
ಕುಲಗಳನು ಉದ್ಧರಿಸುವ ಮಾತ್ರಕೆ
ಇಸ್ರಯೇಲರಲಿ ರಕ್ಷಿತರಾದವರನ್ನು ಮರಳಿ
ಬರಮಾಡುವ ಮಾತ್ರಕೆ.
ನೇಮಿಸಿರುವೆನು ನಿನ್ನನ್ನು ಜ್ಯೋತಿಯನ್ನಾಗಿ

ಸರ್ವಜನಾಂಗಗಳಿಗೆ
ನನ್ನ ರಕ್ಷಣೆ ವ್ಯಾಪಿಸಿರುವಂತೆ ಮಾಡಲು
ಜಗದ ಕಟ್ಟಕಡೆಯವರೆಗೆ."
7 ಪೂರ್ತಿಯಾಗಿ ತಿರಸ್ಕೃತನಾದವನಿಗೆ
ಅನ್ಯಜನಾಂಗಗಳಿಗೆ ಅಸಹ್ಯವಾದವನಿಗೆ
ದರ್ಪಾಧಿಪತಿಗಳಿಗೆ ದಾಸನಾದವನಿಗೆ,
ಇಸ್ರಯೇಲಿನ ವಿಮೋಚಕನು ಹಾಗೂ
ಪರಮಪಾವನನು ಆದ ಸರ್ವೇಶ್ವರನು
ಹೀಗೆಂದು ಹೇಳುವನು:
"ಸರ್ವೇಶ್ವರಸ್ವಾಮಿಯ
ಪ್ರಾಮಾಣಿಕತೆಯನ್ನೂ
ಇಸ್ರಯೇಲಿನ ಪರಮ ಪಾವನನಿಂದ ನೀನು
ಆಯ್ಕೆಯಾದುದನ್ನೂ
ನಿನ್ನ ಅರಸರುಗಳು ಕಂಡು, ಎದ್ದು
ನಿಲ್ಲುವರು
ನಿನಗೆ ಅಧಿಪತಿಗಳು ಅಡ್ಡ ಬೀಳುವರು."

### ಜೆರುಸಲೇಮಿನ ಪುನಃಸ್ಥಾಪನೆ

8 ತಮ್ಮ ಪ್ರಜೆಗೆ ಇಂತೆನ್ನುತ್ತಾರೆ
ಸರ್ವೇಶ್ವರಸ್ವಾಮಿ:
"ನಿನಗೆ ದಯಪಾಲಿಸುವೆನು ಸದುತ್ತರವನು
ಪ್ರಸನ್ನತೆಯ ಕಾಲದಲಿ
ಸಹಾಯ ನೀಡುವೆನು ರಕ್ಷಣೆಯ ದಿನದಲಿ
ನಿನ್ನನು ಕಾಪಾಡಿ ನೇಮಿಸುವೆನು ಜನತೆಗೆ
ಸ್ಥಿರ ಒಡಂಬಡಿಕೆಯಾಗಿ.
9 'ಹೊರಟುಹೋಗಿರಿ' ಎನ್ನುವೆನು
ಸೆರೆಯಾಳುಗಳಿಗೆ
'ಬೆಳಕಿಗೆ ಬನ್ನಿರಿ' ಎನ್ನುವೆನು
ಕತ್ತಲಲ್ಲಿರುವವರಿಗೆ
ಪಾಳುಬಿದ್ದ ಸೊತ್ತುಗಳನ್ನು ಹಂಚಿಕೊಡುವೆನು
ಅವರಿಗೆ.
ದೇಶವನ್ನು ಪುನಃ ತರುವೆನು ಪೂರ್ವಸ್ಥಿತಿಗೆ
ದಾರಿಯುದ್ಧಕ್ಕೂ ಆಹಾರ ಒದಗಿಸುವೆನು
ನನ್ನ ಪ್ರಜೆಗೆ
ಬೋಳು ಬೆಟ್ಟಗಳೆಲ್ಲ ಹುಲ್ಲುಗಾವಲು
ಗಳಾಗುವುವು ನನ್ನಾ ಮಂದೆಗೆ.
10 ಇರದು ಅವರಿಗೆ ಹಸಿವು ಬಾಯಾರಿಕೆ
ಬಡಿಯವು ಅವರಿಗೆ ಬಿಸಿಲುಬೇಗೆ.
ನಡೆಸುವೆನು ನೀರುಕ್ಕುವ ಚಿಲುಮೆಗಳ ಬಳಿಗೆ
ಕರುಣಾಕರನು ದಾರಿತೋರಿಸುವನು

ಅವರಿಗೆ.
11 ಸಮದಾರಿಯಾಗಿಸುವೆನು ನನ್ನ
ಬೆಟ್ಟಗುಡ್ಡಗಳನು
ಎತ್ತರಿಸುವೆನು ನನ್ನ ರಾಜಮಾರ್ಗಗಳನು.
12 ನೋಡಿ, ಬರುತಿಹರು ನನ್ನ ಜನರು ದೂರದಿಂದ
ಹೌದು, ಬರುತಿಹರು ಉತ್ತರ ಪಶ್ಚಿಮದಿಂದ
ದಕ್ಷಿಣದ ಆ ಅಶ್ವಾನ್ ನಾಡಿನಿಂದ.
13 ಹರ್ಷಧ್ವನಿಗೆ ಆಕಾಶವೇ
ಉಲ್ಲಾಸಪಡು ಪೊಡವಿಯೇ
ತಟ್ಟಾಡಿರಿ ಬೆಟ್ಟಗುಡ್ಡಗಳೇ
ಏಕೆನೆ ಸಂತೈಸಿಹನು ಸರ್ವೇಶ್ವರ ತನ್ನ
ಪ್ರಜೆಯನು
ಕನಿಕರಿಸಿಹನು ಶೋಷಿತರಾದ ತನ್ನ ಜನರನು.
14 ಜೆರುಸಲೇಮಿನ ಜನರಾದರೋ ಇಂತೆಂದರು:
“ಸರ್ವೇಶ್ವರ ನಮ್ಮನ್ನು ಕೈಬಿಟ್ಟಿಹನು,
ಆ ಸ್ವಾಮಿ ನಮ್ಮನ್ನು ಮರೆತುಬಿಟ್ಟಿಹನು.”
15 ಹೆತ್ತ ತಾಯಿಗೆ ತನ್ನ ಕಂದನ ಪ್ರೀತಿ
ಬತ್ತಿಹೋಗುವುದುಂಟೆ?
ಆಕೆ ತನ್ನ ಮೊಲೆಗೂಸನು
ಮರೆತುಬಿಡುವುದುಂಟೆ?
ಒಂದು ವೇಳೆ ಆಕೆ ಮರೆತರೂ
ನಾ ನಿನ್ನನು ಮರೆಯೆ.
16 ನೋಡು, ನಿನ್ನ ಚಿತ್ರ ಕೊರೆದಿದೆ
ನನ್ನ ಅಂಗೈಗಳಲೆ
ನಿನ್ನ ಪೌಳಿಗೋಡೆಗಳು ಇವೆ
ಸದಾ ನನ್ನ ಕಣ್ಣೆದುರಿನಲೆ.
17 ನಿನ್ನ ಮರಳಿ ಕಟ್ಟುವವರು
ಬರುತಿಹರು ತ್ವರೆಯಿಂದ
ನಿನ್ನ ಕೆಡವಿ ಹಾಳುಮಾಡಿದವರು
ಹೊರಡುತಿಹರು ನಿನ್ನಿಂದ.
18 ಕಣ್ಣೆತ್ತಿ ಸುತ್ತಮುತ್ತಲು ನೋಡು:
ಬರುತಿಹರು ನಿನ್ನ ಬಳಿಗೆ ಅವರೆಲ್ಲರು
ಕೂಡಿಕೊಂಡು.
ನನ್ನ ಜೀವದಾಣೆ ನಿನಗೆ ಹೇಳುವುದೇನೆಂದರೆ:
‘ವಧುವು ಒಡವೆಗಳನು ಧರಿಸಿಕೊಳ್ಳುವಂತೆ
ಅವರಾಗುವರು ನಿನಗೆ ಆಭರಣಗಳಂತೆ.’
19 ಪಾಳುಬಿದ್ದ ನಿನ್ನ ಪ್ರದೇಶಗಳು
ಬೀಳುಬಿದ್ದ ನಿನ್ನ ಭೂಮಿಗಳು
ಕೆಡವಿಬಿದ್ದ ನಿನ್ನ ಬೀಡುಗಳು
ಕಿಕ್ಕಿರಿದಾಗುವುವು ನಿನ್ನ ನಿವಾಸಿಗಳಿಗೆ;

ನಿನ್ನ ಕಬಳಿಸಿದವರು ದೂರವಾಗುವರು ನಿನಗೆ.
20 “ಸರಿದುಕೊ, ನಮಗೆ ಸ್ಥಳಾವಕಾಶ ಸಾಲದು”
ಎಂದು ಪೇಳ್ವರು ನಿನ್ನ ಕಿವಿಯೊಳು ಮಕ್ಕಳು
ನೀ ಪರದೇಶಿಯಾಗಿದ್ದಾಗ ನಿನಗೆ ಹುಟ್ಟಿದಾ
ಮಕ್ಕಳು.
21 ಆಗ ನೀನು ಹೀಗೆಂದುಕೊಳ್ಳುವೆ ಮನದೊಳು:
“ನಾನೋ ಮಕ್ಕಳನು ಕಳೆದುಕೊಂಡವಳು,
ಪುತ್ರಹೀನಳು, ದೇಶಭ್ರಷ್ಟಳು, ತಿರುಕಳು.
ಇಷ್ಟೊಂದು ಮಕ್ಕಳನು ಕೊಟ್ಟವರಾರು
ನನಗೆ?
ಇವರನ್ನು ಪೋಷಿಸಿದವರಾರು ಹೀಗೆ?
ಇವರೆಲ್ಲಿದ್ದರು? ನಾನೋ
ಒಬ್ಬಂಟಿಗಳಾಗಿದ್ದೆ!”
22 ಇಂತೆನ್ನುವರು ಸ್ವಾಮಿ ಸರ್ವೇಶ್ವರ:
ಇದೋ, ಕೈಸನ್ನೆ ಮಾಡುವೆ ಜನಾಂಗಗಳಿಗೆ
ನನ್ನ ಧ್ವಜವನ್ನೆತ್ತುವೆ ದೇಶಾಂತರಗಳವರೆಗೆ
ಬರುವರವರು ನಿನ್ನ ಕುವರರನು
ಅಪ್ಪಿಕೊಂಡು ಎದೆಗೆ
ಕರೆತರುವರು ನಿನ್ನ ಕುವರಿಯರನು
ಹೆಗಲಮೇಲೆ.
23 ಸಾಕುತಂದೆಗಳಾಗುವರು ರಾಜರು ನಿನಗೆ
ಸಾಕುತಾಯಿಯರಾಗುವರು ರಾಣಿಯರು
ನಿನಗೆ.
ನಿನ್ನ ಪಾದಧೂಳಿಯ ನೆಕ್ಕುವರವರು
ಸಾಷ್ಟಾಂಗವೆರಗಿ ನನಗೆ.
ಆಗ ನಿನಗೆ ಗೊತ್ತಾಗುವುದು ನಾನೇ
ಸರ್ವೇಶ್ವರನೆಂದು
ನನ್ನನ್ನು ನಿರೀಕ್ಷಿಸುವವರು ಆಶಾಭಂಗ
ಪಡರೆಂದು.
24 ಬಲಾಢ್ಯನಿಂದ ಕೊಳ್ಳೆಯನ್ನು
ಕಸಿದುಕೊಳ್ಳಲಾದೀತೆ?
ಭೀಕರನಿಗೆ ಸೆರೆಯಾದವರನ್ನು ಬಿಡಿಸಲಾದೀತೆ?
25 ಸರ್ವೇಶ್ವರ ಹೀಗೆನ್ನುತ್ತಾರೆ:
“ಹೌದು, ಅಪಹರಿಸಲಾಗುವುದು
ಬಲಾಢ್ಯನ ಸೆರೆಯಾಳುಗಳನು
ಕಸಿದುಕೊಳ್ಳಲಾಗುವುದು ಭೀಕರನ
ಕೊಳ್ಳೆಯನು.
ನಿನ್ನೊಡನೆ ಹೋರಾಡುವವನ ಸಂಗಡ
ಹೋರಾಡುವೆ ನಾನೇ.
ಅಷ್ಟೇ ಅಲ್ಲ, ನಿನ್ನ ಮಕ್ಕಳನು ಉದ್ಧರಿಸುವೆ

ನಾನೇ.
26 ಮಾಡುವೆನು ನಿನ್ನ ಹಿಂಸಕರು ಸ್ವಮಾಂಸವನ್ನು
ತಿನ್ನುವಂತೆ
ಅಮಲೇರುವರು ಸ್ವಂತ ರಕ್ತವನ್ನು ಕುಡಿದು
ದ್ರಾಕ್ಷಾರಸದಂತೆ.
ಅರಿವರು ನರಮಾನವರೆಲ್ಲರು ಇಂತು:
ನಾನೇ ಸರ್ವೇಶ್ವರ, ನಿನ್ನ ರಕ್ಷಕ, ನಿನ್ನ
ನಿನ್ನ ವಿಮೋಚಕನೆಂದು;
ನಾನೇ ಯಕೋಬ ವಂಶದ ಬಲಾಢ್ಯ
ದೇವನೆಂದು."

**50** ಸರ್ವೇಶ್ವರ ಹೀಗೆನ್ನುತ್ತಾರೆ:
"ವಿವಾಹ ವಿಚ್ಛೇದನಗೈದ
ಗಂಡಸಿನಂತೆ
ನಾನು ನಿಮ್ಮ ಜನಾಂಗವನ್ನು
ಪರಿತ್ಯಜಿಸಿದುಂಟೊ?
ತನ್ನ ಮಕ್ಕಳನ್ನು ಜೀತಕ್ಕೆ ಇರಿಸುವವನಂತೆ
ನಾನು ನಿಮ್ಮನ್ನು ನನ್ನ ಸಾಲಗಾರರಿಗೆ
ಮಾರಿದುಂಟೊ?
ಇಲ್ಲ, ನೀವು ಸೆರೆವಾಸಿಗಳಾದಿರಿ
ನಿಮ್ಮ ದೋಷಗಳ ನಿಮಿತ್ತ;
ನಿಮ್ಮ ತಾಯಿಯನು ಬಿಡಲಾಯಿತು
ನಿಮ್ಮ ದ್ರೋಹಗಳ ನಿಮಿತ್ತ.
2 ನಾನು ರಕ್ಷಿಸಲು ಬಂದಾಗ ಯಾರೂ
ಕಾದಿರಲಿಲ್ಲ, ಏಕೆ?
ನಾನು ಕೂಗಿಕರೆದಾಗ ಯಾರೂ
ಉತ್ತರಕೊಡಲಿಲ್ಲ, ಏಕೆ?
ನನ್ನ ಹಸ್ತವು ರಕ್ಷಿಸಲಾರದ ಮೋಟುಗೈಯೋ?
ಉದ್ಧರಿಸುವ ಶಕ್ತಿ ನನ್ನಲ್ಲಿ ಇಲ್ಲವೋ?
ಬರಿ ಗರ್ಜನೆಯಿಂದಲೆ ಬತ್ತಿಸಬಲ್ಲೆ
ಸಮುದ್ರವನು
ಬೆಂಗಾಡಾಗಿಸಬಲ್ಲೆ ನಾ
ನದಿಸರೋವರಗಳನು
ಬಾಯಾರಿ ಸತ್ತು ನಾರುವಂತೆ ಮಾಡಬಲ್ಲೆ
ಅಲ್ಲಿಯ ಮೀನುಗಳನು.
3 ಹೊದಿಸುವೆನು ಆಕಾಶಕ್ಕೆ ಅಂಧಕಾರವನು
ಹಾಕಿಸುವೆನು ಅದಕ್ಕೆ ಗೋಣಿತಟ್ಟಿನ
ಮುಸುಕನು.

## ‘ದೇವರ ದಾಸ’ ಕುರಿತ ಮೂರನೆಯ ಗೀತೆ

4 ದಣಿದವರನ್ನು ಹಿತನುಡಿಗಳಿಂದ ತಣಿಸುವಂತೆ
ಅನುಗ್ರಹಿಸುತ್ತಾನೆನಗೆ ಸ್ವಾಮಿ ಸರ್ವೇಶ್ವರ
ಶಿಕ್ಷಿತರ ನಾಲಗೆಯನು;
ಶಿಷ್ಯನೋಪಾದಿ ನಾನು ಆತನನ್ನು
ಆಲಿಸುವಂತೆ
ಬೆಳಬೆಳಗೂ ನನ್ನನೆಚ್ಚರಿಸಿ
ಚೇತನಗೊಳಿಸುತ್ತಾನೆ ನನ್ನ ಕಿವಿಯನು.
5 ತೆರೆದಿಹನು ಸ್ವಾಮಿ ಸರ್ವೇಶ್ವರ ನನ್ನ ಕಿವಿಯನು
ಎಂದೇ ವಿಮುಖನಾಗಲಿಲ್ಲ ನಾನು,
ಪ್ರತಿಭಟಿಸಲಿಲ್ಲ ಆತನನು.
6 ಬೆನ್ನುಕೊಟ್ಟೆನು ಹೊಡೆಯುವವರಿಗೆ
ಗಡ್ಡ ಒಡ್ಡಿದೆನು ಅದನ್ನು ಕೀಳುವವರಿಗೆ
ಮುಖ ಮರೆಮಾಡಲಿಲ್ಲ ಉಗುಳುಬುಗುಳಿಗೆ.
7 ನೆರವಾಗಿಹನು ನನಗೆ ಸ್ವಾಮಿ ಸರ್ವೇಶ್ವರ
ಎಂದೇ ತಲೆತಗ್ಗಿಸಲಿಲ್ಲ ನಾನು
ನಾಚಿಕೆಯಿಂದ
ಗಟ್ಟಿಮಾಡಿಕೊಂಡೆ ಮುಖವನು ಕಗ್ಗಲ್ಲಿನ
ಹಾಗೆ
ಆಶಾಭಂಗಪಡಲಾರೆನೆಂದು ಗೊತ್ತು
ನನಗೆ.
8 ನನ್ನ ಪರ ತೀರ್ಪುಕೊಡುವವನು
ಇಹನು ಹತ್ತಿರದಲೆ
ನನಗೆ ಪ್ರತಿಕಕ್ಷಿ ಯಾರೆ ಬರಲಿ ಮುಂದಕೆ.
ನನ್ನೊಡನೆ ವ್ಯಾಜ್ಯಮಾಡಬಲ್ಲವನಾರೇ
ನಿಲ್ಲಲಿ ನ್ಯಾಯಕೆ.
9 ಇಗೋ, ಸ್ವಾಮಿ ಸರ್ವೇಶ್ವರ ನಿಂತಿಹರು
ನನಗೆ ನೆರವಾಗಿ
ನಿರ್ಣಯಿಸುವವನು ಯಾರು ನನ್ನನ್ನು
ಅಪರಾಧಿಯಾಗಿ?
ನುಸಿತಿಂದ ವಸ್ತ್ರದಂತೆ ಅಳಿದು
ಹೋಗುವರವರು ಜೀರ್ಣವಾಗಿ.
10 ಸರ್ವೇಶ್ವರನ ದಾಸನಾದ ನನ್ನ ಮಾತುಗಳನು
ಕೇಳಿ:
ಭಯಭಕ್ತಿಯುಳ್ಳವನಾರು ನಿಮ್ಮೊಳು
ಆ ಸರ್ವೇಶ್ವರನಲಿ?
ಬೆಳಕಿಲ್ಲದೆ ಕತ್ತಲಲಿ ನಡೆಯುವವನು
ಭರವಸೆಯಿಡಲಿ ಆ ಸರ್ವೇಶ್ವರನ
ನಾಮದಲಿ;
ಆಶ್ರಯ ಪಡೆಯಲಿ ತನ್ನಾ ದೇವನಲಿ.

11 ಬೆಂಕಿಯಿಕ್ಕಿ ಸುತ್ತಲು ಕೊಳ್ಳಿಗಳನು
ಹತ್ತಿಸಿಕೊಂಡಿರುವ ಎಲ್ಲೈ ಜನರೇ,
ನಡೆಯಿರಿ ನಿಮ್ಮಾ ಬೆಂಕಿಯ ಬೆಳಕಿನಲಿ
ನೀವು ಹತ್ತಿಸಿದ ಆ ಕೊಳ್ಳಿಗಳ
ನಡುವೆಯೆ ನಡೆಯಿರಿ:
ಇಗೋ, ಒದಗುವುದು ದುರ್ಗತಿ
ನನ್ನ ಹಸ್ತದಿಂದ,
ಸಾಯುವಿರಿ ನೀವು ಬಾಧೆಯಿಂದ.

### ಸಿಯೋನಿಗೆ ಸಾಂತ್ವನ ನುಡಿ

**51** "ಸದ್ಧರ್ಮಾರ್ಥಿಗಳಾದ
ಸರ್ವೇಶ್ವರನ ಶರಣರೇ ಕೇಳಿ:
ನೀವು ಯಾವ ಬಂಡೆಗಲ್ಲಿನಿಂದ ರೂಪು
ಪಡೆದಿರಿ,
ಯಾವ ಕಲ್ಲುಗುಂಡಿಯಿಂದ ಅಗೆಯಲ್ಪಟ್ಟಿರಿ,
ಎಂಬುದನ್ನು ಪರಿಭಾವಿಸಿ ನೋಡಿರಿ.
2 ನೆನೆಯಿರಿ ನಿಮ್ಮ ಮೂಲಪುರುಷ
ಅಬ್ರಹಾಮನನು
ಅವನ ಸತಿ ಸಾರಳನು.
ಅಬ್ರಹಾಮನನ್ನು ನಾ ಕರೆದಾಗ ಆತನು
ಒಬ್ಬಂಟಿಗನು
ಆಶೀರ್ವಾದದಿ ನಾ ಬೆಳೆಸಿದೆ
ಆತನ ಸಂತಾನವನು.
3 ಸರ್ವೇಶ್ವರನಾದ ನಾನು ಸಂತೈಸದೆ ಬಿಡೆನು
ಸಿಯೋನನ್ನು,
ಉದ್ಧರಿಸುವೆನು ಆ ಹಾಳುಬಿದ್ದ
ಸ್ಥಳಗಳೆಲ್ಲವನು.
ಮಾರ್ಪಡಿಸುವೆನು ಕಾಡುನೆಲವನು
ಏದೆನ್ ಉದ್ಯಾನದಂತೆ
ಮರುಭೂಮಿಯನು, ದೇವತೆಗಳ
ಉದ್ಯಾನವಾಗುವಂತೆ
ಹರ್ಷೋಲ್ಲಾಸ, ಸ್ತುತಿಸ್ತೋತ್ರ, ಮಧುರಗಾನ
ಅಲ್ಲಿ ನೆಲೆಸುವಂತೆ.
4 ಆಲಿಸಿರಿ ನನ್ನ ಜನರೆ; ಕಿವಿಗೊಡಿ ನನ್ನ
ಪ್ರಜೆಗಳೆ:
ಧರ್ಮೋಪದೇಶ ಹೊರಡುವುದು
ರಾಷ್ಟ್ರಗಳಿಗೆ ನನ್ನಿಂದಲೆ;
ಬೆಳಗುವುದು ಜಗಜ್ಯೋತಿಯಾಗಿ ನನ್ನ
ನ್ಯಾಯಬೋಧೆ.

5 ಹತ್ತಿರದಲ್ಲೇ ಇದೆ ನಾ ನೀಡುವ ಮುಕ್ತಿ
ಸಿಗುವುದು ನನ್ನಿಂದ ವಿಮೋಚನಾ ಶಕ್ತಿ
ನ್ಯಾಯನೀಡುವೆನು ರಾಷ್ಟ್ರಗಳಿಗೆ ನನ್ನ
ಭುಜಬಲದಿಂದ
ನನ್ನನ್ನು ನಿರೀಕ್ಷಿಸಿಕೊಂಡಿರುವರು ಜನರು
ದೂರದೇಶಗಳಿಂದ
ಕಾದಿರುವರು ಆ ಭುಜಬಲ ಸಾಧನೆಗಾಗಿ
ನಂಬಿಕೆಯಿಂದ.
6 ಆಕಾಶಮಂಡಲವನು ನೋಡಿ ಕಣ್ಣೆತ್ತಿ
ಭೂಮಂಡಲದತ್ತ ನೋಡಿ ಕೆಳಗೆ ದಿಟ್ಟಿಸಿ.
ಆಕಾಶ ಚದರಿಹೋಗುವುದು ಹೊಗೆಯಂತೆ
ಭೂಮಿ ಹರಿದುಹೋಗುವುದು ಬಟ್ಟೆಯಂತೆ
ಸಾಯುವರು ಭೂನಿವಾಸಿಗಳು ಅದರಂತೆ.
ನಾ ಕೊಡುವ ವಿಮೋಚನೆಯೋ
ನಿಲ್ಲುವುದು ಶಾಶ್ವತವಾಗಿ
ನಾ ನೀಡುವ ಮುಕ್ತಿಯೋ ಅಳಿದುಹೋಗದು
ಭಂಗವಾಗಿ.
7 "ಕಿವಿಗೊಟ್ಟು ಕೇಳಿರಿ ಸದ್ಧರ್ಮದ
ಸುಜ್ಞಾನಿಗಳೇ,
ನನ್ನ ಬೋಧೆಯಲ್ಲಿ ಶ್ರದ್ಧೆಯಿಡುವವರೇ,
ಹೆದರಬೇಡಿ ಮನುಜರಾಡುವ ದೂರಿಗೆ
ಅಂಜದಿರಿ ಅವರ ನಿಂದೆದೂಷಣೆಗೆ.
8 ನುಸಿ ಅವರನ್ನು ತಿಂದುಹಾಕುವುದು
ಬಟ್ಟೆಯಂತೆ
ಹುಳು ಅವರನ್ನು ಮೆದ್ದುಬಿಡುವುದು
ಉಣ್ಣೆಯಂತೆ.
ನಾ ನೀಡುವ ಮುಕ್ತಿಯೋ ನಿಲ್ಲುವುದು
ಶಾಶ್ವತವಾಗಿ
ನಾ ಕೊಡುವ ವಿಮೋಚನೆ ಸದಾ ಇರುವುದು
ನೆಲೆಯಾಗಿ."
9 ಎಚ್ಚರಗೊಳ್ಳು ಸರ್ವೇಶ್ವರನ ಭುಜವೇ,
ಎಚ್ಚರಗೊಂಡು ಬಲವನು ತಂದುಕೊ
ಭುಜವೇ,
ಪೂರ್ವಕಾಲದೊಳು ಪುರಾತನ
ಪೀಳಿಗೆಯೊಳು
ಎಚ್ಚರಗೊಂಡಂತೆ ಎಚ್ಚೆತ್ತುಕೊ ಈಗಲು.
ರಹಬನ್ನು ಛೇದಿಸಿಬಿಟ್ಟ ಭುಜ ನೀನಲ್ಲವೆ?
ಘಟಸರ್ಪವನು ಅಪ್ಪಳಿಸಿದ ಭುಜ
ನೀನಲ್ಲವೆ?
10 ಸಮುದ್ರ ಜನರಾಶಿಗಳನು ಬತ್ತಿಸಿದ ಬಾಹು

ನೀನು
ವಿಮುಕ್ತ ಜನ ಹಾಯುವಂತೆ ಸಮುದ್ರದಲಿ
ದಾರಿಮಾಡಿದೆ ನೀನು.
11 ಹಿಂದಿರುಗುವರು ಸರ್ವೇಶ್ವರನಿಂದ ರಕ್ಷಣೆ
ಪಡೆದವರು
ಉತ್ಸಾಹ ಗೀತೆಯೊಂದಿಗೆ ಸಿಯೋನನ್ನು
ಸೇರುವರವರು.
ಧರಿಸಿಕೊಳ್ಳುವರು ಶಾಶ್ವತ ಸಂತಸವೆಂಬ
ಕಿರೀಟವನು
ಅನುಭವಿಸುವರು ಹರ್ಷಾನಂದಗಳನು
ತೊಲಗಿ ಓಡುವುವು ದುಃಖದುಗುಡಗಳು.
12 "ನಾನೆ, ನಾನೆ ನಿನ್ನನು ಸಂತೈಸುವವನಾಗಿರೆ,
ನೀ ಭಯಪಡುವುದೇಕೆ ಮರ್ತ್ಯನಾದ
ಮಾನವನಿಗೆ?
ನೀ ಹೆದರಿ ನಡುಗುವುದೇಕೆ
ಹುಲುಮಾನವನಿಗೆ?
13 ಆಕಾಶವನು ಹರಡಿ ಭೂಮಿಯನು ಸ್ಥಾಪಿಸಿದಾ
ನಿನ್ನ ಸೃಷ್ಟಿಕರ್ತ ಸರ್ವೇಶ್ವರನನು
ಮರೆತುಬಿಟ್ಟೆಯಾ?
ನಾಶಮಾಡಲು ಹವಣಿಸುವ ಹಿಂಸಕನ ಕ್ರೋಧಕೆ
ನೀ ಎಡೆಬಿಡದೆ ದಿನವೆಲ್ಲ ಅಂಜುತ್ತಿರಬೇಕೆ?
ಆ ಹಿಂಸಕನ ಕ್ರೋಧವು ಈ ಗ ಹೋದುದೆಲ್ಲಿಗೆ?
14 ಸೆರೆಯಲ್ಲಿ ಸೊರಗಿದವನು ಸಾಯನು;
ಇಳಿಯನವನು ಪಾತಾಳಕ್ಕೆ,
ಬಿಡುಗಡೆಯಾಗುವನು ಬೇಗನೆ, ಇರದವನಿಗೆ
ಅನ್ನದ ಕೊರತೆ.
15 ನಿನ್ನ ದೇವರಾದ ಸರ್ವೇಶ್ವರ ನಾನೆ
ಸಮುದ್ರವನು ಕಲ್ಲೋಲಗೊಳಿಸುವವನು ನಾನೆ
ಅದರ ಅಲೆಗಳನು ಭೋರ್ಗರೆಸುವವನು ನಾನೆ
ನನ್ನ ಹೆಸರು ಸೇನಾಧೀಶ್ವರ ಸರ್ವೇಶ್ವರ !
16 ಆಕಾಶವನ್ನು ಹರಡಿದೆ; ಭುವಿಯನ್ನು
ಸ್ಥಾಪಿಸಿದೆ;
ಸಿಯೋನಿಗೆ 'ನೀನೆನ್ನ ಜನತೆ' ಎಂದೆ
ನಾನಾಡುವುದನೆ ನಿನ್ನಿಂದ ಮಾತನಾಡಿಸಿದೆ,
ನಿನ್ನನು ನನ್ನ ಅಂಗೈಯಲಿ ಕೊರೆದು ಕಾದಿಟ್ಟೆ."

**ಚೇತರಿಸಿಕೊಳ್ಳಲು ಜೆರುಸಲೇಮಿಗೆ ಕರೆ**

17 ಎಚ್ಚೆತ್ತುಕೊ, ಎಚ್ಚೆತ್ತುಕೊ, ನೀನೆದ್ದು ನಿಲ್ಲು
ಜೆರುಸಲೇಮೆ !
ಕುಡಿದುಬಿಟ್ಟಿರುವೆ ನೀ ಮತ್ತುತರುವ ಪಾನ

ಪಾತ್ರೆಯಿಂದ
ತೊಟ್ಟನ್ನೂ ಬಿಡದೆ ಹೀರಿರುವೆ ಸರ್ವೇಶ್ವರನ
ಕೋಪ ತುಂಬಿದಾ ಕೊಡದಿಂದ!
18 ಅವಳನ್ನು ಕರೆದುಕೊಂಡು ಹೋಗುವವನಾರೂ
ಇಲ್ಲ, ಆಕೆ ಹೆತ್ತಾ ಮಕ್ಕಳೊಳು;
ಅವಳ ಕೈಹಿಡಿದು ನಡೆಸುವವನು ಒಬ್ಬನೂ
ಇಲ್ಲ, ಆಕೆ ಸಾಕಿದ ಕುವರರೊಳು.
19 ಬಂದೊದಗಿವೆ ಇಮ್ಮಡಿ ಬಾಧೆ ನಿನಗೆ
ಪ್ರಲಾಪಿಸಿ ಗೋಳಿಡುವವರಾರು
ನಿನ್ನೊಂದಿಗೆ?
ನಾಡು ಹಾಳುಪಾಳಾಗಿದೆ, ತುತ್ತಾಗಿದೆ ಪ್ರಜೆ
ಕ್ಷಾಮಕ್ಷೋಭೆಗೆ;
ನಿನ್ನನು ಸಂತೈಸುವುದಾದರು ಹೇಗೆ?
20 ನಿನ್ನ ಮಕ್ಕಳು ಬಿದ್ದರು ಬೀದಿ ಚೌಕಗಳಲಿ
ಬಲೆಗೆ ಬಿದ್ದ ಜಿಂಕೆಯಂತಿಹರು ಪ್ರಜ್ಞೆತಪ್ಪಿ.
ನಿನ್ನ ದೇವರನು ಮೂದಲಿಸಿಹರು
ಸರ್ವೇಶ್ವರನ ರೋಷವನ್ನನುಭವಿಸಿಹರು.
21 ಇಂತಿರಲು ಶೋಷಿತಳೇ, ಕೇಳು ನನ್ನ ಮಾತನು
ದ್ರಾಕ್ಷಾರಸದಿಂದಲ್ಲ ನೀ ಅಮಲೇರಿರುವುದು.
22 ಕೇಳು, ಸ್ವಾಮಿ ಸರ್ವೇಶ್ವರ ಆದ ನಾ
ಹೇಳುವ ಮಾತನು:
ತನ್ನ ಜನರ ಪರವಾಗಿ ವಾದಿಸುವ
ನಿನ್ನ ದೇವರು ನಾನು:
"ಇಗೋ, ಅಮಲೇರಿಸುವ ಪಾತ್ರೆಯನು
ನನ್ನ ಕೋಪದಿಂದ ತುಂಬಿತುಳುಕುವಾ
ಕೊಡವನು
ನೀ ಕುಡಿಯಬಾರದೆಂದು ನಿನ್ನಿಂದ
ತೆಗೆದುಬಿಡುವೆನು.
23 ಕೊಡುವೆ ಆ ಕೋಪದ ಕೊಡವನು
ನಿನ್ನನು ಶೋಷಿಸಿದವರಿಗೆ
'ನಾವು ತುಳಿದು ಹಾದುಹೋಗುವಂತೆ
ನೆಲಕಚ್ಚಿ ಬೀಳು ಕೆಳಗೆ'
ಎಂದು ನಿಮ್ಮ ಬೆನ್ನನೆ ನೆಲವಾಗಿಸಿ,
ಬೀದಿಕಸವನ್ನಾಗಿಸಿದವರಿಗೆ."

### ಜೆರುಸಲೇಮಿನ ಬಿಡುಗಡೆ

**52** ಎಚ್ಚರಗೊಳ್ಳು, ಎಚ್ಚರಗೊಳ್ಳು
ಓ ಸಿಯೋನೇ,
ಶಕ್ತಿಶಾಲಿಯಾಗು ಪವಿತ್ರನಗರ ಜೆರುಸಲೇಮೆ.

ಧರಿಸಿಕೊ ನಿನ್ನ ಚಂದದ ಉಡುಪನು
ನಿನ್ನೊಳಗೆ ಪ್ರವೇಶಿಸರು ಇನ್ನು
ಅಪವಿತ್ರರು, ಅನ್ಯಧರ್ಮೀಯರು.
2 ಖೈದಿಯಾಗಿ ಬಿದ್ದಿರುವ ಸಿಯೋನ್ ಕನ್ಯೆಯೆ,
ಕಿತ್ತುಬಿಡು ಬಂಧನವನು ನಿನ್ನ
ಕುತ್ತಿಗೆಯಿಂದ
ಸಿಂಹಾಸನಾರೂಢಳಾಗು ಜೆರುಸಲೇಮೆ
ಝಾಡಿಸಿ ಎದ್ದುನಿಂತು ದುಂಬುಧೂಳಿನಿಂದ !

3 ಏಕೆಂದರೆ ಸರ್ವೇಶ್ವರ ಹೀಗೆಂದು ಹೇಳಿದ್ದಾರೆ – 'ಬೆಲೆಯಿಲ್ಲದೆ ಮಾರಲ್ಪಟ್ಟಿರಿ; ಹಣವಿಲ್ಲದೆ
ಮುಕ್ತರಾಗುವಿರಿ.' 4ದೇವರಾದ ಸರ್ವೇಶ್ವರ ಹೇಳಿಕೊಳ್ಳುವುದೇನೆಂದರೆ: "ಹಿಂದೆ ನನ್ನ ಜನರು ಈಜಿಪ್ಟಿನಲ್ಲೆ
ಇಳಿದುಕೊಳ್ಳಲು ಹೋದರು. ಕೊನೆಗೆ ಅಸ್ಸೀರಿಯರು ಅವರನ್ನು ನಿಷ್ಕಾರಣವಾಗಿ ಹಿಂಸಿಸಿದರು. 5ಈಗಲೂ
ಅನ್ಯರು ನನ್ನ ಜನರನ್ನು ಕಾರಣವಿಲ್ಲದೆ ಕರೆದೊಯ್ದಿದ್ದಾರೆ. ಇಲ್ಲಿ ನಾನು ಸುಮ್ಮನಿರುವುದಾದರೂ ಹೇಗೆ?
ಆಳುತ್ತಿರುವವರು ನನ್ನ ಪ್ರಜೆಯಾದವರನ್ನು ಗೋಳಿಡಿಸುತ್ತಿದ್ದಾರೆ, ಎಡೆಬಿಡದೆ ನನ್ನ ಶ್ರೀ ನಾಮವು ದಿನವೆಲ್ಲ
ದೂಷಣೆಗೆ ಗುರಿಯಾಗುತ್ತಿದೆ. 6ಹೀಗಿರಲು ನನ್ನ ಜನರು ನನ್ನ ನಾಮದ ಮಹತ್ವವನ್ನು ಒಂದು ದಿನ
ಅರಿತುಕೊಳ್ಳುವರು." ಇದು ಸರ್ವೇಶ್ವರ ಸ್ವಾಮಿಯ ನುಡಿ.
7 ಶುಭಕರ ಸಮಾಚಾರವನು ತರುವ
ಶಾಂತಿಸಮಾಧಾನವನು ಸಾರುವ
ಸಂತಸದ ಸಂದೇಶವನು ಅರುಹುವ
ಜೀವೋದ್ಧಾರವನು ಪ್ರಕಟಿಸುವ
'ನಿನ್ನ ದೇವರೇ ರಾಜ್ಯಭಾರ ವಹಿಸುವ'
ಎಂದು ಸಿಯೋನಿಗೆ ತಿಳಿಯಪಡಿಸುತ್ತ
ಪರ್ವತಗಳಿಂದ ಇಳಿದುಬರುವ
ಶಾಂತಿದೂತನ ಪಾದಪದ್ಮಗಳು
ಎಷ್ಟೊಂದು ಸುಂದರ !
8 ಆಲಿಸಿ ಕೇಳು ನಿನ್ನ ಕಾವಲುಗಾರರ ಕೂಗನು:
ಸರ್ವೇಶ್ವರ ಸಿಯೋನಿಗೆ ಮರಳಿ
ಬರುತ್ತಿರುವುದನು
ಕಣ್ಣಾರೆ ಕಂಡು ಕೂಡಿಹಾಡುತ್ತಿಹರು
ಗೀತವನು.
9 ಜೆರುಸಲೇಮಿನ ಹಾಳುಬಿದ್ದ ಪ್ರದೇಶಗಳೇ,
ಜಯಕಾರಮಾಡಿ ತಟ್ಟನೆ, ಹಾಡಿರಿ ಒಟ್ಟಿಗೆ.
ಬಿಡುಗಡೆ ಮಾಡಿರುವನು ಸರ್ವೇಶ್ವರ
ಜೆರುಸಲೇಮನು
ತಂದಿರುವನು ತನ್ನ ಜನರಿಗೆ ಸಮಾಧಾನವನು.
10 ಪ್ರದರ್ಶಿಸಿಹನು ಸ್ವಾಮಿ ಸರ್ವೇಶ್ವರನು
ರಾಷ್ಟ್ರಗಳಿಗೆಲ್ಲ ತನ್ನ ಶ್ರೀಶಕ್ತಿಯನು.
ಕಾಣುವುವು ಜಗದ ಎಲ್ಲೆಎಲ್ಲೆಗಳು
ನಮ್ಮ ದೇವ ಸಾಧಿಸುವ ಮುಕ್ತಿಯನು.
11 ಹೊರಡಿರಿ, ನೀವು ಹೊರಡಿರಿ
ಬಾಬಿಲೋನಿನಿಂದ

ಅಶುದ್ಧವಾದುವನ್ನು ಮುಟ್ಟದೆ ತೆರಳಿ
ಅಲ್ಲಿಂದ.
ಸರ್ವೇಶ್ವರನ ಆರಾಧನಾ ಉಪಕರಣಗಳನು
ಹೊರುವವರೇ,
ನಿಮ್ಮನು ನೀವೆ ಪರಿಶುದ್ಧವಾಗಿರಿಸಿಕೊಂಡು
ತೆರಳಿ ಹೊರಗೆ.
12 ಅವಸರವಾಗಿ ನೀವು ಹೊರಡಬೇಕಿಲ್ಲ
ನೆಗೆನೆಗೆದು ನೀವು ಓಡಬೇಕಿಲ್ಲ.
ಹೋಗುವನು ಸರ್ವೇಶ್ವರ ನಿಮಗೆ
ಮುಂಬಲವಾಗಿ,
ನಿಮಗಿರುವನು ಇಸ್ರಯೇಲ್ ದೇವರು
ಹಿಂಬಲವಾಗಿ.

**'ದೇವರ ದಾಸ' ಕುರಿತ ನಾಲ್ಕನೆಯ ಗೀತೆ**

13 ನನ್ನ ದಾಸನಿದೋ, ಕೃತಾರ್ಥ
ಆಗುವವನಾತ ಮಹಿಮಾನ್ವಿತ
ಏರುವನು ಉನ್ನತ ಪದವಿಗಾತ.
14 ಆತನ ಮುಖ ನರಮಾನವರ ಮುಖಕ್ಕಿಂತ
ಆತನ ರೂಪ ನರಪುತ್ರರ ರೂಪಕ್ಕಿಂತ
ವಿಕಾರಗೊಂಡಿದೆ ನಿಜ;
ಆದರೆ ಹಲವರು ನೋಡಿ ಆದರು ಚಕಿತ.
15 ಅಂತೆಯೆ ಹಲರಾಷ್ಟ್ರಗಳು ಚಕಿತವಾಗುವುವು
ಅಚ್ಚರಿಗೊಂಡು
ಬಾಯಿಮುಚ್ಚಿಕೊಳ್ಳುವರು ಅರಸರು
ಆತನನು ಕಂಡು.
ಏಕೆನೆ, ನೋಡುವರವರು ಅಪೂರ್ವ
ಸಂಗತಿಯೊಂದನು
ಗ್ರಹಿಸಿಕೊಳ್ಳುವರವರು ಎಂದೂ ಕೇಳದ
ವಿಷಯವನು.

**53** ನಂಬುವರಾರು ನಾವು ಕೇಳಿದ
ಸಂಗತಿಯನು?
ಗುರುತಿಸುವರಾರು
ಸರ್ವೇಶ್ವರನ ಶಕ್ತಿಯನು?
2 ಸರ್ವೇಶ್ವರನ ಮುಂದೆ ಬೆಳೆದನಾತ ಸಸಿಯಂತೆ
ಒಣನೆಲದೊಳಗೆ ಇಳಿಯುವ ಬೇರಿನಂತೆ.
ಆತನಲಿ ಅಂದಚೆಂದಗಳಾವುವೂ ಇರಲಿಲ್ಲ,
ನೋಡಲು ಲಕ್ಷಣವಾದುವು ಏನೂ
ಕಾಣಲಿಲ್ಲ.

3 ಧಿಕ್ಕರಿಸಲ್ಪಟ್ಟವನು, ಮನುಜರಿಂದ
ತಿರಸ್ಕೃತನು,
ದುಃಖಕ್ರಾಂತನು, ಕಷ್ಟಸಂಕಟ
ಅನುಭವಿಸಿದವನು.
ನೋಡಿದವರು ಮುಖ ತಿರುಗಿಸುವಷ್ಟು
ನಿಂದಕನು !
ನಾವೋ ಲಕ್ಷ್ಯಕ್ಕೂ ತೆಗೆದುಕೊಳ್ಳಲಿಲ್ಲ
ಆತನನು.
4 ನಿಜವಾಗಿ ವಹಿಸಿಕೊಂಡನಾತ ನಮ್ಮ
ಬಾಧೆಗಳನು
ಹೊರೆಯಂತೆ ಹೊತ್ತನಾತ ನಮ್ಮ
ಕಷ್ಟಸಂಕಟಗಳನು
ನಾವು ಭಾವಿಸಿದ್ದಾದರು ಏನು?
ಆತ ದೇವರಿಂದ ಬಾಧಿತನೆಂದು
ದಂಡನೆಗೆ ಗುರಿಯಾದವನು,
ತಿರಸ್ಕೃತನಾದವನೆಂದು !
5 ಗಾಯಗೊಂಡನಾತ ನಮ್ಮ ಪಾಪಗಳ
ನಿಮಿತ್ತ
ಜಜ್ಜರಿತನಾದ ನಮ್ಮ ದ್ರೋಹಗಳ
ದೆಸೆಯಿಂದ.
ಶಿಕ್ಷೆಗೊಳಗಾದ ನಮ್ಮ ರಕ್ಷೆಗಾಗಿ
ಪೆಟ್ಟುತಿಂದ ನಮ್ಮ ಸ್ವಸ್ಥತೆಗಾಗಿ.
6 ತೊಳಲುತ್ತಿದ್ದೆವು ನಾವೆಲ್ಲರು
ದಾರಿತಪ್ಪಿದ ಕುರಿಗಳಂತೆ
ಹಿಡಿಯುತ್ತಿದ್ದನು ಪ್ರತಿಯೊಬ್ಬನು
ತನ್ನ ತನ್ನ ದಾರಿಯನ್ನೆ.
ನಮ್ಮೆಲ್ಲರ ದೋಷವನು ಸರ್ವೇಶ್ವರ
ಹಾಕಿದ್ದ ಆತನ ಮೇಲೆ.
7 ಬಾಧೆಗಳಿಗೊಳಗಾದ, ಹಿಂಸೆ ಸಹಿಸಿದ ಆತ
ಬಾಯ್ದೆರೆಯದೆ.
ಹೌದು, ಬಾಯ್ದೆರೆಯದಿದ್ದ ಬಲಿಗೊಯ್ದ
ಕುರಿಮರಿಯಂತೆ
ತುಪ್ಪಟ ಕತ್ತರಿಸುವವನ ಮುಂದಿರುವ
ಮೂಕ ಕುರಿಮರಿಯಂತೆ.
8 ಎಳೆದೊಯ್ದರು ಬಂಧನದಿಂದ,
ನ್ಯಾಯಸ್ಥಾನದಿಂದ
ಹೌದು, ದೂರಮಾಡಿದರು ಆತನನು
ಜೀವಲೋಕದಿಂದ.
ವಧೆಯಾದನಾತ ನಮ್ಮ ಜನರ
ಪಾಪದ ದೆಸೆಯಿಂದ.

ಆದರೂ ಸಮಕಾಲೀನವರಾರು ಮರುಗಲಿಲ್ಲ
ಕನಿಕರದಿಂದ.
9 ಮಾಡಲಿಲ್ಲ ಆತ ಯಾವ ಪಾಪಕೃತ್ಯ
ಅವನ ಬಾಯಲಿರಲಿಲ್ಲ ವಂಚನೆಯ ವಾಕ್ಯ
ಹೂಣಿದರಾತನನು ಸತ್ತಮೇಲೆ
ದುರುಳರ ಹಾಗೂ ದುಷ್ಕರ್ಮಿಗಳ ನಡುವೆ.
10 ಸರ್ವೇಶ್ವರನ ಚಿತ್ತದಂತೆ ಜಜ್ಜರಿತನಾದ
ಹಿಂಸೆಬಾಧೆಗಳಿಂದ
ಪಾಪ ಪ್ರಾಯಶ್ಚಿತ್ತಕ್ಕಾಗಿ ತನ್ನ ಪ್ರಾಣವನೆ
ಸಮರ್ಪಿಸಿದ.
ಈ ಪರಿ ಕಾಣುವನು ತನ್ನ ಸಿರಿಸಂತಾನವನು
ಪಡೆಯುವನು ಚಿರಜೀವವನು
ತಾನೇ ನೆರವೇರಿಸುವೆನು ಸರ್ವೇಶ್ವರನ
ಸಂಕಲ್ಪವನು.
11 ತೃಪ್ತನಾಗುವನಾತ ಕಂಡು ತನ್ನ
ಪ್ರಾಣಯಾತನೆಯ ಫಲವನು.
ಸಜ್ಜನನಾದ ಆ ನನ್ನ ದಾಸ ತರುವನು
ಸನ್ಮಾರ್ಗಕೆ ಬಹು ಜನರನು.
ತಾನೇ ಹೊತ್ತುಕೊಳ್ಳುವನು ಅವರ
ಅಪರಾಧಗಳ ಹೊರೆಯನು.
12 ಎಂತಲೆ ನೀಡುವೆ ಇವನಿಗೆ ಪಾಲನ್ನು
ದೊಡ್ಡವರ ಸಂಗಡ
ಹಂಚಿಕೊಳ್ಳುವನು ಸೂರೆಯನ್ನು
ಬಲಿಷ್ಠರ ಸಂಗಡ
ಏಕೆನೆ ಪ್ರಾಣವನ್ನೆ ಧಾರೆಯೆರೆದು
ಮರಣಹೊಂದಿದ
ದ್ರೋಹಿಗಳೊಂದಿಗೆ ತನ್ನನೆ ಒಂದಾಗಿ
ಎಣಿಸಿಕೊಂಡ.
ಅನೇಕರ ಪಾಪವನ್ನು ಹೊತ್ತು ಅವರಿಗಾಗಿ
ಪ್ರಾರ್ಥಿಸಿದ.

### ಇಸ್ರಯೇಲಿನ ಮೇಲೆ ಸರ್ವೇಶ್ವರನಿಗಿರುವ ಅಚಲ ಪ್ರೀತಿ

**54** ಆನಂದ ಗೀತೆಯನು ಹಾಡು
ಹೆರದವಳೇ, ಬಂಜೆಯಾಗಿದ್ದವಳೇ;
ಉಲ್ಲಾಸದಿಂದ ಅರಚು, ಬೇನೆಯನು
ಅನುಭವಿಸದವಳೇ.
'ಗಂಡನುಳ್ಳವಳಿಗಿಂತ ಹೆಚ್ಚು ಮಕ್ಕಳನ್ನು
ಹೆರುವೆ'
ಎಂದು ಹೇಳುತ್ತಾರೆ ಸರ್ವೇಶ್ವರಸ್ವಾಮಿ ನಿನಗೆ.

2 ವಿಸ್ತರಿಸು ನಿನ್ನ ಗುಡಾರವನು, ಚಾಚು ಮುಂದಕೆ
ಗುಡಾರದ ಬಟ್ಟೆಗಳನು,
ಹೆದರಬೇಡ; ಉದ್ದಮಾಡು ಹಗ್ಗಗಳನು,
ಬಲಪಡಿಸು ಗೂಟಗಳನು.
3 ಏಕೆಂದರೆ ಹಬ್ಬಿಕೊಳ್ಳುವೆ ನೀನು
ಎಡಬಲದೊಳು ಎಲ್ಲೆಲ್ಲು,
ವಶಮಾಡಿಕೊಳ್ಳುವರು ನಿನ್ನ ಸಂತಾನದವರು
ಜನಾಂಗಗಳನು.
ಜನಭರಿತವಾಗುವಂತೆ ಮಾಡುವರು
ಪಾಳುಬಿದ್ದ ಪಟ್ಟಣಗಳನು.
4 ಅಂಜಬೇಡ, ನಿನಗಾಗುವುದಿಲ್ಲ ಅವಮಾನ
ನಾಚಬೇಡ, ನಿನಗಾಗದು ಆಶಾಭಂಗ.
ಮರೆವೆ ಯೌವನದಲ್ಲಿ ನಿನಗಾದ
ಅವಮಾನವನು
ವೈಧವ್ಯದಲ್ಲಾದ ನಿಂದೆ ನೆನಪಿಗೆ ಬಾರದಿನ್ನು.
5 ನಿನ್ನ ಸೃಷ್ಟಿಕರ್ತನೆ ನಿನಗೆ ಪತಿಯು
'ಸೇನಾಧೀಶ್ವರನಾದ ಸರ್ವೇಶ್ವರ'
ಆತನ ಹೆಸರು.
ಇಸ್ರಯೇಲಿನ ಪರಮಪಾವನನೆ
ನಿನ್ನ ಉದ್ಧಾರಕನು.
'ಸರ್ವಲೋಕದ ದೇವ' ಆತನ ನಾಮಧೇಯ.
6 ಗಂಡಬಿಟ್ಟು ಮನನೊಂದಿರುವ ಪತ್ನಿ ನೀನು
ಹೌದು, ತ್ಯಜಿಸಲಾದ ಯೌವನದ ಪತ್ನಿ
ನೀನು.
ಸರ್ವೇಶ್ವರ ಕನಿಕರಿಸಿ ಕರೆದಿಹನು ನಿನ್ನನು.
ಆ ನಿನ್ನ ದೇವರ ನುಡಿಯಿದು:
7 "ಬಿಟ್ಟಿದ್ದೆನು ನಿನ್ನನು ಕ್ಷಣಮಾತ್ರ
ಪ್ರೀತಿಯಿಂದ ಸೇರಿಸಿಕೊಳ್ಳುವೆ ಹತ್ತಿರ.
8 ತಟ್ಟನೆ ಉಕ್ಕು ಹರಿಯುವ ಕೋಪದಿಂದ
ಕ್ಷಣಮಾತ್ರ ಮುಖಮರೆಸಿಕೊಂಡೆ ನಿನ್ನಿಂದ
ಕರುಣಿಸುವೆನು ನಿನ್ನನು ಶಾಶ್ವತ
ಕೃಪೆಯಿಂದ."
ಇಂತೆನ್ನುತಿಹನು ನಿನ್ನ ಉದ್ಧಾರಕ ಸರ್ವೇಶ್ವರ.
9 "ಶಪಥಮಾಡಿದೆ ನಾನು ನೋಹನ
ದಿನದಂದು:
ಜಲಪ್ರಳಯವು ಭೂಮಿಯನು ಇನ್ನು
ಮುಳುಗಿಸದೆಂದು.
ಶಪಥಮಾಡುವೆ ಈಗ 'ಕೋಪಮಾಡೆನು'
ಎಂದು
'ಇನ್ನು ನಿನ್ನನು ಗದರಿಸೆನು' ಎಂದು.

10 ಬಿರುಕುಬಿಟ್ಟಾವು ಬೆಟ್ಟಗಳು, ಕದಲಿಯಾವು
ಗುಡ್ಡಗಳು,
ನನ್ನ ಅಚಲ ಪ್ರೀತಿಯಾದರೊ
ಬಿಟ್ಟುಹೋಗದು ನಿನ್ನನು.
ಶಾಂತಿಸಮಾಧಾನದ ನನ್ನೀ ಒಪ್ಪಂದವು
ಕದಲದು.
ನಿನ್ನ ಮೇಲೆ ಕರುಣೆಯಿಟ್ಟಿರುವ
ಸರ್ವೇಶ್ವರನ ನುಡಿಯಿದು."

**ಜೆರುಸಲೇಮಿನ ಭವ್ಯ ಭವಿಷ್ಯ**

11 "ಶೋಷಣೆಗೆ, ಬಿರುಗಾಳಿಗೆ, ನಿರ್ಗತಿಗೆ
ಗುರಿಯಾದವಳೇ,
ನಿರ್ಮಿಸುವೆ ನಿನ್ನನು ವಜ್ರವೈಡೂರ್ಯಗಳಿಂದ
ಅಸ್ತಿವಾರ ಹಾಕುವೆ ನಿನಗೆ ನೀಲಮಣಿ
ಗಳಿಂದ.
12 ನಿರ್ಮಿಸುವೆ ನಿನ್ನ ಗೋಪುರಗಳನು
ಮಾಣಿಕ್ಯಗಳಿಂದ
ನಿನ್ನ ಪೌಳಿಗೋಡೆಯನು
ಅನರ್ಘ್ಯ ರತ್ನಗಳಿಂದ.
13 ನಿನ್ನ ಮಕ್ಕಳು ಶಿಕ್ಷಿತರಾಗುವರು ನನ್ನಿಂದ
ಸಮೃದ್ಧವಾಗಿ ಬಾಳುವರು ಅವರು
ಸುಖಶಾಂತಿಯಿಂದ.
14 ನ್ಯಾಯನೀತಿ ನಿನಗಾಧಾರ; ದೂರವಿರುವುದು
ಹಿಂಸಾಚಾರ.
ಭಯಭೀತಿಗೆ ದೂರ, ಅವು ಬಾರವು ನಿನ್ನ
ಹತ್ತಿರ.
15 ನಿನ್ನ ಮೇಲೆ ಆಕ್ರಮಣಕೆ ಬರುವವನು
ಪಡೆದಿಲ್ಲ ಅನುಮತಿ ನನ್ನಿಂದ
ನಿನ್ನ ಮೇಲೆ ಆಕ್ರಮಣ ಮಾಡುವವನು
ಪಡೆವನು ಸೋಲನು ನಿನ್ನಿಂದ.
16 ಕೆಂಡ ಊದಿ ಕುಲುಮೆಯಲ್ಲಿ ಆಯುಧ
ಮಾಡುವ ಕಮ್ಮಾರನನು
ನಾನೇ ಸೃಷ್ಟಿಸಿದಾತ.
ವಿನಾಶಮಾಡಲು ಬರುವ ಕೆಡುಕರನು
ನಾನೇ ಉಂಟುಮಾಡಿದಾತ.
17 ಸಫಲವಾಗದು ನಿನ್ನ ವಿರುದ್ಧ
ಪ್ರಯೋಗಿಸಿದ ಆಯುಧ
ನ್ಯಾಯಸ್ಥಾನದಲ್ಲಿ ನಿನ್ನ ಪ್ರತಿವಾದಿ
ಪಡೆವನು ಅಪಜಯ
ನನ್ನ ದಾಸನನು ರಕ್ಷಿಸಿ ಆತನಿಗೆ

ನೀಡುವೆ ವಿಜಯ"
ಇದು ಸರ್ವೇಶ್ವರನ ವಾಕ್ಯ.

## ಕರುಣೆಯ ಕರೆ

**55** ಎಲೈ ಬಾಯಾರಿದ ಜನರೇ, ನೀರಿನ
ಬಳಿಗೆ ಬನ್ನಿ
ಹಣವಿಲ್ಲದವರೇ ಬನ್ನಿ, ಅನ್ನವನ್ನು ತೆಗೆದು
ಕೊಂಡು ತಿನ್ನಿ.
ಹಾಲನು, ದ್ರಾಕ್ಷಾರಸವನು ಕ್ರಯವಿಲ್ಲದೆ
ಕೊಂಡುಕೊಳ್ಳಿ.
2 ಆಹಾರವಲ್ಲದ್ದಕ್ಕೆ ಹಣವನು
ವ್ಯಯಮಾಡುವುದೇಕೆ?
ತೃಪ್ತಿ ತರದ ಪದಾರ್ಥಕ್ಕೆ
ನಿಮ್ಮ ದುಡಿತದ ವೆಚ್ಚವೇಕೆ?
ಕಿವಿಗೊಡಿ ನನಗೆ, ಒಳಿತನ್ನು ತಿಂದು
ಆನಂದಪಡಿ ಆ ಮೃಷ್ಟಾನ್ನವನುಂಡು.
3 ಕಿವಿಯನ್ನಿತ್ತ ತಿರುಗಿಸಿ ಬನ್ನಿ ನನ್ನ ಬಳಿಗೆ,
ಬದುಕಿಬಾಳುವಿರಿ ನೀವು ಕಿವಿಗೊಟ್ಟರೆನಗೆ.
ದಾವೀದನಿಗೆ ವಾಗ್ದಾನವಿತ್ತ ವರವ
ಈವೆ ನಿಮಗೆ
ಮಾಡಿಕೊಳ್ಳುವೆ–ಚಿರವಾದ
ಒಡಂಬಡಿಕೆಯನು ನಿಮ್ಮೊಂದಿಗೆ.
4 ನೇಮಿಸಿರುವೆ ಆತನನು ಜನಗಳಿಗೆ
ಸಾಕ್ಷಿಯನ್ನಾಗಿ
ಜನಾಂಗಗಳಿಗೆ ನಾಯಕನನ್ನಾಗಿ,
ಅಧಿಪತಿಯನ್ನಾಗಿ.
5 ಎಲೈ ಇಸ್ರಯೇಲೇ, ನಿನ್ನ ದೇವರಾದ
ಸರ್ವೇಶ್ವರನಿಗೋಸ್ಕರ
ನಿನ್ನ ಮಹಿಮೆಪಡಿಸಿದ ಇಸ್ರಯೇಲಿನ
ಪರಮಪಾವನನಿಗೋಸ್ಕರ
ನೀ ಕರೆಗೊಡುವೆ ನಿನಗೆ ಗೊತ್ತಿಲ್ಲದ
ಜನಾಂಗಕೆ.
ಆಗ ಅಪರಿಚಿತರೂ ಓಡಿಬರುವರು
ನಿನ್ನಾಶ್ರಯಕೆ.
6 ಅರಸಿರಿ ಸರ್ವೇಶ್ವರನನು ಆತ ದೊರಕುವ
ವೇಳೆಯಲಿ
ವಿನಂತಿಸಿರಿ ಆತನಿರುವಾಗಲೆ ಸಮೀಪದಲಿ.
7 ಬಿಟ್ಟುಬಿಡಲಿ ದುಷ್ಟನು ತನ್ನ ದುರ್ಮಾರ್ಗವನು
ತೊರೆದುಬಿಡಲಿ ದುರುಳನು

ದುರಾಲೋಚನೆಗಳನು.
ಹಿಂದಿರುಗಿ ಬರಲಿ ಸರ್ವೇಶ್ವರನ ಬಳಿಗೆ
ಕರುಣೆ ತೋರುವನು ಆತನು ಅವನಿಗೆ.
ಆಶ್ರಯಪಡೆಯಲಿ ಅವನು ನಮ್ಮ ದೇವರಿಂದ
ಕ್ಷಮಿಸುವನಾತನು ಮಹಾಕೃಪೆಯಿಂದ.
8 "ನನ್ನ ಆಲೋಚನೆಗಳು ನಿಮ್ಮ
ಆಲೋಚನೆಗಳಂಥಲ್ಲ
ನನ್ನ ಮಾರ್ಗಗಳು ನಿಮ್ಮ ಮಾರ್ಗಗಳಂಥಲ್ಲ"
ಎಂದಿಹನು ಸರ್ವೇಶ್ವರ.
9 "ಎಷ್ಟೋ ಉನ್ನತ ಆಕಾಶವು ಭೂಮಿಯಿಂದ
ಅಷ್ಟೂ ಉನ್ನತ ನನ್ನ ಮಾರ್ಗ
ನಿಮ್ಮ ಮಾರ್ಗಗಳಿಗಿಂತ,
ನನ್ನ ಆಲೋಚನೆಗಳು
ನಿಮ್ಮ ಆಲೋಚನೆಗಳಿಗಿಂತ.
10 ಮಳೆಯೂ ಹಿಮವೂ
ಆಕಾಶಮಂಡಲದಿಂದಿಳಿದು ಬಂದು
ತೋಯಿಸಿ, ಹಸಿರುಗೊಳಿಸಿ,
ಹುಲುಸು ಮಾಡುತ್ತವೆ ಭೂಮಿಯನು.
ಬಿತ್ತುವವನಿಗೆ ಬೀಜ, ಉಣ್ಣುವವನಿಗೆ ಆಹಾರ
ಒದಗಿಸದೆ,
ಹಿಂದಿರುಗಿ ಬರುವುದಿಲ್ಲ ಅವು ಸುಮ್ಮನೆ
ಬಂದಲ್ಲಿಗೆ.
11 ಅಂತೆಯೇ, ನನ್ನ ಬಾಯಿಂದ ಹೊರಡುವ
ಮಾತು
ನನ್ನ ಇಷ್ಟಾರ್ಥವನು ನೆರವೇರಿಸಿದ ಹೊರತು,
ನನ್ನ ಉದ್ದೇಶವನು ಕೈಗೂಡಿಸಿದ ಹೊರತು,
ನನ್ನ ಬಳಿಗೆ ವ್ಯರ್ಥವಾಗಿ ಹಿಂದಿರುಗದು.
12 ಹೊರಡುವಿರಿ ನೀವು ಆನಂದಭರಿತರಾಗಿ
ಬರುವಿರಿ ನೆಮ್ಮದಿಯಿಂದ ಸಾಲಾಗಿ.
ನಿಮ್ಮ ಮುಂದೆ ತಟ್ಟಾಡುವುವು ಬೆಟ್ಟಗುಡ್ಡಗಳು
ಚಪ್ಪಾಳೆ ಹೊಡೆಯುವುವು ಅಡವಿಯ
ಗಿಡಮರಗಳು.
13 ಬೆಳೆಯುವುದು ಮುಳ್ಳಿಗೆ
ಬದಲಾಗಿ ದೇವದಾರು,
ದತ್ತೂರಿಗೆ ಪ್ರತಿಯಾಗಿ ಸುಗಂಧದ ಮರವು.
ಉಳಿದಿರುತ್ತದೆ ಆ ವನವು ಶಾಶ್ವತ ಗುರುತಾಗಿ
ಸರ್ವೇಶ್ವರಸ್ವಾಮಿಯ ನಾಮಸ್ಮರಣೆಗಾಗಿ.

## ಸಕಲ ರಾಷ್ಟ್ರಗಳವರು ದೇವಜನರಾಗುವರು

**56** ಸರ್ವೇಶ್ವರಸ್ವಾಮಿ ಹೇಳುವುದು ಏನೆಂದರೆ: ನ್ಯಾಯವನ್ನು ಅನುಸರಿಸಿರಿ. ನೀತಿಯನ್ನು ಆಚರಿಸಿರಿ. ಏಕೆಂದರೆ ನಾನೀಡುವ ಮುಕ್ತಿಯು ಬೇಗನೆ ಬರುವುದು; ನಾನು ತರುವ ಸತ್ಸಂಬಂಧವು ಕೂಡಲೆ ಬೆಳಗುವುದು.
2ಅದನ್ನು ಕೈಗೊಳ್ಳುವವನು ಧನ್ಯನು! ಅದನ್ನು ಸುಭದ್ರವಾಗಿ ಕಾದಿರಿಸಿಕೊಂಡು ಸಬ್ಬತ್ ದಿನವನ್ನು ಹೊಲೆ ಮಾಡದೆ ಆಚರಿಸುತ್ತಾ ಬರುವವನು ಹಾಗೂ ಯಾವ ಕೇಡಿಗೂ ಕೈ ಹಾಕದವನು ಭಾಗ್ಯವಂತನು!

3 ಸರ್ವೇಶ್ವರನನ್ನು ಅವಲಂಬಿಸುವ ವಿದೇಶಿಯನು, 'ಸರ್ವೇಶ್ವರ ತನ್ನ ಜನರಿಂದ ನನ್ನನ್ನು ಖಂಡಿತವಾಗಿ ಬಹಿಷ್ಕರಿಸುವನು' ಎಂದು ಹೇಳದಿರಲಿ.
4ಅಂಥವನಿಗೆ ಸರ್ವೇಶ್ವರಸ್ವಾಮಿ ಹೇಳುವುದನ್ನು ಕೇಳು: "ಸಬ್ಬತ್‍ದಿನಗಳನ್ನು ನನ್ನ ದಿನಗಳೆಂದು ಆಚರಿಸಿ, ನನಗೆ ಮೆಚ್ಚುಗೆಯಾದುವನ್ನು ಕೈಗೊಂಡು, ನನ್ನ ಒಡಂಬಡಿಕೆಯನ್ನು ಸುಭದ್ರವಾಗಿ ಪಾಲಿಸಿಕೊಂಡು ಬರುವ ನಪುಂಸಕರಿಗೆ,
5ನನ್ನ ಆಲಯದಲ್ಲೆ, ಅದರ ಪ್ರಾಕಾರಗಳಲ್ಲೆ, ಅವರ ಸ್ಮಾರಕ ಶಿಲೆಗಳನ್ನು ಇಡುವೆನು. ಮಕ್ಕಳನ್ನು ಪಡೆದವರಿಗಿಂತಲು ಶ್ರೇಷ್ಠವಾದ ಹೆಸರನ್ನು ಅವರಿಗೆ ದಯಪಾಲಿಸುವೆನು. ಹೌದು, ಎಂದಿಗೂ ಅಳಿಯದ, ಶಾಶ್ವತವಾಗಿ ಉಳಿಯುವ, ಹೆಸರನ್ನು ಅವರಿಗೆ ದಯಪಾಲಿಸುವೆನು.
6ಅನ್ಯದೇಶಿಯರಲ್ಲಿ ಯಾರು ಯಾರು 'ಸರ್ವೇಶ್ವರ' ಎಂದು ನನ್ನನ್ನು ಅವಲಂಬಿಸಿ, ಪೂಜಿಸಿ, ನನ್ನ ನಾಮವನ್ನು ಪ್ರೀತಿಸಿ, ನನಗೆ ದಾಸನಾಗಿ, ಸಬ್ಬತ್‍ದಿನವನ್ನು ಹೊಲೆಮಾಡದೆ ನನ್ನ ದಿನವೆಂದು ಆಚರಿಸಿ, ಜೊತೆಗೆ ನನ್ನ ಒಡಂಬಡಿಕೆಯನ್ನು ಸುಭದ್ರವಾಗಿ ಪಾಲಿಸುತ್ತಾರೋ,
7ಅವರೆಲ್ಲರನ್ನು ನನ್ನ ಪವಿತ್ರ ಪರ್ವತಕ್ಕೆ ಬರಮಾಡುವೆನು; ನನ್ನ ಪ್ರಾರ್ಥನಾಲಯದಲ್ಲಿ ಅವರನ್ನು ಆನಂದಗೊಳಿಸುವೆನು; ನನ್ನ ಬಲಿಪೀಠದ ಮೇಲೆ ಅವರು ನೀಡುವ ದಹನಬಲಿಗಳನ್ನೂ ಅರ್ಪಣೆಗಳನ್ನೂ ಸಂತೋಷದಿಂದ ಸ್ವೀಕರಿಸುವೆನು. ನನ್ನ ಆಲಯ ಎಲ್ಲಾ ಜನಾಂಗಗಳಿಗೂ ಪ್ರಾರ್ಥನಾಲಯ ಎನಿಸಿಕೊಳ್ಳುವುದು."

8 ಇಸ್ರಯೇಲಿನ ಸೆರೆಹೋದ ಜನರನ್ನು ಬರಮಾಡಿಕೊಳ್ಳುವ ದೇವರಾದ ಸರ್ವೇಶ್ವರ, "ನಾನು ಕೂಡಿಸಿಕೊಂಡ ಇಸ್ರಯೇಲ ಜನರೊಂದಿಗೆ ಇನ್ನೂ ಹಲವರನ್ನು ಕೂಡಿಸುವೆನು" ಎಂದಿದ್ದಾರೆ.

## ಇಸ್ರಯೇಲಿನ ಪ್ರಮುಖರಿಗೆ ಧಿಕ್ಕಾರ!

9"ಕಾಡಿನ ಮೃಗಗಳೇ ಬನ್ನಿ, ಬಂದು ನುಂಗಿ ಬಿಡಿ!
10ಈ ಕಾವಲುಗಾರರು ಕುರುಡರು, ಇವರಿಗೆ ತಿಳುವಳಿಕೆಯಿಲ್ಲ. ಇವರೆಲ್ಲರೂ ಬೊಗಳಲಾರದ ಮೂಕನಾಯಿಗಳು, ಮಲಗಿಕೊಂಡು ಕನವರಿಸುವ ನಿದ್ದೆಕೋರ ನಾಯಿಗಳು.
11ಹೊಟ್ಟೆಬಾಕ ಕುನ್ನಿಗಳು; ಎಂದಿಗೂ ತೃಪ್ತಿ ಪಡೆಯದ ಶುನಕಗಳು. ಇಂಥವರು ಕುರಿಗಳನ್ನು ಕಾಯಲು ಯೋಗ್ಯರೋ? ಇವರು ಬುದ್ಧಿಹೀನರು. ಇವರಲ್ಲಿ ಪ್ರತಿಯೊಬ್ಬನು ಕೊಳ್ಳೆಹೊಡೆಯಬೇಕೆಂದು ತನ್ನದೇ ಆದ ಮಾರ್ಗವನ್ನು ಹಿಡಿದಿದ್ದಾನೆ.
12ಅಲ್ಲದೆ, 'ಬನ್ನಿ, ಮಧುಪಾನವನ್ನು ತರಿಸುತ್ತೇನೆ. ಅಮಲೇರಿಸುವ ಮದ್ಯವನ್ನು ಬೇಕಾದಷ್ಟು ಕುಡಿಯೋಣ; ಇಂದಿನಂತೆ ನಾಳೆಯೂ ಕುಡಿಯೋಣ; ಆಗ ಇನ್ನೂ ಸಂಭ್ರಮವಾಗಿರುವುದು!' ಎಂದು ಹರಟಿಕೊಳ್ಳುವರು."

**57** ಸಜ್ಜನರು ಸಾಯುತ್ತಾರೆ, ಆದರೆ ಯಾರೂ ಮನಸ್ಸಿಗೆ ಹಚ್ಚಿಕೊಳ್ಳುವುದಿಲ್ಲ. ಶರಣರು ಕಣ್ಮರೆಯಾಗುತ್ತಾರೆ, 'ಇವರು ಕೇಡಿನಿಂದ ಪಾರಾದರು' ಎಂದು ಯಾರೂ ಅರ್ಥಮಾಡಿಕೊಳ್ಳುವುದಿಲ್ಲ.
2ಸನ್ಮಾರ್ಗದಲ್ಲಿ ನಡೆಯುವವರು ಶಯ್ಯೆಯಲ್ಲಿ ವಿಶ್ರಮಿಸುತ್ತಾರೆ; ಶಾಂತಿ ಸಮಾಧಾನವನ್ನು ಸೇರುತ್ತಾರೆ.

3 ಮಾಟಗಾತಿಯ ಮಕ್ಕಳೇ, ವೇಶ್ಯೆ ವ್ಯಭಿಚಾರಿಗಳ ಸಂತಾನದವರೇ, ಬನ್ನಿ ಇಲ್ಲಿಗೆ.
4ಯಾರನ್ನು ಅಣಕಿಸಿ ಹಾಸ್ಯಮಾಡುತ್ತಿದ್ದೀರಿ? ಯಾರನ್ನು ನೋಡಿ ಬಾಯಿಕಿಸಿದು ನಾಲಿಗೆಯನ್ನು ಚಾಚುತ್ತೀರಿ?
5ಓಕ್‍ಮರಗಳ ತೋಪುಗಳಲ್ಲೂ ಸೊಂಪಾಗಿ ಹರಡಿರುವ ಮರಗಳ ಅಡಿಯಲ್ಲೂ ಕಾಮಾಗ್ನಿಯಿಂದ ಕುದಿಯುತ್ತೀರಿ. ಹೊಳೆಕೊರೆದ ಡೊಗರುಗಳಲ್ಲೂ ಬಂಡೆಬಿರುಕುಗಳಲ್ಲೂ ಮಕ್ಕಳನ್ನು ಬಲಿಕೊಡುತ್ತೀರಿ. ನೀವು ವಿದ್ರೋಹಿಗಳ ಸಂತಾನ, ಸುಳ್ಳುಗಾರರ ಸಂತತಿ.
6ಎಲೈ ದುಷ್ಟ ಸಂತಾನವೇ, ಹೊಳೆಯ

ನುಣುಪುಗಲ್ಲುಗಳೆಂದರೆ ನಿನಗೆ ಅತಿಪ್ರಿಯ. ಹೌದು, ಅವೇ ನಿನ್ನ ಪಾಲಿನ ಭಾಗ್ಯ. ಅವುಗಳಿಗೆ ಪಾನದ್ರವ್ಯವನ್ನು ನೈವೇದ್ಯವಾಗಿ ಸುರಿದಿರುವೆ, ದವಸಧಾನ್ಯಗಳನ್ನು ಕಾಣಿಕೆಯಾಗಿ ಅರ್ಪಿಸಿರುವೆ. ಇದನ್ನೆಲ್ಲ ನೋಡಿ ಕೋಪವನ್ನು ನಾನು ಅಡಗಿಸಿಕೊಳ್ಳಲಾದೀತೇ? 7ಬಲಿಯರ್ಪಿಸಲು ಎತ್ತರವಾದ, ದೊಡ್ಡದಾದ ಬೆಟ್ಟವನ್ನು ಹತ್ತಿರುವೆ. ಆದರೆ ಅಲ್ಲಿ ಕಾಮಕೇಳಿಗಳಲ್ಲಿ ತೊಡಗಿರುವೆ. 8ಬಾಗಿಲಿನ ಹಾಗು ಬಾಗಿಲಿನ ನಿಲುವಿನ ಹಿಂಭಾಗದಲ್ಲಿ ಅಶ್ಲೀಲ ಸ್ಮಾರಕಗಳನ್ನು ಇಟ್ಟುಕೊಂಡಿರುವೆ. ನನ್ನನ್ನು ತ್ಯಜಿಸಿಬಿಟ್ಟು, ನಿನ್ನ ಹಾಸಿಗೆಯನ್ನು ಬಿಚ್ಚಿರುವೆ. ಅನ್ಯರ ಸಂಗಮವನ್ನು ಬಯಸಿ ಅವರೊಂದಿಗೆ ಬೆಲೆಗೆ ಒಪ್ಪಂದ ಮಾಡಿಕೊಂಡಿರುವೆ; ಬಳಿಕ ಕಾಮ ವಿಲಾಸದಲ್ಲಿ ತೊಡಗಿರುವೆ. 9ಬೇಕಾದಷ್ಟು ಪರಿಮಳ ದ್ರವ್ಯವನ್ನು ಕೂಡಿಸಿಕೊಂಡು, ಸುಗಂಧ ತೈಲವನ್ನು ತೆಗೆದುಕೊಂಡು 'ಮೋಲೆಕ್' ದೇವತೆಯ ಬಳಿಗೆ ಯಾತ್ರೆಗೈದಿರುವೆ. (ಹೊಸ ದೇವತೆಗಳನ್ನು ಹುಡುಕಲು) ನಿನ್ನ ದೂತರನ್ನು ದೂರದೂರ ನಾಡುಗಳಿಗೆ ಕಳಿಸಿರುವೆ. ಪಾತಾಳದವರೆಗೂ ನಿನ್ನನ್ನು ತಗ್ಗಿಸಿಕೊಂಡಿರುವೆ. 10ನಡೆದು ನಡೆದು ದಣಿದಿದ್ದರೂ 'ಇನ್ನು ಪ್ರಯೋಜನವಿಲ್ಲ' ಎಂದುಕೊಳ್ಳಲಿಲ್ಲ. ಹೊಸ ಚೈತನ್ಯವನ್ನು ತಂದುಕೊಂಡು ನಿಲ್ಲದೆ ಮುಂದುವರೆದಿರುವೆ.

11 ನೀನು ಯಾರಿಗೆ ಹೆದರಿ ಬೆದರಿ, ನನ್ನನ್ನು ಮರೆತು, ನನಗೆ ಸುಳ್ಳಾಡಿ ಮೋಸಮಾಡಿರುವೆ? ಇಂಥ ದ್ರೋಹಕ್ಕೂ ನೀನು ಹಿಂಜರಿಯಲಿಲ್ಲವಲ್ಲಾ! ಬಹುಕಾಲದಿಂದ ನಾನು ಸುಮ್ಮನೆ ಇದ್ದುದರಿಂದಲೇ ನೀನು ನನ್ನನ್ನು ಗೌರವಿಸದೆ ಇರುವುದಕ್ಕೆ ಕಾರಣವಲ್ಲವೆ? 12ನಿನ್ನ ನಡತೆಯನ್ನು ಬಯಲಿಗೆ ತರುವೆನು. ಆಗ ನಿನ್ನ ಕೃತ್ಯಗಳು ನಿನಗೆ ನೆರವಾಗವು. 13ಸಹಾಯಕ್ಕಾಗಿ ನೀನು ಕೂಗಿಕೊಳ್ಳುವಾಗ ನೀನು ಕೂಡಿಹಾಕಿಕೊಂಡಿರುವ ಈ ವಿಗ್ರಹಗಳೇ ನಿನಗೆ ರಕ್ಷಣೆ ನೀಡಲಿ. ಇವುಗಳನ್ನೆಲ್ಲ ಗಾಳಿ ಬಡಿದುಕೊಂಡು ಹೋಗುವುದು. ಕೇವಲ ಒಂದು ಉಸಿರು ಸಾಕು, ಇವುಗಳನ್ನು ಒಯ್ದುಬಿಡಲು. ಆದರೆ ನನ್ನನ್ನು ಆಶ್ರಯಿಸಿಕೊಂಡವನು ನಾಡಿಗೆ ಬಾಧ್ಯಸ್ಥನಾಗುವನು; ನನ್ನ ಪವಿತ್ರ ಪರ್ವತವನ್ನು ಸ್ವಾಧೀನ ಮಾಡಿಕೊಳ್ಳುವನು.

### ಪಶ್ಚಾತ್ತಾಪ ಪಡುವವರಿಗೆ ಸಾಂತ್ವನ

14 "ಸರಿಮಾಡಿ ಮಾರ್ಗವನು ಮಣ್ಣು ಹಾಕಿ, ಹಾಕಿ; ನನ್ನ ಜನರ ದಾರಿಯಿಂದ ತೊಡರುಗಳನ್ನು ಎತ್ತಿಹಾಕಿ," ಎನ್ನುತ್ತದೆ ವಾಣಿಯೊಂದು.

15 "ಪರಮ ಪವಿತ್ರನ, ಶಾಶ್ವತ ಲೋಕದ ನಿತ್ಯನಿವಾಸಿಯಾದ ಮಹೋನ್ನತನ ಮಾತಿದು: ಉನ್ನತವಾದ ಪವಿತ್ರಾಲಯದಲ್ಲಿ ವಾಸಿಸುವವನು ನಾನು; ಆದರೂ ಪಶ್ಚಾತ್ತಾಪಪಡುವ ದೀನಮನದೊಂದಿಗೆ ನಾನಿದ್ದೇನೆ. ದೀನನ ಆತ್ಮವನ್ನು ಹಾಗು ಪಶ್ಚಾತ್ತಾಪಪಡುವ ಮನಸ್ಸನ್ನು ಉಜ್ಜೀವಗೊಳಿಸುವವನಾಗಿದ್ದೇನೆ. 16ನಾನು ಸರ್ವದಾ ತಪ್ಪು ಹುಡುಕುವವನಲ್ಲ; ಕಡೆಯ ತನಕ ಕೋಪದಿಂದಿರುವವನಲ್ಲ. ಹಾಗೆ ಮಾಡಿದರೆ ಜೀವಾತ್ಮ ಕುಂದಿಹೋದೀತು. ಆ ಜೀವಿಗಳನ್ನು ಸೃಷ್ಟಿಸಿದವನು ನಾನೇ ಅಲ್ಲವೆ? 17ನನ್ನ ಜನರ ದುರಾಶೆಯ ದೋಷದ ನಿಮಿತ್ತ ನಾನು ಕೋಪಗೊಂಡೆ, ದುಂಡಿಸಿದೆ, ಮುಖ ಮರೆಸಿಕೊಂಡೆ, ರೋಷಭರಿತನಾದೆ. ಅವರಾದರೋ ಮೊಂಡುತನದಿಂದ ಮನಸ್ಸಿಗೆ ತೋಚಿದ ಹಾಗೆ ನಡೆಯುತ್ತಾ ಬಂದಿದ್ದಾರೆ.

18 "ಅವರ ವರ್ತನೆಯನ್ನು ನೋಡಿದ್ದೇನೆ. ಆದರೂ ಅವರನ್ನು ಸ್ವಸ್ಥಪಡಿಸುತ್ತೇನೆ. ಅವರಿಗೆ ದಾರಿತೋರಿಸುತ್ತಾ, ಅವರಿಗೂ ಅವರಿಗಾಗಿ ದುಃಖಿಸುವವರಿಗೂ ಸಾಂತ್ವನ ಸಂಭಾವನೆಯನ್ನು ಕೊಡುತ್ತೇನೆ. 19ಅವರ ಬಾಯಿಂದ ಸ್ತುತಿ ಸ್ತೋತ್ರ ಹೊರಬರುವಂತೆ ಮಾಡುತ್ತೇನೆ. ಶಾಂತಿ! ಹತ್ತಿರವಿರುವವರಿಗೂ ದೂರವಿರುವವರಿಗೂ ಶಾಂತಿ ಸಮಾಧಾನ! ನಾನು ಅವರನ್ನು ಸ್ವಸ್ಥ ಪಡಿಸುತ್ತೇನೆ," ಎನ್ನುತ್ತಾರೆ ಸರ್ವೇಶ್ವರಸ್ವಾಮಿ. 20 "ಆದರೆ, ದುರುಳರು ಅಲ್ಲೋಲಕಲ್ಲೋಲವಾದ ಸಮುದ್ರದಂತೆ ಇದ್ದಾರೆ. ಅದು ಸುಮ್ಮನಿರದು – ಅದರ ಅಲೆಗಳು ಕೆಸರನ್ನೂ ಕೊಳಚೆಯನ್ನೂ ಕಕ್ಕುತ್ತಾ ಇರುತ್ತದೆ. 21ದುರುಳರಿಗೆ ಇಲ್ಲ 'ಶಾಂತಿಸಮಾಧಾನ," ಎನ್ನುತ್ತಾರೆ ದೇವರು.

## ಉತ್ತಮವಾದ ಉಪವಾಸ

**58** ಸರ್ವೇಶ್ವರಸ್ವಾಮಿ ಇಂತೆನ್ನುತ್ತಾರೆ: "ಗಟ್ಟಿಯಾಗಿ ಕೂಗು, ನಿಲ್ಲಿಸಬೇಡ; ಕೊಂಬಿನಂತೆ ಸ್ವರವೆತ್ತಿ ನನ್ನ ಜನರಿಗೆ ಅವರ ದ್ರೋಹವನ್ನು ತಿಳಿಸು; ಯಕೋಬ ವಂಶದವರಿಗೆ ಅವರ ಪಾಪವನ್ನು ತಿಳಿಸು; 2ತಮ್ಮ ದೇವರ ವಿಧಿನಿಯಮಗಳನ್ನು ಬಿಡದೆ, ಧರ್ಮವನ್ನು ಆಚರಿಸುವ ಜನಾಂಗವೊ ಎಂಬಂತೆ, ಇವರು ದಿನ ದಿನವೂ ನನ್ನ ದರ್ಶನಕ್ಕಾಗಿ ಬರುತ್ತಾರೆ; ನನ್ನ ಮಾರ್ಗವನ್ನು ತಿಳಿದುಕೊಳ್ಳುವುದರಲ್ಲಿ ಸಂತೋಷಿಸುವಂತೆ ನಟಿಸುತ್ತಾರೆ. ಧೈರ್ಯವಾಗಿ ನನ್ನಿಂದ ನ್ಯಾಯವಿಧಿಗಳನ್ನು ಕೇಳುತ್ತಾರೆ. ದೇವದರ್ಶನದಲ್ಲಿ ಆನಂದಿಸುವವರಂತೆ ತೋರಿಸಿಕೊಳ್ಳುತ್ತಾರೆ." 3"ನಾವು ಉಪವಾಸಮಾಡಿದ್ದೇವೆ, ನೀನು ಏಕೆ ಕಟಾಕ್ಷಿಸುವುದಿಲ್ಲ? ನಮ್ಮನ್ನು ನಾವೇ ತಗ್ಗಿಸಿಕೊಂಡಿದ್ದೇವೆ, ನೀನು ಗಮನಿಸದೆ ಇರುವುದೇಕೆ?" ಎಂದುಕೊಳ್ಳುತ್ತಾರೆ. 4"ನಿಮ್ಮ ಉಪವಾಸದ ಪರಿಣಾಮಗಳು ಇಷ್ಟೆ: ವ್ಯಾಜ್ಯ, ಕಲಹ, ಗುದ್ದಾಟ. ಇಲ್ಲಿಯವರೆಗೆ ನೀವು ಮಾಡಿದಂತೆ ಉಪವಾಸ ಮಾಡಿದರೆ, ನಿಮ್ಮ ಪ್ರಾರ್ಥನೆ ಪರಲೋಕವನ್ನು ಮುಟ್ಟುವುದಿಲ್ಲ. 5ಸ್ವಾರ್ಥ ನಿಗ್ರಹಕ್ಕಾಗಿ ನಾನು ನೇಮಿಸಿದ ಉಪವಾಸದ ದಿನ ಇಂಥದ್ದೋ? ಒಬ್ಬನು ಜೊಂಡಿನಂತೆ ತಲೆಯನ್ನು ಬಗ್ಗಿಸಿಕೊಳ್ಳುವುದು, ಗೋಣಿತಟ್ಟನ್ನು ಉಟ್ಟುಕೊಳ್ಳುವುದು, ಬೂದಿಯ ಗುಂಡಿಯಲ್ಲಿ ಕುಳಿತುಕೊಳ್ಳುವುದು, ಇವು ನನಗೆ ಮೆಚ್ಚುಗೆಯಾಗುವ ಉಪವಾಸ ಎನ್ನುತ್ತೀರೊ?

6 "ನಾನು ಹೇಳುವುದನ್ನು ಕೇಳಿ: ಅನ್ಯಾಯದ ಬಂಧನಗಳನ್ನು ಬಿಚ್ಚುವುದು, ಭಾರವಾದ ನೊಗದ ಕಣಿಗಳನ್ನು ಕಳಚುವುದು, ಜರ್ಜರಿತರಾದವರನ್ನು ಬಿಡುಗಡೆಮಾಡುವುದು, 7ಹಸಿದವರಿಗೆ ಅನ್ನ ಹಾಕುವುದು, ನೆಲೆಯಿಲ್ಲದೆ ಅಲೆಯುತ್ತಿರುವ ಬಡವರನ್ನು ಮನೆಗೆ ಬರಮಾಡಿಕೊಳ್ಳುವುದು, ಬೆತ್ತಲೆಯಾದವರನ್ನು ಕಂಡಾಗ ಅವರಿಗೆ ಬಟ್ಟೆಹೊದಿಸುವುದು, ನಿನ್ನ ರಕ್ತ ಸಂಬಂಧಿಕರಿಂದ ಮುಖ ಮರೆಮಾಡಿಕೊಳ್ಳದಿರುವುದು, ಇದೇ ಅಲ್ಲವೆ ನನಗೆ ಇಷ್ಟಕರವಾದ ಉಪವಾಸವ್ರತ?

8 "ಇದನ್ನು ಆಚರಿಸುವಾಗ ನೀವು ಉದಯ ಕಾಲದ ಸೂರ್ಯನಂತೆ ಪ್ರಜ್ವಲಿಸುವಿರಿ. ಆರೋಗ್ಯಭಾಗ್ಯವು ನಿಮಗೆ ಬೇಗನೆ ದೊರಕುವುದು. ನಿಮ್ಮ ಸದಾಚಾರವೆ ನಿಮಗೆ ಮುಂಬಲವಾಗಿ ನಡೆಸುವುದು; ಸರ್ವೇಶ್ವರಸ್ವಾಮಿಯ ಮಹಿಮೆ ನಿಮಗೆ ಹಿಂಬಲವಾಗಿ ಇರುವುದು. 9ಆಗ ನೀವು ಪ್ರಾರ್ಥಿಸಿದರೆ, ಆ ಸ್ವಾಮಿ ನಿಮಗೆ ಉತ್ತರಿಸುವರು; ಮೊರೆಯಿಟ್ಟು ಕರೆದರೆ 'ಇಗೋ ಆಲಿಸುತ್ತಿದ್ದೇನೆ' ಎನ್ನುವರು. ನೀವು ದಬ್ಬಾಳಿಕೆ ನಡೆಸುವುದನ್ನೂ ಇತರರನ್ನು ಜರೆಯುವುದನ್ನೂ ಕೇಡನ್ನು ನುಡಿಯುವುದನ್ನೂ ನಿಮ್ಮ ನಡುವೆಯಿಂದ ತೊಲಗಿಸಿದರೆ 10ಹಾಗೂ ಹಸಿದವರಿಗೆ ಜೀವನಾಂಶವನ್ನೂ ಬಡವರಿಗೆ ಅಗತ್ಯವಾದುದನ್ನೂ ನೀಡಿದರೆ, ನಿಮ್ಮ ಜ್ಯೋತಿ ಕತ್ತಲಲ್ಲಿ ಬೆಳಗುವುದು; ಅಂಧಕಾರ ನೀಗಿ ಮಧ್ಯಾಹ್ನವಾಗುವುದು. 11ಸರ್ವೇಶ್ವರಸ್ವಾಮಿ ನಿಮ್ಮನ್ನು ನಿರಂತರವಾಗಿ ಮುನ್ನಡೆಸುವರು; ಮರುಭೂಮಿಯಲ್ಲೂ ನಿಮಗೆ ಮನಃತೃಪ್ತಿಯನ್ನು ನೀಡುವರು; ನಿಮ್ಮ ಎಲುಬುಗಳನ್ನು ಬಲಪಡಿಸುವರು; ನೀರೆರೆದ ತೋಟದಂತೆಯೂ ಬತ್ತಿಹೋಗದ ಬುಗ್ಗೆಯಂತೆಯೂ ನೀವು ಇರುವಿರಿ. 12ಪುರಾತನಕಾಲದ ಪಾಳುಬಿದ್ದ ಮನೆಗಳನ್ನು ನಿಮ್ಮವರು ಮರಳಿ ಕಟ್ಟುವರು. ತಲತಲಾಂತರಗಳಿಂದ ಪಾಳುಬಿದ್ದಿರುವ ತಳಹದಿಗಳ ಮೇಲೆ ಕಟ್ಟಡಗಳನ್ನು ನೀವು ನಿರ್ಮಿಸುವಿರಿ. 'ಬಿದ್ದ ಗೋಡೆಯನ್ನು ಎಬ್ಬಿಸಿದ ರಾಷ್ಟ್ರ, ಹಳೆಯ ದಾರಿಗಳನ್ನು ಸರಾಗಮಾಡಿದ ರಾಷ್ಟ್ರ' ಎಂಬ ಬಿರುದು ನಿಮಗೆ ಬರುವುದು."

## ಸಬ್ಬತ್‍ದಿನದ ಸದಾಚರಣೆ

13 "ನೀವು ಸಬ್ಬತ್‍ದಿನವನ್ನು ತಾತ್ಸಾರ ಮಾಡದೆ, ಆ ನನ್ನ ಪರಿಶುದ್ಧ ದಿನದಲ್ಲಿ ನಿಮ್ಮ ದೈನಂದಿನ ವ್ಯವಹಾರವನ್ನು ನಡೆಸದೆ, ಸ್ವೇಚ್ಛೆಯಾಗಿ ವರ್ತಿಸದೆ, ಸ್ವಕಾರ್ಯದಲ್ಲೇ ನಿರತರಾಗದೆ, ಹರಟೆಮಾತುಗಳಲ್ಲಿ ಕಾಲಕಳೆಯದೆ, ಸರ್ವೇಶ್ವರಸ್ವಾಮಿಯ ಸಬ್ಬತ್‍ದಿನ ಪರಿಶುದ್ಧವಾದುದು, ಸಂತೋಷಕರವಾದುದು, ಮಾನ್ಯತೆಗೆ ಅರ್ಹವಾದುದು ಎಂದು ಸನ್ಮಾನಿಸಿದ್ದೇ ಆದರೆ 14ನೀವು ಸರ್ವೇಶ್ವರಸ್ವಾಮಿಯಾದ ನನ್ನ ಆನಂದದಲ್ಲಿ ಭಾಗಿಗಳಾಗುವಿರಿ; ನಾನು ನಿಮ್ಮನ್ನು ಅನ್ನತಸ್ಥಾನಕ್ಕೆ ಏರಿಸುವೆನು. ನಿಮ್ಮ ಪಿತೃ ಯಕೋಬನ ಸೊತ್ತನ್ನು ನೀವು ನಿರಂತಕವಾಗಿ ಅನುಭವಿಸುವಂತೆ ಮಾಡುವೆನು," ಇದು ಸರ್ವೇಶ್ವರಸ್ವಾಮಿಯ ನುಡಿ.

### ರಕ್ಷಣೆಯ ಪಾಪದ ಅಡಚಣೆ

**59** ನಾನು ಹೇಳುವುದನ್ನು ಕೇಳಿ: ಸರ್ವೇಶ್ವರಸ್ವಾಮಿಯ ಕೈ ನಿಮ್ಮನ್ನು ರಕ್ಷಿಸಲಾಗದಂಥ ಮೋಟುಗೈಯಲ್ಲ,
ಅವರ ಕಿವಿ ಕಿವುಡಲ್ಲ. 2ಬದಲಿಗೆ, ನಿಮ್ಮ ಅಪರಾಧಗಳೇ ನಿಮ್ಮನ್ನು ಜೀವದಿಂದ ಬೇರ್ಪಡಿಸುತ್ತಾ ಬಂದಿವೆ.
ಅವರು ನಿಮಗೆ ಕಿವಿಗೊಡದಂತೆ ನಿಮ್ಮ ಪಾಪಗಳೇ ಅವರನ್ನು ವಿಮುಖರನ್ನಾಗಿ ಮಾಡಿವೆ. 3ಏಕೆಂದರೆ
ನಿಮ್ಮ ಕೈಗಳು ರಕ್ತಸಿಕ್ತವಾದುವು. ನಿಮ್ಮ ಬೆರಳುಗಳು ಅಕ್ರಮದಿಂದ ಮಲಿನವಾಗಿವೆ. ನಿಮ್ಮ ತುಟಿಗಳು ಸುಳ್ಳು
ನುಡಿಯುತ್ತವೆ. ನಿಮ್ಮ ನಾಲಿಗೆ ಕೆಡುಕನ್ನು ಗೊಣಗುತ್ತದೆ.
4 ನ್ಯಾಯಸ್ಥಾನದಲ್ಲಿ ನ್ಯಾಯಾನುಸಾರ ವಾದಿಸುವವನು ನಿಮ್ಮಲ್ಲಿ ಯಾರೂ ಇಲ್ಲ; ಸತ್ಯಾನುಸಾರ
ತೀರ್ಪುಕೊಡುವವನು ಯಾರೂ ಇಲ್ಲ; ನೀವು ಶೂನ್ಯವಾದುದ್ದನ್ನೇ ನಂಬುತ್ತೀರಿ, ಅಬದ್ಧವಾದುದನ್ನೇ
ಆಡುತ್ತೀರಿ, ಕೇಡನ್ನು ಬಸಿರಿಸಿ ಅಕ್ರಮವನ್ನು ಹೆರುತ್ತೀರಿ. 5ಹಾವಿನಂತೆ ಮೊಟ್ಟೆಗಳನ್ನು ಮರಿ ಮಾಡುತ್ತೀರಿ,
ಜೇಡರ ಹಳುವಿನಂತೆ ಬಲೆಯನ್ನು ನೇಯುತ್ತೀರಿ. ಆ ಮೊಟ್ಟೆಗಳನ್ನು ತಿನ್ನುವವನು ಸಾಯುತ್ತಾನೆ, ಅವನ್ನು
ಹೊಡೆದುಬಿಡುವವನು ವಿಷದ ಮರಿಗಳು ಹೊರ ಬರುವಂತೆ ಮಾಡುತ್ತಾನೆ. 6ನಿಮ್ಮ ಆ ಬಲೆಯ ನೂಲು
ಬಟ್ಟೆಯಾಗದು. ನೀವು ನೇಯ್ದದ್ದು ಹೊದಿಕೆಯಾಗದು. ನಿಮ್ಮ ಕಾರ್ಯಗಳು ಅಕ್ರಮವಾದುವು. ನಿಮ್ಮ
ಕೈಕೆಲಸಗಳು ಹಿಂಸಾತ್ಮಕವಾದುವು. 7ನಿಮ್ಮ ಕಾಲುಗಳು ಓಡುವುದು ಕೇಡಿಗಾಗಿ, ನೀವು ತವಕಪಡುವುದು
ನಿರಪರಾಧಿಯ ರಕ್ತಪಾತಕ್ಕಾಗಿ. ನಿಮ್ಮ ಈ ಆಲೋಚನೆಗಳು ದುಷ್ಟವಾದುವು, ನೀವು ಹಿಡಿದ ಹಾದಿಗಳು
ತರುವುದು ನಾಶವಿನಾಶವನ್ನೇ. 8ಶಾಂತಿಸಮಾಧಾನದ ಮಾರ್ಗವನ್ನು ನೀವು ಅರಿಯಿರಿ. ನಿಮ್ಮ ನಡತೆಯಲ್ಲಿ
ನ್ಯಾಯನೀತಿ ಎಂಬುದು ಇಲ್ಲ. ನಿಮ್ಮ ಮಾರ್ಗ ಅಂಕುಡೊಂಕಾಗಿದೆ, ಅವುಗಳಲ್ಲಿ ನಡೆಯುವವನು
ಶಾಂತಿಸಮಾಧಾನವನ್ನು ಮುಟ್ಟನು.

### ಪಾಪಗಳಿಗಾಗಿ ಪಶ್ಚಾತ್ತಾಪ

9 ಆಗ ಜನರು ಹೀಗೆನ್ನುತ್ತಾರೆ: ಈ ಕಾರಣದಿಂದಲೇ ನ್ಯಾಯನಿರ್ಣಯವು ನಮ್ಮಿಂದ ದೂರವಾಗಿದೆ,
ಸದ್ಧರ್ಮವು ನಮಗೆ ದೊರಕದೆ ಇದೆ. ಬೆಳಕಿಗಾಗಿ ಕಾದಿರುವ ನಮ್ಮನ್ನು ಕತ್ತಲು ಆವರಿಸಿದೆ. ಜ್ಯೋತಿಯನ್ನು
ನಿರೀಕ್ಷಿಸುತ್ತಿರುವ ನಮ್ಮನ್ನು ಅಂಧಕಾರವೇ ಬೆನ್ನಟ್ಟುತ್ತಿದೆ. 10ಗೋಡೆಯನ್ನು ತಡವರಿಸುತ್ತೇವೆ ಕುರುಡರಂತೆ,
ಹೌದು, ತಡಕಾಡುತ್ತೇವೆ ಕಣ್ಣಿಲ್ಲದವರಂತೆ. ನಡುಹಗಲಲ್ಲೇ ಎಡವುತ್ತೇವೆ ಇಳಿಹೊತ್ತಿನಲ್ಲೋ ಎಂಬಂತೆ.
ಸಜೀವದಿಂದಿರುವವರ ನಡುವೆ ಇದ್ದೇವೆ ಸತ್ತವರಂತೆ. 11ಗುರುಗುಟ್ಟುತ್ತೇವೆ ಕರಡಿಗಳಂತೆ, ಮುಲುಗುತ್ತೇವೆ
ಪಾರಿವಾಳಗಳಂತೆ. ನ್ಯಾಯ ನಿರ್ಣಯವನ್ನು ಎದುರುನೋಡಿದರೂ ಅದು ನಮಗೆ ಸಿಗದಿದೆ;
ಜೀವೋದ್ಧಾರವನ್ನು, ನಿರೀಕ್ಷಿಸಿದರೂ ಅದು ನಮ್ಮಿಂದ ದೂರವಿದೆ.
12 "ಸರ್ವೇಶ್ವರಾ, ನಿಮಗೆ ವಿರುದ್ಧ ನಾವು ಗೈದ ಅಪರಾಧಗಳು ಹಲವು. ನಮ್ಮ ಪಾಪಗಳೇ ನಮಗೆ
ವಿರೋಧವಾಗಿ ಸಾಕ್ಷಿಕೊಡುತ್ತವೆ. ನಮ್ಮ ಅಪರಾಧಗಳು ನಮ್ಮೊಡನೆಯೇ ಇವೆ. ನಮ್ಮ ದ್ರೋಹಗಳನ್ನು ನಾವು
ಬಲ್ಲೆವು. 13ಹೌದು, ನಿಮಗೆ ತಪ್ಪುಮಾಡಿ ನಿಮ್ಮನ್ನು ಅಲ್ಲಗಳೆದಿದ್ದೇವೆ. ನಮ್ಮ ದೇವರಾದ ನಿಮ್ಮನ್ನು
ಹಿಂಬಾಲಿಸದೆ ಹಿಂದಿರುಗಿದ್ದೇವೆ; ಹಿಂಸಾಚಾರವನ್ನೂ ದಂಗೆ ಏಳುವುದನ್ನೂ ಪ್ರಚೋದಿಸಿದ್ದೇವೆ. ನಮ್ಮ
ಅಂತರಾಲೋಚನೆಗಳು ಹುಸಿ; ನಮ್ಮ ಬಾಯಿ ಮಾತು ಸುಳ್ಳು. 14ನ್ಯಾಯವನ್ನು ಓಡಿಸಿ ಬಿಟ್ಟಿದ್ದೇವೆ; ನೀತಿ
ಸಮೀಪಿಸದಂತೆ ಮಾಡಿದ್ದೇವೆ. ಸತ್ಯವು ಸಾರ್ವಜನಿಕ ಚೌಕದಲ್ಲಿ ಬಿದ್ದುಹೋಗಿದೆ; ಸದಾಚಾರವು
ಪ್ರವೇಶಿಸಲಾಗದಿದೆ. 15 ಸತ್ಯವು ಅದೃಶ್ಯವಾಗಿದೆ. ಕೇಡನ್ನು ಕೈಬಿಟ್ಟವನೇ ಖೂನಿಗೆ ಗುರಿಯಾಗುತ್ತಾನೆ."

### ಬರಲಿದೆ ರಕ್ಷಣೆ

16 ಸರ್ವೇಶ್ವರಸ್ವಾಮಿ ಇದನ್ನು ನೋಡಿದ್ದಾರೆ. ನ್ಯಾಯವೇ ಇಲ್ಲದ್ದನ್ನು ಕಂಡು ಖಿನ್ನರಾಗಿದ್ದಾರೆ.
ಮುಂದೆ ಬಂದು ಉದ್ಧಾರಮಾಡಬಲ್ಲ ವ್ಯಕ್ತಿ ಯಾರೂ ಇಲ್ಲದಿರುವುದನ್ನು ಅರಿತು ಸ್ತಬ್ಧರಾಗಿದ್ದಾರೆ. ಎಂತಲೇ,
ಅವರು ಸ್ವಂತ ಶಕ್ತಿಯನ್ನು ಪ್ರಯೋಗಿಸಿ ಜಯಪ್ರದರಾಗುವರು. ನ್ಯಾಯನೀತಿಯೇ ಅವರಿಗೆ ಆಧಾರ.

17ಅವರು ನ್ಯಾಯನೀತಿಯನ್ನು ವಜ್ರಕವಚವನ್ನಾಗಿ ತೊಟ್ಟುಕೊಳ್ಳುವರು. ರಕ್ಷಣೆ ಎಂಬ ಶಿರಸ್ತ್ರಾಣವನ್ನು ಧರಿಸಿಕೊಳ್ಳುವರು. ಪ್ರತೀಕಾರವೆಂಬ ಉಡುಪನ್ನು ಉಟ್ಟುಕೊಳ್ಳುವರು. ಆಗ್ರಹ ಎಂಬ ನಿಲುವಂಗಿಯನ್ನು ಹಾಕಿಕೊಳ್ಳುವರು. 18ಅವರವರ ಕೃತ್ಯಗಳಿಗೆ ತಕ್ಕಂತೆ ದೂರದ ನಾಡುಗಳವರೆಗೂ ಮುಯ್ಯಿ ತೀರಿಸುವರು. ವಿರೋಧಿಗಳಿಗೆ ಪ್ರತೀಕಾರ ಎಸಗುವರು; ಶತ್ರುಗಳಿಗೆ ಸೇಡನ್ನು ತೀರಿಸುವರು. 19ಪೂರ್ವದಿಂದ ಪಶ್ಚಿಮದವರೆಗೆ ಎಲ್ಲರೂ ಸರ್ವೇಶ್ವರಸ್ವಾಮಿಯ ನಾಮಕ್ಕೆ ಹೆದರುವರು. ಅವರ ಘನತೆಗೆ ಅಂಜುವರು. ರಭಸದಿಂದ ನುಗ್ಗುವ ಪ್ರವಾಹದಂತೆಯೂ ವೇಗವಾಗಿ ಬೀಸುವ ಗಾಳಿಯಂತೆಯೂ ಸರ್ವೇಶ್ವರಸ್ವಾಮಿ ಬಂದೇ ಬರುವರು.

20 ಸರ್ವೇಶ್ವರಸ್ವಾಮಿ ಜನರಿಗೆ ಹೀಗೆನ್ನುತ್ತಾರೆ: "ಸಿಯೋನಿಗೆ ಹಾಗೂ ಪಾಪವನ್ನು ತೊರೆದು ಬಿಟ್ಟ ಯಕೋಬ್ಯರ ಬಳಿಗೆ ನಾನು ಉದ್ಧಾರಕನಾಗಿ ಬರುವೆನು. 21ಅವರೊಡನೆ ನಾನು ಮಾಡಿಕೊಳ್ಳುವ ಒಡಂಬಡಿಕೆ ಇದೇ: ನಿಮ್ಮ ಮೇಲೆ ನೆಲೆಸಿರುವ ನನ್ನ ಆತ್ಮವೂ ಮತ್ತು ನಿಮ್ಮ ಬಾಯಲ್ಲಿ ನಾನಿಟ್ಟಿರುವ ವಾಕ್ಯಗಳೂ ನಿಮ್ಮ ಬಾಯಿಂದಾಗಲಿ, ನಿಮ್ಮ ಸಂತತಿಯ ಬಾಯಿಂದಾಗಲಿ, ನಿಮ್ಮ ಸಂತತಿಯ ಸಂತಾನದ ಬಾಯಿಂದಾಗಲಿ, ಇಂದಿನಿಂದ ಎಂದಿಗೂ ತೊಲಗುವುದಿಲ್ಲ." ಇದು ಸರ್ವೇಶ್ವರಸ್ವಾಮಿಯ ನುಡಿ.

### ಜೆರುಸಲೇಮಿನ ಮುಂದಿನ ವೈಭವ

**60** ನಿನಗೆ ಬೆಳಕು ಬಂದಿದೆ
ಜೆರುಸಲೇಮೇ, ಏಳು, ಪ್ರಕಾಶಿಸು;
ನಿನ್ನ ಮೇಲೆ ಉದಯಿಸಿದೆ ಸರ್ವೇಶ್ವರನ
ತೇಜಸ್ಸು.
2 ಇಗೋ ಜಗತ್ತನು ಮುತ್ತಿದೆ ಕತ್ತಲು
ಜನಾಂಗಗಳನು ಆವರಿಸಿದೆ ಕಾರ್ಗತ್ತಲು.
ನಿನ್ನ ಮೇಲಾದರೋ ಉದಯಿಸುವನು
ಸರ್ವೇಶ್ವರನು
ನಿನ್ನಲ್ಲಿ ಗೋಚರವಾಗುವುದು ಆತನಾ
ತೇಜಸ್ಸು.
3 ರಾಷ್ಟ್ರಗಳು ಬರುವುವು ನಿನ್ನ ಬೆಳಕಿಗೆ
ಅರಸರು ನಿನ್ನ ಉದಯದ ಶೋಭೆಗೆ.
4 ನೀ ನೋಡು ಸುತ್ತಮುತ್ತಲ ಕಣ್ಣೆತ್ತಿ
ಬರುತಿಹರು ನಿನ್ನ ಮಕ್ಕಳೆಲ್ಲರು
ಗುಂಪಾಗಿ.
ದೂರದಿಂದ ಬರುತಿಹರು ಗಂಡುಮಕ್ಕಳು
ಕಂಕುಳಿನಲ್ಲಿ ಹೊತ್ತ ಆ ಹೆಣ್ಣುಮಕ್ಕಳು.
5 ಇದನ್ನು ನೋಡಿ ನೀ ಬೆಳಗುವೆ ಕಾಂತಿಯಿಂದ
ಉಬ್ಬುವುದು ನಿನ್ನ ಎದೆ ಆನಂದದಿಂದ.
ಹರಿಯುವುದು ನಿನ್ನೆಡೆಗೆ ಸಮುದ್ರ ವ್ಯಾಪಾರ
ಸಮೃದ್ಧಿ
ದೊರಕುವುದು ನಿನಗೆ ಅನ್ಯಜನಾಂಗಗಳ
ಆಸ್ತಿಪಾಸ್ತಿ.
6 ತುಂಬಿರುವುವು ನಿನ್ನೊಳು ಒಂಟೆಗಳ
ಗುಂಪುಗಳು

ಮಿದ್ಯಾನಿನ, ಏಫದ ಪ್ರಾಯದ
ಒಂಟೆಗಳು.
ಬರುವರೆಲ್ಲರು ಶೆಬದಿಂದ, ತರುವರು
ಬಂಗಾರ, ಧೂಪಗಳನು
ಸಾರುವರೆಲ್ಲರು ಸರ್ವೇಶ್ವರನ
ಸ್ತುತ್ಯಕಾರ್ಯಗಳನು.
7 ನಿನ್ನಲ್ಲಿ ಕೂಡುವುವು ಕೇದಾರಿನ ಸಕಲ
ಮಂದೆಗಳು
ಬಲಿಯರ್ಪಣೆಗೊದಗುವುವು
ನೆಬಾಯೋತಿನ ಟಗರುಗಳು.
ಏರುವುವು ನನಗೆ ಸಮರ್ಪಕವಾದ
ಹೋಮವಾಗಿ ಬಲಿಪೀಠವನು.
ಚಂದಗೊಳಿಸುವೆನು ನನ್ನ ಸುಂದರವಾದ
ಆಲಯವನು.
8 ಹಾರಿಬರುತ್ತಿರುವ ಇವರಾರು ಮೇಘಗಳಂತೆ?
ಗೂಡುಗಳಿಗೆ ತ್ವರೆಮಾಡುವ
ಪಾರಿವಾಳಗಳಂತೆ?
9 ನಿರೀಕ್ಷಿಸುತ್ತಿಹರು ನನ್ನನು ದೂರದ
ನಿವಾಸಿಗಳು
ಮುಂದಾಗಿ ಬರುತಿಹವು ತಾರ್ಷೀಷಿನ
ಹಡಗುಗಳು,
ನಿನ್ನ ದೇವರಾದ ಸರ್ವೇಶ್ವರನ
ಶ್ರೀನಾಮ ನಿಧಿಯಾದ ಇಲ್ಲಿಗೆ;
ನಿನ್ನ ಘನಪಡಿಸಿದ ಇಸ್ರಯೇಲಿನ
ಪರಮಪಾವನನ ಸನ್ನಿಧಿಗೆ.
ಹೊತ್ತು ತರುತಿಹರು ನಿನ್ನ ಮಕ್ಕಳನು
ಜೊತೆಗೆ ಅವರ ಬೆಳ್ಳಿಬಂಗಾರಗಳನು.
10 ಕಟ್ಟುವರು ವಿದೇಶಿಯರು ನಿನ್ನ
ಪೌಳಿಗೋಡೆಗಳನು
ಅರಸರು ಕೂಡ ಸಲ್ಲಿಸುವರು ನಿನಗೆ
ಸೇವೆಯನು.
ಶಿಕ್ಷಿಸಿದೆ ನಿನ್ನನ್ನು ಕೋಪದಿಂದ
ಆದರೆ, ಕರುಣಿಸುವೆನು ಕೃಪೆಯಿಂದ.
11 ತರುತ್ತಿಹರು ರಾಷ್ಟ್ರಗಳ ಆಸ್ತಿಯನ್ನು
ನಿನ್ನಲ್ಲಿಗೆ
ಬರುತಿಹರು ಅವುಗಳ ಅರಸರು
ಮೆರವಣಿಗೆಯೊಂದಿಗೆ.
ನಿನ್ನ ದ್ವಾರಗಳು ತೆರೆದಿರುವುವು ಹಗಲಿರುಳು
ಮುಚ್ಚದೆ.
12 ನಾಶವಾಗುವುವು ನಿನ್ನ ಸೇವೆಮಾಡಲೊಲ್ಲದ

ರಾಜ್ಯಗಳು, ಜನಾಂಗಗಳು;
ಹೌದು, ಸಂಪೂರ್ಣವಾಗಿ ಹಾಳಾಗುವುವು ಆ
ಜನಾಂಗಗಳು.
13 ಬರುವುದು ನಿನ್ನಲ್ಲಿಗೆ ಲೆಬನೋನಿನ
ವೈಭವವು
ಅದರ ತುರಾಯಿ, ಅಗಸೆ, ತಿಲಕ
ಈ ಮರಗಳಾವುವು.
ಅಲಂಕರಿಸುವುವು ನನ್ನ ಪವಿತ್ರಾಲಯವನು
ಮಹಿಮೆಪಡಿಸುವೆನು ನನ್ನ ಪಾದಪೀಠದ
ಮಂದಿರವನು.
14 ನಿನ್ನ ತುಳಿದವರ ಸಂತಾನ ಬರುವುದು
ನಿನ್ನ ಬಳಿಗೆ ತಲೆಬಾಗಿ
ನಿನ್ನ ಬೇಡವೆಂದವರು ಬೀಳುವರು ಕಾಲಿಗೆ
ಸಾಷ್ಟಾಂಗವಾಗಿ.
ಹೊಗಳುವರು 'ನೀನೇ ಸರ್ವೇಶ್ವರನ
ನಗರವೆಂದು,
ಇಸ್ರಯೇಲಿನ ಪರಮಪಾವನ ಸಿಯೋನ್'
ಎಂದು.
15 ಪರಿತ್ಯಕ್ತಳೂ ದ್ವೇಷಿತಳೂ ಆದ ನಿರ್ಜನ
ನಗರಿಯೇ,
ನಿತ್ಯಘನತೆಯನ್ನು, ಶಾಶ್ವತ ಸಂತೋಷವನು
ನೀಡುವೆ ನಿನಗೆ.
16 ಮೊಲೆಯೂಡಿಸುವರು ಜನಾಧಿಪತಿಗಳು
ನಿನಗೆ
ಮೊಲೆಗೂಸಾಗುವೆ ನೀನು ಜನಾಂಗಗಳಿಗೆ.
ಆಗ ತಿಳಿಯುವೆ ನಿನ್ನನುದ್ಧರಿಸಿದ ಸರ್ವೇಶ್ವರ
ನಾನೆಂದು
ನಿನ್ನ ವಿಮೋಚಕನು, ಯಕೋಬ್ಯರ
ಪರಾಕ್ರಮಿಯು ನಾನೆಂದು.
17 ಒದಗಿಸುವೆ ನಿನಗೆ ಮರವಿದ್ದಲ್ಲಿ ತಾಮ್ರವನು
ಹಿತ್ತಾಳೆಗೆ ಬದಲಾಗಿ ಬಂಗಾರವನು
ಕಬ್ಬಿಣಕ್ಕೆ ಪ್ರತಿಯಾಗಿ ಬೆಳ್ಳಿಯನು
ಕಲ್ಲುಗಳ ಸ್ಥಾನದಲ್ಲಿ ಕಬ್ಬಿಣವನು
ಮಾಡುವೆ ಶಾಂತಿಯನ್ನೇ ನಿನಗೆ
ಅಧಿಪತಿಯನ್ನಾಗಿ
ಸದ್ಧರ್ಮವನ್ನೇ ನಿನಗೆ
ಅಧಿಕಾರಿಯನ್ನಾಗಿ.
18 ಬಲಾತ್ಕಾರದ ಸುದ್ದಿಯೇ ಕಿವಿಗೆ ಬೀಳದು
ನಿನ್ನ ದೇಶದಲಿ
ನಾಶವಿನಾಶಗಳ ವಾರ್ತೆಯೇ ಕೇಳಿಬರದು

ನಿನ್ನ ಪ್ರಾಂತ್ಯಗಳಲಿ.
ಆಗ ಹೆಸರಿಡುವೆ ನಿನ್ನ ಪೌಳಿಗೋಡೆಗೆ
'ದೈವಮುಕ್ತಿ' ಎಂದು
ನಿನ್ನೀ ಪುರದ್ವಾರಗಳಿಗೆ 'ದೈವಸ್ತುತಿ' ಎಂದು.
19 ನಿನಗಿನ್ನು ಬೇಕಾಗಿಲ್ಲ ಸೂರ್ಯನ ಬೆಳಕು
ಹಗಲೊಳು
ನಿನಗೆಂದಿಗೂ ಬೇಕಾಗಿಲ್ಲ ಚಂದ್ರನ ಬೆಳಕು
ಇರುಳೊಳು.
ನಿನಗೆ ನಿತ್ಯಪ್ರಕಾಶ ಸರ್ವೇಶ್ವರನೆ,
ನಿನ್ನ ಬೆಳಗುವ ತೇಜಸ್ಸು ನಿನ್ನ ದೇವನೆ.
20 ನಿನ್ನ ಸೂರ್ಯನು ಇನ್ನು ತೊಲಗನು.
ನಿನ್ನ ಚಂದ್ರನು ಬಿಟ್ಟು ತೊಲಗನು.
ಸರ್ವೇಶ್ವರನೇ ನಿನಗೆ ನಿತ್ಯಜ್ಯೋತಿ
ನಿನ್ನ ದುಃಖ ದಿನಗಳಿಗಿದೆ ಸಮಾಪ್ತಿ.
21 ಸದ್ಧರ್ಮಿಗಳಾಗಿರುವರು ನಿನ್ನ ಜನರೆಲ್ಲರು
ಆಗುವರವರು ನಾಡಿಗೆ ಶಾಶ್ವತ
ಬಾಧ್ಯಸ್ಥರು
ನನ್ನ ಮಹಿಮೆಗಾಗಿ ನಾ ನೆಟ್ಟ ಸಸಿಗಳವರು
ನನ್ನ ಕೈಗಳು ಸೃಷ್ಟಿಸಿದ ಪ್ರಜೆಗಳವರು.
22 ದೊಡ್ಡ ಕುಲವಾಗಿಸುವೆನು ಚಿಕ್ಕವನಿಂದ
ಬಲಿಷ್ಠ ರಾಷ್ಟ್ರವಾಗಿಸುವೆನು
ದುರ್ಬಲನಿಂದ.
ಸಾಧಿಸುವೆನು ಇದನು ಕ್ಲುಪ್ತಕಾಲದೊಳು
ಸರ್ವೇಶ್ವರನಾದ ನಾನು, ಶೀಘ್ರದೊಳು.

### ಸಿಯೋನಿಗೆ ಜೀವೋದ್ಧಾರ

**61** ನನ್ನ ಮೇಲಿದೆ ಸರ್ವೇಶ್ವರ
ಸ್ವಾಮಿಯ ಆತ್ಮ;
ನನಗೆ ಅಭಿಷೇಕಮಾಡಿ,
ಕಳುಹಿಸಿಹನು ಆತ:
ದೀನದಲಿತರಿಗೆ ಶುಭಸಂದೇಶ
ಬೋಧಿಸಲೆಂದೆ
ಮನನೊಂದವರನು ಸಂತೈಸಿ
ಗುಣಪಡಿಸಲೆಂದೆ
ಬಂಧಿತರಿಗೆ ಬಿಡುಗಡೆಯನು
ಪ್ರಕಟಿಸಲೆಂದೆ;
ಸೆರೆಯಾಳುಗಳಿಗೆ
ಬಂಧವಿಮುಕ್ತಿಯಾಗುವುದನು,
2 ಸರ್ವೇಶ್ವರಸ್ವಾಮಿಯ ಅನುಗ್ರಹದ

ವರುಷವನು,
ನಮ್ಮ ದೇವರು ಮುಯ್ಯಿತೀರಿಸುವಾ
ದಿನವನು ಘೋಷಿಸಲೆಂದೆ.
3 ದುಃಖಿತರೆಲ್ಲರಿಗೆ ಸಾಂತ್ವನ ಸಾರಲೆಂದೇ
ಕಳುಹಿಸಿದನಾತ ನನ್ನನು.
ಸಿಯೋನಿನ ಶೋಕಾರ್ತರಿಗೆ
ಬರಿಬೂದಿಗೆ ಬದಲು ಶಿರೋಭೂಷಣ,
ದುಃಖತಾಪದ ಬದಲು ಆನಂದ ತೈಲ,
ಸೊರಗಿದ್ದ ಮನಕೆ ಮೆಚ್ಚಿಕೆಯ ಮೇಲ್ವಸ್ತ್ರ
ಒದಗಿಸಲೆಂದೇ ನನ್ನನು ಕಳುಹಿಸಿದನಾತ.
ನೆಟ್ಟಿಹನು ಇವರನು ಸರ್ವೇಶ್ವರ ತನ್ನ
ಮಹಿಮೆಯಾಗಿ
ಹೆಸರ ಪಡೆವರಿವರು 'ನೀತಿವೃಕ್ಷ'
ಗಳೆಂಬುದಾಗಿ.
4 ಮರಳಿ ಕಟ್ಟುವರಿವರು ಪಾಳುಬಿದ್ದ
ಪುರಾತನ ಮನೆಗಳನು
ಮತ್ತೆ ಎಬ್ಬಿಸುವರು ಬಿದ್ದ ಹಳೆಯ
ಕಟ್ಟಡಗಳನು
ನೂತನಗೊಳಿಸುವರು ತಲಾಂತರದ
ಹಾಳುಬೀಳು ಪಟ್ಟಣಗಳನು.
5 ವಿದೇಶಿಯರು, ಮಂದೆ
ಕಾವಲುಗಾರರಾಗುವರು ನಿಮಗೆ
ಅನ್ಯ ಜನರು ಉಳುವವರೂ
ತೋಟಗಾರರಾಗುವರೂ ನಿಮಗೆ.
6 "ಸರ್ವೇಶ್ವರನ ಯಾಜಕರು" ಎಂಬ ಬಿರುದು
ನಿಮ್ಮದಾಗುವುದು
"ನಮ್ಮ ದೇವರ ಪರಿಚಾರಕರು" ಎಂಬ
ಹೆಸರು ನಿಮಗೆ ಬರುವುದು.
ಅನುಭವಿಸುವಿರಿ ಅನ್ಯರಾಷ್ಟ್ರಗಳ ಸಂಪತ್ತನ್ನು
ಹೆಮ್ಮೆ ಪಡುವಿರಿ ಆ ಸಿರಿ
ನಿಮ್ಮದಾಯಿತೆಂದು.
7 ಸಿಗುವುದು ನಿಮಗಾದ ಅವಮಾನಕೆ ಇಮ್ಮಡಿ
ಹಿರಿತನ
ಆದ ತಿರಸ್ಕಾರಕೆ ಪ್ರತಿಯಾಗಿ ಸಂತಸ ಸಿರಿತನ.
ದ್ವಿಗುಣವಾಗುವುದು ನಿಮಗೆ ನಾಡಿನ
ಸಂಪದ
ಅನಂತಕಾಲಕ್ಕು ನಿಮಗಿರುವುದು ಆನಂದ.
8 "ಸರ್ವೇಶ್ವರ ಆದ ನಾನು ನ್ಯಾಯಪ್ರಿಯ.
ಸುಲಿಗೆ ಅನ್ಯಾಯ, ನನಗೆ ಅಸಹ್ಯ.
ಪ್ರಾಮಾಣಿಕವಾಗಿ ನೀಡುವೆನು ಇವರಿಗೆ

ಪ್ರತಿಫಲ
ಮಾಡಿಕೊಳ್ಳುವೆನು ಇವರೊಡನೆ
ಅಳಿಯದ ಒಪ್ಪಂದ.
9 ಪ್ರಖ್ಯಾತವಾಗುವುದು ಇವರ ಸಂತಾನ
ವಿಶ್ವದಲ್ಲೆಲ್ಲ
ಹೆಸರುವಾಸಿಯಾಗುವುದು ಇವರ ಸಂತತಿ
ಅನ್ಯರಾಷ್ಟ್ರಗಳಲ್ಲೆಲ್ಲ.
ಲಭಿಸುವುದು ಸರ್ವೇಶ್ವರನ ಆಶೀರ್ವಾದ
ಈ ಜನತೆಗೆ
ಖಚಿತವಾಗುವುದಿದು
ನೋಡುವವರೆಲ್ಲರಿಗೆ."
10 ನಾನು ಪಡೆಯುವೆ ಸರ್ವೇಶ್ವರನಲ್ಲಿ
ಪರಮಾನಂದ
ಹಿರಿಹಿಗ್ಗುವುದು ನನ್ನ ದೇವರಲಿ ನನ್ನಾತ್ಮ.
ಮದುವಣಿಗನಿಗೆ ಬಾಸಿಂಗವನು
ತೊಡಿಸುವಂತೆ
ವಧುವಿಗೆ ಆಭರಣಗಳಿಂದ
ಅಲಂಕರಿಸುವಂತೆ
ಹೊದಿಸಿಹನಾತ ನನಗೆ ಮುಕ್ತಿಯೆಂಬ
ವಸ್ತ್ರವನು
ತೊಡಿಸಿಹನು ನನಗೆ ನೀತಿಯೆಂಬ
ನಿಲುವಂಗಿಯನು.
11 ಬುವಿಯು ತನ್ನಿಂದ ಬೀಜವನು
ಮೊಳೆಯಿಸುವಂತೆ
ತೋಟವು ತನ್ನೊಳು ಸಸಿಯನು ಬೆಳೆಸುವಂತೆ
ಸ್ವಾಮಿ ಸರ್ವೇಶ್ವರ, ಸಮಸ್ತ ರಾಷ್ಟ್ರಗಳ
ಮುಂದೆ
ವೃದ್ಧಿಗೊಳಿಸುವನು ಸದ್ಧರ್ಮವನೆ,
ಸ್ತುತಿಸ್ತೋತ್ರವನೆ.

**62** ಸಿಯೋನಿನ ಸದ್ಧರ್ಮವು
ಪ್ರಕಾಶಗೊಳ್ಳುವತನಕ
ಜೆರುಸಲೇಮಿನ ಉದ್ಧಾರ ದೀಪವು
ಬೆಳಗುವತನಕ
ಸುಮ್ಮನಿರೆನು ನಾನು ಸಿಯೋನಿನ
ಹಿತವನ್ನು ಲಕ್ಷಿಸದೆ,
ಮೌನವಿರೆನು ಜೆರುಸಲೇಮಿನ
ಸುಕ್ಷೇಮವನು ಚಿಂತಿಸದೆ.
2 ನೋಡುವರು ಜನಾಂಗಗಳು ನಿನ್ನ

ಸದ್ಧರ್ಮವನು
ಕಾಣುವರು ಸಕಲ ರಾಜರು ನಿನ್ನ ವೈಭವವನು
ಪಡೆಯುವೆ ನೀನು ಸರ್ವೇಶ್ವರನೇ ಕೊಟ್ಟ
ಹೊಸ ಹೆಸರನು.
3 ಸರ್ವೇಶ್ವರನ ಕೈಯಲ್ಲಿ ನೀನು ಸುಂದರ
ಕಿರೀಟವಾಗಿ
ಮೆರೆಯುವೆ ನಿನ್ನ ದೇವರ ಹಸ್ತದಲ್ಲಿ
ರಾಜ ಮುಕುಟವಾಗಿ;
4 "ಎನ್ನ ಮನದನ್ನೆ" ಎನಿಸಿಕೊಳ್ಳುವೆ ನೀನು
"ಸುವಿವಾಹಿತೆ" ಎನಿಸಿಕೊಳ್ಳುವುದು
ನಿನ್ನ ನಾಡು.
ನಿನ್ನಲ್ಲಿದೆ ಉಲ್ಲಾಸ ಸರ್ವೇಶ್ವರನಿಗೆ
ವಿವಾಹವಾಗುವುದಿದೆ ನಿನ್ನ ನಾಡಿಗೆ.
5 ಯುವಕನು ಕನ್ಯೆಯುವತಿಯನು ವರಿಸುವಂತೆ
ವರಿಸುವನು ಸೃಷ್ಟಿಕರ್ತನು ನಿನ್ನನು.
ವರನು ವಧುವಿನಲಿ ಆನಂದಿಸುವಂತೆ
ನಿನ್ನಲಿ ಆನಂದಿಸುವನು ನಿನ್ನ ದೇವನು.
6 ಜೆರುಸಲೇಮ್, ಕಾವಲಿಟ್ಟಿರುವೆ ನಿನ್ನ ಗೋಡೆ
ಸುತ್ತಲು
ಮೌನವಿರಕೂಡದು ಆ ಕಾವಲಿಗರು
ಹಗಲಿರುಳು.
7 ಜೆರುಸಲೇಮನ್ನು ಭದ್ರಪಡಿಸಿ ಲೋಕಪ್ರಸಿದ್ಧಿಗೆ
ತರುವತನಕ
ನೆನಪಿಸುತ್ತಿರಬೇಕು ಭದ್ರಪಡಿಸಿ
ಲೋಕಪ್ರಸಿದ್ಧಿಗೆ ತರುವತನಕ
ನಿಮಗಿರದಿರಲಿ ವಿಶ್ರಾಂತಿ, ಆತನಿಗೂ
ಕೊಡದಿರಿ ವಿರಾಮ.
8 ತನ್ನ ಬಲಗೈ ಮೇಲೆ, ಭುಜಬಲದ ಮೇಲೆ
ಸರ್ವೇಶ್ವರನಿಟ್ಟ ಆಣೆ:
"ಕೊಡೆನಿನ್ನು ನಿನ್ನ ದವಸಧಾನ್ಯವನು
ಶತ್ರುಗಳ ಆಹಾರಕ್ಕೆ
ನಿನ್ನ ದುಡಿಮೆಯ ದ್ರಾಕ್ಷಾರಸವನು
ಅನ್ಯಜನರು ಕುಡಿಯಲಿಕ್ಕೆ.
9 ಬೆಳೆಮಾಡಿದವರೇ ಕಾಳನು ತಿಂದು
ಸ್ತುತಿಸುವರು ಸರ್ವೇಶ್ವರನನು;
ದ್ರಾಕ್ಷಿ ಕಿತ್ತವರೇ ಕುಡಿವರು ಈ ರಸವನು
ನನ್ನಾಲಯದ ಅಂಗಳದೊಳು."
10 ಹೊರಟು ಬನ್ನಿ, ಹಾದು ಬನ್ನಿ, ಪುರದ್ವಾರವನು
ಬರಲಿರುವ ಜನರಿಗೆ ಸರಿಮಾಡಿರಿ
ಹಾದಿಯನು

ಎತ್ತರಿಸಿ ಹೆದ್ದಾರಿಯನು, ತೆಗೆದುಹಾಕಿ
ಕಲ್ಲುಗಳನು
ಹಾರಿಸಿ ಧ್ವಜವನು, ನೀಡಿ ರಾಷ್ಟ್ರಗಳಿಗೆ
ಸೂಚನೆಯನು.
11 ಇಗೋ, ಸಮೀಪಿಸುತ್ತಿದೆ ನೀವು
ಮುಕ್ತಿಹೊಂದುವದಿನ
ಆತನೊಂದಿಗಿದೆ ಆತ ನೀಡುವ ಬಹುಮಾನ
ಆತನ ಮುಂದಿದೆ ಆತ ಗಳಿಸಿದ ವರಮಾನ.
ಇದನು ತಿಳಿಯಹೇಳಿರಿ ಸಿಯೋನೆಂಬಾಕೆಗೆ
ಸರ್ವೇಶ್ವರನ ಆಜ್ಞೆಯಿದು ಜಗದ
ದಿಗಂತದವರೆಗೆ.
12 'ಪವಿತ್ರ ಪ್ರಜೆ' ಎನಿಸಿಕೊಳ್ಳುವುದು ನಿಮ್ಮ
ಜನತೆ
'ಸರ್ವೇಶ್ವರಸ್ವಾಮಿಯೇ ಉದ್ಧರಿಸಿದ ಜನತೆ'.
ನಿನ್ನ ಹೆಸರೋ, 'ಪ್ರಾಪ್ತ ನಗರಿ' ಪತಿ ವರಿಸಿ
ಕೈ ಬಿಡದ ಪುರಿ.

**ರಾಷ್ಟ್ರಗಳ ಮೇಲೆ ವಿಜಯ**

**63** "ಎದೋಮಿನ ಬೊಚ್ರನಗರದಿಂದ ಬರುವ ಈತನು ಯಾರು? ರಕ್ತ ಗೆಂಪಾದ ಉಡುಪನ್ನುಟ್ಟು ಥಳಥಳಿಸುವ ವಸ್ತ್ರಗಳನ್ನು ಧರಿಸಿಕೊಂಡು, ಮಹಾಶೌರ್ಯದಿಂದ ಮೆರೆಯುತ್ತಾ ನಡೆದುಬರುವ ಈತನು ಯಾರು? "ಆತನು ನಾನೇ, ಸತ್ಯವನು ಘೋಷಿಸುವವನು, ಆತನು ನಾನೇ, ಉದ್ಧರಿಸಲು ಸಮರ್ಥನು".

2 ನಿನ್ನ ಉಡುಪೇತಕೆ ಕೆಂಪಗಿದೆ? ನಿನ್ನ ಬಟ್ಟೆಗಳೇಕೆ ದ್ರಾಕ್ಷೆಯನು ತುಳಿಯುವವನ ಬಟ್ಟೆಯ ಹಾಗಿದೆ?

3 "ದ್ರಾಕ್ಷಿಹಣ್ಣನು ತುಳಿವಂತೆ
ತುಳಿದಿದ್ದೇನೆ ರಾಷ್ಟ್ರಗಳನು ಒಬ್ಬಂಟಿಗನಾಗೇ
ಯಾರು ಇರಲಿಲ್ಲ ನನಗೆ ಸಹಾಯಕ್ಕೆ.
ಅವರನ್ನು ತುಳಿದೆ ಕೋಪದಿಂದ
ರೋಷಾವೇಶದಿಂದ ಹೊಸಕಿದೆ ಕಾಲಿನಿಂದ.
ಅವರ ರಕ್ತ ನನ್ನ ಬಟ್ಟೆಗಳ ಮೇಲೆ ಸಿಡಿದಿದೆ.
ನನ್ನ ಉಡುಪಿಗೆಲ್ಲಾ ಆ ಬಿಸಿರಕ್ತ
ಮೆತ್ತಿಕೊಂಡಿದೆ.
4 ಏಕೆಂದರೆ, ನನ್ನ ಜನರನು ಉದ್ಧರಿಸುವ
ವರುಷವು ಬಂದಿತ್ತು
ಮುಯ್ಯಿತೀರಿಸುವ ದಿನವು ನನ್ನ ಮನದಲ್ಲಿ
ನಿಶ್ಚಿತವಾಗಿತ್ತು.
5 ಸುತ್ತಲು ನೋಡಿದೆ, ಯಾರು ಇರಲಿಲ್ಲ
ಸಹಾಯ ಮಾಡಲು ನನಗೆ
ಒತ್ತಾಸೆಗೆ ಒಬ್ಬನೂ ಇಲ್ಲದ್ದನ್ನು ಕಂಡು
ಸ್ತಬ್ಧನಾದೆ.

ಆಗ ನನ್ನ ಭುಜಬಲವೇ ಜಯಕ್ಕೆ
ಅಡಿಪಾಯವಾಯಿತು.
6 ರಾಷ್ಟ್ರಗಳನು ತುಳಿದೆ ಕುಪಿತನಾಗಿ
ಅವುಗಳನು ನುಚ್ಚುನೂರುಮಾಡಿದೆ
ರೋಷಾವಿಷ್ಟನಾಗಿ
ಅವುಗಳ ರಕ್ತವನು ನೆಲದಲಿ ಹರಿಸಿದೆ
ಪ್ರವಾಹವಾಗಿ.
7 ಸ್ಮರಿಸುವೆನು ಸರ್ವೇಶ್ವರನ
ಸ್ತುತ್ಯಕಾರ್ಯಗಳನು
ಆತನ ಅಚಲಪ್ರೀತಿಯನು,
ಕೃಪಾತಿಶಯಗಳನು.
ಹೊಗಳುವೆನು ಆತನೆಮಗೆ ಅನುಗ್ರಹಿಸಿದ
ಎಲ್ಲ ವರದಾನಗಳಿಗಾಗಿ
ಇಸ್ರಯೇಲ್ ವಂಶಜರಿಗೆ ಮಾಡಿದ
ಮಹೋಪಕಾರಗಳಿಗಾಗಿ.

8 "ನಿಜವಾಗಿ ಇವರು ನನ್ನ ಜನ, ನನ್ನ ಮಕ್ಕಳು, ನನಗೆ ಮೋಸಮಾಡರು," ಎಂದುಕೊಂಡರು
ಸರ್ವೇಶ್ವರಸ್ವಾಮಿ. 9ಆ ಜನರ ಕಷ್ಟ ದುಃಖಗಳಲ್ಲಿ ಸಂರಕ್ಷಿಸಿದರು. ದಯೆಯಿಂದಲೂ ಪ್ರೀತಿಯಿಂದಲೂ
ಅವರಿಗೆ ಬಿಡುಗಡೆ ನೀಡಿದರು. ಪುರಾತನ ಕಾಲದಲ್ಲೆಲ್ಲಾ ಅವರನ್ನು ಎತ್ತಿ ಹೊತ್ತು ಆದರಿಸಿದರು.
10ಅವರಾದರೋ ಬಂಡಾಯವೆದ್ದರು; ಸ್ವಾಮಿಯ ಪವಿತ್ರಾತ್ಮನನ್ನು ದುಃಖಪಡಿಸಿದರು. ಎಂತಲೇ ಸರ್ವೇಶ್ವರ
ಅವರಿಗೆ ಶತ್ರುವಾಗಿ ಮಾರ್ಪಟ್ಟರು, ತಾವೇ ಅವರಿಗೆ ವಿರುದ್ಧವಾಗಿ ಹೋರಾಡಿದರು.

11 ಆಗ ಆ ಜನರು ಪುರಾತನ ಮೋಶೆಯ ಕಾಲವನ್ನು ನೆನಪಿಗೆ ತಂದುಕೊಂಡು ಹೀಗೆಂದರು:
"ತನ್ನ ಜನರೆಂಬ ಮಂದೆಯನ್ನು, ಅದರ ಕುರುಬನ ಸಮೇತ ಸಮುದ್ರದಿಂದ ಸುರಕ್ಷಿತವಾಗಿ ಬರಮಾಡಿದ
ಸ್ವಾಮಿ ಎಲ್ಲಿ? ಆ ಜನರಿಗೆ ತಮ್ಮ ಪವಿತ್ರಾತ್ಮನನ್ನು ಪ್ರದಾನಮಾಡಿದ ಸ್ವಾಮಿ ಎಲ್ಲಿ? 12ಮೋಶೆಯ ಬಲಗೈಗೆ
ತಮ್ಮ ಮಹಿಮಾ ಭುಜಬಲವನ್ನು ನೀಡಿದ ಸ್ವಾಮಿ ಎಲ್ಲಿ? ಆತನ ಕೈಯಿಂದ ಜಲರಾಶಿಯನ್ನು ಆ ಜನರ
ಕಣ್ಮುಂದೆ ಇಬ್ಭಾಗಿಸಿದ ಸ್ವಾಮಿ ಎಲ್ಲಿ? ಹೀಗೆ ತಮ್ಮ ಹೆಸರನ್ನು ಶಾಶ್ವತವಾಗಿಸಿಕೊಂಡ ಸ್ವಾಮಿ ಎಲ್ಲಿ?
13ಬಯಲಿನಲ್ಲಿ ಸರಾಗವಾಗಿ ನಡೆವ ಕುದುರೆಯಂತೆ ಆ ಜನರನ್ನು ಜಲದಮೇಲೆ ನಡೆಸಿದ ಸ್ವಾಮಿ ಎಲ್ಲಿ?

14 ತಪ್ಪಲಿಗೆ ಇಳಿದ ದನಕರುಗಳಂತೆ ಆ ಜನರನ್ನು ಕರೆತಂದಿತು ಸ್ವಾಮಿಯ ಆತ್ಮ ಶಾಂತಿ ನಿಲಯಕೆ.
ಹೀಗೆ, ಆ ಜನರಿಗೆ ಮಾರ್ಗದರ್ಶಕರಾಗಿ ತಮ್ಮ ನಾಮವನ್ನು ಘನಪಡಿಸಿಕೊಂಡರು ಸ್ವಾಮಿ.

### ಸಹಾಯಕ್ಕಾಗಿ ಪ್ರಾರ್ಥನೆ

15 ಸ್ವಾಮಿ ಸರ್ವೇಶ್ವರಾ, ಆಕಾಶದಿಂದ ನಮ್ಮನು ಈಕ್ಷಿಸಿನೋಡಿ; ಪರಿಶುದ್ಧವೂ ಪೂಜ್ಯವೂ ಆದ
ನಿಮ್ಮ ನಿವಾಸದಿಂದ ವೀಕ್ಷಿಸಿ ನೋಡಿ. ನಿಮ್ಮ ಹುರುಪು ಉತ್ಸಾಹವೆಲ್ಲಿ? ನಿಮ್ಮ ಸಾಹಸಕಾರ್ಯಗಳು
ಏನಾದುವು? ನಮ್ಮಿಂದ ಬಿಗಿ ಹಿಡಿದಿರುವಿರಾ ನಿಮ್ಮ ಕನಿಕರವನು? ನಿಮ್ಮ ಕರುಳ ಕರೆಯನು? 16ನೀವೇ
ನಮ್ಮ ತಂದೆ. ಅಬ್ರಹಾಮನು ನಮ್ಮನ್ನು ಅರಿಯದೆ ಇರಬಹುದು, ಇಸ್ರಯೇಲನು ನಮ್ಮನ್ನು ಗುರುತಿಸದೆ
ಇರಬಹುದು, ಆದರೆ ಸರ್ವೇಶ್ವರಾ, ನೀವೇ ನಮ್ಮ ತಂದೆ, ನಮ್ಮ ಉದ್ಧಾರಕ; ಆದಿಯಿಂದ ಇರಲು ಅದುವೇ
ನಿಮ್ಮ ನಾಮಾಂಕಿತ. 17ಸ್ವಾಮೀ, ನಾವು ನಿಮ್ಮ ಮಾರ್ಗ ತಪ್ಪಿ ಅಲೆಯುವಂತೆ ಮಾಡುತ್ತೀರಿ, ಏಕೆ? ನಿಮಗೆ
ಭಯಪಡದ ಹಾಗೆ ನಮ್ಮ ಹೃದಯವನ್ನು ಕಠಿಣ ಪಡಿಸುವುದು ಏಕೆ? ನಿಮ್ಮ ಶರಣರ ನಿಮಿತ್ತ, ನಿಮಗೆ
ಬಾಧ್ಯರಾದ ಕುಲಗಳ ನಿಮಿತ್ತ, ನಮಗೆ ಪ್ರಸನ್ನಚಿತ್ತರಾಗಿರಿ.

18 ನಿಮ್ಮ ಸ್ವಕೀಯ ಜನರು ಸ್ವಲ್ಪಕಾಲ ಮಾತ್ರ ಅನುಭವಿಸಿದಾ ನಿಮ್ಮ ಪವಿತ್ರ ಗರ್ಭಗುಡಿಯನ್ನು
ನಮ್ಮ ವೈರಿಗಳು ತುಳಿದು ಹಾಳು ಮಾಡಿದರಲ್ಲಾ! 19ನಾವಾದರೋ, ನಿಮ್ಮ ದೊರೆತನಕ್ಕೆ ಎಂದಿಗೂ
ಒಳಗಾಗದ, ನಿಮ್ಮ ನಾಮವನ್ನು ಧರಿಸದ, ಪರಕೀಯರಂತೆ ಆಗಿದ್ದೇವಲ್ಲಾ!

**64** (ಸ್ವಾಮೀ) ಆಕಾಶವನ್ನು ಸೀಳಿ ಇಳಿದು ಬರಲಾರಿರಾ? ನಿಮ್ಮ ದರ್ಶನವನ್ನು ಕಂಡು ಬೆಟ್ಟಗುಡ್ಡಗಳು
ಗಡಗಡನೆ ನಡುಗಬಾರದೆ? 2ಒಣಗಿಡಕ್ಕೆ ಹಚ್ಚುವ ಕಿಚ್ಚಿನಂತೆ, ನೀರನ್ನು ಕುದಿಸುವ ಬೆಂಕಿಯಂತೆ ನೀವು
ಪ್ರತ್ಯಕ್ಷರಾಗಲಾರಿರಾ? 3ನಮ್ಮ ನಿರೀಕ್ಷೆಗೆ ಮೀರಿದ ಮಹತ್ಕಾರ್ಯಗಳನ್ನು ನಡೆಸಿ, ನಿಮ್ಮ ನಾಮ
ಮಹಿಮೆಯನ್ನು ನಿಮ್ಮ ಶತ್ರುಗಳಿಗೆ ಪ್ರದರ್ಶಿಸಿ, ಅನ್ಯರಾಷ್ಟ್ರಗಳನ್ನು ನಡುಗಿಸಲಾರಿರಾ? ಹೌದು, ನೀವು
ಇಳಿದುಬಂದು, ಬೆಟ್ಟಗುಡ್ಡಗಳು ನಡುಗಿದರೆ ಎಷ್ಟೋ ಲೇಸು. 4ತಮ್ಮನ್ನು ಕಾದು ಎದುರು ನೋಡುವವರ
ಪರವಾಗಿ ಕಾರ್ಯಗತರಾಗುವಂಥ ದೇವರು, ನಿಮ್ಮನ್ನು ಬಿಟ್ಟರೆ, ಯಾರಿದ್ದಾರೆ? ಅಂಥಾ ದೇವರನ್ನು
ಲೋಕಾದಿಯಿಂದ ಯಾರೂ ಕಂಡಿಲ್ಲ, ಅಂಥವರು ಯಾರ ಕಿವಿಗೂ ಬೀಳಲಿಲ್ಲ. ಯಾವ ಕಣ್ಣಿಗೂ
ಕಾಣಿಸಲಿಲ್ಲ. 5ಸದಾಚಾರದಲ್ಲೇ ಸಂತೋಷಪಡುತ್ತಾ, ನಿಮ್ಮ ಮಾರ್ಗದಲ್ಲಿ ನಡೆಯುತ್ತಾ, ನಿಮ್ಮನ್ನು ಸ್ಮರಿಸುತ್ತಾ
ಬಂದವರಿಗೆ ಪ್ರತ್ಯಕ್ಷರಾಗುತ್ತೀರಿ. ನಮ್ಮ ಮೇಲಾದರೋ ಕೋಪಗೊಂಡಿರಿ. ಆದರೂ ನಾವು ಪಾಪದಲ್ಲೇ
ಮುನ್ನಡೆದೆವು. ಬಹುಕಾಲದಿಂದ ಪಾಪದಲ್ಲಿ ಮುಳುಗಿಹೋದೆವು. ನಮ್ಮಂಥವರಿಗೆ ರಕ್ಷಣೆ ಇದೆಯೇ?
6ನಾವೆಲ್ಲರೂ ಅಶುದ್ಧರು, ನಮ್ಮ ಸತ್ಕಾರ್ಯಗಳೆಲ್ಲ ಕೊಳಕು, ತರಗೆಲೆಯಂತೆ ಒಣಗಿ ಹೋಗಿದ್ದೇವೆ.
ಬಿರುಗಾಳಿಯಂತೆ ನಮ್ಮನ್ನು ತಳ್ಳಿಕೊಂಡು ಬಂದಿವೆ, ನಮ್ಮ ಅಪರಾಧಗಳು. 7ನಿಮ್ಮ ನಾಮಸ್ಮರಣೆ
ಮಾಡುವವನು ಯಾರೂ ಇಲ್ಲ. ನಿಮ್ಮ ಆಶ್ರಯ ಕೋರುವ ಆಸಕ್ತನು ಎಲ್ಲಿಯೂ ಇಲ್ಲ. ಏಕೆಂದರೆ ನೀವು
ನಮಗೆ ವಿಮುಖರಾಗಿದ್ದೀರಿ. ನಮ್ಮ ಪಾಪಗಳ ವಶಕ್ಕೆ ನಮ್ಮನ್ನು ಬಿಟ್ಟುಬಿಟ್ಟಿದ್ದೀರಿ.

8 ಆದರೂ ಸ್ವಾಮಿ ಸರ್ವೇಶ್ವರಾ, ನೀವು ನಮ್ಮ ತಂದೆ. ನಾವು ಜೇಡಿಮಣ್ಣು, ನೀವೇ ಕುಂಬಾರ;
ನಾವೆಲ್ಲರು ನಿಮ್ಮ ಕೈಯ ಕೃತಿಗಳು. 9ಸ್ವಾಮಿ, ನಮ್ಮ ಮೇಲೆ ಅತಿಕೋಪಗೊಳ್ಳದಿರಿ. ಸದಾ ನಮ್ಮ
ಅಕ್ರಮಗಳನ್ನು ನೆನೆಸದಿರಿ, ಇಗೋ ನೋಡಿ, ಬೇಡುತ್ತಿದ್ದೇವೆ, ನಾವೆಲ್ಲರೂ ನಿಮ್ಮ ಜನರು. 10ನಿಮ್ಮ ಪವಿತ್ರ
ಪಟ್ಟಣಗಳು ಕಾಡಾಗಿವೆ. ಸಿಯೋನ್ ಪಾಳುಬಿದ್ದಿದೆ. ಜೆರುಸಲೇಮ್ ಹಾಳಾಗಿಹೋಗಿದೆ. 11ನಮ್ಮ ಪಿತೃಗಳು
ನಿಮ್ಮನ್ನು ಕೀರ್ತಿಸುತ್ತಿದ್ದ ಆ ಸ್ಥಳವೇ, ಆ ನಮ್ಮ ಚೆಲುವ ಪವಿತ್ರಾಲಯವೇ, ಬೆಂಕಿಯ ಪಾಲಾಗಿದೆ. ನಮ್ಮ
ಅಮೂಲ್ಯ ವಸ್ತುಗಳೆಲ್ಲ ನಾಶವಾಗಿವೆ. 12ಸ್ವಾಮಿ ಸರ್ವೇಶ್ವರಾ, ಇವುಗಳನ್ನು ನೋಡಿಯೂ ಸುಮ್ಮನಿರುವಿರಾ?
ನೆಮ್ಮದಿಯಿಂದಿರುವಿರಾ? ನಾವು ತಡೆದುಕೊಳ್ಳಲಾಗದಷ್ಟು ದಂಡಿಸುತ್ತಿರುವಿರಾ?

**65** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ನನ್ನನ್ನು ವಿಚಾರಿಸದವರಿಗೂ ನಾ ದರ್ಶನವಿತ್ತೆ. ನನ್ನನ್ನು
ಹುಡುಕದವರಿಗೂ ನಾ ಒಡನೆ ಸಿಕ್ಕಿದೆ. ನನ್ನ ನಾಮಸ್ಮರಣೆ ಮಾಡದ ಜನಾಂಗಕ್ಕೆ, ಇಗೋ, 'ಇದ್ದೇನೆ, ಇಲ್ಲೇ
ಇದ್ದೇನೆ' ಎನ್ನುತ್ತಿದ್ದೆ. 2ನನ್ನನ್ನು ತೊರೆದು ತಮಗೆ ಇಷ್ಟ ಬಂದ ಹಾದಿಯನ್ನು ಹಿಡಿದು ದುಷ್ಟಮಾರ್ಗದಲ್ಲೆ
ನಡೆದ ಜನತೆಯನ್ನ ಕೈಚಾಚಿ ಕರೆದೆ. 3ಈ ಜನರು ತೋಪುಗಳಲ್ಲಿ ಬಲಿಕೊಡುತ್ತಾರೆ, ಇಟ್ಟಿಗೆಯ ಪೀಠಗಳ
ಮೇಲೆ ಧೂಪಾರತಿ ಎತ್ತುತ್ತಾರೆ. 4ಗೋರಿಗಳಲ್ಲಿ ಕುಳಿತುಕೊಳ್ಳುತ್ತಾರೆ, ಗುಪ್ತ ಸ್ಥಳಗಳಲ್ಲಿ ರಾತ್ರಿಯನ್ನು
ಕಳೆಯುತ್ತಾರೆ, ಹಂದಿಯ ಮಾಂಸವನ್ನು ತಿನ್ನುತ್ತಾರೆ, ಅಸಹ್ಯ ಪದಾರ್ಥಗಳ ಸಾರವನ್ನು ತಟ್ಟೆಗಳಲ್ಲಿ
ಬಡಿಸಿಕೊಳ್ಳುತ್ತಾರೆ. 5ಬೇರೆಯವರಿಗೆ, 'ಅಲ್ಲೇ ನಿಲ್ಲು, ಹತ್ತಿರ ಬರಬೇಡ; ನಿನಗಿಂತ ನಾನು ಮಡಿವಂತ'
ಎನ್ನುತ್ತಾರೆ. ಹೀಗೆ ಇವರು ನನಗೆ ಉಸಿರುಕಟ್ಟುವ ಹೊಗೆಯಾಗಿದ್ದಾರೆ; ದಿನವೆಲ್ಲ ಉರಿಯುವ
ಬೆಂಕಿಯಾಗಿದ್ದಾರೆ.

6 "ಇಗೋ, ಇವೆಲ್ಲ ನನ್ನ ಕಣ್ಣೆದುರಿಗೆ ಲಿಖಿತವಾಗಿವೆ; ನಾನು ಮುಯ್ಯಿ ತೀರಿಸಿಯೇ ತೀರಿಸುವೆನು,
ಸುಮ್ಮನಿರಲಾರೆ. 7ಇವರೂ ಇವರ ಪಿತೃಗಳೂ ಬೆಟ್ಟಗುಡ್ಡಗಳ ಮೇಲೆ ಧೂಪಾರತಿ ಎತ್ತಿ ನನ್ನನ್ನು
ಅವಮಾನಗೊಳಿಸಿದ್ದಾರೆ. ತಕ್ಕ ಪ್ರತೀಕಾರವನ್ನು ಎಸಗುವೆನು ಈ ಅಪರಾಧಗಳಿಗೆ. ಹೌದು, ಮೊಟ್ಟಮೊದಲು
ಪ್ರತೀಕಾರ ಇವರ ಕಾರ್ಯಕ್ಕೆ; ಅದನ್ನು ಸರಿಯಾಗಿ ಅಳೆದು ಸುರಿಸುವೆನು ಇವರ ಮಡಿಲಿಗೆ." 8ಸರ್ವೇಶ್ವರ

ಸ್ವಾಮಿ ಹೀಗೆನ್ನುತ್ತಾರೆ: "ದ್ರಾಕ್ಷಿಯ ಗೊಂಚಲಿನಲ್ಲಿ ರಸವಿರುವತನಕ, 'ಅದನ್ನು ಹಾಳು ಮಾಡಬೇಡ, ಅದೊಂದು ಪ್ರಸಾದ,' ಎನ್ನುತ್ತಾರೆ ಜನ. ಅಂತೆಯೇ ನಾನು ನನ್ನ ಭಕ್ತಾದಿಗಳನ್ನು ಲಕ್ಷ್ಯಕ್ಕೆ ತಂದುಕೊಂಡು ಜನರೆಲ್ಲರನ್ನು ಹಾಳು ಮಾಡಬಾರದು ಎಂದುಕೊಂಡೆನು. 9ಯಕೋಬನಿಂದ ಒಂದು ಸಂತಾನವನ್ನು ಉತ್ಪನ್ನ ಮಾಡುವೆನು; ಯೆಹೂದ ವಂಶದಿಂದ, ನನ್ನ ಪರ್ವತಗಳ ಸೊತ್ತಿಗೆ ಹಕ್ಕುಬಾಧ್ಯತೆಯುಳ್ಳ ಒಂದು ಸಂತತಿಯನ್ನು ಬರಮಾಡುವೆನು. ನನ್ನಿಂದ ಆಯ್ಕೆಯಾದವರು ಆ ಸೊತ್ತನ್ನು ಅನುಭವಿಸುವರು, ನನ್ನ ಭಕ್ತಾದಿಗಳು ಅಲ್ಲಿ ವಾಸಮಾಡುವರು. 10ನನ್ನ ಜನರ ಹಿತಕ್ಕಾಗಿ ಶಾರೋನ್ ಬಯಲು ಮಂದೆಗಳಿಗೆ ಹುಲ್ಲುಗಾವಲಾಗುವುದು; ಆಕೋರಿನ ಕಣಿವೆ ದನಕರುಗಳಿಗೆ ಕೊಟ್ಟಿಗೆಯಾಗುವುದು.

11 "ಆದರೆ ನನ್ನನ್ನು ತೊರೆದು ನನ್ನ ಪವಿತ್ರ ಪರ್ವತವನ್ನು ಮರೆತು, 'ಗಾದ್' ಎಂಬ ಅದೃಷ್ಟ ದೇವತೆಗೆ ಔತಣವನ್ನು ಅಣಿಮಾಡುವ, 'ಮೆನೀ' ಎಂಬ ಗತಿ ದೇವತೆಗೆ ಬೆರೆತ ಮದ್ಯವನ್ನು ಭರ್ತಿ ಮಾಡುವ, ನಿಮಗೆ ಕತ್ತಿಯನ್ನೇ ಗತಿಯನ್ನಾಗಿ ಮಾಡುವೆನು. 12ನೀವೆಲ್ಲರು ಕೊಲೆಗೆ ಗುರಿಯಾಗುವಿರಿ, ಕತ್ತಿಗೆ ತುತ್ತಾಗುವಿರಿ. ಏಕೆಂದರೆ, ನಾನು ಕೂಗಿದಾಗ ನೀವು ಉತ್ತರ ಕೊಡಲಿಲ್ಲ, ನಾನು ಹೇಳಿದಾಗ ನೀವು ಕೇಳಲಿಲ್ಲ. ನನ್ನ ಚಿತ್ತಕ್ಕೆ ವಿರುದ್ಧವಾದುದನ್ನೇ ನಡೆಸಿ ನನಗೆ ಇಷ್ಟವಿಲ್ಲದ್ದನ್ನೇ ಆಯ್ಕೆಮಾಡಿಕೊಂಡಿರಿ. 13ಇಗೋ, ನನ್ನ ಭಕ್ತರು ಊಟಮಾಡುವರು, ನೀವಾದರೋ ಹಸಿದಿರುವಿರಿ. ನನ್ನ ಭಕ್ತರು ಪಾನಮಾಡುವರು, ನೀವಾದರೋ ದಾಹಗೊಳ್ಳುವಿರಿ. ನನ್ನ ಭಕ್ತರು ಉಲ್ಲಾಸಗೊಳ್ಳುವರು; ನೀವಾದರೋ ಲಜ್ಜೆಗೊಳ್ಳುವಿರಿ. 14ನನ್ನ ಭಕ್ತರು ಹೃದಯಾನಂದದಿಂದ ಹಿಗ್ಗಿ ಹಾಡುವರು; ನೀವಾದರೋ ಮನನೊಂದು ಮೊರೆಯಿಡುವಿರಿ; ದುಃಖದಿಂದ ಅಳುವಿರಿ. 15ಆಯ್ಕೆಯಾದವರಿಗೆ ನಿಮ್ಮ ಹೆಸರು ಶಾಪದ ಹೆಸರಾಗಿಯೇ ಉಳಿಯುವುದು. ಏಕೆಂದರೆ, ಸ್ವಾಮಿ ಸರ್ವೇಶ್ವರ ಆದ ನಾನು ನಿಮ್ಮನ್ನು ಕೊಲೆಗೀಡುಮಾಡುವೆನು. ನನ್ನ ಭಕ್ತಾದಿಗಳಿಗಾದರೋ ಹೊಸ ಹೆಸರನ್ನು ಕೊಡುವೆನು. 16ಹಳೆಯ ಕಷ್ಟದುಃಖಗಳು ಇನ್ನು ಕಣ್ಮರೆಯಾಗಿ ಹೋಗುವುವು: ನಾಡಿನಲ್ಲಿ ಆಶೀರ್ವಾದ ಪಡೆಯುವವನು ಸತ್ಯಸ್ವರೂಪನಾದ ದೇವರ ಹೆಸರಿನಲ್ಲಿ ಆಶೀರ್ವಾದ ಪಡೆಯುವನು. ಶಪಥ ಮಾಡುವವನು ಸತ್ಯಸ್ವರೂಪನಾದ ದೇವರ ಹೆಸರಿನಲ್ಲಿ ಶಪಥಮಾಡುವನು."

## ನವಯುಗದ ಸೊಬಗು

17 ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ನಾನು ಹೊಸ ಆಕಾಶವನ್ನೂ ಹೊಸಭೂಮಿಯನ್ನೂ ಸೃಷ್ಟಿಸುವೆನು; ಆಗ, ಮೊದಲಿದ್ದದ್ದು ಜ್ಞಾಪಕದಲ್ಲಿರದು; ಅದು ಯಾರ ನೆನಪಿಗೂ ಬಾರದು. 18ನಾನು ಮಾಡುವ ಸೃಷ್ಟಿಕಾರ್ಯದಲ್ಲೇ ಸಂತೋಷಿಸಿ, ಎಂದೆಂದಿಗೂ ಆನಂದಿಸಿರಿ: ಹೌದು, ನಾನು ಜೆರುಸಲೇಮನ್ನು ಉಲ್ಲಾಸದ ನಿವಾಸವನ್ನಾಗಿಸುವೆನು; ಅದರ ಜನರನ್ನು ಹರ್ಷಭರಿತರನ್ನಾಗಿಸುವೆನು. 19ನಾನು ಕೂಡ ಜೆರುಸಲೇಮನ್ನು ನೋಡಿ ಆನಂದಿಸುವೆನು, ಅದರ ಜನರನ್ನು ದೃಷ್ಟಿಸಿ ಹರ್ಷಗೊಳ್ಳುವೆನು. ಇನ್ನು ಅಲ್ಲಿ ಅಳುವಾಗಲಿ, ಆಕ್ರೋಶವಾಗಲಿ ಕೇಳಿ ಬರದು. 20ಕೆಲವೇ ದಿನ ಬದುಕುವ ಮಗುವಾಗಲಿ, ಆಯುಸ್ಸು ಮುಗಿಸದ ಮುದುಕನಾಗಲಿ ಇನ್ನು ಇಲ್ಲಿರನು. ನೂರು ವರ್ಷ ಬಾಳುವವನು 'ಯುವಕ' ಎನಿಸಿಕೊಳ್ಳುವನು; ನೂರರೊಳಗೆ ಸಾಯುವ ಪಾಪಿಯು 'ಶಾಪಗ್ರಸ್ತ' ಎನಿಸಿಕೊಳ್ಳುವನು. 21ಜನರು ಅಲ್ಲೇ ಮನೆಮಾಡಿ ನಿವಾಸ ಮಾಡುವರು; ತೋಟ ನೆಟ್ಟು ಅದರ ಫಲವನ್ನು ಅನುಭವಿಸುವರು. 22ತಾವು ಕಟ್ಟಿದ ಮನೆಗಳಲ್ಲಿ ಬೇರೆಯವರು ವಾಸಮಾಡುವುದಾಗಲಿ, ತಾವು ನೆಟ್ಟ ತೋಟಗಳ ಫಲವನ್ನು ಬೇರೆಯವರು ಅನುಭವಿಸುವುದಾಗಲಿ ಇನ್ನು ಸಂಭವಿಸದು. ಏಕೆಂದರೆ, ನನ್ನ ಜನರು ಮರಗಳಂತೆ ಬಹುಕಾಲ ಬಾಳುವರು. ನನ್ನಿಂದ ಆಯ್ಕೆಯಾದವರು ತಮ್ಮ ದುಡಿಮೆಯ ಫಲವನ್ನು ದೀರ್ಘಕಾಲ ಅನುಭವಿಸುವರು. 23ಅವರು ವ್ಯರ್ಥವಾಗಿ ದುಡಿಯರು, ಅನಾಹುತಕ್ಕಾಗಿ ಮಕ್ಕಳನ್ನು ಹಡೆಯರು. ಸದಾಕಾಲ ಅವರೂ ಅವರ ಸಂತತಿಯವರೂ ಸರ್ವೇಶ್ವರನಿಂದ ಅನುಗ್ರಹಗೊಂಡ ಗೋತ್ರವಾಗುವರು. 24ಅವರು ಮೊರೆಯಿಡುವುದಕ್ಕೆ ಮುಂಚೆಯೇ ನಾ ಕಿವಿಗೊಡುವೆನು; ಅವರು ಪ್ರಾರ್ಥಿಸುವಾಗಲೇ ನಾನು ಸದುತ್ತರ ನೀಡುವೆನು. 25ತೋಳವೂ ಕುರಿಮರಿಯೂ ಒಂದಾಗಿ ಮೇಯುವುವು; ಸಿಂಹವು ಗೋವಿನಂತೆ ಹುಲ್ಲು ತಿನ್ನುವುದು; ಹಾವಿಗೆ ಮಣ್ಣೇ ಆಹಾರವಾಗುವುದು. ನನ್ನ ಪವಿತ್ರ ಪರ್ವತದೊಳೆಲ್ಲೂ ಅವು ಯಾವ ಕೇಡು ಮಾಡವು, ಹಾಳುಮಾಡವು." ಇದು ಸರ್ವೇಶ್ವರ ಸ್ವಾಮಿಯ ನುಡಿ.

## ರಾಷ್ಟ್ರಗಳಿಗೆ ತೀರ್ಪು

**66** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಆಕಾಶವೇ ನನಗೆ ಸಿಂಹಾಸನವಾಗಿರಲು, ಭೂಮಿಯೇ ನನಗೆ ಪಾದಪೀಠವಾಗಿರಲು ನೀವು ನನಗೆ ಕಟ್ಟುವ ಮನೆ ಇನ್ನು ಎಂಥದ್ದು? ನನ್ನ ವಿಶ್ರಾಂತಿಗೆ ತಕ್ಕ ಸ್ಥಳ ಯಾವುದು? 2ಇವುಗಳನ್ನೆಲ್ಲ ನಿರ್ಮಿಸಿದ್ದು ನನ್ನ ಕೈಯೇ. ಹೌದು, ಇವುಗಳೆಲ್ಲ ಆದುವು ನನ್ನಿಂದಲೇ. ವಿನಮ್ರನು, ಪಶ್ಚಾತ್ತಾಪ ಪಡುವವನು, ನನ್ನ ಮಾತಿನಲ್ಲಿ ಭಯಭಕ್ತಿಯುಳ್ಳವನು, ಇಂಥವರೇ ನನಗೆ ಮೆಚ್ಚುಗೆಯಾದವರು.

3 "ಜನರು ಮನಬಂದ ಮಾರ್ಗವನ್ನು ಅನುಸರಿಸುತ್ತಾರೆ; ತಮ್ಮ ಅಸಹ್ಯ ಕಾರ್ಯಗಳಲ್ಲಿ ಅತ್ಯಾನಂದಪಡುತ್ತಾರೆ. ಹೋರಿಯನ್ನು ಬಲಿಕೊಡುವವನು ನರಬಲಿಯನ್ನು ಕೊಡುತ್ತಾನೆ; ಕುರಿ ಕಡಿಯುವವನು ನಾಯಿಯ ಕತ್ತನ್ನು ಮುರಿಯುತ್ತಾನೆ. ಕಾಣಿಕೆ ಒಪ್ಪಿಸುವವನು ಹಂದಿಯ ನೆತ್ತರನ್ನು ಅರ್ಪಿಸುತ್ತಾನೆ; ಧೂಪಾರತಿ ಎತ್ತುವವನು ವಿಗ್ರಹಾರಾಧನೆಯನ್ನು ಮಾಡುತ್ತಾನೆ. 4ಆದುದರಿಂದ ಅವರಿಗೆ ಆಪತ್ತು ಬಂದೊದಗುವಂತೆ ಮಾಡುವೆನು. ಅವರು ಅಂಜುತ್ತಿದ್ದ ವಿಪತ್ತುಗಳನ್ನೇ ಅವರ ಮೇಲೆ ಬರಮಾಡುವೆನು. ಏಕೆಂದರೆ, ನಾನು ಕೂಗಿದಾಗ ಯಾರೂ ಉತ್ತರಿಸಲಿಲ್ಲ, ನಾನು ಹೇಳಿದಾಗ ಅವರು ಕೇಳಲಿಲ್ಲ. ನನ್ನ ದೃಷ್ಟಿಯಲ್ಲಿ ಕೆಟ್ಟದ್ದನ್ನು ಮಾಡಿದರು, ನನಗೆ ಇಷ್ಟವಲ್ಲದ್ದನ್ನೇ ಆಯ್ಕೆ ಮಾಡಿಕೊಂಡರು."

5 ಸರ್ವೇಶ್ವರಸ್ವಾಮಿಯ ಮಾತಿನಲ್ಲಿ ಭಯ ಭಕ್ತಿಯುಳ್ಳವರೇ, ಕೇಳಿ ಸ್ವಾಮಿಯ ಈ ಮಾತನ್ನು! "ನನ್ನ ನಾಮದ ನಿಮಿತ್ತ ನಿಮ್ಮನ್ನು ದ್ವೇಷಿಸಿ, ಬಹಿಷ್ಕರಿಸಿದ ನಿಮ್ಮ ಸಹೋದರರು, 'ಸರ್ವೇಶ್ವರ ತನ್ನ ಮಹಿಮೆಯನ್ನು ಬೆಳಗಿಸಲಿ, ಆಗ ನಿಮಗಾಗುವ ಆನಂದವನ್ನು ನೋಡೋಣ,' ಎಂದು ಜರೆದಿದ್ದಾರಲ್ಲವೆ? ಅವರೇ ನಾಚಿಕೆಪಡಬೇಕಾಗುವುದು! 6ಇಗೋ ಕೇಳಿ, ನಗರದ ಕಡೆಯಿಂದ ಕೋಲಾಹಲದ ಶಬ್ದ, ದೇವಾಲಯದಲ್ಲಿ ಶಬ್ದ, ಸರ್ವೇಶ್ವರ ತನ್ನ ಶತ್ರುಗಳಿಗೆ ಮುಯ್ಯಿ ತೀರಿಸುವ ಶಬ್ಧ!

7 " 'ಪ್ರಸವವೇದನೆಗೆ ಮುಂಚೆಯೇ ಹೆರಿಗೆಯಾಯಿತು; ಪ್ರಸವವೇದನೆ ಪಡುವುದರೊಳಗೆ ಗಂಡನ್ನು ಹೆತ್ತಳು'. 8ಇಂಥ ಸುದ್ದಿಯನ್ನು ಯಾರು ಕೇಳಿದ್ದಾರೆ? ಇಂಥ ಸಂಗತಿಯನ್ನು ಕಂಡವರಾರು? ಒಂದೇ ದಿನದಲ್ಲಿ ದೇಶವೊಂದು ಹುಟ್ಟೀತೆ? ಕ್ಷಣಮಾತ್ರದಲ್ಲಿ ರಾಷ್ಟ್ರವನ್ನು ಹೆರಲಿಕ್ಕಾದೀತೆ? ಆದರೂ ಪ್ರಸವವೇದನೆ ತೊಡಗಿದೊಡನೆ ಸಿಯೋನೆಂಬಾಕೆ ಮಕ್ಕಳನ್ನು ಹೆತ್ತಿದ್ದಾಳೆ." 9ಪ್ರಸವಕ್ಕೆ ತಂದ ನಾನು ಹೆರಲಿಕ್ಕೆ ಬಿಡದಿರುವೆನೊ?' – ಎನ್ನುತ್ತಾರೆ ನಿಮ್ಮ ದೇವರು. 'ಹೆರುವಂತೆ ಮಾಡುವವನಾದ ನಾನು ಗರ್ಭ ಮುಚ್ಚಿ ಬಿಡುವೆನೊ?' ಎನ್ನುತ್ತಾರೆ ಸ್ವಾಮಿ ಸರ್ವೇಶ್ವರ.

10 "ಜೆರುಸಲೇಮನ್ನು ಪ್ರೀತಿಸುವವರೇ,
ನೀವೆಲ್ಲರೂ ಆನಂದಿಸಿರಿ ಆಕೆಯೊಂದಿಗೆ,
ಹರ್ಷಗೊಳ್ಳಿರಿ ಆಕೆಯ ಬಗ್ಗೆ.
11 ಆಕೆಯ ನಿಮಿತ್ತ ದುಃಖಿಸುವವರೇ,
'ಸಾಂತ್ವನ ನೀಡುವ ಆಕೆಯ ಸ್ತನ್ಯದಿಂದ
ತೃಪ್ತಿಗೊಳ್ಳುವೆವು,
ಹೌದು, ಆಕೆಯ ಸಿರಿಸಮೃದ್ಧಿಯನ್ನು
ಹೀರುತ್ತಾ ಹಿಗ್ಗುವೆವು,'
ಎಂದು ನೀವೆಲ್ಲರು ಉಲ್ಲಾಸಪಡಿ
ಆಕೆಯೊಂದಿಗೆ."
12 ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ:
"ಇಗೋ, ಆಕೆಗೆ ಹರಿಯಮಾಡುವೆನು
ಸುಖಶಾಂತಿಯನು ನದಿಯಂತೆ
ನೀಡುವೆ ರಾಷ್ಟ್ರಗಳ ವೈಭವವನು

ತುಂಬಿತುಳುಕುವ ತೊರೆಯಂತೆ
ನೀವಿರುವಿರಿ ಹಾಲುಕುಡಿವ ಹಸುಳೆಯಂತೆ
ಎತ್ತಿಕೊಳ್ಳಲಾಗುವುದು ನಿಮ್ಮನ್ನು
ತಾಯ ಕಂಕುಳಲಿ
ನಲಿದಾಡುವಿರಿ ನೀವು ಆಕೆಯ ಮಡಿಲಲಿ.
13 ನಾನೇ ನಿಮ್ಮನ್ನು ಸಂತೈಸುವೆನು ತಾಯಿಯಂತೆ
ಸಾಂತ್ವನ ದೊರಕುವುದು ನಿಮಗೆ
ಜೆರುಸಲೇಮಿನಲೆ.
14 ಇದನ್ನು ಕಂಡಾಗ ನಿಮ್ಮೆದೆ ಸಂತಸದಿಂದ
ಉಬ್ಬುವುದು
ಚಿಗುರುವುದು ಹಸಿಹುಲ್ಲಂತೆ ನಿಮ್ಮೆಲುಬು.
'ಸರ್ವೇಶ್ವರನ ಕೃಪಾಹಸ್ತ ತನ್ನ ಭಕ್ತರ ಮೇಲೆ
ಆತನ ರೋಷಾವೇಶ ಶತ್ರುಗಳ ಮೇಲೆ'
ಎಂಬುವುದು ವ್ಯಕ್ತವಾಗುವುದು ನಿಮಗೆ.
15 ಸರ್ವೇಶ್ವರ ಬರುವನಿದೋ ಅಗ್ನಿಮಯನಾಗಿ
ಆತನ ರಥಗಳು ಬಿರುಗಾಳಿಯಂತೆ ರಭಸವಾಗಿ
ತೋರಿಸುವನು ತನ್ನ ಸಿಟ್ಟನ್ನು
ರೌದ್ರವೇಶದಿಂದ
ಖಂಡಿಸುವನು ಧಗಧಗಿಸುವ ಜ್ವಾಲೆಯಿಂದ
16 ನ್ಯಾಯ ತೀರಿಸುವನು ಸರ್ವೇಶ್ವರ
ಮನುಜರಿಗೆಲ್ಲ
ಅಗ್ನಿಯಿಂದ, ತನ್ನ ಖಡ್ಗದಿಂದ.
ಹತರಾಗುವರು ಬಹುಜನ ಆತನಿಂದ.

17 "ತಮ್ಮ ಮಧ್ಯಸ್ಥನ ಮಾತಿನ ಪ್ರಕಾರ, ತೋಪುಗಳನ್ನು ಪ್ರವೇಶಿಸಿ, ಒಬ್ಬನ ಹಿಂದೊಬ್ಬರು ತಮ್ಮನ್ನೇ
ಶುದ್ಧೀಕರಿಸಿ, ಪವಿತ್ರೀಕರಿಸಿಕೊಂಡು, ಹಂದಿಯ ಮಾಂಸವನ್ನೂ ಅಸಹ್ಯ ಪದಾರ್ಥಗಳನ್ನೂ ಇಲಿಗಳನ್ನೂ
ತಿನ್ನುವ ಜನರು ಒಟ್ಟಿಗೇ ಕೊನೆಗಾಣುವರು." ಇದು ಸರ್ವೇಶ್ವರ ಸ್ವಾಮಿಯ ನುಡಿ. 18"ಅವರ ಕೃತ್ಯಗಳೂ
ಆಲೋಚನೆಗಳೂ ನನಗೆ ತಿಳಿದಿವೆ. ಸಮಸ್ತ ರಾಷ್ಟ್ರಗಳನ್ನೂ ಸಕಲ ಭಾಷೆಯವರನ್ನೂ ಒಟ್ಟಿಗೆ
ಬರಮಾಡುವೆನು. ಅವರು ಬಂದು ನನ್ನ ಮಹಿಮೆಯ ಪ್ರಕಾಶವನ್ನು ಕಾಣುವರು. 19ಅವರ ಮಧ್ಯೆ ಒಂದು
ಸೂಚಕ ಕಾರ್ಯವನ್ನು ಮಾಡುವೆನು. ಅವರಲ್ಲಿ ಅಳಿದುಳಿದವರನ್ನು ನನ್ನ ಸುದ್ದಿಯನ್ನು ಕೇಳದೆಯೂ ನನ್ನ
ಮಹಿಮೆಯನ್ನು ಕಾಣದೆಯೂ ಇರುವವರ ಬಳಿಗೆ ಕಳಿಸುವೆನು. ತಾರ್ಷೀಷ್, ಲಿಬಿಯಾ,
ಧನುರ್ಧಾರಿಗಳಾದ ಲೂದಿಯಾ, ತೂಬಲ್, ಗ್ರೀಸ್ ಎಂಬ ನಾಡುಗಳಿಗೂ ದೂರದ ದ್ವೀಪನಿವಾಸಿಗಳ
ಬಳಿಗೂ ಕಳಿಸುವೆನು. ಈ ಅನ್ಯಜನಾಂಗಗಳಿಗೆ ಅವರು ನನ್ನ ಮಹಿಮೆಯನ್ನು ಪ್ರಕಟಿಸುವರು. 20ನನಗೆ
ಕಾಣಿಕೆಯಾಗಿ ಎಲ್ಲ ಜನಾಂಗಗಳಿಂದ ನಿಮ್ಮ ಸಹೋದರರನ್ನು ಕರೆದುತರುವರು. ಇಸ್ರಯೇಲರು ನನ್ನ
ಆಲಯಕ್ಕೆ ಶುದ್ಧ ಪಾತ್ರೆಯಲ್ಲಿ ನೈವೇದ್ಯವನ್ನು ತೆಗೆದುಕೊಂಡು ಬರುವಂತೆ, ಅವರನ್ನು ಕುದುರೆ, ತೇರು,
ಪಲ್ಲಕ್ಕಿ, ಹೇಸರಗತ್ತೆ, ಒಂಟೆ, ಇವುಗಳ ಮೇಲೆ ಏರಿಸಿಕೊಂಡು ಜೆರುಸಲೇಮೆಂಬ ನನ್ನ ಪವಿತ್ರ ಪರ್ವತಕ್ಕೆ
ಕರೆದು ತರುವರು. 21ನಾನು ಅವರಲ್ಲಿ ಕೆಲವರನ್ನು ಯಾಜಕರನ್ನಾಗಿಯೂ ಲೇವಿಯರನ್ನಾಗಿಯೂ
ಆರಿಸಿಕೊಳ್ಳುವೆನು." ಇದು ಸರ್ವೇಶ್ವರಸ್ವಾಮಿಯ ನುಡಿ.

22 "ನಾ ಸೃಷ್ಟಿಸುವ ಹೊಸ ಆಕಾಶ,
ಹೊಸ ಭೂಮಿ,
ನಿಲ್ಲುವುವು ನನ್ನ ಮುಂದೆ ಸ್ಥಿರವಾಗಿ;

ಅಂತೆಯೇ ನಿಮ್ಮ ಸಂತತಿ, ನಿಮ್ಮ
ಹೆಸರು ನಿಲ್ಲುವುವು ಸ್ಥಿರವಾಗಿ.
23 ಅಮವಾಸ್ಯೆಯಿಂದ ಅಮವಾಸ್ಯೆಯವರೆಗೆ
ಸಬ್ಬತ್‍ದಿನದಿಂದ ಸಬ್ಬತ್ದಿನವರೆಗೆ
ಮನುಜರೆಲ್ಲರು ಬರುವರು ನನ್ನನ್ನು
ಆರಾಧಿಸಲಿಕ್ಕೆ."
ಇದು ಸರ್ವೇಶ್ವರಸ್ವಾಮಿಯ ನುಡಿ.
24 ಅವರು ಹೊರಟುಹೋಗುವಾಗ
ನೋಡುವರು
ನನಗೆ ದ್ರೋಹವೆಸಗಿದವರ ಹೆಣಗಳನು
ಸಾಯುವುದಿಲ್ಲ ಅವುಗಳನ್ನು ಕಡಿಯುವ
ಹುಳು
ಆರುವುದಿಲ್ಲ ಅವುಗಳನ್ನು ಸುಡುವ ಬೆಂಕಿಯು
ಎಲ್ಲ ಮನುಜರಿಗವು ಅಸಹ್ಯವಾಗಿರುವುವು."